ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 21 ಮಂಗಳವಾರ 2023

₹4

ದೂರವಾಣಿ: 2496520, 2496521, 2496526, 2496527, 2496528, FAX: 0821–2496525
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ. ದೇವರಾಜ ಅರಸು ರಸ್ತೆ, Ph: 2428695

ಸಂಪುಟ: 43 | ಸಂಚಿಕೆ: 331 | ಪುಟಗಳು: 12

ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

ಇಂದು ಕೆ.ಜಿ.ಕೊಪ್ಪಲಿನ ಮಲೆ ಮಹದೇಶ್ವರ ಸ್ವಾಮಿ ಹುಲಿವಾಹನ ಮೆರವಣಿಗೆ



ಮೈಸೂರು, ಮಾ.20– ನಗರದ ಕೆ.ಜಿ.ಕೊಪ್ಪಲಿನ 7ನೇ ಕ್ರಾಸ್‌ನಲ್ಲಿರುವ ಶ್ರೀ ಮಲೆ ಮಹದೇಶ್ವರ ಸ್ವಾಮಿ ದೇವಸ್ಥಾನದ ಕನ್ನಡ ಕಲಾವಿದರ ಸಂಘದ ವತಿಯಿಂದ 49ನೇ ವರ್ಷದ ಮಲೆ ಮಹದೇಶ್ವರ ಸ್ವಾಮಿ ಪೂಜಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಮಾ.21ರಂದು ಮಂಗಳವಾರ ಯುಗಾದಿ ಅಮಾವಾಸ್ಯೆ ಪ್ರಯುಕ್ತ ಬೆಳಗ್ಗೆ 8ರಿಂದ 11.30ರವರೆಗೆ ವಿಶೇಷ ಹೋಮವನ್ನು ಏರ್ಪಡಿಸಲಾಗಿದೆ. ಮಧ್ಯಾಹ್ನ 12 ಗಂಟೆಗೆ ಕೆ.ಜಿ.ಕೊಪ್ಪಲಿನ ಮುಖ್ಯ ರಸ್ತೆಯಲ್ಲಿ ಅನ್ನ ಸಂತರ್ಪಣೆ ನಡೆಸಲಾಗುತ್ತದೆ. ಸಂಜೆ 6 ಗಂಟೆಗೆ ವಿದ್ಯುತ್ ದೀಪಗಳಿಂದ ಅಲಂಕೃತವಾದ ರಥದಲ್ಲಿ ಸ್ವಾಮಿಯ ಹುಲಿವಾಹನ ಮೆರವಣಿಗೆ ಇರುತ್ತದೆ. ಮಾ.22ರಂದು ಬುಧವಾರ ಸಂಜೆ 7 ಗಂಟೆಗೆ ಕಂಸಾಳೆ ತಂಡದವರಿಂದ ಏಳುಮಲೆ ಮಹದೇಶ್ವರ ಸ್ವಾಮಿ ಹರಿಕಥೆಯನ್ನು ಕಂಸಾಳೆ ರೂಪದಲ್ಲಿ ಪ್ರದರ್ಶಿಸಲಾಗುತ್ತದೆ. ಮಾ.23ರಂದು ಗುರುವಾರ ಸಂಜೆ 7ಕ್ಕೆ ಮೈಸೂರು ಮಿಮಿಕ್ರಿ ಕುಮಾರ್ ಮತ್ತು ತಂಡದವರಿಂದ ಭಕ್ತಿಗೀತೆ, ಭಾವಗೀತೆ, ಹಾಡುಗಾರಿಕೆಯನ್ನು ಏರ್ಪಡಿಸಲಾಗಿದೆ. ಭಕ್ತಾದಿಗಳು ಶ್ರೀ ಮಲೈ ಮಹದೇಶ್ವರ ಸ್ವಾಮಿ ಕೃಪೆಗೆ ಪಾತ್ರರಾಗಬೇಕೆಂದು ಕನ್ನಡ ಕಲಾವಿದರ ಸಂಘ ಪ್ರಕಟಣೆಯಲ್ಲಿ ತಿಳಿಸಿದೆ.

ಶ್ರೀ ಸುತ್ತೂರು ಕ್ಷೇತ್ರದಲ್ಲಿ ನಾಳೆ ಯುಗಾದಿ, ಅಲ್ಲಮಪ್ರಭು ಜಯಂತಿ; ಪಂಚಾಂಗ ಶ್ರವಣ



ಮೈಸೂರು,ಮಾ.20–ಶ್ರೀ ಸುತ್ತೂರು ಕ್ಷೇತ್ರದಲ್ಲಿ ಮಾ.22ರಂದು ಯುಗಾದಿ, ಅಲ್ಲಮಪ್ರಭು ಜಯಂತಿ ಹಾಗೂ ಪಂಚಾಂಗ ಶ್ರವಣ ಕಾರ್ಯಕ್ರಮಗಳನ್ನು ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಏರ್ಪಡಿಸಿದೆ.

ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಕರ್ತೃಗದ್ದುಗೆಯಲ್ಲಿ ಮಹಾರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಮಹಾಮಂಗಳಾರತಿ, ಬೆಳ್ಳಿರಥ ಪ್ರಾಕಾರೋತ್ಸವ ನೆರವೇರುತ್ತದೆ. ಶ್ರೀ ಸೋಮೇಶ್ವರ, ಶ್ರೀ ಮಹದೇಶ್ವರ, ಶ್ರೀ ವೀರಭದ್ರೇಶ್ವರ, ಶ್ರೀ ನಂಜುಂಡೇಶ್ವರ ಮತ್ತು ಶ್ರೀ ನಾರಾಯಣಸ್ವಾಮಿ ದೇವಸ್ಥಾನಗಳಲ್ಲಿಯೂ ವಿಶೇಷ ಪೂಜೆ ನಡೆಯುತ್ತವೆ.

ಶ್ರೀ ಮಠದ ಹಾಗೂ ಗ್ರಾಮದ ಹೊನ್ನೇರು ಬಂಡಿಗಳು ಮಂಗಳವಾದ್ಯ ಹಾಗೂ ಕಲಾತಂಡಗಳೊಂದಿಗೆ ಶ್ರೀಮಠದಿಂದ ಹೊರಟು, ಭೂಮಿತಾಯಿಗೆ ಪೂಜೆ ಸಲ್ಲಿಸಿ, ಹೊಸ ವರ್ಷದ ಕೃಷಿ ಕಾಯಕಕ್ಕೆ ಚಾಲನೆ ನೀಡಿ, ಕರ್ತೃಗದ್ದುಗೆಯನ್ನು ಸಂದರ್ಶಿಸಿ ಶ್ರೀಮಠಕ್ಕೆ ಹಿಂದಿರುಗಲಿವೆ.

9.30ಕ್ಕೆ ಜೆಎಸ್‌ಎಸ್ ವಸತಿ ಶಾಲೆಯ ಸಂಗೀತ ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಂದ ವಚನ ಗಾಯನ ಕಾರ್ಯಕ್ರಮವಿದೆ. 10.30ಕ್ಕೆ ಮೈಸೂರು ವಿಶ್ವವಿದ್ಯಾನಿಲಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕಿ ಡಾ.ವಿಜಯಕುಮಾರಿ ಎಸ್.ಕರಿಕಲ್, 'ಅಲ್ಲಮಪ್ರಭು ದೇವರ ವಚನಗಳ ವೈಶಿಷ್ಟ್ಯ' ವಿಷಯದ ಕುರಿತು ಉಪನ್ಯಾಸ ನೀಡುವರು. ಮೈಸೂರಿನ ಭಾರತೀಯ ಜ್ಯೋತಿರ್ವಿಜ್ಞಾನ ಸಂಶೋಧನಾ ಕೇಂದ್ರದಿಂದ ಪ್ರಕಟವಾಗಿರುವ ಶ್ರೀ ಶೋಭಕೃತು ನಾಮ ಸಂವತ್ಸರದ 'ಸುತ್ತೂರು ಶ್ರೀ ಶಿವರಾತ್ರೀಶ್ವರ ಪಂಚಾಂಗ'ವನ್ನು ಪಂಚಾಂಗ ಕರ್ತರಾದ ಸಿದ್ಧಾಂತಿ ಡಾ.ಕೆ.ಜಿ. ಪುಟ್ಟಹೊನ್ನಯ್ಯನವರು ಪಠಣ ಮಾಡಿ, ಸಂವಾದ ನಡೆಸಲಿದ್ದಾರೆ.



ಮೈಸೂರು ಅಶೋಕಪುರಂನ ಪದವೀಧರರ ವಿಚಾರ ವೇದಿಕೆ ವತಿಯಿಂದ ಮಾಜಿ ಸಂಸದ ದಿ. ಆರ್.ಧ್ರುವನಾರಾಯಣ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಈ ವೇಳೆ ಹಿರಿಯ ಸಾಹಿತಿ ದೇವನೂರು ಮಹಾದೇವ, ಮಾಜಿ ಮೇಯರ್ ಪುರುಷೋತ್ತಮ್, ಮೈಸೂರು ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ನಗರಪಾಲಿಕೆ ಮಾಜಿ ಸದಸ್ಯ, ಕೃಷ್ಣರಾಜ ಕ್ಷೇತ್ರದ ಕಾಂಗ್ರೆಸ್ ಮುಖಂಡ ಪ್ರದೀಪ್ ಕುಮಾರ್, ನಗರ ಪ್ರಧಾನ ಕಾರ್ಯದರ್ಶಿ ಈಶ್ವರ ಚಕ್ಕಡಿ, ಬ್ಲಾಕ್ ಅಧ್ಯಕ್ಷ ಶ್ರೀಧರ್, ಮುಖಂಡರಾದ ವಿಶ್ವ, ಜೋಗಿ ಮಹೇಶ್, ರವಿ ಇನ್ನಿತರರಿದ್ದರು.

ವೀರಶೈವ ಲಿಂಗಾಯತ ವಧುವರರ ಸಮಾವೇಶ

ಮೈಸೂರು,ಮಾ.20–ಶ್ರೀ ಬಸವೇಶ್ವರ ವಧು–ವರರ ವಿವಾಹ ವೇದಿಕೆ ವತಿಯಿಂದ ಏ.2ರಂದು ಮಧ್ಯಾಹ್ನ 1ರಿಂದ ಸಂಜೆ 5ರವರೆಗೆ ಉತ್ತರಾಧಿ ಮಠದ ಬಳಿಯಿರುವ ಶ್ರೀ ವಿದ್ಯಾಭಾರತಿ ಕಲ್ಯಾಣ ಮಂಟಪದಲ್ಲಿ ವೀರಶೈವ ಲಿಂಗಾಯತ ವಧುವರರ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ. ಆಸಕ್ತರು ಏ.1ರೊಳಗೆ ನೋಂದಣಿ ಮಾಡಿಕೊಳ್ಳುವಂತೆ ಕೋರಲಾಗಿದೆ. ಮಾಹಿತಿಗೆ ಮೊ.9686205346 ಸಂಪರ್ಕಿಸಬಹುದು.


ನಿಧನ

ಚೌಹಳ್ಳಿ ಪುಟ್ಟಸ್ವಾಮಿ



ಮೈಸೂರು, ಮಾ.20–ಕಾಂಗ್ರೆಸ್ ಹಿರಿಯ ಮುಖಂಡ ಚೌಹಳ್ಳಿ ಪುಟ್ಟಸ್ವಾಮಿ ಅವರು ಸೋಮವಾರ ನಿಧನರಾದರು. ಅವರಿಗೆ 68 ವರ್ಷ ವಯಸ್ಸಾಗಿತ್ತು. ಮೂಲತಃ ತಿ.ನರಸೀಪುರ ತಾಲೂಕು ಚೌಹಳ್ಳಿ ಗ್ರಾಮದವರಾದ ಇವರು, ಮೈಸೂರಿನ ಹಿನಕಲ್‌ನಲ್ಲಿ ವಾಸವಾಗಿದ್ದರು. ಮೃತರು ಪತ್ನಿ, ಇಬ್ಬರು ಪುತ್ರರು, ಪುತ್ರಿ ಹಾಗೂ ಅಪಾರ ಬಂಧು ವರ್ಗವನ್ನು ಅಗಲಿದ್ದಾರೆ. ಸಹಕಾರಿ ಕ್ಷೇತ್ರದಲ್ಲೂ ತಮ್ಮನ್ನು ತೊಡಗಿಸಿಕೊಂಡಿದ್ದ ಪುಟ್ಟಸ್ವಾಮಿ, ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್‌ನ ಮಾಜಿ ನಿರ್ದೇಶಕರು. ಮೃಗಾಲಯ ಪ್ರಾಧಿಕಾರದ ಗವರ್ನಿಂಗ್ ಕೌನ್ಸಿಲ್ ಸದಸ್ಯರಾಗಿದ್ದರು. ಇವರು ಮೈಸೂರು ನಗರಪಾಲಿಕೆಗೆ ಒಮ್ಮೆ ನಾಮನಿರ್ದೇಶಿತ ಸದಸ್ಯರಾಗಿದ್ದರು. ಪ್ರದೇಶ ಕುರುಬರ ಸಂಘದ ಉಪಾಧ್ಯಕ್ಷರು ಆಗಿದ್ದ ಇವರು, ಸಮಾಜ ಸೇವೆಯಲ್ಲೂ ತಮ್ಮನ್ನು ತೊಡಗಿಸಿಕೊಂಡಿದ್ದರು.

ಅಮೃತ್‌ಲಾಲ್ ಡಿ. ಶಾ



ಮೈಸೂರಿನ ಸಿದ್ದಾರ್ಥನಗರದ ಪಾರ್ಶ್ವ ವಾಟಿಕಾ ಅಪಾರ್ಟ್‌ಮೆಂಟ್ ನಿವಾಸಿ ಅಮೃತ್‌ಲಾಲ್ ಡಿ. ಶಾ (97) ಸೋಮವಾರ ಬೆಳಗ್ಗೆ ನಿಧನರಾದರು. ಮೃತರು ಇಬ್ಬರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ಹರಿಶ್ಚಂದ್ರ ಘಾಟ್‌ನಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪುಷ್ಪಾ ರಾಮನ್



ಮೈಸೂರಿನ ಕೆಆರ್‌ಎಸ್ ರಸ್ತೆಯ ಮೇಟಗಳ್ಳಿ ನಿವಾಸಿ ದಿವಂಗತ ಡಾ. ಜಿ. ರಾಮನ್ ಅವರ ಪತ್ನಿ ಪುಷ್ಪಾ ರಾಮನ್ (85) ಸೋಮವಾರ ಬೆಳಗ್ಗೆ ನಿಧನರಾದರು.

ಮೃತರು ಪುತ್ರ ಡಾ. ಪ್ರೇಮನಾಥ್ ರಾಮನ್, ಪುತ್ರಿ ಪ್ರೇಮುಲಾ ಶ್ರೀಕಾಂತ್, ಅಳಿಯ ಶ್ರೀಕಾಂತ್ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮನೆಯಪಂಡ ಬೋಪಣ್ಣ



ಮೈಸೂರಿನ ರಾಜರಾಜೇಶ್ವರಿನಗರ ನಿವಾಸಿ ಮನೆಯಪಂಡ ಬೋಪಣ್ಣ (90) ಭಾನುವಾರ ರಾತ್ರಿ ನಿಧನರಾದರು.

ಮೃತರು ಓರ್ವ ಪುತ್ರಿ, ಅಳಿಯ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ವಿಜಯನಗರ 4ನೇ ಹಂತದ ಮುಕ್ತಿಧಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಬಿ.ಎಸ್. ರಾಜಶೇಖರ್



ಮೈಸೂರು ಬೋಗಾದಿ 2ನೇ ಹಂತದ ನಿವಾಸಿ ಹಾಗೂ ಜೆಎಸ್‌ಎಸ್ ಬಾಯ್ಸ್ ಪಾಲಿಟೆಕ್ನಿಕ್ (ಎಸ್‌ಜೆಸಿಇ, ಕ್ಯಾಂಪಸ್) ಪ್ರಾಂಶುಪಾಲರಾದ ಬಿ.ಎಸ್.ರಾಜಶೇಖರ್ (57) ಅವರು ಭಾನುವಾರ ಬೆಳಗ್ಗೆ ನಿಧನರಾದರು.

ಮೃತರು ಪತ್ನಿ ಮಂಜುಳಾ, ಪುತ್ರಿ ಶುಭಾ, ಸಹೋದರ ಡಾ.ಜಯರಾಜ್ ಹಾಗೂ ಅಪಾರ ಬಂಧು ವರ್ಗ, ಶಿಷ್ಯ ವರ್ಗ, ಸ್ನೇಹಿತರನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಅವರ ಸ್ವಗ್ರಾಮ ಬಿಳಿಗೆರೆಯಲ್ಲಿ ಭಾನುವಾರ ಸಂಜೆಯೇ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೃತರ ನಿಧನಕ್ಕೆ ಕಾಲೇಜಿನ ಸಿಬ್ಬಂದಿವರ್ಗ ಸಂತಾಪ ಸೂಚಿಸಿದೆ.

ಮೈಸೂರಲ್ಲಿ ಹೈಟೆಕ್ ಪಾರಂಪರಿಕ ಶೌಚಾಲಯ ಬಳಕೆಗೆ ಮುಕ್ತ

ಮೈಸೂರು, ಮಾ. 20 (ಆರ್‌ಕೆ)– ಮೈಸೂರಿನ ಪ್ರಥಮ ಹೈಟೆಕ್ ಪಾರಂಪರಿಕ ಶೌಚಾಲಯವನ್ನು ಸೋಮವಾರ ಸಾರ್ವಜನಿಕರ ಉಪಯೋಗಕ್ಕೆ ಮುಕ್ತಗೊಳಿಸಲಾಯಿತು.

ನಮ್ಮ ಮೈಸೂರು ಫೌಂಡೇಷನ್ (ಎನ್‌ಎಂಎಫ್) ವತಿಯಿಂದ 1.4 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿರುವ ಶೌಚಾಲಯ ಕಟ್ಟಡದ ಕಾಮಗಾರಿಗೆ 2020ರ ಸೆಪ್ಟೆಂಬರ್ 28ರಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್, ಶಾಸಕ ಎಲ್.ನಾಗೇಂದ್ರ ಹಾಗೂ ಅಂದಿನ ಮೇಯರ್ ತಸ್ನೀಂ ಗುದ್ದಲಿಪೂಜೆ ನೆರವೇರಿಸಿದ್ದರು. ಕೋವಿಡ್–19 ನಿರ್ಬಂಧದ ಹಿನ್ನೆಲೆಯಲ್ಲಿ ಕಾಮಗಾರಿ ವಿಳಂಬವಾಗಿತ್ತು. ರಂಗಚಾರ್ಲು ಪುರಭವನದ ಆವರಣದಲ್ಲಿ ಗಾಂಧಿಚೌಕ ಅಭಿಮುಖವಾಗಿ ನಿರ್ಮಾಣವಾಗಿರುವ ಈ ಸುಸಜ್ಜಿತ ಹೈಟೆಕ್ ಹೆರಿಟೇಜ್ ಶೌಚಾಲಯ ಇದೀಗ ಸಾರ್ವಜನಿಕರ ಉಪಯೋಗಕ್ಕೆ ಮುಕ್ತಗೊಂಡಿದೆ.



ಶಾಸಕ ಎಲ್.ನಾಗೇಂದ್ರ, ಮೇಯರ್ ಶಿವಕುಮಾರ್, ಉಪಮೇಯರ್ ಡಾ.ಜಿ.ರೂಪಾ ಅವರು ಶೌಚಾಲಯವನ್ನು ಟೇಪು ಕತ್ತರಿಸುವ ಮೂಲಕ ಉದ್ಘಾಟಿಸಿದರು. ಮೈಸೂರ ನಗರಪಾಲಿಕೆ ಆಯುಕ್ತ ಜಿ.ಲಕ್ಷ್ಮೀಕಾಂತರೆಡ್ಡಿ, ಸೂಪ ರಿಂಟೆಂಡಿಂಗ್ ಇಂಜಿನಿಯರ್ ಮಹೇಶ್, ಜಿಲ್ಲಾ ಪಾರಂಪರಿಕ ಸಮಿತಿ ಸದಸ್ಯ ಪ್ರೊ.ಎನ್.ಎಸ್. ರಂಗರಾಜು, ನಮ್ಮ ಮೈಸೂರು ಫೌಂಡೇಷನ್ ಮ್ಯಾನೇಜಿಂಗ್ ಟ್ರಸ್ಟಿ ಕೆ.ದಶರಥ, ಫೌಂಡಿಂಗ್ ಟ್ರಸ್ಟಿ ಸಿ.ಆರ್.ಪವಿತ್ರ, ಖಜಾಂಚಿ ದಿನೇಶ್ ಬೋಪಣ್ಣ ಹಾಗೂ ಇತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಪುರುಷರು–ಮಹಿಳೆಯರಿಗೆ ಪ್ರತ್ಯೇಕ ಶೌಚಾಲಯ, ಸ್ನಾನಗೃಹ, ಮಕ್ಕಳಿಗೆ ಹಾಲುಣಿಸುವ ಕೊಠಡಿ, ಟಿಕೆಟ್ ಕೌಂಟರ್, ಸ್ಟೋರ್ ರೂಂ, ಭದ್ರತಾ ಕೊಠಡಿ, ನೀರಿನ ಸಂಪ್, ಓವರ್‌ಹೆಡ್ ಟ್ಯಾಂಕ್, ವಿದ್ಯುತ್ ಸೌಕರ್ಯ ಸೇರಿದಂತೆ ಮೂಲ ಸೌಲಭ್ಯವನ್ನು ಈ ಹೈಟೆಕ್ ಶೌಚಾಲಯದ ಕಟ್ಟಡ ಹೊಂದಿದೆ ಎಂದು ಶಾಸಕ ನಾಗೇಂದ್ರ ತಿಳಿಸಿದರು.

ಬೂಟ್ ಆಧಾರದಲ್ಲಿ ಶೌಚಾಲಯ ನಿರ್ಮಿಸಿರುವ ನಮ್ಮ ಮೈಸೂರು ಫೌಂಡೇಷನ್ ಪೇ ಅಂಡ್ ಯೂಸ್ ಅಡಿ 5 ವರ್ಷಗಳವರೆಗೆ ನಿರ್ವಹಣೆ ಮಾಡಿ ನಂತರ ಮೈಸೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲಿದೆ ಎಂದು ಅವರು, ಈ ಬಗೆಯ ಹೈಟೆಕ್ ಹೆರಿಟೇಜ್ ಶೌಚಾಲಯ ನಿರ್ಮಿಸಿರುವುದು ಮೈಸೂರು ನಗರದಲ್ಲಿ ಮೊದಲನೆಯದಾಗಿದೆ ಎಂದು ತಿಳಿಸಿದರು.

ಅದೇ ರೀತಿ ದೇವರಾಜ ಮೊಹಲ್ಲಾದ ದಿವಾನ್ಸ್ ರಸ್ತೆಯಲ್ಲಿ ಮಹಿಳೆಯರಿಗೂ ಪಿಂಕ್ ಶೌಚಾಲಯ ನಿರ್ಮಿಸಲಾಗಿದ್ದು, ಶೀಘ್ರ ಅದನ್ನೂ ಜನರು ಉಪಯೋಗಿಸಲು ಮುಕ್ತಗೊಳಿಸಲಾಗುವುದು. ಸಾರ್ವಜನಿಕರು ಈ ಸೌಲಭ್ಯವನ್ನು ಬಳಸಿಕೊಳ್ಳುವಾಗ ಸ್ವಚ್ಛತೆ ಕಾಪಾಡಬೇಕೆಂದು ನಾಗೇಂದ್ರ ಸಲಹೆ ನೀಡಿದರು.

ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇ ಸದ್ಯಕ್ಕೆ ಬಂದ್ ಮಾಡಿ

● ರಾಜ್ಯ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ಚಳವಳಿ ಎಚ್ಚರಿಕೆ ● ಟೋಲ್ ರದ್ದುಗೊಳಿಸಲು ಆಗ್ರಹ

ಮೈಸೂರು, ಮಾ.20(ಪಿಎಂ)– ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇ ಸಂಚಾರಕ್ಕೆ ಯೋಗ್ಯವಾಗಿಲ್ಲ. ಇಲ್ಲಿ ಸಮರ್ಪಕ ಮೂಲ ಸೌಲಭ್ಯ ಕಲ್ಪಿಸಿ, ಸಂಚಾರಕ್ಕೆ ಯೋಗ್ಯಗೊಳಿಸಬೇಕು. ಅಲ್ಲಿವರೆಗೆ ಸದರಿ ಹೆದ್ದಾರಿ ಬಂದ್ ಮಾಡಬೇಕೆಂದು ಒತ್ತಾಯಿಸಿದ ರಾಜ್ಯ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ, ಆದಾಗ್ಯೂ ಸಂಚಾರಕ್ಕೆ ಅವಕಾಶ ಕಲ್ಪಿಸಿ, ಟೋಲ್ ಸಂಗ್ರಹಿಸಿದರೆ, ಯುಗಾದಿ ಬಳಿಕ ಮೈಸೂರಿನಿಂದ ಬೆಂಗಳೂರುವರೆಗೆ ನೂರೊಂದು ವಾಹನಗಳಲ್ಲಿ ಟೋಲ್ ಪಾವತಿಸದೇ ಸಂಚರಿಸುವ ಭಾರೀ ಚಳವಳಿ ನಡೆಸಲಾಗುವುದು ಎಂದು ಎಚ್ಚರಿಸಿದರು.



ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇ ಸಂಚಾರಕ್ಕೆ ಯೋಗ್ಯವಾಗಿಲ್ಲ. ನಮಗೆ ಜನರ ಪ್ರಾಣ ಮುಖ್ಯ. ಆದ್ದರಿಂದ ಸಂಪೂರ್ಣ ಸಂಚಾರ ಬಂದ್ ಮಾಡಬೇಕು. ಈ ಹಿಂದೆ ಹಳೇ ರಸ್ತೆ ಯಲ್ಲಿ ಅಪಘಾತಗಳು ಹೆಚ್ಚಾಗುತ್ತಿವೆ, ಇದನ್ನು ತಪ್ಪಿಸಲು ಎಕ್ಸ್‌ಪ್ರೆಸ್ ವೇ ಮಾಡುವುದಾಗಿ ಕಾರಣ ನೀಡಲಾಗಿತ್ತು. ಆದರೆ ಈ ಹೆದ್ದಾರಿಯಲ್ಲಿ ಅದಾಗಲೇ 93 ಮಂದಿ ಅಪಘಾತದಿಂದ ಮೃತಪಟ್ಟಿದ್ದಾರೆ. ದರೋಡೆಯೂ ನಡೆದಿದೆ. ಪೆಟ್ರೋಲ್ ಬಂಕ್‌ಗಳೂ ಈ ಮಾರ್ಗದಲ್ಲಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸುರಕ್ಷಿತ ಸಂಚಾರಕ್ಕೆ ಯೋಗ್ಯವಾಗಿ ಹೆದ್ದಾರಿ ಸಜ್ಜುಗೊಳಿಸಬೇಕು. ಎಲ್ಲಾ ಮೂಲಭೂತ ಸೌಕರ್ಯ ಕಲ್ಪಿಸಬೇಕು. ಟೋಲ್ ಪಾವತಿ ರದ್ದುಗೊಳಿಸಬೇಕೆಂಬುದು ರೈತ ಸಂಘದ ನಿಲುವು. ಈಗಾಗಲೇ ಸಾರ್ವಜನಿಕರು ರಸ್ತೆ ತೆರಿಗೆ, ವಾಹನ ತೆರಿಗೆ ಸೇರಿದಂತೆ ಅನೇಕ ರೀತಿಯ ತೆರಿಗೆ ಪಾವತಿಸಿಯೂ ಟೋಲ್ ಪಾವತಿಸಬೇಕೆಂಬುದು ಸೂಕ್ತವಲ್ಲ ಎಂದು ಪ್ರತಿಪಾದಿಸಿದರು.

ವಿಧಾನಸಭಾ ಚುನಾವಣೆ ಸಮೀಪದಲ್ಲಿದ್ದು, ಈ ಸಂದರ್ಭದಲ್ಲಿ ಜನತೆಯ ನೈಜ ಸಮಸ್ಯೆಗಳ ಪರಿಹಾರದ ಬಗ್ಗೆ ಚರ್ಚೆಯಾಗುತ್ತಿಲ್ಲ. ಮಂಡ್ಯದಲ್ಲಿ 109 ದಿನಗಳ ಕಾಲ ಧರಣಿ ಕುಳಿತರೂ ಕಬ್ಬು ಬೆಳೆಗಾರರ ಸಮಸ್ಯೆ ಇಂದಿಗೂ ಬಗೆಹರಿದಿಲ್ಲ. ಪ್ರಸ್ತುತ ಚರ್ಚೆಯಲ್ಲಿರುವ ಉರಿಗೌಡ ಮತ್ತು ನಂಜೇಗೌಡ ಎಂಬುವರು ಅಸ್ತಿತ್ವದಲ್ಲಿ ಇದ್ದರೋ ಇಲ್ಲವೋ ಅದು ನಮಗೆ ಬೇಕಿಲ್ಲ. ಬಿಜೆಪಿಯವರಿಗೆ ನಿಜಕ್ಕೂ ಮಂಡ್ಯದ ಜನತೆ ಮೇಲೆ ಪ್ರೀತಿ ಇದ್ದರೆ, ಮಂಡ್ಯ ಜಿಲ್ಲೆಯ ಜನತೆ ಎದುರಿಸುತ್ತಿರುವ ನೈಜ ಸಮಸ್ಯೆಗಳನ್ನು ಬಗೆಹರಿ ಸಬೇಕೆಂದು ಹೇಳಿದರು. ಸಂಘದ ಪದಾಧಿಕಾರಿಗಳಾದ ಹೊಸಕೋಟೆ ಬಸವರಾಜು, ಮರಂಕಯ್ಯ, ನಾಗನಹಳ್ಳಿ ವಿಜಯೇಂದ್ರ, ಮಂಡಕಳ್ಳಿ ಮಹೇಶ್, ಮಹದೇವನಾಯಕ, ನಾಗನಹಳ್ಳಿ ಚಂದ್ರಶೇಖರ್ ಸುದ್ದಿಗೋಷ್ಠಿಯಲ್ಲಿದ್ದರು.

> "ರೈತರ ಪಂಪ್‌ಸೆಟ್‌ಗಳಿಗೆ ಕನಿಷ್ಠ 10 ಗಂಟೆ ಗುಣಾತ್ಮಕ ವಿದ್ಯುತ್ ಪೂರೈಸಬೇಕು. ಸರ್ಕಾರ ಈಗಾಗಲೇ ಹೊರಡಿಸಿರುವ ನಿಯಮದಂತೆಯೇ 72 ಗಂಟೆಯೊಳಗೆ ಟ್ರಾನ್ಸ್‌ಫಾರ್ಮರ್ ದುರಸ್ತಿಗೊಳಿಸಬೇಕು. ಈ ಸಂಬಂಧ ರಾಜ್ಯದ ಎಲ್ಲಾ ಎಸ್ಕಾಂಗಳ ಎದುರು ಮಾ.27ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಅಂತೆಯೇ ಅಂದು ಮೈಸೂರು ವಿಜಯನಗರದಲ್ಲಿರುವ ಸೆಸ್ಕ್ ವಿಭಾಗೀಯ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು.
>
> –ಬಡಗಲಪುರ ನಾಗೇಂದ್ರ

ಗಾಣಿಗ ಜಾತಿಯನ್ನು ಪ್ರವರ್ಗ 3ಬಿಗೆ ಸೇರಿಸುವುದನ್ನು ಕೈಬಿಡಿ: ಜಿಲ್ಲಾಧಿಕಾರಿಗೆ ಮನವಿ



ಮೈಸೂರು,ಮಾ. 20– ಹಿಂದುಳಿದ ವರ್ಗದ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಅವರು ಈಗ ಪ್ರವರ್ಗ '2ಎ' ಗಾಣಿಗ ಜಾತಿಯನ್ನು ಪ್ರವರ್ಗ '3ಬಿ'ಗೆ ಹೊಸದಾಗಿ ಸೇರ್ಪಡೆಗೆ ಶಿಫಾರಸ್ಸು ಮಾಡಿರುವುದನ್ನು ಕೈಬಿಡುವಂತೆ ಜಿಲ್ಲಾ ಗಾಣಿಗರ ಅಭಿವೃದ್ಧಿ ಮಹಾ ಸಂಘದ ಪದಾಧಿಕಾರಿಗಳು ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಅವರಿಗೆ ಮನವಿ ಮಾಡಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಗಾಣಿಗ ಸಮಾಜವು ಶೈಕ್ಷಣಿಕವಾಗಿ, ಆರ್ಥಿಕವಾಗಿ, ಸಾಮಾಜಿಕವಾಗಿ ವಂಚಿತರಾಗಿರುವುದರಿಂದ ಹಾಗೂ ಶೋಷಣೆಗೆ ಒಳಗಾಗಿರುವ ಜಾತಿಯಾಗಿದ್ದು, ಕೂಡಲೇ ಪ್ರವರ್ಗ 3ಬಿ ಸೇರ್ಪಡೆ ಮಾಡುವುದನ್ನು ಕೈಬಿಡುವಂತೆ ಸಂಘ ಒತ್ತಾಯಿಸಿದೆ.

ನಾಳೆಯಿಂದ ಮಾ.27ರವರೆಗೆ ಮೈಸೂರು ರಂಗಹಬ್ಬ

ಮೈಸೂರು ಹವ್ಯಾಸಿ ತಂಡಗಳಿಂದ ನಾಟಕ ಪ್ರದರ್ಶನ



ಮೈಸೂರು,ಮಾ.20(ಪಿಎಂ)– ಮೈಸೂರು ಜಿಲ್ಲಾ ಹವ್ಯಾಸಿ ರಂಗಕರ್ಮಿಗಳ ವೇದಿಕೆ ವತಿಯಿಂದ ಮಾ.22ರಿಂದ 27ರವರೆಗೆ ಮೈಸೂರು ಹವ್ಯಾಸಿ ತಂಡಗಳ ನಾಟಕ ಪ್ರದರ್ಶನ 'ಮೈಸೂರು ರಂಗಹಬ್ಬ' ಆಯೋಜಿಸಲಾಗಿದೆ ಎಂದು ವೇದಿಕೆ ಅಧ್ಯಕ್ಷ ಹೆಚ್.ಎಸ್.ಸುರೇಶ್‌ಬಾಬು ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲಾಮಂದಿರ ಆವರಣದ ಕಿರುರಂಗ ಮಂದಿರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಕಾರದೊಂದಿಗೆ ಈ ನಾಟಕೋತ್ಸವ ಏರ್ಪಡಿಸಲಾಗಿದೆ. ಮಾ.22ರಂದು ಸಂಜೆ 6ಕ್ಕೆ ಹಿರಿಯ ರಂಗಕರ್ಮಿ ಪ್ರಸನ್ನ ನಾಟಕೋತ್ಸವಕ್ಕೆ ಚಾಲನೆ ನೀಡಲಿದ್ದಾರೆ. ಅತಿಥಿಗಳಾಗಿ ರಂಗಭೂಮಿ ಮತ್ತು ಸಿನಿಮಾ ನಟ ಮಂಡ್ಯ ರಮೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ ಪಾಲ್ಗೊಳ್ಳಲಿದ್ದಾರೆ ಎಂದರು.

ಮಾ.26ರಂದು ಬೆಳಗ್ಗೆ 10.30ಕ್ಕೆ 'ಮೈಸೂರು ಹವ್ಯಾಸಿ ರಂಗಭೂಮಿ; ನೆನ್ನೆ, ಇಂದು, ನಾಳೆ' ವಿಷಯ ಕುರಿತು ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ. ಹಿರಿಯ ರಂಗಕರ್ಮಿ ರಾಜಶೇಖರ ಕದಂಬ ಅಧ್ಯಕ್ಷತೆಯಲ್ಲಿ ಹಿರಿಯ ರಂಗಕರ್ಮಿ ಹೆಚ್.ಎಸ್.ಉಮೇಶ್, ನಾಟಕಕಾರ ಹೊರೆಯಾಲ ದೊರೆಸ್ವಾಮಿ ವಿಷಯ ಮಂಡಿಸಲಿದ್ದಾರೆ ಎಂದು ತಿಳಿಸಿದರು.

ಮಾ.27ರಂದು ಸಂಜೆ 6.30ಕ್ಕೆ ಸಮಾರೋಪ ಸಮಾರಂಭ ಏರ್ಪಡಿಸಿದ್ದು, ಹಿರಿಯ ರಂಗಕರ್ಮಿ ಸಿ.ಬಸವಲಿಂಗಯ್ಯ ಸಮಾರೋಪ ನುಡಿಗಳನ್ನಾಡಲಿದ್ದಾರೆ. ಹಿರಿಯ ರಂಗಕರ್ಮಿಗಳಾದ ರಾಮೇಶ್ವರಿ ವರ್ಮ, ಇಂದಿರಾ ನಾಯರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ. ಸುದರ್ಶನ್ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಇದೇ ವೇಳೆ ರಂಗವಲ್ಲಿ ಬಿ.ರಾಜೇಶ್, ವಿಶ್ವ ರಂಗಭೂಮಿ ಅಂಗವಾಗಿ ವಿಶ್ವರಂಗಭೂಮಿ ಸಂದೇಶ ವಾಚಿಸಲಿದ್ದಾರೆ ಎಂದು ಹೇಳಿದರು.

ಪ್ರತಿದಿನ ಸಂಜೆ 6.30ಕ್ಕೆ ನಾಟಕ ಪ್ರದರ್ಶನ ನಡೆಯಲಿದ್ದು, ಸಾರ್ವಜನಿಕರು ನಾಟಕಗಳನ್ನು ವೀಕ್ಷಿಸಲು 100 ರೂ.ಗಳ ಟಿಕೆಟ್ ವ್ಯವಸ್ಥೆ ಮಾಡಲಾಗಿದೆ. ಮಾ.22ರಂದು ಸಾತ್ವಿಕ ಫೌಂಡೇಷನ್ ತಂಡದಿಂದ 'ಸೇತು ಮಾಧವನ ಸಲ್ಲಾಪ' ನಾಟಕ ಪ್ರದರ್ಶನಗೊಳ್ಳಲಿದೆ. ಅಂತೆಯೇ ಮಾ.23ರಂದು ನವೋದಯ ತಂಡದಿಂದ 'ಅರಣ್ಯ ಕಾಂಡ', ಮಾ.24ರಂದು ದೇಚಿ ಕ್ರಿಯೇಷನ್ಸ್ ತಂಡದಿಂದ 'ನಮ್ಮ ನಿಮ್ಮೊಳಗೊಬ್ಬ', ಮಾ.25ರಂದು ಜನಮನ ತಂಡದಿಂದ 'ಸಂಬಂಜ ಅನ್ನೋದು ದೊಡ್ಡದು ಕನಾ', ಮಾ.26ರಂದು ನಿರಂತರ ತಂಡದಿಂದ 'ವಾರಸುದಾರ', ಮೈಸೂರು ಮೈಮ್ ಟೀಮ್‌ನಿಂದ 'ಬೇಕಾಗಿದ್ದಾರೆ' ನಾಟಕಗಳು ಪ್ರದರ್ಶನ ಕಾಣಲಿವೆ ಎಂದು ವಿವರಿಸಿದರು.

ಇದೇ ಮೊದಲ ಬಾರಿಗೆ ಮೈಸೂರು ರಂಗಹಬ್ಬ ನಾಟಕೋತ್ಸವ ಆಯೋಜಿಸಿದ್ದು, ನಗರದ ಹವ್ಯಾಸಿ ರಂಗತಂಡಗಳಿಗೆ ಅವಕಾಶ ಕಲ್ಪಿಸಿ ಪರಸ್ಪರ ಬೆಸೆಯುವ ಮಹತ್ತರ ಉದ್ದೇಶ ಹೊಂದಿದೆ. ಈ ಬಾರಿ 6 ದಿನಗಳ ಉತ್ಸವ ಆಯೋಜಿಸಿದ್ದು, ಮುಂದಿನ ವರ್ಷದಿಂದ ಇನ್ನೂ ದೊಡ್ಡ ಮಟ್ಟದಲ್ಲಿ ನಡೆಸಲು ಉದ್ದೇಶಿಸಲಾಗಿದೆ ಎಂದರು. ವೇದಿಕೆ ಕಾರ್ಯದರ್ಶಿ ಡಾ.ಹೆಚ್.ಎಂ. ಕುಮಾರಸ್ವಾಮಿ, ಖಜಾಂಚಿ ಜಿ.ಸುಬ್ಬನರಸಿಂಹ, ಮೈಸೂರು ರಂಗಹಬ್ಬ ಸಂಚಾಲಕ ದೀಪಕ್ ಮೈಸೂರು ಗೋಷ್ಠಿಯಲ್ಲಿದ್ದರು.

ಉಚಿತ ಸಾಮೂಹಿಕ ಬ್ರಹ್ಮೋಪದೇಶ

ಮೈಸೂರು,ಮಾ.20–ಮೈಸೂರಿನ ನರಸಿಂಹರಾಜ ವಿಪ್ರ ಸಂಘವು ಮೇ 7ರಂದು ರಾಜೇಂದ್ರನಗರ (ಕೆಸರೆ)ದಲ್ಲಿರುವ ಶ್ರೀ ಗಾಯತ್ರಿ ರಾಮಮಂದಿರದಲ್ಲಿ ಉಚಿತ ಸಾಮೂಹಿಕ ಬ್ರಹ್ಮೋಪದೇಶ ಏರ್ಪಡಿಸಲಾಗಿದೆ. ಮೊದಲು ಬಂದ ವಿಪ್ರ ಬಾಂಧವರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ವಿವರಗಳಿಗೆ ಮೊ. 9916887034, 98860 89350 ಸಂಪರ್ಕಿಸಬಹುದು.

ಅಧಿಕ ರಕ್ತದೊತ್ತಡ ಉಚಿತ ತಪಾಸಣಾ ಶಿಬಿರ

ಮೈಸೂರು,ಮಾ.20–ಮೈಸೂರಿನ ರಾಮಕೃಷ್ಣನಗರದ ಸುಯೋಗ್ ಆಸ್ಪತ್ರೆಯಲ್ಲಿ ಮಾ. 25ರವರೆಗೆ ಅಧಿಕ ರಕ್ತದೊತ್ತಡ ಉಚಿತ ತಪಾಸಣಾ ಶಿಬಿರವನ್ನು ಡಾ.ಕೆ.ಎನ್.ನಿಶ್ಚಿತ್ ಅವರ ನೇತೃತ್ವದಲ್ಲಿ ಆಯೋಜಿಸಲಾಗಿದೆ. ಶಿಬಿರದಲ್ಲಿ ಬೆಳಗಿನ ಜಾವದ ತಲೆನೋವು, ಮೂಗಿನಲ್ಲಿ ರಕ್ತ, ಅನಿಯಮಿತ ಹೃದಯದ ಬಡಿತ, ಎದೆನೋವು, ದೃಷ್ಟಿಯಲ್ಲಿ ಬದಲಾವಣೆ, ಆಯಾಸ, ವಾಕರಿಕೆ, ವಾಂತಿ ಈ ಸಮಸ್ಯೆಗಳಿರುವವರು ಕೂಡಲೇ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳತಕ್ಕದ್ದು. ಮಾಹಿತಿಗಾಗಿ 0821–2533600, 99863 99862 ಸಂಪರ್ಕಿಸಬಹುದಾಗಿದೆ.

ಕಾಂಗ್ರೆಸ್‌ಗೆ ನೇಮಕ



ಮೈಸೂರು, ಮಾ. 20– ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ, ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿಯನ್ನಾಗಿ ತಿ.ನರಸೀಪುರ ತಾಲೂಕಿನ ಕೆ.ಆರ್.ಶೇಷಾದ್ರಿ ಯಾದವ್ ಅವರನ್ನು ನೇಮಕ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸದೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೈಸೂರು ಮಿತ್ರ 43

ಮಾರ್ಚ್ 21 ಮಂಗಳವಾರ 2023

ಸಂಪುಟ: 43 | ಸಂಚಿಕೆ: 331 | ಪುಟಗಳು: 12

ದೂರವಾಣಿ: 2496520, 2496521, 2496526, 2496527, 2496528,
ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್,
ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಉರಿಗೌಡ, ನಂಜೇಗೌಡ ವಿಚಾರದ ಚರ್ಚೆ ಬೇಡ

ಆದಿಚುಂಚನಗಿರಿ ಮಹಾಸಂಸ್ಥಾನದ ಪೀಠಾಧ್ಯಕ್ಷರಾದ ನಿರ್ಮಲಾನಂದನಾಥ ಶ್ರೀಗಳ ಸಲಹೆ



ಮಂಡ್ಯ, ಮಾ.20– ಚುನಾವಣೆ ಹೊಸ್ತಿಲಲ್ಲಿ ರಾಜಕೀಯ ಮುಖಂಡರಿಗೆ ಅಸ್ತ್ರವಾಗಿರುವ ಉರಿಗೌಡ, ನಂಜೇಗೌಡ ವಿಚಾರಕ್ಕೆ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧಿಪತಿ ನಿರ್ಮಲಾನಂದನಾಥ ಶ್ರೀಗಳು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ತಾಲೂಕಿನ ಕೊಮ್ಮೇರಹಳ್ಳಿಯಲ್ಲಿರುವ ಆದಿಚುಂಚನಗಿರಿ ಶಾಖಾ ಮಠದಲ್ಲಿ ಸೋಮವಾರ ಉರಿಗೌಡ, ನಂಜೇಗೌಡರ ಹೆಸರಲ್ಲಿ ಸಿನಿಮಾ ಮಾಡುವುದಾಗಿ ಘೋಷಿಸಿ, ಶೀರ್ಷಿಕೆ ರಿಜಿಸ್ಟರ್ ಮಾಡಿಸಿದ್ದ ನಿರ್ಮಾಪಕ ಹಾಗೂ ತೋಟಗಾರಿಕಾ ಸಚಿವ ಮುನಿರತ್ನ ಅವರೊಂದಿಗೆ ಚರ್ಚಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸ್ತುತ ಉರಿಗೌಡ, ನಂಜೇಗೌಡರ ವಿಚಾರದಲ್ಲಿ ನಡೆಯುತ್ತಿರುವ ಚರ್ಚೆಗಳು ಗೊಂದಲ ಸೃಷ್ಟಿಸಿವೆ. ಒಂದು ಸಮುದಾಯದ ಭಾವನೆಗೆ ಧಕ್ಕೆ ತರುವಂತಿದೆ. ಕೂಡಲೇ ಚರ್ಚೆ ನಿಲ್ಲಿಸಬೇಕು. ಸರಿಯಾದ ಸಂಶೋಧನೆ ಆಗದಿರುವ ವಿಚಾರವನ್ನು ಎಲ್ಲೆಂದರಲ್ಲಿ ಚರ್ಚಿಸುವುದು ಸೂಕ್ತವಲ್ಲ ಎಂದು ರಾಜಕಾರಣಿಗಳಿಗೆ ಕಿವಿಮಾತು ಹೇಳಿದರು.

● 9ನೇ ಪುಟಕ್ಕೆ

ಉರಿಗೌಡ, ನಂಜೇಗೌಡ ಸಿನಿಮಾ ಮಾಡಲ್ಲ: ಮುನಿರತ್ನ

ಮಂಡ್ಯ: ಉರಿಗೌಡ, ನಂಜೇಗೌಡರ ಹೆಸರಲ್ಲಿ ಸಿನಿಮಾ ಮಾಡುವ ಯೋಚನೆ ಇತ್ತು. ಆದರೆ ನಾನು ಈಗ ಯಾವುದೇ ಕಾರಣಕ್ಕೂ ಈ ಸಿನಿಮಾ ಮಾಡುವುದಿಲ್ಲ ಎಂದು ಸ್ವಾಮೀಜಿಗಳಿಗೆ ಮಾತು ಕೊಟ್ಟಿದ್ದೇನೆ. ಹೀಗಾಗಿ ನಿರ್ಮಲಾನಂದನಾಥ ಸ್ವಾಮೀಜಿಗಳ ಸಲಹೆಯಂತೆ ಸಿನಿಮಾ ವಿಚಾರವನ್ನು ಇಲ್ಲಿಗೇ ಕೈ ಬಿಡುತ್ತೇನೆ ಎಂದು ತೋಟಗಾರಿಕಾ ಸಚಿವ, ಚಿತ್ರ ನಿರ್ಮಾಪಕ ಮುನಿರತ್ನ ಹೇಳಿದರು.

ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧಿಪತಿ ನಿರ್ಮಲಾನಂದನಾಥ ಶ್ರೀಗಳ ಭೇಟಿಯಾಗಿ, ಮಾತು ಕತೆ ನಡೆಸಿದ ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಮೇ 14ಕ್ಕೆ ಚಿತ್ರದ ಮುಹೂರ್ತ ಮಾಡಿ ಬಹಳ ದೊಡ್ಡ ಸಿನಿಮಾ ಮಾಡಬೇಕು

● 9ನೇ ಪುಟಕ್ಕೆ

ಪದವೀಧರ ನಿರುದ್ಯೋಗಿ ಯುವಕರಿಗೆ ಕಾಂಗ್ರೆಸ್‌ನಿಂದ ಮತ್ತೊಂದು ವಾಗ್ದಾನ

ಮಾಸಿಕ 3 ಸಾವಿರ, ಡಿಪ್ಲೊಮಾದಾರರಿಗೆ 1500 ರೂ. ಭತ್ಯೆ

- ಎರಡು ವರ್ಷ ಕಾಲ ಈ ಭತ್ಯೆ ನೀಡುವ ಭರವಸೆ
- ಖಾಲಿ ಇರುವ 2.50 ಲಕ್ಷ ಹುದ್ದೆ ಭರ್ತಿ ಜೊತೆಗೆ 10 ಲಕ್ಷ ಯುವಕರಿಗೆ ಉದ್ಯೋಗ
- ಬೆಳಗಾವಿಯ ಯುವ ಕ್ರಾಂತಿ ಸಮಾವೇಶದಲ್ಲಿ ರಾಹುಲ್ ಗಾಂಧಿ ಘೋಷಣೆ



ಬೆಂಗಳೂರು, ಮಾ. 20 (ಕೆಎಂಶಿ)– ಯುವಕರ ಸಂಕಷ್ಟಕ್ಕೆ ಸ್ಪಂದಿಸಲು ಕಾಂಗ್ರೆಸ್ ಪಕ್ಷ ಪ್ರತಿ ಪದವೀಧರ ನಿರುದ್ಯೋಗಿ ಯುವಕರಿಗೆ ಮಾಸಿಕ 3 ಸಾವಿರ, ಡಿಪ್ಲೊಮಾ ಮಾಡಿರುವ ಯುವಕರಿಗೆ 1500 ರೂ.ಗಳನ್ನು 2 ವರ್ಷಗಳ ಕಾಲ ನೀಡುವುದಾಗಿ ಘೋಷಿಸಿದೆ

ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಪಕ್ಷ ಅಧಿಕಾರಕ್ಕೆ ಬಂದರೆ ಸರ್ಕಾರಿ ಇಲಾಖೆಯಲ್ಲಿ ಖಾಲಿ ಇರುವ 2.50 ಲಕ್ಷ ಹುದ್ದೆಗಳನ್ನು ಭರ್ತಿ ಮಾಡುವುದಲ್ಲದೆ, ರಾಜ್ಯದ 10 ಲಕ್ಷ ಯುವಕರಿಗೆ ಉದ್ಯೋಗ ಕಲ್ಪಿಸುವುದಾಗಿ ಪಕ್ಷದ ಅಧಿನಾಯಕ ರಾಹುಲ್‌ಗಾಂಧಿ ಘೋಷಣೆ ಮಾಡಿದ್ದಾರೆ. ಬೆಳಗಾವಿಯಲ್ಲಿ ನಡೆದ ಯುವಕ್ರಾಂತಿ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕರ್ನಾಟಕದ ಬಿಜೆಪಿ ಸರ್ಕಾರ 40% ಕಮಿಷನ್ ಭ್ರಷ್ಟಾಚಾರದಲ್ಲಿ ಮುಳುಗಿ ಯುವಕರಿಗೆ ಯಾವುದೇ ಉದ್ಯೋಗ ಕಲ್ಪಿಸಿಲ್ಲ ಎಂದರು. ಮುಂಬರುವ ವಿಧಾನಸಭಾ ಚುನಾವಣೆಗೆ ನಾಲ್ಕನೇ ಭರವಸೆಯನ್ನು ಘೋಷಣೆ ಮಾಡಿದ ರಾಹುಲ್‌ಗಾಂಧಿ ಡಬಲ್ ಇಂಜಿನ್ ಸರ್ಕಾರ ಮಾಡಲಾಗದ್ದನ್ನು ನಾವು ಮಾಡಿ ತೋರಿಸುತ್ತೇವೆ. ಕರ್ನಾಟಕದ ಮೂಲಕ ಭಾರತ್ ಜೋಡೋ ಯಾತ್ರೆ ಸಾಗಿದ ಸಂದರ್ಭದಲ್ಲಿ ಎಲ್ಲಾ ವರ್ಗದ ಜನ ಅಭೂತಪೂರ್ವ ಬೆಂಬಲ ನೀಡಿ, ನಮಗೆ ಶಕ್ತಿ ತುಂಬಿದ್ದೀರಿ. ಯಾತ್ರೆ ಯಶಸ್ವಿಗೊಳಿಸಿದ್ದೀರಾ, ಇದೇ ಸಮಯದಲ್ಲಿ ನಿಮ್ಮ ಕಷ್ಟ ಸುಖಗಳನ್ನು ನಮ್ಮ ಬಳಿ ಹಂಚಿಕೊಂಡಿದ್ದೀರಿ.

ನಿಮ್ಮ ಕಷ್ಟಗಳಿಗೆ ಸ್ಪಂದಿಸುವ ಉದ್ದೇಶದಿಂದ ನಿರುದ್ಯೋಗಿಗಳಿಗೆ ಉದ್ಯೋಗ, ಮಹಿಳೆಯರಿಗೆ ಗೃಹಲಕ್ಷ್ಮೀ ಯೋಜನೆ ಮೂಲಕ ಮನೆಯೊಡತಿಗೆ ಎರಡು ಸಾವಿರ ರೂ. ಪ್ರೋತ್ಸಾಹ ಧನ, ಅನ್ನಭಾಗ್ಯ ಯೋಜನೆಯ ಮೂಲಕ ಬಡಕುಟುಂಬದ ಸದಸ್ಯರಿಗೆ ತಲಾ ಹತ್ತು ಕೆಜಿ ಅಕ್ಕಿ ಉಚಿತವಾಗಿ ನೀಡಲಾಗುವುದು. ಅಲ್ಲದೇ ಗೃಹಜ್ಯೋತಿ ಯೋಜನೆಯ ಮೂಲಕ ಪ್ರತಿ ಮನೆಗೆ 200 ಯೂನಿಟ್ ವಿದ್ಯುತ್ ಉಚಿತವಾಗಿ ನೀಡಲು ಕಾಂಗ್ರೆಸ್ ಪಕ್ಷ ತೀರ್ಮಾನಿಸಿದೆ ಎಂದರು. ರಾಜ್ಯ

● 9ನೇ ಪುಟಕ್ಕೆ

5, 8ನೇ ತರಗತಿ ಬೋರ್ಡ್ ಪರೀಕ್ಷೆ

'ಹೈ' ಆದೇಶ ಪ್ರಶ್ನಿಸಿ ಸುಪ್ರೀಂಗೆ ಮೇಲ್ಮನವಿ; ಮಾರ್ಚ್ 27ಕ್ಕೆ ವಿಚಾರಣೆ



ದೆಹಲಿ: 5 ಮತ್ತು 8ನೇ ತರಗತಿ ಬೋರ್ಡ್ ಪರೀಕ್ಷೆ ಸಂಬಂಧ ಹೈಕೋರ್ಟ್ ನೀಡಿದ್ದ ಆದೇಶ ಪ್ರಶ್ನಿಸಿ, ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲಾಗಿದೆ. ತುರ್ತು ವಿಚಾರಣೆ ನಡೆಸಲು ಸುಪ್ರೀಂಕೋರ್ಟ್‌ಗೆ ವಕೀಲರು ಮನವಿ ಮಾಡಿದ್ದಾರೆ. ಮಾರ್ಚ್ 27ರಂದು ವಿಚಾರಣೆ ನಡೆಸುವುದಾಗಿ ಸಿಜೆಐ ಹೇಳಿದೆ.

ಮಾರ್ಚ್ 27ರಿಂದ ಪರೀಕ್ಷೆಗಳು ಆರಂಭವಾಗಲಿವೆ. ಅಷ್ಟರೊಳಗೆ ಮೇಲ್ಮನವಿ ವಿಚಾರಣೆ ನಡೆಸುವಂತೆ ವಕೀಲರು ಮನವಿ ಮಾಡಿದರು. ಆದರೆ ಸಿಜೆಐ ಡಿ.ವೈ ಚಂದ್ರಚೂಡ್ ವಕೀಲರ ಮನವಿ ತಿರಸ್ಕರಿಸಿದ್ದಾರೆ. ಆದೇಶದಲ್ಲಿ ಮಧ್ಯಪ್ರವೇಶ ಮಾಡುವುದು ಬೇಡ. ರಾಜ್ಯದಲ್ಲಿ ಯಾವುದು ಉತ್ತಮವೆಂದು ಹೈಕೋರ್ಟ್‌ಗೆ ಗೊತ್ತಿದೆ. ನಾವು 4,000 ಶಾಲೆಗಳನ್ನು ಪ್ರತಿನಿಧಿಸುತ್ತೇವೆ. ನಮ್ಮ ವಾದ ಆಲಿಸಬೇಕೆಂದು ಸಿಜೆಐ ಚಂದ್ರಚೂಡ್ ಅವರು ವಕೀಲರಿಗೆ ಸೂಚಿಸಿದ್ದಾರೆ. ವಕೀಲರ ವಾದದ ಬಳಿಕ ಮಾರ್ಚ್ 27ರಂದೇ ವಿಚಾರಣೆ ನಡೆಸುವುದಾಗಿ ಸಿಜೆಐ ತಿಳಿಸಿದ್ದಾರೆ.

ಪ್ರಸಕ್ತ ಶೈಕ್ಷಣಿಕ ವರ್ಷದಿಂದ 5 ಮತ್ತು 8ನೇ ತರಗತಿಗಳಿಗೆ ಪಬ್ಲಿಕ್ ಪರೀಕ್ಷೆ ನಡೆಸಲು ಶಿಕ್ಷಣ ಇಲಾಖೆ ನಿರ್ಧರಿಸಿತ್ತು. ಇದನ್ನು ವಿರೋಧಿಸಿ ಪೋಷಕರ ಸಂಘಟನೆ ಕೋರ್ಟ್ ಮೊರೆ ಹೋಗಿತ್ತು. ಪೋಷಕರ ಮನವಿಗೆ ಸಮ್ಮತಿಸಿ 5 ಮತ್ತು 8ನೇ ತರಗತಿಯ ಮಕ್ಕಳಿಗೆ ಬೋರ್ಡ್ ಪರೀಕ್ಷೆ ನಡೆಸುವ ಬಗ್ಗೆ ಸರ್ಕಾರ ಹೊರಡಿಸಿದ್ದ ಸುತ್ತೋಲೆಯನ್ನು ಹೈಕೋರ್ಟ್‌ನ

● 9ನೇ ಪುಟಕ್ಕೆ

24ರಿಂದ ಸಾರಿಗೆ ನೌಕರರ ಮುಷ್ಕರ




ಬೆಂಗಳೂರು: ಸಾರಿಗೆ ನೌಕರರ ವೇತನ ಪರಿಷ್ಕರಣೆ ಆದೇಶಕ್ಕೆ ನೌಕರರ ಜಂಟಿ ಕ್ರಿಯಾ ಸಮಿತಿ ಸಹಮತ ವ್ಯಕ್ತಪಡಿಸಿದ್ದರೆ, ನೌಕರರ ಸಮಾನಮನಸ್ಕರ ವೇದಿಕೆ ಪೂರ್ವ ನಿಗದಿಯಂತೆ ಮಾರ್ಚ್ 24ರಿಂದ ಮುಷ್ಕರ ನಡೆಸುವುದಾಗಿ ಘೋಷಿಸಿದೆ.

ಶೇ. 15ರಷ್ಟು ವೇತನ ಹೆಚ್ಚಳ ಮಾಡಿ ಸರ್ಕಾರ ಆದೇಶಿಸಿದೆ. ಇದನ್ನು ಒಪ್ಪಿಕೊಂಡಿರುವ ಜಂಟಿ ಕ್ರಿಯಾಸಮಿತಿ, ಮಾರ್ಚ್ 21ರಿಂದ ನಡೆಸಲು ಉದ್ದೇಶಿಸಿದ್ದ ಮುಷ್ಕರ ಕೈಬಿಟ್ಟಿದೆ. ಸಮಿತಿಯ ನೇತೃತ್ವ ವಹಿಸಿದ್ದ ಎಚ್.ವಿ.ಅನಂತ ಸುಬ್ಬರಾವ್ ಅವರು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಭಾನುವಾರ ಭೇಟಿ ಮಾಡಿ, ಅಭಿನಂದನೆ ಸಲ್ಲಿಸಿದರು. ಜಂಟಿ ಕ್ರಿಯಾ ಸಮಿತಿ ಜತೆ ಗುರುತಿಸಿಕೊಳ್ಳದ ನೌಕರರ ಕೂಟದ ಅಧ್ಯಕ್ಷ ಚಂದ್ರಶೇಖರ್ ನೇತೃತ್ವದ ಸಮಾನಮನಸ್ಕರ ವೇದಿಕೆ, 'ಮುಷ್ಕರ ಅಚಲ' ಎಂದು ಹೇಳಿದೆ. 'ಸರ್ಕಾರಿ ನೌಕರರಿಗೆ ಸರಿ ಸಮಾನ ವೇತನ ನೀಡಬೇಕು ಎಂಬ ನಮ್ಮ ಬೇಡಿಕೆ ಈಡೇರಿಲ್ಲ. ಆದ್ದರಿಂದ ಮುಷ್ಕರ ಹಿಂಪಡೆಯುವುದಿಲ್ಲ. ಮಾಡು ಇಲ್ಲವೇ ಮಡಿ ಹೋರಾಟ ನಡೆಯಲಿದೆ' ಎಂದು ಚಂದ್ರಶೇಖರ್ ಸ್ಪಷ್ಟಪಡಿಸಿದರು.

ಮುಷ್ಕರ ವಾಪಸ್ ಪಡೆದ ಸಂಘಟನೆ ಸರ್ಕಾರದೊಂದಿಗೆ ಒಳ ಒಪ್ಪಂದ ಮಾಡಿಕೊಂಡಿದೆ. ಇದೇ ಕಾರಣಕ್ಕೆ ಗೊಂದಲ ಸೃಷ್ಟಿಸಿ ಮುಷ್ಕರ ವಾಪಸ್ ಪಡೆದಿದೆ ಎಂದು ಟೀಕಿಸಿದರು.

ಕೊಡವ ಅಭಿವೃದ್ಧಿ ನಿಗಮ ಸ್ಥಾಪನೆ



ಮಡಿಕೇರಿ, ಮಾ.20–ಕೊಡವರ ಸರ್ವತೋಮುಖ ಅಭಿವೃದ್ಧಿಗೆ ರಾಜ್ಯ ಸರಕಾರ ಕೊಡವ ಅಭಿವೃದ್ಧಿ ನಿಗಮ ಸ್ಥಾಪಿಸಿದೆ. ಇಂದು ಮುಖ್ಯಮಂತ್ರಿಗಳು ಈ ಕುರಿತು ಅಧಿಕೃತ ಆದೇಶ ಹೊರಡಿಸಿದ್ದಾರೆ. ಮಾ.18ರಂದು ನಾಪೋಕ್ಲುವಿನಲ್ಲಿ ನಡೆದ 23ನೇ ವರ್ಷದ ಕೊಡವ ಕುಟುಂಬಗಳ ನಡುವಿನ ಕೌಟುಂಬಿಕ ಅಪ್ಪಚೆಟ್ಟೋಳಂಡ ಹಾಕಿ ಉತ್ಸವಕ್ಕೆ ಚಾಲನೆ ನೀಡಿ, ಕೊಡವ ಅಭಿವೃದ್ಧಿ ನಿಗಮ ಸ್ಥಾಪನೆ ಮಾಡುವುದಾಗಿ ಮುಖ್ಯಮಂತ್ರಿಗಳು ಕಳೆದ ಶನಿವಾರವಷ್ಟೇ ಘೋಷಿಸಿದ್ದರು. ಇಂದು ನಿಗಮ ಸ್ಥಾಪನೆಯ ಅಧಿಕೃತ ಆದೇಶ ಹೊರಡಿಸಿದ್ದಾರೆ.

ಕೊಡವ ಅಭಿವೃದ್ಧಿ ನಿಗಮ ಸ್ಥಾಪಿಸುವಂತೆ ಈ ಹಿಂದೆ ಹಲವು ಬಾರಿ ಸರಕಾರದ ಮೇಲೆ ಒತ್ತಡ ಹೇರಲಾಗಿತ್ತು. ಜಿಲ್ಲೆಯ ಶಾಸಕರೊಂದಿಗೆ ವಿವಿಧ ಕೊಡವ ಸಂಘಟನೆಗಳ ಪ್ರಮುಖರು ಹಾಗೂ ಪದಾಧಿಕಾರಿಗಳು ಮುಖ್ಯಮಂತ್ರಿಗಳ ಬಳಿ ನಿಯೋಗ ತೆರಳಿ ನಿಗಮ ಸ್ಥಾಪನೆಗೆ ಆಗ್ರಹಿಸಿದ್ದರು.

ಸರಕಾರದ ಅಧಿಕೃತ ಆದೇಶಕ್ಕೆ ಶಾಸಕ ಕೆ.ಜಿ.ಬೋಪಯ್ಯ ಹಾಗೂ ಎಂ.ಪಿ.ಅಪ್ಪಚ್ಚು ರಂಜನ್ ಹರ್ಷ ವ್ಯಕ್ತಪಡಿಸಿದ್ದಾರೆ. ಅನೇಕ ವರ್ಷಗಳ ಬೇಡಿಕೆಯನ್ನು ಬಿಜೆಪಿ ಸರಕಾರ ಈಡೇರಿಸಿದೆ ಎಂದು ಶಾಸಕದ್ವಯರು ಹೇಳಿದ್ದಾರೆ.

ಈ ಮೊದಲು ಯುಕೊ ಸಂಘಟನೆ ಕೊಡವ ಅಭಿವೃದ್ಧಿ ನಿಗಮ ಸ್ಥಾಪಿಸುವಂತೆ ನನ್ನ ನೇತೃತ್ವದಲ್ಲಿ ಮುಖ್ಯಮಂತ್ರಿಗಳ ಬಳಿಗೆ ನಿಯೋಗವನ್ನು ಕರೆದೊಯ್ದಿತ್ತು. ಇದೀಗ ಸರಕಾರ ಈ ಬೇಡಿಕೆ ಈಡೇರಿಸಿದೆ. ಬೇಡಿಕೆಗೆ ಶೀಘ್ರ ಸ್ಪಂದಿಸಿದ ಮುಖ್ಯಮಂತ್ರಿ ಬೊಮ್ಮಾಯಿ ಅವರಿಗೆ ಅಭಿನಂದನೆ ಸಲ್ಲಿಸುವುದಾಗಿ ಕೆ.ಜಿ. ಬೋಪಯ್ಯ ಹೇಳಿದ್ದಾರೆ.

ಮೈಸೂರಲ್ಲಿ ಬೆಳಕು ಚೆಲ್ಲಿ ಕಡ್ಡಾಯ ಮತದಾನ ಸಂದೇಶ



ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ನಗರ ಪಾಲಿಕೆ ವತಿಯಿಂದ ಚುನಾವಣೆ ಹಾಗೂ ಮತದಾನ ಜಾಗೃತಿ ಜಾಥಾ ಸೋಮವಾರ ನಡೆಯಿತು.

ಮೈಸೂರು, ಮಾ.20(ಎಂಕೆ)– ಮತದಾನ ನಮ್ಮ ಹಕ್ಕು, ತಪ್ಪದೇ ಮತದಾನ ಮಾಡಿ... ಪ್ರಜಾಪ್ರಭುತ್ವ ಗೆಲ್ಲಿಸಿ... ದುಡ್ಡು, ಕುಡಿತ ಹಾಗೂ ಮಾದಕ ವಸ್ತುಗಳ ಆಮಿಷಕ್ಕೆ ಒಳಗಾಗದೆ ಮತ ಚಲಾಯಿಸಿ... ನಿಮ್ಮದು ಕೇವಲ ಒಂದು ಮತವಲ್ಲ, ಅದು ಪ್ರಜಾಪ್ರಭುತ್ವದ ಮೌಲ್ಯ.... ಬಲಿಷ್ಠ ಭಾರತ ನಿರ್ಮಾಣಕ್ಕೆ ತಪ್ಪದೇ ಮತದಾನ ಮಾಡಿ... ಸಂದೇಶಗಳೊಂದಿಗೆ ಮತದಾನದ ಮೌಲ್ಯಗಳನ್ನು ತಿಳಿಸುವ ಚುನಾವಣಾ ಜಾಗೃತಿ ಜಾಥಾ ಮೈಸೂರಿನಲ್ಲಿ ಅರ್ಥಪೂರ್ಣವಾಗಿ ನಡೆಯಿತು. ಮೈಸೂರಿನ ಟೌನ್‌ಹಾಲ್ ಎದುರು ಜಮಾವಣೆಗೊಂಡ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ನಗರ ಪಾಲಿಕೆ ಅಧಿಕಾರಿ, ಸಿಬ್ಬಂದಿಗಳು ಕ್ಯಾಂಡಲ್ ಲೈಟ್ ಹಾಗೂ ಮತದಾನ ಜಾಗೃತಿ ಫಲಕಗಳನ್ನು ಹಿಡಿದು 'ಮತದಾನಕ್ಕಿಂತ ಇನ್ನೊಂದಿಲ್ಲ. ನಾನು ಖಚಿತವಾಗಿ ಮತದಾನ ಮಾಡುವೆ', 'ಅಭಿವೃದ್ಧಿಯ ನೆರಳು ಈ ನಿಮ್ಮ ಬೆರಳು' ಎಂದು ತಿಳಿಸುವ ಮೂಲಕ ಸಾರ್ವಜನಿಕರಲ್ಲಿ ಚುನಾವಣೆ ಹಾಗೂ ಮತದಾನದ ಜಾಗೃತಿ ಮೂಡಿಸಿದರು.

ಟೌನ್‌ಹಾಲ್‌ನಿಂದ ಆರಂಭವಾದ ಚುನಾವಣಾ ಜಾಗೃತಿ ಜಾಥಾ ಕೆ.ಆರ್.ವೃತ್ತದವರೆಗೆ ಸಾಗಿತು. ಕ್ಯಾಂಡಲ್ ಲೈಟ್ ಹಿಡಿದು ಸಾರ್ವಜನಿಕರನ್ನು ಸೆಳೆದ ಅಧಿಕಾರಿ, ಸಿಬ್ಬಂದಿಗಳು ತಪ್ಪದೇ ಮತದಾನ ಮಾಡುವಂತೆ ಮನವರಿಕೆ ಮಾಡಿಕೊಟ್ಟರು. ನಂತರ ಕೆ.ಆರ್.ವೃತ್ತವನ್ನು ಸುತ್ತುವರಿದು, ಪ್ರತಿಯೊಬ್ಬರು ತಪ್ಪದೇ ಮತದಾನ ಮಾಡಬೇಕು. ಮತದಾನದ ಮೂಲಕ ದೇಶ ನಿರ್ಮಾಣಕ್ಕೆ ಸಹಕರಿಸಬೇಕು

● 9ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಪತ್ನಿ : ನಾನು ನಿಮಗಾಗಿ ಜಗತ್ತಿನ ಜೊತೆ ಜಗಳವಾಡಬಲ್ಲೆ.
ಪತಿ : ಆದರೆ ನೀನು ಯಾವಾಗಲೂ ನನ್ನ ಜೊತೆಯೇ ಹೆಚ್ಚು ಜಗಳವಾಡುತ್ತಿರುವೆ...?
ಪತ್ನಿ : ಹೌದು, ನೀವೇ ತಾನೆ ನನ್ನ ಜಗತ್ತು

ಮೈಸೂರು ಮಿತ್ರ

ಮಂಗಳವಾರ, 21 ಮಾರ್ಚ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ನೀವು ಏನೇ ಮಾಡಿದರೂ ಅದು ಶ್ರೇಷ್ಠ ಸಾಧನೆ ಆಗಬೇಕಿದ್ದರೆ ಅದನ್ನು ಪ್ರೀತಿಸಿ ಹಾಗೂ ಅದಕ್ಕಾಗಿ ತ್ಯಾಗ ಮಾಡಿ –ಮಾಯಾ ಎಂಜಲೋ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹಿಡಿ ತುಂಬಾ ಹಣವಿದ್ದರೂ ಗುಡಿ ಚೆನ್ನಾಗಿರಬೇಕು

ನಿಮ್ಮ ಪತ್ರಗಳು

ರೈತರ ಪಂಪ್‌ಸೆಟ್‌ಗಳಿಗೆ ಬೆಳಗಿನ ಸಮಯದಲ್ಲಿ ವಿದ್ಯುತ್ ನೀಡಲಿ

ಮಾನ್ಯರೆ,



ರೈತರು ದೇಶದ ಬೆನ್ನೆಲುಬು ಎನ್ನುತ್ತಾರೆ. ರೈತರು ಸುಖಿಯಾಗಿದ್ದರೆ ದೇಶವು ಕೂಡ ಸಮೃದ್ಧವಾಗಿರುತ್ತದೆ ಎಂಬುದು ಎಲ್ಲರಿಗೂ ತಿಳಿದಿರುವ ವಿಚಾರ. ಆದರೆ ಇತ್ತೀಚಿನ ದಿನಗಳಲ್ಲಿ ರೈತರ ಪರಿಸ್ಥಿತಿ ಅತಂತ್ರವಾಗಿದೆ. ರೈತ ತನ್ನ ಮೂಲ ಕಸುಬು ವ್ಯವಸಾಯವನ್ನು ಬಿಟ್ಟು ನಗರದ ಕಡೆ ಮುಖ ಮಾಡಿದ್ದಾನೆ. ಇದಕ್ಕೆ ಹಲವಾರು ಕಾರಣಗಳಿವೆ. ಅದರಲ್ಲಿ ಮಳೆ ಮತ್ತು ವಿದ್ಯುತ್ ಸಮಸ್ಯೆ ಕೂಡ ಒಂದಾಗಿದೆ.

ರೈತ ಕಾಲ ಕಾಲಕ್ಕೆ ಮಳೆ ಬಾರದಿದ್ದರೆ ಅನಿವಾರ್ಯವಾಗಿ ಪಂಪ್‌ಸೆಟ್‌ಗಳನ್ನು ಅವಲಂಬಿಸುತ್ತಾನೆ. ಅದರಲ್ಲೂ ಮಳೆ ಕಡಿಮೆಯಿರುವ ಪ್ರದೇಶಗಳಲ್ಲಿ ಇದರ ಅವಶ್ಯಕತೆ ಬಹಳಷ್ಟಿದೆ. ಪಂಪ್‌ಸೆಟ್‌ಗಳು ಸರಿಯಾಗಿ ಕೆಲಸ ನಿರ್ವಹಿಸಬೇಕಾದರೆ ಉತ್ತಮ ಗುಣಮಟ್ಟದ ವಿದ್ಯುತ್ ಅವಶ್ಯಕತೆಯಿದೆ.

ಸರ್ಕಾರವೂ ಪಂಪ್‌ಸೆಟ್‌ಗಳಿಗೆ ದಿನಕ್ಕೆ 7 ಗಂಟೆ 3 ಪೇಸ್ ವಿದ್ಯುತ್ ನೀಡುತ್ತೇವೆ ಎಂಬುವುದು ಸ್ವಾಗತಾರ್ಹ ವಿಷಯವಾಗಿದೆ. ಆದರೆ ಕೊಡುವ ವಿದ್ಯುತ್ ಯಾವ ಸಮಯದಲ್ಲಿ ಎಂಬುದೇ ದೊಡ್ಡ ಪ್ರಶ್ನೆಯಾಗಿದೆ. ವಿದ್ಯುತ್ ನಿಗಮಗಳು ನೀಡುವ ವಿದ್ಯುತ್ ರಾತ್ರಿ ಸಮಯದಲ್ಲಿ ಆದರೆ ಅದೂ ರೈತರಿಗೆ ದೊಡ್ಡ ಸಮಸ್ಯೆಯಾಗುವುದರಲ್ಲಿ ಸಂಶಯವಿಲ್ಲ. ರೈತ ಮುಂಜಾನೆ ಎದ್ದು, ತಾನು ಸಾಕಿದ ದನಕರುಗಳ ಕೊಟ್ಟಿಗೆ ಸ್ವಚ್ಛತೆ ಸೇರಿದಂತೆ ನಿತ್ಯ ಕೆಲಸಗಳನ್ನು ಮುಗಿಸಿ ಅವನು ಜಮೀನು ಕಡೆ ಹೋಗುವುದು ಸರ್ವೆ ಸಾಮಾನ್ಯವಾಗಿದೆ. ಬೆಳಗಿನಿಂದ ಸಂಜೆಯವರೆಗೆ ತನ್ನ ಜಮೀನಿನಲ್ಲಿ ಕಾಯಕ ನಿರತನಾಗಿರುತ್ತಾನೆ. ಅವನು ರಾತ್ರಿ ವಿಶ್ರಾಂತಿ ತೆಗೆದುಕೊಳ್ಳುವ ಸಮಯವಾಗಿರುತ್ತದೆ. ಆ ಸಮಯದಲ್ಲಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ನೀಡಿದರೆ ಅವನ ಪರಿಸ್ಥಿತಿ ಚಿಂತಾಜನಕವಾಗುತ್ತದೆ.

ರಾತ್ರಿ ಸಮಯದಲ್ಲಿ ವಿದ್ಯುತ್ ನೀಡಿದರೆ ಹಲವಾರು ಸಮಸ್ಯೆಗಳನ್ನು ರೈತ ಎದುರಿಸಬೇಕಾಗುತ್ತದೆ. ಅದರಲ್ಲಿ ವಿಷಜಂತುಗಳ ಭಯ ಒಂದಾಗಿದೆ. ಅದರಲ್ಲೂ ಇತ್ತೀಚೆಗೆ ಭಾರೀ ಸುದ್ದಿಯಾಗಿರುವ ಚಿರತೆ ದಾಳಿಯ ಅಪಾಯವೂ ರೈತ ಸಮುದಾಯವನ್ನು ಕಂಗಾಲಾಗಿಸಿದೆ. ಆದ್ದರಿಂದ ವಿದ್ಯುತ್‌ನ್ನು ಬೆಳಗಿನ ಸಮಯದಲ್ಲಿ ನೀಡಿದರೆ ತುಂಬಾ ಸಹಾಯ ಮಾಡಿದಂತಾಗುತ್ತದೆ. ಇದು ರೈತ ಸಮುದಾಯದ ಒತ್ತಾಯ ಮಾತ್ರವಲ್ಲ ಕಳಕಳಿ ಮನವಿಯೂ ಆಗಿದೆ.

– ಬಸವರಾಜಪ್ಪ ಹೆಚ್ ಹಾಡ್ಯ, ಕೆ.ಆರ್. ನಗರ ತಾ.

ಉರಿಗೌಡ, ನಂಜೇಗೌಡರ ಬಗ್ಗೆ ಯಾಕಿಷ್ಟು ಜಿಜ್ಞಾಸೆ?

ಮಾನ್ಯರೆ,



ರಾಜ್ಯ ರಾಜಕಾರಣದ ದಿಕ್ಕನ್ನು ಬದಲಾಯಿಸುವ ವಿಧಾನಸಭಾ ಚುನಾವಣೆಗಳು ಸಮೀಪಿಸುತ್ತಿರುವ ಸಂದರ್ಭದಲ್ಲಿ ವಿವಿಧ ರಾಜಕೀಯ ಪಕ್ಷಗಳು ಉರಿಗೌಡ, ನಂಜೇಗೌಡರನ್ನು ತಮ್ಮ ಕಂಕುಳಿನಲ್ಲಿ ಕಟ್ಟಿಕೊಂಡು ವಿವಾದಗಳನ್ನು ಸೃಷ್ಟಿಸಿ ಪ್ರತಿದಿನ ಇವರ ಬಗ್ಗೆ ಒಂದಿಲ್ಲೊಂದು ಹೇಳಿಕೆಗಳನ್ನು ನೀಡುತ್ತಾ ಮತದಾರರನ್ನು ದಿಕ್ಕು ತಪ್ಪಿಸುವ ಪ್ರಯತ್ನ ಮಾಡುತ್ತಿರುವುದು ನೋಡುಗರ-ಕೇಳುಗರ ದೃಷ್ಟಿಯಲ್ಲಿ ಹಾಸ್ಯಾಸ್ಪದ ಅನ್ನಿಸುತ್ತಿದೆ.

ಉರಿಗೌಡ ಹಾಗೂ ನಂಜೇಗೌಡರು ನಿಜಕ್ಕೂ ಟಿಪ್ಪುವನ್ನು ಕೊಂದ ವೀರಾಧಿವೀರರು(!?) ಎಂಬ ಪ್ರಸಂಗವನ್ನು ಒಪ್ಪುವುದು ಅಥವಾ ಬಿಡುವುದು ಜನತೆಗೆ ಬಿಟ್ಟ ವಿಚಾರ. ಈ ಘಟನೆಯನ್ನು ಜನತೆಗೆ ನಂಬಿಸುವ ನಿಟ್ಟಿನಲ್ಲಿ ವಿವಿಧ ರಾಜಕೀಯ ಪಕ್ಷಗಳು ಹೋದಲೆಲ್ಲಾ ಈ ಬಗ್ಗೆ ವಿವಾದಾತ್ಮಕ ಹೇಳಿಕೆಗಳನ್ನು ನೀಡಿ, ತಮ್ಮ ಮಾತುಗಳನ್ನು ಮತದಾರರು ನಂಬಿ, ಅವುಗಳು ಮತಗಳಾಗಿ ತಮ್ಮ ಪಕ್ಷದ ಜೋಳಿಗೆಗೆ ಬಂದು ಬೀಳುತ್ತವೆ ಎಂದು ಅವರು ಭಾವಿಸುವುದೇ ಒಂದು ದೊಡ್ಡ ಭ್ರಮೆ! ಏಕೆಂದರೆ ಇತ್ತೀಚಿನ ದಿನಗಳಲ್ಲಿ ಸಾಕಷ್ಟು ಪ್ರಬುದ್ಧರಾಗಿರುವ ನಮ್ಮ ಮತದಾರರು ರಾಜಕೀಯ ನಾಯಕರು ನೀಡುವಂತಹ ಈ ರೀತಿಯ ಹೇಳಿಕೆಗಳನ್ನು ನಂಬಿ ಓಟು ಹಾಕುವ ಮಟ್ಟಕ್ಕೆ ಇಳಿಯಲಾರರು. ಮತದಾರರು ಈಗ ವಿಚಾರವಂತರಾಗಿದ್ದಾರೆ. ಯಾವುದು ಸತ್ಯ, ಯಾವುದು ಸುಳ್ಳು ಎಂಬ ನಿರ್ಣಯವನ್ನು ಸದ್ದಿಲ್ಲದೆ ಅನಾವರಣ ಮಾಡುವ ಮಟ್ಟಕ್ಕೆ ಬೆಳೆದಿದ್ದಾರೆ. ನಿಜಕ್ಕೂ ಟಿಪ್ಪುವನ್ನು ಕೊಂದವರು ಉರಿಗೌಡ, ನಂಜೇಗೌಡರೇ ಎಂಬ ಸತ್ಯದ ಅನಾವರಣದ ಮೇಲೆ ಬೆಳಕು ಚೆಲ್ಲುವ ಸಂಗತಿಯನ್ನು ಇತಿಹಾಸ ತಜ್ಞರನ್ನು ಒಳಗೊಂಡ ಸಮಿತಿಗೆ ಒಪ್ಪಿಸಿ ಅವರು ನೀಡುವ ವರದಿಗೆ ನಾವುಗಳೆಲ್ಲರೂ ಬದ್ಧರೆಂಬ ಮಾತಿಗೆ ಸಿದ್ಧಾಂತಕ್ಕೆ ಪ್ರತಿಯೊಬ್ಬ ರಾಜಕಾರಣಿಗಳು ಒಪ್ಪಿಕೊಂಡು ಈ ವಿವಾದಕ್ಕೆ ತೆರೆ ಎಳೆಯುವುದು ಸೂಕ್ತವಾಗಿದೆ. **–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.**

ಮಾದಪ್ಪನ ಸನ್ನಿಧಿಯಲ್ಲಿ ಸಮಸ್ಯೆಗಳದ್ದೇ ಕಾರುಬಾರು!

ಮಾನ್ಯರೆ,



ಮಲೆ ಮಹದೇಶ್ವರ ಬೆಟ್ಟಕ್ಕೆ ಬರುವ ಭಕ್ತಾದಿಗಳಿಗೆ ಸರಿಯಾದ ಮೂಲ ವ್ಯವಸ್ಥೆಗಳಿಲ್ಲ. ಬೆಟ್ಟದಲ್ಲಿನ ಸರ್ಕಾರಿ ಬಸ್ ನಿಲ್ದಾಣದಲ್ಲಿರುವ ಸಾರ್ವಜನಿಕ ಶೌಚಾಲಯದ ಪರಿಸ್ಥಿತಿ ಬಹಳ ಹದಗೆಟ್ಟಿದೆ. ಇನ್ನು ತಾಳಬೆಟ್ಟದಲ್ಲಿ ಶುಚಿಯಾಗಿರೋ ಒಂದೇ ಒಂದು ಶೌಚಾಲಯವಿಲ್ಲ. ಇತ್ತ ಮುಖ ಕೊಡೊಕಾಗಲ್ಲ. ಜನಗಳು ತಂಗೋ ಲಾಡ್ಜ್‌ಗಳಂತೂ ಕೊಡೋ ಕಾಸಿಗೂ ಸುಖವಿಲ್ಲ. ಕಿಟಕಿಗಳು ಇದ್ದರೂ ಮುಚ್ಚೋಕಾಗಲ್ಲ. ಶಾಕೆಟ್‌ಗಳಿದ್ದರೂ ಕರೆಂಟ್ ಪಾಸಾಗಲ್ಲ, ತಿಗಣೆ, ಸೊಳ್ಳೆ ಕಾಟ, ಶುಚಿತ್ವವಂತೂ ಅಷ್ಟಕ್ಕಷ್ಟೆ. ಇನ್ನು ಬೆಟ್ಟಕ್ಕೆ ಹೋಗುವ ರಸ್ತೆಯಂತೂ ಅಲ್ಲಲ್ಲಿ ಕಿತ್ತು ಹಾಳಾಗಿ ಅಪಾಯಕಾರಿಯಾಗಿವೆ. ರಾಜಕಾರಣಿಗಳು, ದೊಡ್ಡೋರು ಬರೋಕೆ ಹೋಗೋಕೆ ನಾಗಮಲೆ ರಸ್ತೆಯಲ್ಲಿ ಒಳ್ಳೆಯ ಹೆಲಿಪ್ಯಾಡ್ ಮಾಡಿಸಿಕೊಂಡಿದ್ದಾರೆ. ಹೆಲಿಪ್ಯಾಡಿಂದ ದೇವಸ್ಥಾನಕ್ಕೆ ಹೋಗಲು ಡಾಂಬರ್ ಹಾಕಿಸಿಕೊಂಡಿದ್ದಾರೆ. ಅವರಿಗೆ ಬೇಕಾಗಿರೋದನ್ನೆಲ್ಲಾ ಸರಿಯಾಗಿ ಮಾಡಿಸಿಕೊಂಡಿದ್ದಾರೆ ಅಷ್ಟೆ.. ಮಾಡೊ ಕೆಲ್ಸಗಳ ಮಾತ್ರಯ್ಯ... ಮಾದಪ್ಪ ಒಬ್ಬ ಜಂಗಮ, ಅವನಿಗ್ಯಾಕೆ ಈ ಮೂರ್ತಿ, ಪ್ರತಿಮೆಯಲ್ಲ. ಅವನಿಗೆ ಜನಗಳಾಡೋ ಜನಪದ ಹಾಡುಗಳು, ಕಂಸಾಳೆ ಪದಗಳು, ಸೀಗೆ ಸೊಪ್ಪು, ರಾಗಿ ಮುದ್ದೆ, ಉಘೇ ಮಾದಪ್ಪ ಅನ್ನೋ ಕೂಗು ಅಷ್ಟೆ ಸಾಕು ನಮ್ಮ ಮಾದಪ್ಪನಿಗೆ. ಈ ಪ್ರತಿಮೆಗಳೆಲ್ಲಾ ಬೇಕಿರಲಿಲ್ಲ. ಸ್ಥಾವರಕ್ಕಳಿವುಂಟು ಜಂಗಮಕ್ಕಳಿವಿಲ್ಲ? ಉಘೇಮಾದಪ್ಪ.

– ನಂದೀಶ್ ಎನ್.ಬೂವಳ್ಳಿ, ದೊಡ್ಡಬೂವಳ್ಳಿ ಗ್ರಾಮ, ಮಳವಳ್ಳಿ ತಾ.



ಬನ್ನೂರು ಕೆ. ರಾಜು
ಸಾಹಿತಿ, ಪತ್ರಕರ್ತ
ಮೊ : 94815 33167

ಬಹುಮುಖಿ

ಪ್ರಕೃತಿ ಚೆಲುವಿನ ಅನಾವರಣ ಯುಗಾದಿ



ಯುಗ ಯುಗಾದಿ ಕಳೆದರೂ ಯುಗಾದಿ ಮರಳಿ ಬರುತಿದೆ, ಹೊಸ ವರುಷಕೆ ಹೊಸ ಹರುಷವ ಹೊಸತು ಹೊಸತು ತರುತಿದೆ...." ವರಕವಿ ಬೇಂದ್ರೆ ಅವರ ಈ ಹೊನ್ನುಡಿಗಳಂತೆ ಯುಗಾದಿ ಮತ್ತೆ ಬಂದಿದೆ.

ಪ್ರತಿವರ್ಷ ಬರುತ್ತಲೇ ಇರುತ್ತದೆ. ಯುಗಾದಿ ಎಂದರೆ ಹಾಗೇನೆ. ಹಣ್ಣೆಲೆ ಉದುರಿ ಚಿಗುರೆಲೆ ನಳನಳಿಸುವ ಸಂಭ್ರಮ. ಭೂ ಮಾತೆ ಹಸಿರು ಮುಕ್ಕಳಿಸುವ ಮಧುರ ಕ್ಷಣ. ಮಧು ಚೆಲ್ಲುವ ಹೂಗಳ ಮೇಲೆ ಝೇಂಕರಿಸುವ ಜೇನ್ದುಂಬಿಗಳ ಸಡಗರ. ನೆತ್ತಿಯ ಮೇಲೆ ಸುಡುವ ಸೂರ್ಯನಿದ್ದರೂ, ತಂಪೆರೆವ ತಂಗಾಳಿಯ ನವೋಲ್ಲಾಸ. ಮುಂಬರುವ ಎಲ್ಲ ಹಬ್ಬಗಳಿಗೂ ಮುನ್ನುಡಿ ಬರೆವ ಕಾಲ. ಕಷ್ಟ-ಸುಖಗಳೆರಡನ್ನೂ ಸಮನಾಗಿ ಸ್ವೀಕರಿಸುವುದರ ಸಂಕೇತವಾಗಿ ಬೇವು-ಬೆಲ್ಲವನ್ನು ಮೆಲ್ಲುವ ದಿನ. ವರುಷಕ್ಕೊಂದು ಹೊಸ ಜನ್ಮ ಪಡೆವ ಪ್ರಕೃತಿ ದೇವಿಗೆ ನಮಿಸುವ ದಿನ. ಇದೆಲ್ಲಕ್ಕೂ ಒಂದೇ ಹೆಸರು ಅದೇ ಯುಗಾದಿ ಅರ್ಥಾತ್ ಉಗಾದಿ. ನಮ್ಮ ಎಲ್ಲ ಧಾರ್ಮಿಕ ಆಚರಣೆ ಹಬ್ಬ-ಹರಿದಿನಗಳಿಗೆ ಪ್ರೇರಣೆಯನ್ನು ನಿಸರ್ಗದಲ್ಲಿ ಕಾಣಬಹುದು. ಹಾಗೆಯೇ ಯುಗಾದಿ ಹಬ್ಬದ ಪ್ರೇರಣೆಗೆ ಮೂಲ ನಿಸರ್ಗವೇ ಆಗಿದೆ.

ವರ್ಷದ ಮೊದಲ ದಿನವನ್ನು ಹೊಸ ವರ್ಷದ ಹಬ್ಬವಾಗಿ ಆಚರಿಸಿ ಸಂಭ್ರಮ ಪಡುವ ಸಂಪ್ರದಾಯ ಜಗತ್ತಿನೆಲ್ಲೆಡೆ ಬಹು ಹಿಂದಿನಿಂದಲೂ ಉಂಟು. ಜನವರಿ ತಿಂಗಳ ಮೊದಲ ದಿನವನ್ನು ವರ್ಷಾರಂಭವೆಂದು ರೋಮನ್ನರು, ಆಂಗ್ಲರು ಸೇರಿದಂತೆ ಪಾಶ್ಚಿಮಾತ್ಯರೆಲ್ಲರೂ ಆಚರಿಸುತ್ತಾರೆ. ಯುಗಾದಿ ಎನ್ನುವುದು ಯುಗದ ಆದಿ. ಯುಗವೆಂದರೆ ಸೃಷ್ಟಿಯ ಕಾಲಮಾನ ಅರ್ಥಾತ್ ಹೊಸ ವರ್ಷ. ಆದಿ ಎಂದರೆ ಆರಂಭ ಅಥವಾ ವರ್ಷದ ಪ್ರಾರಂಭದ ದಿನ. ಅಂದರೆ ಹೊಸ ವರ್ಷದ ಪ್ರಾರಂಭದ ದಿನವೇ ಯುಗಾದಿ. ಹಲವು ಪರಂಪರೆಗಳ ಆಗಮದ ಕಾಲವಾಗಿ ಯುಗಾದಿ ಭಾರತೀಯರಲ್ಲಿ ರೂಢಿಗೆ ಬಂದಿದೆ. ಉತ್ತರ ಭಾರತದಲ್ಲಿ ವಿಕ್ರಮ ಶಕೆಯ ಆರಂಭದ ದಿನ ಕಾರ್ತಿಕ ಶುದ್ಧ ಪಾಡ್ಯವನ್ನು ಯುಗಾದಿ ಹಬ್ಬವಾಗಿ ಆಚರಿಸುತ್ತಾರೆ. ಜ್ಯೋತಿಷ್ಯಶಾಸ್ತ್ರದಲ್ಲಿ ಮೂರು ರೀತಿಯ ಲೆಕ್ಕಾಚಾರಗಳುಂಟು. ಅವುಗಳೆಂದರೆ 1. ಬಾರ್ಹಸ್ಪತ್ಯಮಾನ, 2.ಚಾಂದ್ರಮಾನ, 3. ಸೌರಮಾನ. ಉತ್ತರಭಾರತದವರು ಬಾರ್ಹಸ್ಪತ್ಯಮಾನದಲ್ಲಿ ಯುಗಾದಿಯನ್ನು ಆಚರಿಸುತ್ತಾರೆ.

ವಿಶೇಷವಾಗಿ ದಕ್ಷಿಣ ಭಾರತದ ರಾಜ್ಯಗಳಿಗೆ ಯುಗಾದಿ ಅತ್ಯಂತ ವಿಜೃಂಭಣೆ ಹಬ್ಬವಾಗಿದೆ. ನಮ್ಮಲ್ಲಿ ಯುಗಾದಿ ಹಬ್ಬವನ್ನು ಎರಡೂ ರೀತಿಯಲ್ಲಿ ಆಚರಿಸುವ ಪದ್ಧತಿಯಿದೆ. ಒಂದು ಚಾಂದ್ರಮಾನ ಯುಗಾದಿ ಮತ್ತೊಂದು ಸೌರಮಾನ ಯುಗಾದಿ. ಹೆಸರುಗಳೇ ಹೇಳುವಂತೆ ಮೊದಲನೆಯದು ಚಂದ್ರನನ್ನೂ ಎರಡನೆಯದು ಸೂರ್ಯನನ್ನೂ ಅವಲಂಬಿಸಿವೆ. ಚಂದ್ರನ ಚಲನೆಯನ್ನು ಅನುಸರಿಸಿ ಅಮಾವಾಸ್ಯೆ-ಹುಣ್ಣಿಮೆಗಳ ಆಧಾರದ ಮೇಲೆ ಮಾಸ ಗಣನೆ ಮಾಡುವ ಪದ್ಧತಿಗೆ ಚಾಂದ್ರಮಾನ ಎಂದು ಹೆಸರು. ತಿಂಗಳು ಹೆಸರು ಬಂದಿರುವುದೂ ಚಂದ್ರನಿಂದಲೇ. ಚಂದ್ರನ ಚಲನೆಯಲ್ಲಿ ವ್ಯತ್ಯಾಸವಾಗುವುದರಿಂದ ಚಾಂದ್ರಮಾನ ಯುಗಾದಿ ನಿರ್ದಿಷ್ಟ ಸಮಯದಲ್ಲಿ ಬರುವುದಿಲ್ಲ. ಮೇಷ ರಾಶಿಗೆ ಸೂರ್ಯ ಪ್ರವೇಶಿಸುವ ದಿನ ಸೌರಮಾನ ಯುಗಾದಿಯನ್ನು ಆಚರಿಸಲಾಗುತ್ತದೆ. ಭೂಮಿಯ ಚಲನೆಯಲ್ಲಿ ಹೆಚ್ಚಿನ ವ್ಯತ್ಯಾಸ ಇಲ್ಲದೆ ಇರುವುದರಿಂದ ಸಾಮಾನ್ಯವಾಗಿ ನಿಗದಿತ ಸಮಯದಲ್ಲಿ ಅಂದರೆ ಪ್ರತಿ ವರ್ಷ ಏಪ್ರಿಲ್ 14ರಂದು ಸೌರಮಾನ ಯುಗಾದಿ ಬರುತ್ತದೆ.

ಕರ್ನಾಟಕ, ಆಂಧ್ರಪ್ರದೇಶ, ಮಹಾರಾಷ್ಟ್ರ ಮತ್ತು ಗುಜರಾತ್ ರಾಜ್ಯಗಳಲ್ಲಿ ಚಾಂದ್ರಮಾನ ಯುಗಾದಿ ಆಚರಿಸುವ ಪದ್ಧತಿ ಇದೆ. ತಮಿಳುನಾಡು, ಕೇರಳ ಮತ್ತು ಉತ್ತರ ಭಾರತದ ಕೆಲವು ರಾಜ್ಯಗಳಲ್ಲಿ ಸೌರಮಾನ ಯುಗಾದಿ ರೂಢಿಯಲ್ಲಿದೆ. ಸಾಮಾನ್ಯವಾಗಿ ಕರ್ನಾಟಕದಲ್ಲಿ ಪ್ರತಿವರ್ಷದ ಚೈತ್ರಮಾಸದಲ್ಲಿ ಬರುವ ಮೊದಲ ದಿನವನ್ನು ಸಂವತ್ಸರಾದಿ ಪಾಡ್ಯಮಿ ಎಂದು ಪರಿಗಣಿಸಿ ಯುಗಾದಿಯನ್ನು ವರ್ಷದ ಮೊದಲ ಹಬ್ಬವಾಗಿ ಚೈತ್ರಮಾಸ ಶುದ್ಧ ಪಾಡ್ಯಮಿಯಂದು ಆಚರಿಸಲಾಗುತ್ತದೆ. ಈ ಹಬ್ಬವನ್ನು ಆಂಧ್ರದವರು ಉಗಾದಿ ಎನ್ನುತ್ತಾರೆ. ಮಹಾರಾಷ್ಟ್ರೀಯರು ಕೂಡ ಯುಗಾದಿ ಎಂದೇ ಹೇಳುತ್ತಾರೆ. ಸೌರಮಾನ ಯುಗಾದಿ ಆಚರಿಸುವ ಕೇರಳದವರು ಯುಗಾದಿಯನ್ನು 'ವರ್ಷ ಪುರಪ್ಪು' ಎಂದು ಆಚರಿಸಿದರೆ, ಕೆಲವರು ಶ್ರೀ ಕೃಷ್ಣನ ಪೂಜೆ ಮಾಡುತ್ತಾ 'ವೊಲ್ಲವರ್ಷ' ಎಂದೂ ಆಚರಿಸುತ್ತಾರೆ.

ಯುಗಾದಿಗೆ ಗುಡಿಪಾಡ್ಯ, ಪಾಡ್ಯದ ಗುಡಿ ಎಂಬ ಹೆಸರುಗಳೂ ಉಂಟು. ಗುಡಿ ಎಂದರೆ ಬಾವುಟ ಎಂದರ್ಥ. ಗುಜರಾತ್ ಮತ್ತು ಮಹಾರಾಷ್ಟ್ರಗಳಲ್ಲಿ ಹಾಗೂ ನಮ್ಮಲ್ಲೂ ಹಲವು ಕಡೆ ಮನೆ ಮನೆಯ ಮುಂದೆ 'ಪಾಡ್ಯದ ಗುಡಿ' ಕಟ್ಟುತ್ತಾರೆ. ಪಾಡ್ಯದ ಗುಡಿ ಎಂದರೆ ಉದ್ದವಾದ ಕೋಲೊಂದು ತುದಿಗೆ ಹೊಸಬಟ್ಟೆಯನ್ನು ಕಟ್ಟಿ ಅದರ ಮೇಲೆ ಹಿತ್ತಾಳೆ ಪಾತ್ರೆಯೊಂದನ್ನು ಬೋರಲು ಹಾಕಿರುತ್ತಾರೆ. ಯುಗಾದಿ ದಿನ ಅದಕ್ಕೆ ಪೂಜೆ ಮಾಡಿ ಪ್ರತಿಯೊಂದು ಮನೆ ಮುಂದೆ ಅದನ್ನು ಮೇಲಕ್ಕೆ ಏರಿಸುತ್ತಾರೆ. ಇದನ್ನು 'ಧ್ವಜ' ಎಂದೂ ಕರೆಯುತ್ತಾರೆ. ಇದೇ ಯುಗಾದಿಯ ಧ್ವಜಾರೋಹಣ. ಮಹಾಭಾರತದಲ್ಲೂ ಇದರ ಬಗ್ಗೆ ಉಲ್ಲೇಖವಿದೆ.



ವರ್ಷದಲ್ಲಿ ಬರುವ ಮೂರೂವರೆ ದಿನಗಳ ಶುಭ ಮುಹೂರ್ತ ಜ್ಯೋತಿಷ್ಯ ಶಾಸ್ತ್ರದಲ್ಲಿ ಅತ್ಯಂತ ಶ್ರೇಷ್ಠವಾದದ್ದು. ಅವುಗಳೆಂದರೆ ಯುಗಾದಿ, ಅಕ್ಷಯ ತದಿಗೆ, ವಿಜಯದಶಮಿ ಮತ್ತು ಬಲಿಪಾಡ್ಯಮಿಯ ಅರ್ಧ ದಿವಸ. ಈ ಮೂರೂವರೆ ಶುಭ ಘಳಿಗೆಯಲ್ಲಿ ನಮಗೆ ಯುಗಾದಿಯೇ ವರ್ಷದ ಪ್ರಾರಂಭದ ಶುಭ ದಿನವಾಗಿದೆ. ಈ ದಿವಸ ಏನೇ ಕೆಲಸ ಕಾರ್ಯಗಳನ್ನು ಕೈಗೊಂಡರೂ, ಯಾವುದೇ ಉದ್ದಿಮೆಗಳಲ್ಲಿ ಯೋಜನೆಗಳನ್ನು ಆರಂಭಿಸಿದರೂ ಯಶಸ್ಸು ಕಟ್ಟಿಟ್ಟಬುತ್ತಿ ಎಂಬ ನಂಬಿಕೆ ಇದೆ. ಯುಗಯುಗಗಳಿಂದಲೂ ಅತ್ಯಂತ ಮಹತ್ವದ ಕಾರ್ಯಗಳು ಈ ಶುಭ ದಿವಸವೇ ನಡೆದಿವೆ ಎಂದು ಶಾಸ್ತ್ರ ಪುರಾಣಗಳೂ ಹೇಳುತ್ತವೆ. ಹಾಗಾಗಿ ಈಗಲೂ ಸಹ ಯುಗಾದಿಯಂದು ಹೊಸ ಕಾರ್ಯ ಚಟುವಟಿಕೆಗಳಿಗೆ, ಹೊಸ ಪದಾರ್ಥಗಳ ಖರೀದಿಗೆ, ಅವರವರ ಶಕ್ತ್ಯಾನುಸಾರ ಸಣ್ಣ ವ್ಯವಹಾರದಿಂದ ಹಿಡಿದು ದೊಡ್ಡ ದೊಡ್ಡ ವ್ಯವಹಾರಗಳಿಗೆ ನಮ್ಮಲ್ಲಿ ನಾಂದಿ ಹಾಡಲಾಗುತ್ತದೆ. ಅಷ್ಟರಮಟ್ಟಿಗೆ ಯುಗಾದಿ ಜನರಲ್ಲಿ ನವ ಚೈತನ್ಯವನ್ನು ತುಂಬುತ್ತದೆ.

ಯುಗಾದಿ ಹಬ್ಬವು ಹಲವು ಪರಂಪರೆಗಳ ಹಬ್ಬಗಳ ಪ್ರಾರಂಭಕ್ಕೆ ಮುನ್ನುಡಿ ಬರೆವ ದಿನವೂ ಹೌದು. ಬ್ರಹ್ಮದೇವನು ಈ ಜಗತ್ತನ್ನು ಚೈತ್ರಮಾಸದ ಶುಕ್ಲಪಕ್ಷದ ಮೊದಲನೆಯ ದಿನದ ಸೂರ್ಯೋದಯ ಕಾಲಕ್ಕೆ ಸೃಷ್ಟಿಸಿದ. ಬ್ರಹ್ಮದೇವ ಸೃಷ್ಟಿಯನ್ನು ಆರಂಭಿಸಿದ ದಿನವೇ ಯುಗಾದಿಯಾಗಿದೆ. ಅಂದೇ ಅವನು ಗ್ರಹ, ನಕ್ಷತ್ರ, ಮಾಸ, ಋತು, ವರ್ಷಾಧಿಪತಿಯನ್ನು ಸೃಷ್ಟಿಸಿ ಕಾಲಗಣನೆ ಆರಂಭಿಸಿದನೆಂದು ಹೇಮಾದ್ರಿ ಪಂಡಿತನ 'ಚತುರ್ವರ್ಗ ಚಿಂತಾಮಣಿ' ಎಂಬ ಪುರಾಣ ಗ್ರಂಥದಲ್ಲಿ ಹೇಳಲಾಗಿದೆ. ಶ್ರೀರಾಮನು ರಾವಣನನ್ನು ಸಂಹರಿಸಿ ಅಯೋಧ್ಯೆಗೆ ಬಂದು ರಾಮರಾಜ್ಯವಾಳಲು ಪ್ರಾರಂಭಿಸಿದ್ದು ಈ ಯುಗಾದಿಯಂದೇ. ಶಾಲಿವಾಹನ ಶಕೆ ಆರಂಭವಾದದ್ದು ಸಹ ಈ ಯುಗಾದಿ ದಿವಸವೇ. ಶಾಲಿವಾಹನ ಆ ದಿನ ಪಟ್ಟಾಭಿಶಕ್ತನಾದನೆಂದೂ, ಆದ್ದರಿಂದಾಗಿ ಈ ಚರಿತ್ರೆ ಕಾಲ 'ಶಾಲಿವಾಹನ' ಶಕ ಆಯಿತೆಂದೂ ಹೇಳಲಾಗುತ್ತದೆ. ಕ್ರಿಸ್ತ ವರ್ಷ ಆರಂಭವಾದ ಎಪ್ಪತ್ತೆಂಟು ವರ್ಷಗಳ ನಂತರ ಶಾಲಿವಾಹನ ಶಕೆ ಆರಂಭವಾಗುತ್ತದೆ. ದಕ್ಷಿಣ ಭಾರತದಲ್ಲಿ ಈ ಶಕೆ ಬಳಕೆಯಲ್ಲಿದೆ. ಭಾರತೀಯ ಪಂಚಾಂಗಗಳು ಈ ಶಕೆಯನ್ನು ಪ್ರಸ್ತಾಪಿಸುತ್ತವೆ. ಯುಗಾದಿ ಹಬ್ಬವು ಜೈನರಿಗೂ ಮಹತ್ವದ ಪವಿತ್ರದಿನವಾಗಿದೆ. ಏಕೆಂದರೆ ಮಲ್ಲಿ ನಾಥನೆಂಬ 14ನೇ ತೀರ್ಥಂಕರ ಹುಟ್ಟಿದ್ದು ಯುಗಾದಿಯಂದೇ. ಹಾಗೆಯೇ ಆದಿ ತೀರ್ಥಂಕರನ ಮಗ ಭರತ ಚಕ್ರವರ್ತಿಯೂ ದಿಗ್ವಿಜಯ ಸಾಧಿಸಿದ ದಿನವಿದು.

ವೇದಗಳ ಕಾಲದಿಂದಲೂ ಯುಗಾದಿಯ ಹಿರಿಮೆ ಗರಿಮೆಗಳು ಅನುರಣಿಸಿಕೊಂಡು ಬಂದಿವೆ. ಅಥರ್ವಣವೇದ, ಶತಪಥ ಬ್ರಾಹ್ಮಣ, ಧರ್ಮಸಿಂಧು, ನಿರ್ಣಯ ಸಿಂಧು ಮುಂತಾದ ಧರ್ಮಶಾಸ್ತ್ರ ಗ್ರಂಥಗಳಲ್ಲೂ ಯುಗಾದಿಯನ್ನು ಅಭೂತಪೂರ್ವವಾಗಿ ವರ್ಣಿಸಲಾಗಿದೆ. ಬ್ರಹ್ಮಾಂಡ ಮತ್ತು ಮಹಾಭಾರತಗಳಲ್ಲೂ ಯುಗಾದಿ ಪ್ರಸ್ತಾಪಗೊಂಡಿದೆ.

ಯುಗಾದಿಯಂದು ಸೂರ್ಯೋದಯಕ್ಕೂ ಮುನ್ನ ಮುಂಜಾನೆ ಎದ್ದು ಮಂಗಳ ಸ್ನಾನ ಮಾಡಿ ಶ್ರೀರಾಮನನ್ನು ಸ್ಮರಣೆ ಮಾಡಿ ಹೊಸಬಟ್ಟೆ ತೊಟ್ಟು ಮನೆಯನ್ನೆಲ್ಲ ಮಾವು-ಬೇವು ಎಲೆಗಳ ತೋರಣದಿಂದ ಸಿಂಗರಿಸಿ ಹೊಸ ವರ್ಷವನ್ನು ಬರಮಾಡಿಕೊಳ್ಳಲಾಗುತ್ತದೆ. ಬಾವುಟ ಹಾರಿಸುವುದು, ಬೇವು-ಬೆಲ್ಲ ತಿನ್ನುವುದು, ಪಂಚಾಂಗ ಶ್ರವಣ, ವಸಂತ ನವರಾತ್ರಿ ಆರಂಭ ಇಷ್ಟದೇವತಾ ಪೂಜೆಯ ಜೊತೆಗೆ ಸೃಷ್ಟಿಕರ್ತನಾದ ಬ್ರಹ್ಮದೇವನ, ಕಾಲಪುರುಷನ ಮತ್ತು ವರ್ಷಾಧಿಪತಿಯ ಆರಾಧನೆ, ಚಂದ್ರದರ್ಶನ ಇವು ಯುಗಾದಿಯ ವೈಶಿಷ್ಟ್ಯ. ಯುಗಾದಿಯಲ್ಲಿ ಬೇವು-ಬೆಲ್ಲಕ್ಕೆ ತುಸು ಹೆಚ್ಚಿನ ಮಹತ್ವ ಉಂಟು. ಹೋಳಿಗೆ ಸೇರಿದಂತೆ ಹಬ್ಬದ ಸಿಹಿ ಅಡುಗೆ ಎಷ್ಟೇ ಇದ್ದರೂ ಸಹ ಬೇವು-ಬೆಲ್ಲ ಸೇವಿಸಿದಾಗಲೇ ಯುಗಾದಿ ಸಾರ್ಥಕವಾಗುವುದೆಂಬ ಭಾವ ಎಲ್ಲರದು. ಕಷ್ಟ-ಸುಖಗಳೆರಡರ ಸಂಕೇತವೇ ಬೇವು-ಬೆಲ್ಲ. ಜೀವನದಲ್ಲಿ ಎರಡನ್ನೂ ಸಮನಾಗಿ ಸ್ವೀಕರಿಸಿ ಬದುಕಿನ ಬಂಡಿ ನೂಕಬೇಕೆಂಬುದು ಯುಗಾದಿಯ ಆಶಯವಾಗಿದೆ. **"ಜೀವನವೆಲ್ಲಾ ಬೇವು-ಬೆಲ್ಲ. ಎರಡೂ ಸವಿದವನೇ ಕವಿಮಲ್ಲ"** ಎಂದು ಯುಗದ ಕವಿ ಕುವೆಂಪು ಯುಗಾದಿ ಮತ್ತು ಬೇವು-ಬೆಲ್ಲದ ಮಹತ್ವವನ್ನು ಸಾರಿದ್ದಾರೆ.


ಸಾಮಾನ್ಯವಾಗಿ ಯುಗಾದಿಯಂದು ಜ್ಯೋತಿಷಿಗಳಿಂದ ಹೊಸ ವರ್ಷದ ಫಲಗಳನ್ನು ಕೇಳುವುದು ರೂಢಿಯಲ್ಲಿದೆ. ವರ್ಷದ ಫಲಾಫಲಗಳನ್ನು ತಿಳಿದುಕೊಳ್ಳುವ ಕುತೂಹಲ ಎಲ್ಲರಿಗೂ ಇರುತ್ತದೆ. ಹಾಗಾಗಿ ಯುಗಾದಿ ಸಂದರ್ಭದಲ್ಲಿ ಜ್ಯೋತಿಷಿಗಳಿಗೆ ಬಹಳ ಬೇಡಿಕೆಗಳಿರುತ್ತವೆ. ಅಷ್ಟೇ ಅಲ್ಲ, ಜ್ಯೋತಿಷ್ಯಕ್ಕೆ ಸಂಬಂಧಿಸಿದಂತೆ ಪ್ರತಿಯೊಂದಕ್ಕೂ ಅಂದು ಡಿಮ್ಯಾಂಡ್ ಇದ್ದೇ ಇರುತ್ತದೆ. ಅಂತೆಯೇ ಯುಗಾದಿಯಂದು ಜೂಜು ಆಡುವುದು ಬಹಳಷ್ಟು ಕಡೆ ರೂಢಿಯಲ್ಲಿದೆ. ಎಂದೂ ಜೂಜನ್ನೇ ಆಡದವರು ಕೂಡ ಅಂದು ಜೂಜಾಡಿ ತಮ್ಮ ಅದೃಷ್ಟವನ್ನು ಪರೀಕ್ಷಿಸಿಕೊಳ್ಳುತ್ತಾರೆ. ಕೆಲವು ಕಡೆಯಂತೂ ಮನೆಯವರೆಲ್ಲ, ಊರಿನವರೆಲ್ಲ ಒಂದು ಕಡೆ ಸೇರಿ ಜ್ಯೋತಿಷ್ಯ ಶಾಸ್ತ್ರದಲ್ಲಿ ಪಾರಂಗತರಾದ ಪಂಡಿತರನ್ನು ಆಹ್ವಾನಿಸಿ ಅವರಿಗೆ ಪಾದಪೂಜೆ ಮಾಡಿ ಸನ್ಮಾನಿಸಿ ಪವಿತ್ರ ಸ್ಥಳಗಳಲ್ಲಿ, ಭಕ್ತಿಯ ತಾಣಗಳಲ್ಲಿ, ದೇವಾಲಯಗಳಲ್ಲಿ ಸಂವತ್ಸರ ಕಾಲದಲ್ಲಿ ನಡೆಯುವ ಫಲಿತಾಂಶಗಳನ್ನು ಮೊದಲೇ ತಿಳಿದುಕೊಳ್ಳುತ್ತಾರೆ. ಇದನ್ನು 'ಪಂಚಾಂಗ ಶ್ರವಣ' ಎನ್ನಲಾಗುತ್ತದೆ. ಈ ಪಂಚಾಂಗ ಶ್ರವಣದಲ್ಲಿನ ಅಂಗಗಳಿಂದ ಅಂದರೆ ತಿಥಿಯಿಂದ ಸಂಪತ್ತು, ವಾರದಿಂದ ಆಯಸ್ಸು, ನಕ್ಷತ್ರದಿಂದ ಪಾಪನಾಶ, ಯೋಗದಿಂದ ರೋಗ ದೂರ, ಕರಣದಿಂದ ಗಂಗಾಸ್ನಾನ ಮಾಡಿದಷ್ಟು ಪುಣ್ಯ ಲಭಿಸುತ್ತದೆಂದು ಹೇಳುತ್ತಾರೆ.

ಯುಗಾದಿಯ ಮಾರನೇ ದಿನ 'ವರ್ಷ ತೊಡಕು' ಆಚರಿಸಲಾಗುತ್ತದೆ. ಇದರ ವಿಶೇಷವೆಂದರೆ ತಮ್ಮನ್ನು ತಾವು ಸತ್ಕಾರ್ಯಗಳಿಗೆ ಅರ್ಪಿಸಿಕೊಳ್ಳುವ ದಿನ ವಿದು. ಅಷ್ಟೇ ಅಲ್ಲ, ಇಡೀ ವರ್ಷದ ತೊಡಕುಗಳನ್ನೆಲ್ಲಾ ನಿವಾರಿಸಿಕೊಳ್ಳಲು ದೇವರಲ್ಲಿ ಮೊರೆಯಿಡುವ ದಿನವಿದು. ಹಾಗಾಗಿ ಯುಗಾದಿ ದಿನದಷ್ಟೇ ಈ ದಿನಕ್ಕೂ ಬಹಳ ಮಹತ್ವವಿದೆ. ಅಂದು ವಿವಿಧ ಬಗೆಯ ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮಗಳು, ವಿವಿಧ ರೀತಿಯ ಸ್ಪರ್ಧೆಗಳು ಜರುಗುತ್ತವೆ. ಅಂದು ಯಾರೇ ಆಗಲಿ ಏನೇನು ಒಳ್ಳೆಯ ಕೆಲಸಗಳನ್ನು ಮಾಡುತ್ತಾರೋ ಅದನ್ನು ವರ್ಷಾಂತ್ಯದವರೆಗೂ ಮಾಡುತ್ತಾರೆಂಬ ನಂಬಿಕೆ ಬಹಳ ಜನರಲ್ಲಿದೆ. ಹಾಗೆಯೇ ಅಂದು ಯಾರಿಗೆ ಏನೇನು ಲಭಿಸುತ್ತದೋ ಅದು ವರ್ಷಪೂರ್ತಿ ಲಭಿಸುತ್ತದೆಂಬ ನಂಬಿಕೆ ಪ್ರಚಲಿತದಲ್ಲಿದೆ. ಹೊಸ ಅಳಿಯನನ್ನು ಹಬ್ಬಕ್ಕೆ ಆಹ್ವಾನಿಸಿ ಸತ್ಕರಿಸುವ ಸಂಪ್ರದಾಯವೂ ಯುಗಾದಿಯಲ್ಲಿದೆ. ಎಷ್ಟೋ ಕಡೆ ಯುಗಾದಿಯನ್ನು ಅಳಿಯಂದಿರ ಹಬ್ಬವೆನ್ನುವುದೂ ಉಂಟು. ಅಷ್ಟೇ ಅಲ್ಲದೆ ಅಕ್ಕ ತಂಗಿಯರು, ಅಣ್ಣ ತಮ್ಮಂದಿರನ್ನು ತಮ್ಮ ಮನೆಗಳಿಗೆ ಬರಮಾಡಿಕೊಂಡು ಹಬ್ಬದ ಅಡುಗೆ ಬಡಿಸಿ ಆದರಿಸುವುದೂ ಯುಗಾದಿಯ ವೈಶಿಷ್ಟ್ಯಗಳಲ್ಲೊಂದು. ಒಟ್ಟಿನಲ್ಲಿ ಹೊಸ ಸೃಷ್ಟಿಗೆ, ಹೊಸ ದೃಷ್ಟಿಗೆ ಶ್ರೀಕಾರ ಬರೆಯುವ ಯುಗಾದಿಯಿಂದ ಎಲ್ಲರೂ ನಿರೀಕ್ಷಿಸುವುದು ಸಂತಸ-ಸಂಭ್ರಮವನ್ನಷ್ಟೇ. ಅದು ಎಲ್ಲರಿಗೂ ಸಿಗಲಿ ಅಷ್ಟೆ. ಪ್ರೇಮಕವಿ ಕೆ.ಎಸ್. ನರಸಿಂಹಸ್ವಾಮಿ ಯುಗಾದಿ ಕುರಿತು ಹೇಳುವ ಬಗೆಯಿದು-

ಮಾವು ನಾವು, ಬೇವು ನಾವು, ನೋವು ನಲಿವು ನಮ್ಮವು. ಹೂವು ನಾವು, ಹಸಿರು ನಾವು, ಬೇವು ಬೆಲ್ಲ ನಮ್ಮವು.

ನಾಳೆ(ಮಾ.22)ರ ಸಂಚಿಕೆಯಲ್ಲಿ ಯುಗಾದಿಯಿಂದ ಯುಗಾದಿಗೆ ವರ್ಷ ಭವಿಷ್ಯ 2023-24 ಪ್ರಕಟಿಸಲಾಗುವುದು. -ಸಂ.

ಐಶ್ವರ್ಯಾ ರಜನಿಕಾಂತ್ ಮನೆಯಲ್ಲಿ ಚಿನ್ನಾಭರಣ ಕಳವು




ಚೆನ್ನೈ: ಸೂಪರ್‌ಸ್ಟಾರ್ ರಜನಿಕಾಂತ್ ಅವರ ಹಿರಿಯ ಪುತ್ರಿ ಐಶ್ವರ್ಯಾ ರಜನಿಕಾಂತ್ ಅವರ ಲಾಕರ್‌ನಿಂದ ಚಿನ್ನಾಭರಣ ಕಳವು ಆಗಿರುವ ಬಗ್ಗೆ ತೆನಾಂಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

2019 ರಲ್ಲಿ ಸಹೋದರಿ ಸೌಂದರ್ಯ ಅವರ ಮದುವೆಗೆಂದು ಬಳಸಿದ್ದ ಸುಮಾರು 3.60 ಲಕ್ಷ ರೂ. ಮೌಲ್ಯದ 60 ಪವನ್ ಚಿನ್ನಾಭರಣ ಕಳ್ಳತನವಾಗಿದೆ. ಮನೆಯಲ್ಲಿ ಕೆಲಸ ಮಾಡುವ ಕೆಲಸಗಾರರು ಕಳ್ಳತನ ಮಾಡಿರಬಹುದು ಎಂದು ಐಶ್ವರ್ಯಾ ರಜನಿಕಾಂತ್ ನೀಡಿರುವ ದೂರಿನಲ್ಲಿ ಅನುಮಾನ ವ್ಯಕ್ತಪಡಿಸಿದ್ದಾರೆ.

ದೂರಿನ ಮೇರೆಗೆ ತೇನಂಪೇಟೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಎಫ್‌ಐಆರ್‌ನಲ್ಲಿ ನಮೂದಿಸಿರುವ ಕದ್ದ ಚಿನ್ನಾಭರಣಗಳ ಅಂದಾಜು ಮೌಲ್ಯ 3.6 ಲಕ್ಷ ರೂ.ಗಳಾಗಿದೆ. ಲಾಕರ್ ಐಶ್ವರ್ಯಾ ಅವರ ಬಳಿ ಇದ್ದರೂ ಅದನ್ನು ಹಲವು ಬಾರಿ ಸ್ಥಳಾಂತರಿಸಲಾಗಿದೆ. ಏಪ್ರಿಲ್ 9, 2022 ರಂದು, ಲಾಕರ್ ನಟ ರಜನಿಕಾಂತ್ ಅವರ ಬೋಯಸ್ ಗಾರ್ಡನ್ ನಿವಾಸಕ್ಕೆ ಸ್ಥಳಾಂತರಗೊಂಡಿತು. ಲಾಕರ್‌ನ ಕೀಲಿಗಳನ್ನು ಸೇಂಟ್ ಮೇರಿಸ್ ರಸ್ತೆಯ ಫ್ಲಾಟ್‌ನಲ್ಲಿರುವ ನನ್ನ ವೈಯಕ್ತಿಕ ಕಬ್ಬಿಣದ ಕಪಾಟಿನಲ್ಲಿ ಇರಿಸಲಾಗಿತ್ತು ಎಂದು ಐಶ್ವರ್ಯ ಹೇಳಿದ್ದಾರೆ. ನನ್ನ ಸಿಬ್ಬಂದಿಗೆ ಇದು ತಿಳಿದಿದೆ. ನನ್ನ ಅನುಪಸ್ಥಿತಿಯಲ್ಲಿ ಅವರು ಆಗಾಗ್ಗೆ ಅಪಾರ್ಟ್‌ಮೆಂಟ್‌ಗೆ ಭೇಟಿ ನೀಡುತ್ತಾರೆ ಎಂದು ಐಶ್ವರ್ಯಾ ತಮ್ಮ ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಫೆಬ್ರವರಿ 10ರಂದು ಲಾಕರ್ ಅನ್ನು ಪರಿಶೀಲಿಸಿದಾಗ, ತನ್ನ ಮದುವೆಯಲ್ಲಿ ಖರೀದಿಸಿದ್ದ ಆಭರಣಗಳು ಕಾಣೆಯಾಗಿವೆ ಎಂದು ಐಶ್ವರ್ಯಾ ಹೇಳಿದರು. ಆಕೆಯ ದೂರಿನ ಆಧಾರದ ಮೇಲೆ ತೇನಂಪೇಟೆ ಪೊಲೀಸರು ಐಪಿಸಿ ಸೆಕ್ಷನ್ 381 (ಮನೆ ಕೆಲಸಗಾರರಿಂದ ಕಳ್ಳತನ) ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

ರಾಜ್ಯ ರಾಜಕಾರಣಕ್ಕೆ ರಮ್ಯಾ?



ಬೆಂಗಳೂರು: ವಿಧಾನಸಭಾ ಚುನಾವಣೆ ಹತ್ತಿರ ಬರುತ್ತಿದ್ದಂತೆ ನಟಿ ರಮ್ಯಾ ರಾಜ್ಯ ರಾಜಕೀಯಕ್ಕೆ ಎಂಟ್ರಿ ಕೊಡಲಿದ್ದಾರೆ ಎಂಬ ಮಾತು ಕೇಳಿ ಬರುತ್ತಿದೆ. ಈ ಬಗ್ಗೆ ಎಐಸಿಸಿ ಸಭೆಯಲ್ಲಿ ಚರ್ಚೆ ನಡೆದಿದ್ದು 3 ಕ್ಷೇತ್ರಗಳ ಪೈಕಿ 1 ಕ್ಷೇತ್ರದಿಂದ ಕಣಕ್ಕೆ ಇಳಿಸುವ ಬಗ್ಗೆ ಕಾಂಗ್ರೆಸ್ ಯೋಜನೆ ಮಾಡಿರುವ ವಿಚಾರ ಮೂಲಗಳಿಂದ ತಿಳಿದುಬಂದಿದೆ. ಕಂದಾಯ ಸಚಿವ ಆರ್.ಅಶೋಕ್ ವಿರುದ್ಧ ಪದ್ಮನಾಭನಗರದಿಂದ ಕಣಕ್ಕೆ ಇಳಿಸುವ ಬಗ್ಗೆ ಗಂಭೀರ ಚರ್ಚೆ ನಡೆದಿದೆ. ಪದ್ಮನಾಭನಗರ ಮೊದಲ, ಮಂಡ್ಯ 2ನೇ ಹಾಗೂ ಚನ್ನಪಟ್ಟಣ ಮೂರನೇ ಆದ್ಯತೆಯಾಗಿದೆ. ಒಂದು ವೇಳೆ ಚನ್ನಪಟ್ಟಣದಲ್ಲಿ ಕಣಕ್ಕೆ ಇಳಿದರೆ ಕುಮಾರಸ್ವಾಮಿ ನೇರ ಎದುರಾಳಿಯಾಗಲಿದ್ದಾರೆ.

ಚುನಾವಣಾ ಸಮಿತಿ ಸಭೆಯಲ್ಲಿ ರಮ್ಯಾ ರಾಜ್ಯ ರಾಜಕಾರಣಕ್ಕೆ ವಾಪಸ್ ಬರಲು ಸಕಾಲ ಎಂದು ಕೆಲ ನಾಯಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ರಮ್ಯಾ ಜೊತೆಯೂ ಒಂದು ಸುತ್ತಿನ ಮಾತುಕತೆ ನಡೆದಿದೆ. ಸೋಮವಾರ ಸಂಜೆ 5 ಗಂಟೆಗೆ ಬೆಂಗಳೂರಿನಲ್ಲಿ ಕಾಂಗ್ರೆಸ್ ಮುಖಂಡರು ಪದ್ಮನಾಭನಗರ ಕ್ಷೇತ್ರದ ವಿಚಾರವಾಗಿ ಸಭೆ ಕರೆದಿದ್ದಾರೆ. ರಮ್ಯಾ ಆ ಸಭೆಯಲ್ಲಿ ಭಾಗವಹಿಸುತ್ತಾರಾ, ಇಲ್ಲವೋ ಎನ್ನುವುದು ತಿಳಿದು ಬಂದಿಲ್ಲ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

WANTED TEACHERS FOR CBSE SCHOOL

- Higher Primary English Teachers - 5 posts
- Higher Primary Social Science Teachers - 5 posts
- ScienceTeachers - 2 posts
- Nursery Teachers - 4 posts
- PT Teacher - 1 post
- Art teacher 1 post
- Front Desk Executive - 1 post

Note: Minimum of 2-3 years of experience is expected, preferably in CBSE English Medium School

Place : Nanjangud

8150857937 / 7676110063

ಹಸಿರು ನಮ್ಮ ಉಸಿರು

PUBLIC NOTICE

My client has entered into an agreement for the purchase of immovable property bearing Site No. 19, presently bearing MUDA Khata No. 19 (formed out of converted property bearing Sy.No. 72/2, 72/3, 73/4, 72/5 and 72/6), situated at Belavadi Village, Yelawala Hobli, Mysore Taluk, measuring East to West 12.00 mtrs and North to South 9.00 mtrs, (totally measuring 108 sq. mtrs. or 1200 sq.ft.), together with residential house on the ground floor measuring 64.60 sq. mtrs and first floor measuring 64.60 sq. mtrs and bounded on the East: Road, on the West: Site No. 8, on the North: Site No. 20 and on the South: Site No. 18, from its owner Smt. Pramila K.R. Any person having any objections or claiming any right, title or interest in the said property are required to lodge the same with the undersigned along with documentary evidence within 07 days from this date, failing which my client shall proceed with the transaction of the said property free from all encumbrances.

Sd/- Sudha T.C., B.A.L., LL.B., Advocate, Flat No. B-218, 1st Floor, Wilson Vintage Apt, No. 24, 12th Cross, Opp. Adugodi P.O., Wilson Garden, Bangalore-560 027.
Ph: 2220707 / 9880080528

Mysore
Date: 20-3-2023

WANTED FOR A TRAVELS OFFICE

FRONT OFFICE RECEPTION

(Minimum 2years of experience in Travels office)

Salary : Rs.8000+Incentives

DREAM WORLD TRAVELS

TK layout, Kavitha Bakery Circle, Mysore

Contact : 98445 44900

ಮೈಸೂರು ಮಿತ್ರ 43 ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

WANTED

1) Security Guard - 10th / PUC (30 years to 50 years) * (2) Housekeeping Supervisor (Male), 3 years experience. * (3) Housekeeping Boys (ಹೌಸ್‌ಕೀಪಿಂಗ್ ಹುಡುಗರು) with ESI, PF, Food & Accommodation.

9739166772, 9880419847

ಬೇಕಾಗಿದ್ದಾರೆ


ವಕೀಲರ ಕಛೇರಿಯಲ್ಲಿ ಕನ್ನಡ ಮತ್ತು ಇಂಗ್ಲೀಷ್ ಟೈಪಿಂಗ್ ಮಾಡುವವರು ಬೇಕಾಗಿದ್ದಾರೆ. ಸಮಯ ಬೆಳಗ್ಗೆ 10.30 ರಿಂದ ಸಂಜೆ 5.00 ಗಂಟೆ, ಸಂಬಳ ತಿಂಗಳಿಗೆ ರೂ. 8000/-, ಕಛೇರಿ: ಜಯನಗರ, ಮೈಸೂರು, ಸಂಪರ್ಕಿಸಿ:

9901094881



ಲಕ್ಷ್ಮಣ್‌ಶೆಟ್ಟಿ ರವರಿಗೆ

63ನೇ ವರ್ಷದ ಹುಟ್ಟುಹಬ್ಬದ ಶುಭಾಶಯಗಳು



30ನೇ ವರ್ಷದ ಸವಿನೆನಪು



ನಿಧನ: 21.03.1993

ದುಃಖತಪ್ತರು: ಶ್ರೀಮತಿ ಗೌರಮ್ಮ, ಮಕ್ಕಳು ಹಾಗೂ ಕುಟುಂಬ ವರ್ಗದವರು, ಜಿ.ಬಿ.ಪಾಳ್ಯ, ನಜರ್‌ಬಾದ್ ಮೊಹಲ್ಲಾ, ಮೈಸೂರು

ಶ್ರೀ ಹನುಮಯ್ಯ

ಗುತ್ತಿಗೆದಾರರು, ಮೈಸೂರು ಮೃಗಾಲಯ

WANTED RECOVERY EXECUTIVES

Experienced People at Following Locations
Mysore, Nanjangud, Chamarajanagar, HD Kote, Periyapattana, KR Nagar, Mandya, Channapatna and kanakapura, we offer petrol Expense+ Commission+ Special Incentive best in the industry.
Send Your Resume at
Email: wmsfinserv@gmail.com
whatsapp:
9999622755/9873900637

ಮೈಸೂರು ಮಿತ್ರ

ವಾರ್ಷಿಕೋತ್ಸವ ವಿಶೇಷ ಸಂಚಿಕೆ

"ಮೈಸೂರು ಮಿತ್ರ" ತನ್ನ ಓದುಗರು ಹಾಗೂ ಜಾಹೀರಾತುದಾರರ ಸೇವೆಯಲ್ಲಿ ಏಪ್ರಿಲ್ 16, 2023ಕ್ಕೆ 43 ವರ್ಷಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ, 44ನೇ ವರ್ಷಕ್ಕೆ ಕಾಲಿಡುತ್ತಿರುವ ಈ ಸುಸಂದರ್ಭದಲ್ಲಿ ವರ್ಣರಂಜಿತ ವಿಶೇಷಾಂಕವನ್ನು ಹೊರತರಲಾಗುತ್ತಿದೆ. ಹಾಗಾಗಿ ಜಾಹೀರಾತುದಾರರಿಗೆ ಇದೊಂದು ಸುಸಮಯ. ಮುದ್ರಣದ ದೃಷ್ಟಿಯಿಂದ ತಮ್ಮ ಜಾಹೀರಾತುಗಳನ್ನು ಏಪ್ರಿಲ್ 10, 2023 ರೊಳಗೆ ನೀಡಬೇಕಾಗಿ ಕಳಕಳಿಯ ಮನವಿ.

ಪ್ರಧಾನ ಕಛೇರಿ

0821-2496522, 2496523, 0821-2496520 (5 ಲೈನುಗಳು)
ಮರಿಯ ಫರ್ನಾಂಡೀಸ್, ಜಾಹೀರಾತು ವ್ಯವಸ್ಥಾಪಕರು: 9448525060
ಜಾಯ್ ಅಂಥೋಣಿ ಡೋಜ್: 8951668960
ಪ್ರೇಮ: 9880549879

ಕೆ.ಆರ್. ಸರ್ಕಲ್ ಕಛೇರಿ: 0821-2431774
ದೇವರಾಜ ಅರಸ್ ರಸ್ತೆ ಕಛೇರಿ: 0821-2428695

ಕೊಡಗು: ಪ್ರಸಾದ್, ಪೂಜಾ ಆರ್ಕೆಡ್, ಜೂನಿಯರ್ ಕಾಲೇಜು ರಸ್ತೆ, ಮಡಿಕೇರಿ 08272223517, 9731469871

ಮಂಡ್ಯ: ಕೆ. ಮೋಹನ್‌ರಾಜ್, 3ನೇ ಕ್ರಾಸ್, ಅಶೋಕನಗರ, ಮಂಡ್ಯ 8762960325

ಶ್ರೀರಂಗಪಟ್ಟಣ: ವಿನಯ್ ಕಾರೇಕುರ, ಶ್ರೀರಂಗಪಟ್ಟಣ 9686893234

ಹುಣಸೂರು: ಕೆ. ಕೃಷ್ಣ (ಕೆ.ಕೆ.), EWS 204, KHB ಕಾಲೋನಿ, ಹುಣಸೂರು. 9448720626

ಚಾಮರಾಜನಗರ: ಸಿದ್ದಲಿಂಗಸ್ವಾಮಿ, ಸಿಹೆಚ್.ಆರ್. ಕಾಂಪ್ಲೆಕ್ಸ್, ಸರ್ಕಾರಿ ಆಸ್ಪತ್ರೆ ಎದುರು, ಚಾಮರಾಜನಗರ 9242265667

ಟಿ. ನರಸೀಪುರ: ಕುಮಾರ್, ಸಾರ್ವಜನಿಕ ಆಸ್ಪತ್ರೆ ರಸ್ತೆ, ಆರ್ಯ ಮಹಲ್ ಛತ್ರದ ಎದುರು, ಟಿ. ನರಸೀಪುರ. 9986719590

ಗುಂಡ್ಲುಪೇಟೆ: ಸೋಮಶೇಖರ್, ದ.ರಾ. ಬೇಂದ್ರೆ ನಗರ, ಅಶ್ವಿನಿ ಲೇಔಟ್, ಗುಂಡ್ಲುಪೇಟೆ. 9845995426

ಕೆ.ಆರ್. ನಗರ: ಕೆ.ಟಿ. ರಮೇಶ್, ಸ್ನೇಹ ಎಂಟರ್ ಪ್ರೈಸಸ್, ಬಿ.ಎಂ.ರಸ್ತೆ, ಕೆ.ಆರ್. ನಗರ. 9448021368

ಮಳವಳ್ಳಿ: ಶಿವಶಂಕರ, ನಂ.47, 1ನೇ ಕ್ರಾಸ್, ಎಸ್.ಇ.ಎಸ್ ಮಳವಳ್ಳಿ ಟೌನ್-571430 9632407806

ಕೊಳ್ಳೇಗಾಲ: ರಾಜು, ಮೈಸೂರು ಮಿತ್ರ ರಿಪೋರ್ಟರ್, #101, ಪುರಿಕೇರಿ ಬೀದಿ, ಕೊಳ್ಳೇಗಾಲ 9916621007

ಹಾಸನ: ಆರ್.ಎನ್.ಸೋಮೇಶ್‌ಗೌಡ, ಜೋಲಿ ಚಿಲ್ಡ್ರನ್ ಶಾಲೆ ಹತ್ತಿರ, ಜಯನಗರ, 1ನೇ ಹಂತ, 2ನೇ ಕ್ರಾಸ್, ಹಾಸನ. 9448401176

ಕುಶಾಲನಗರ: ರಘು, ಮೈಸೂರು ಮಿತ್ರ ರಿಪೋರ್ಟರ್, ಮನು ಪ್ರೆಸ್, ಐ.ಬಿ.ರಸ್ತೆ, ಕುಶಾಲನಗರ 9845698401

ಜಯಪುರ: ಬಿಳಿಗಿರಿ, ಜಯಪುರ 9945479288

ಪಿರಿಯಾಪಟ್ಟಣ: ವಿರೇಶ್, ಪಿರಿಯಾಪಟ್ಟಣ 8660057128

ವಿರಾಜಪೇಟೆ: ಮಂಜುನಾಥ, ವಿರಾಜಪೇಟೆ 9900949353

ಕೆ.ಆರ್.ಪೇಟೆ: (ಶ್ರೀನಿವಾಸ), ಅಗ್ರಹಾರ ಬಾಚಹಳ್ಳಿ, ಕೆ.ಆರ್.ಪೇಟೆ 9449326847, 7022757438

ಹೆಚ್.ಡಿ.ಕೋಟೆ: ಮಂಜುನಾಥ ಎಸ್., ಹೆಚ್.ಡಿ.ಕೋಟೆ 9483574452

ಕೆ.ಎಂ.ದೊಡ್ಡಿ: ಸತೀಶ್ ಎ.ಎಲ್, ಕೆ.ಎಂ.ದೊಡ್ಡಿ 9242120338

ನಂಜನಗೂಡು: ರಂಗಸ್ವಾಮಿ, ನಂ.4565, ಕಬಿನಿ ಕಾಲೋನಿ ಹಿಂಭಾಗ, ನೀಲಕಂಠ ನಗರ, ನಂಜನಗೂಡು ಟೌನ್-571301 9901602226

ಹುಣಸೂರು: ಹೆಚ್.ಆರ್. ಕೃಷ್ಣಕುಮಾರ್ (ಜನ್ ರಮೇಶ್), ಸುರಭಿ ಮಾರಾಟ ಕೇಂದ್ರ, ಮಾರುತಿ ಪೆಟ್ರೋಲ್ ಬಂಕ್ ಹತ್ತಿರ, ಹಳೇಂಚ ಬಿ.ಎಂ. ರಸ್ತೆ ಹತ್ತಿರ, ಹುಣಸೂರು 9060406093

ಕೊಳ್ಳೇಗಾಲ: ನಾಗೇಂದ್ರ ಸ್ವಾಮಿ, ನಂ.7ಎ, 684, 14 ನೇ ಕ್ರಾಸ್, ಬಸವೇಶ್ವರ ನಗರ, ಕೊಳ್ಳೇಗಾಲ 9448576247, 7899849868

ಕಾವೇರಿ ನೀರಾವರಿ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಉದ್ಯಮ)

ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ, ಹಾರಂಗಿ ಪುನರ್ವಸತಿ ವಿಭಾಗ, ಕುಶಾಲನಗರ-571234, ಸೋಮವಾರಪೇಟೆ ತಾ॥ ಕೊಡಗು ಜಿಲ್ಲೆ, ಕರ್ನಾಟಕ

ದೂರವಾಣಿ ಸಂಖ್ಯೆ: 08276-274365, ಫ್ಯಾಕ್ಸ್ ಸಂಖ್ಯೆ: 08276-274365, ಇಮೇಲ್: eehrdksh@gmail.com

ಸಂ.ಕಾ.ಇಂ/ಕಾ.ನೀ.ನಿ.ನಿ/ಹಾಪುವಿ/ಪಿಜಿಬಿ/ಟೆಂಡರ್ ಪ್ರಕಟಣೆ ಸಂಖ್ಯೆ: 36/22-23 ದಿನಾಂಕ: 18.03.2023

ಸಂಕ್ಷಿಪ್ತ ಟೆಂಡರ್ ಪ್ರಕಟಣೆ (ಅಲ್ಪಾವಧಿ ಕರೆ)

(ಐಟಂವಾರು: ಇ-ಪ್ರೊಕ್ಯೂರ್‌ಮೆಂಟ್ ಪೋರ್ಟ್‌ಲ್ ಪದ್ಧತಿ ಮೂಲಕ ಮಾತ್ರ)

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು ರವರ ಪರವಾಗಿ ಸೂಚಿತ ದರ್ಜೆ ಗುತ್ತಿಗೆದಾರರಿಂದ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟ್‌ಲ್ ಪದ್ಧತಿ ಮುಖಾಂತರ ಐಟಂವಾರು ದರದ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ).

ಈ ವಿಭಾಗ ವ್ಯಾಪ್ತಿಯಲ್ಲಿ ಬರುವ 2701 ಲೆಕ್ಕಶೀರ್ಷಿಕೆಯಡಿ ಒಟ್ಟು 26 ಕಾಮಗಾರಿಗಳಿಗೆ ಐಟಂವಾರು ಟೆಂಡರ್ ಕರೆಯಲಾಗಿದ್ದು, ಈ ಕಾಮಗಾರಿಗಳ ಅಂದಾಜು ಮೊತ್ತ ರೂ 10.00 ಲಕ್ಷಗಳಿಂದ 20.00 ಲಕ್ಷಗಳದ್ದು, ಈ ಕಾಮಗಾರಿಗಳಿಗೆ ನಿಗಧಿತ ದರ್ಜೆ ಗುತ್ತಿಗೆದಾರರಿಂದ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟ್‌ಲ್ ಮೂಲಕ ಮಾತ್ರ ಅಲ್ಪಾವಧಿ ಟೆಂಡರ್ ಕರೆಯಲಾಗಿದೆ.

ಟೆಂಡರ್ ದಸ್ತಾವೇಜುಗಳನ್ನು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಡೌನ್ ಲೋಡ್ ಮಾಡಿಕೊಳ್ಳಬಹುದಾಗಿದೆ, ಭರ್ತಿ ಮಾಡಿದ ಟೆಂಡರ್‌ಗಳನ್ನು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ದಿನಾಂಕ: 27.03.2023 ಅಪರಾಹ್ನ 4.00 ಗಂಟೆಯವರೆಗೆ ಸಲ್ಲಿಸಬಹುದಾಗಿದೆ ಆರ್ಥಿಕ ಬಿಡ್ಡನ್ನು ದಿನಾಂಕ: 28.03.2023ರ ಅಪರಾಹ್ನ 4.30 ಗಂಟೆಗೆ ತೆರೆಯಲಾಗುವುದು, ಹೆಚ್ಚಿನ ವಿವರಗಳಿಗೆ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟ್‌ಲ್ ವೆಬ್ ಸೈಟ್ ವಿಳಾಸ: http://eproc.karnataka.gov.in ರಲ್ಲಿ ಪಡೆಯಬಹುದಾಗಿದೆ. ಈ ಕಾಮಗಾರಿಗೆ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟ್‌ಲ್‌ನಲ್ಲಿ ತಿಳಿಸಿರುವಂತೆ ಟೆಂಡರ್ ಪ್ರೊಸೆಸಿಂಗ್ ಶುಲ್ಕ ನಿಗದಿಯಾಗಿದ್ದು, ಹೆಚ್ಚಿನ ಮಾಹಿತಿಯನ್ನು ಕಛೇರಿ ವೇಳೆಯಲ್ಲಿ ಕೆಳಸಹಿದಾರರನ್ನು ಸಂಪರ್ಕಿಸಿ ಪಡೆಯಬಹುದಾಗಿರುತ್ತದೆ.

ಸಹಿ/- ಕಾರ್ಯಪಾಲಕ ಇಂಜಿನಿಯರ್, ಹಾರಂಗಿ ಪುನರ್ವಸತಿ ವಿಭಾಗ, ಕಾವೇರಿ ನೀರಾವರಿ ನಿಗಮ ನಿಯಮಿತ, ಕುಶಾಲನಗರ, ಸೋಮವಾರಪೇಟೆ ತಾ॥ ಕೊಡಗು ಜಿಲ್ಲೆ-571234

ಸಾರ್ವಜನಿಕ ಸೂಚನೆ/ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ನನ್ನ ಕಕ್ಷಿದಾರರಾದ **ಮಣಿಕಂದಸುದನ್ ಮೈಲ್ಸಾಮಿ**, ಫ್ಲಾಟ್ ನಂ. .207, ಡ್ಯುವ್ಯೋ ಹಾರ್ಮನಿ ಅಪಾರ್ಟ್‌ಮೆಂಟ್, ಸುರಂಜನದಾಸ್ ರಸ್ತೆ, ನ್ಯೂ ತಿಪ್ಪಸಂದ್ರ ಪೋಸ್ಟ್, ಬೆಂಗಳೂರು-560075 ಮತ್ತು **ಶ್ರೀ ಕೃಷ್ಣ ಹಾಸ ವೈ ಬಿನ್ ವಿಜಯ ಲಕ್ಷ್ಮಿ**, 31-16-18, ಬುಳ್ಳೆಮ್ಮ ಸ್ಟ್ರೀಟ್, ಮಾಚವರಂ ಡೌನ್, ವಿಜಯವಾಡ (ನಗರ) ಮಾಚವರಂ, ವಿಜಯವಾಡ (ನಗರ), ಕೃಷ್ಣ, ಆಂಧ್ರಪ್ರದೇಶ - 520004 ಹಾಗೂ **ಶ್ರೀ ಹರ್ಷಾ ವೆಂಕಟ ಲಿಂಗಂ ಬಿನ್ ಲಿಂಗಂ ಜಗದೀಶ**, #822, ಕೃಷ್ಣ ಕುಂಜ, 3ನೇ ಕ್ರಾಸ್, 1ನೇ ಬ್ಲಾಕ್, ಹೆಚ್‌ಆರ್‌ಬಿಆರ್ ಬಡಾವಣೆ, ಕಲ್ಯಾಣ್‌ನಗರ, ಬೆಂಗಳೂರು ಉತ್ತರ-560043 ರವರುಗಳು ಈ ಕೆಳಗೆ ನಮೂದಿಸಿದ ಷೆಡ್ಯೂಲ್ ಆಸ್ತಿಯನ್ನು ಅದರ ನಿಜವಾದ ಮಾಲೀಕ **ಮಂಜುನಾಥ.ವಿ ಬಿನ್ ವೆಂಕಟರಾಮಪ್ಪ**, #79, ವಲಗೇರನಹಳ್ಳಿ, ಕುಪ್ಪಹಳ್ಳಿ, ಶ್ರೀನಿವಾಸಪುರ ತಾಲ್ಲೂಕು, ಕೋಲಾರ ಜಿಲ್ಲೆ-563126, ಇವರಿಂದ ಖರೀದಿಸಲು ಉದ್ದೇಶಿಸಿರುತ್ತಾರೆ.

ಮೇಲೆ ತಿಳಿಸಿದ ಮಾರಾಟ ವಹಿವಾಟಿಗೆ ಯಾರಾದರೂ ಯಾವುದೇ ಆಕ್ಷೇಪಣೆ/ಹಕ್ಕುಗಳು/ಆಸಕ್ತಿ/ವಿವಾದಗಳನ್ನು ಹೊಂದಿದ್ದರೆ, ಅವರು ಈ ಪತ್ರಿಕಾ ಪ್ರಕಟಣೆಯ ದಿನಾಂಕದಿಂದ 3 ದಿನಗಳ ಒಳಗಾಗಿ ತಾವು ಹೊಂದಿರುವ ಆಕ್ಷೇಪಣೆ/ಹಕ್ಕುಗಳು/ವಿವಾದಗಳ ವಿವರಗಳನ್ನು ರುಜುವಾತುಪಡಿಸುವ ದಾಖಲೆಗಳೊಂದಿಗೆ ಈ ಕೆಳಗೆ ಸಹಿ ಮಾಡಿದವರನ್ನು ಸಂಪರ್ಕಿಸಬಹುದು. ಇಲ್ಲವಾದಲ್ಲಿ ಯಾವುದೇ ಮೂರನೇ ವ್ಯಕ್ತಿಯ ಆಕ್ಷೇಪಣೆ/ಹಕ್ಕುಗಳು/ಆಸಕ್ತಿ/ವಿವಾದಗಳು ಇಲ್ಲವೆಂದು ಪರಿಗಣಿಸಿ ನನ್ನ ಕಕ್ಷಿದಾರರು ಮೇಲೆ ಹೇಳಿದ ಮಾಲೀಕರೊಂದಿಗೆ ಮಾರಾಟದ ವಹಿವಾಟನ್ನು ಪೂರ್ಣಗೊಳಿಸುವವರಿರುತ್ತಾರೆ ಮತ್ತು ಅದರ ನಂತರದ ಯಾವುದೇ ಆಕ್ಷೇಪಣೆ/ಹಕ್ಕುಗಳು/ಆಸಕ್ತಿ/ವಿವಾದಗಳನ್ನು ಪರಿಗಣಿಸಲಾಗುವುದಿಲ್ಲ.

ಅನುಸೂಚಿ ಸ್ವತ್ತು

ಮೈಸೂರು ಜಿಲ್ಲೆ, ಸರಗೂರು ತಾಲೂಕು, ಕಂದಲಿಕೆ ಹೋಬಳಿ, ಕಿತ್ತೂರು ಗ್ರಾಮದಲ್ಲಿರುವ ಸ.ನಂ.73/3 (ಹಳೆ ನಂ.73/2) ರಲ್ಲಿ 5 ಎಕರೆ 3 ಗುಂಟೆ ವಿಸ್ತೀರ್ಣದ ಜಮೀನಿಗೆ ಚಕ್ಕುಬಂದಿ. ಪೂರ್ವಕ್ಕೆ: ಕಬಿನಿ ಅಣೆಕಟ್ಟು ಯೋಜನೆಯಿಂದ ಸ್ವಾಧೀನ ಪಡಿಸಿಕೊಂಡ ಭೂಮಿ, ಪಶ್ಚಿಮಕ್ಕೆ: ಸರ್ಕಾರಿ ಓಣಿ, ಉತ್ತರಕ್ಕೆ: ಕಬಿನಿ ಹಿನ್ನೀರು ಪ್ರದೇಶ ಮತ್ತು ದಕ್ಷಿಣಕ್ಕೆ: ತಮ್ಮಯ್ಯಚಾರ್ ಅವರಿಗೆ ಸೇರಿದ ಆಸ್ತಿ.

ಸಹಿ/- ಸದಾಶಿವಪ್ಪ. ಬಿ., ಬಿ.ಎ.,ಎಲ್.ಎಲ್.ಬಿ., ವಕೀಲರು,
#16, ಗಾಯಿತ್ರಿ ಕಾಂಪ್ಲೆಕ್ಸ್, ಕಾಳಿದಾಸ ರಸ್ತೆ, ಹೆಚ್.ಡಿ. ಕೋಟೆ ಟೌನ್,
ಹೆಚ್.ಡಿ. ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ. ಮೊ.ನಂ. 9538171277





ಮೈಸೂರು ಮಿತ್ರ ಮಂಗಳವಾರ 21 ಮಾರ್ಚ್ 2023

ಪ್ರಾಥಮಿಕ ಆರೋಗ್ಯ ಕೇಂದ್ರ, ದಾದಿಯರ ವಸತಿಗೃಹ ಉದ್ಘಾಟನೆ



ಚಿನಕುರಳಿ, ಮಾ.20– ಇಲ್ಲಿಗೆ ಸಮೀಪದ ನಾರಾಯಣಪುರದಲ್ಲಿ 2.5 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿರುವ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ದಾದಿಯರ ವಸತಿ ಗೃಹವನ್ನು ಶಾಸಕ ಸಿ.ಎಸ್.ಪುಟ್ಟರಾಜು ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಇಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರ ಶಿಥಿಲ ಗೊಂಡಿದ್ದ ಹಿನ್ನೆಲೆಯಲ್ಲಿ ಸುಮಾರು 2.5 ಕೋಟಿ ವೆಚ್ಚದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ಹಾಗೂ ದಾದಿಯರ ವಸತಿ ನಿಲಯಗಳನ್ನು ನಿರ್ಮಿಸಿ ಉದ್ಘಾಟಿಸಲಾಗಿದೆ. ಆಸ್ಪತ್ರೆಗೆ ಆಂಬುಲೆನ್ಸ್ ಅವಶ್ಯಕತೆ ಇದ್ದರೆ ಶಾಸಕರ ಅನುದಾನದಲ್ಲಿ ಒಂದು ಆಂಬುಲೆನ್ಸ್ ವ್ಯವಸ್ಥೆ ಮಾಡಿಕೊಡಲಾಗುವುದು ಎಂದರು.

ನಾರಾಯಣಪುರ ಸುತ್ತಮುತ್ತಲ ಗ್ರಾಮಸ್ಥರ ಅನುಕೂಲಕ್ಕಾಗಿ 5 ಕೋಟಿ ವೆಚ್ಚದಲ್ಲಿ ವಿದ್ಯುತ್ ಸಬ್‌ಸ್ಟೇಷನ್ ಮಂಜೂರು ಮಾಡಿಸಿ ಭೂಮಿ ಪೂಜೆ ನೆರವೇರಿಸಲಾಗಿದೆ. ಜವರೇಗೌಡನಕೊಪ್ಪಲು, ನಳ್ಳೇನಹಳ್ಳಿ, ಮಾರ್ಮಳ್ಳಿ, ಸಿಂಗಾಪುರ ಹಾಗೂ ಹೊಸಹಳ್ಳಿ ಗ್ರಾಮಗಳಲ್ಲಿ 3.50 ಕೋಟಿ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಕಾಮನಾಯಕನಹಳ್ಳಿಯಲ್ಲಿ 1 ಕೋಟಿ, ನಾರಾಯಣಪುರದಲ್ಲಿ 1.20 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಪಡಿಸಲಾಗಿದೆ. ನಾರಾಯಣಪುರದಿಂದ ಕೋಡಾಲ ಮಾರ್ಗವಾಗಿ ನೀಲನಹಳ್ಳಿ ಸಂಪರ್ಕಿಸುವ ರಸ್ತೆ ನಿರ್ಮಾಣ ಮಾಡಲಾಗಿದೆ. ಹೀಗೆ ನಾರಾಯಣಪುರ ಗ್ರಾಪಂ ವ್ಯಾಪ್ತಿಯ ಹಳ್ಳಿಗಳ ಅಭಿವೃದ್ಧಿಗೆ ಶ್ರಮಿಸಲಾಗಿದೆ ಎಂದರು.

ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜು, ಪ್ರೌಢಶಾಲೆ ಮುಂಭಾಗದ ಮೈದಾನ ಅಭಿವೃದ್ಧಿಗೂ ಕ್ರಮ ವಹಿಸಲಾಗುವುದು. ಈ ವ್ಯಾಪ್ತಿಯ ಎಲ್ಲಾ ಕೆರೆಗಳನ್ನು ಬಳಘಟ್ಟ ಏತ ನೀರಾವರಿ ಯೋಜನೆ ಮೂಲಕ ತುಂಬಿಸಲಾಗುತ್ತಿದೆ. ಕಾಮನಾಯಕನಹಳ್ಳಿಯಲ್ಲಿ ಬೃಹತ್ ಕೆರೆ ನಿರ್ಮಾಣ ಮಾಡಲಾಗಿದೆ. ಕ್ಷೇತ್ರದ ಶಾಸಕನಾಗಿ, ಸಚಿವನಾಗಿ ಕ್ಷೇತ್ರವನ್ನು ಮಾದರಿಯಾಗಿ ಅಭಿವೃದ್ಧಿ ಪಡಿಸಿದ್ದೇನೆ ಎಂದರು.

ಈ ವೇಳೆ ಗ್ರಾಪಂ ಅಧ್ಯಕ್ಷೆ ಪವಿತ್ರ, ಉಪಾಧ್ಯಕ್ಷೆ ಮಂಗಳ, ಸದಸ್ಯರಾದ ಸುಷ್ಮ, ಶಿವಶಂಕರ್, ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಶೃತಿ, ಕಾರ್ಯಪಾಲಕ ಅಭಿಯಂತರ ಎಚ್.ಶ್ರೀನಿವಾಸ್‌ಗೌಡ, ಎಇಇ ನರಸಿಂಹಮೂರ್ತಿ, ಗುತ್ತಿಗೆದಾರ ವಿಜಯ್ ಕುಮಾರ್, ಮುಖಂಡ ಕುಮಾರ್, ಕೆಂಪರಾಜು, ಚನ್ನಕೃಷ್ಣ, ಅನಿಲ್ ಕುಮಾರ್ ಸೇರಿದಂತೆ ಇತರರಿದ್ದರು.

ಮಾ.27, ತರಬೇತಿ ಕಾರ್ಯಾಗಾರ

ಮಂಡ್ಯ, ಮಾ.20– ಜಿಲ್ಲೆಯ ಎಲ್ಲಾ Pet shop ಮಾಲೀಕರಿಗೆ ಮತ್ತು Dog breeders (ಶ್ವಾನ ತಳಿಗಾರರು) ಗಳಿಗೆ Dog breeding Rules & Pet shop Rules ವಿಷಯಕ್ಕೆ ಸಂಬಂಧಿಸಿದಂತೆ ಮಾ.27 ರಂದು ಬೆಳಗ್ಗೆ 11 ಗಂಟೆಗೆ ಪಶುಪಾಲನಾ ಇಲಾಖೆ ಉಪನಿರ್ದೇಶಕರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಾಲಿಕ್ಲಿನಿಕ್ ಮಂಡ್ಯದಲ್ಲಿ ತರಬೇತಿ ಏರ್ಪಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಮಂಡ್ಯ, ಮಾ.20– ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಸ್ನಾತಕೋತ್ತರ ಮತ್ತು ವೃತ್ತಿಪರ ಕೋರ್ಸ್‌ನ ವಿದ್ಯಾರ್ಥಿಗಳಿಗೆ 2022–23ನೇ ಸಾಲಿನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆ ದಿನಾಂಕವನ್ನು ಮಾ.27 ರವರೆಗೆ ವಿಸ್ತರಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೃಹತ್ ಮರ ಬಿದ್ದು ವ್ಯಕ್ತಿ, ಜಾನುವಾರುಗಳು ಸಾವು

ಹಲಗೂರು, ಮಾ.20– ಬೃಹತ್ ಮರ ಬಿದ್ದ ಪರಿಣಾಮ ವ್ಯಕ್ತಿ ಸಾವನ್ನಪ್ಪಿ ಜಾನುವಾರುಗಳು ಸಾವನ್ನಪ್ಪಿರುವ ಘಟನೆ ಹಲಗೂರು ಸಮೀಪದ ಹಾಡ್ಲಿಯಲ್ಲಿ ಸಂಭವಿಸಿದೆ.

ಹಾಡ್ಲಿ ಗ್ರಾಮದ ಲೇ.ಪುಟ್ಟೇಗೌಡರ ಪುತ್ರ ಶಿವಲಿಂಗೇಗೌಡ (65) ಸಾವನ್ನಪ್ಪಿದವರು. ಕುರಿ ಮೇಯಿಸಿಕೊಂಡು ಮನೆಗೆ ಹಿಂದಿರುಗುವಾಗ ಬಿದ್ದ ಬಿರುಗಾಳಿ ಸಹಿತ ಭಾರೀ ಮಳೆಗೆ ಮರ ಮುರಿದು ಬಿದ್ದಿದೆ. ಪರಿಣಾಮ ತೀವ್ರ ಗಾಯಗೊಂಡ ಶಿವಲಿಂಗೇಗೌಡರನ್ನು ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟರು. ಘಟನೆಯಲ್ಲಿ ಶಿವಲಿಂಗೇಗೌಡರಿಗೆ ಸೇರಿದ ಒಂದು ಹಸು, ಮೂರು ಕುರಿಗಳು, ಮೂರು ಮೇಕೆಗಳು ಮತ್ತು ಶ್ರೀಕಂಠೇಗೌಡರಿಗೆ ಸೇರಿದ ಒಂದು ಮೇಕೆ ಸ್ಥಳದಲ್ಲೇ ಸಾವನ್ನಪ್ಪಿವೆ.

ಮತ್ತೊಂದೆಡೆ ಭಾರೀ ಮಳೆಗೆ ಕೂನನಪುರ ಗ್ರಾಮದಲ್ಲಿ ಗೌರಮ್ಮ ಅವರ ಮನೆ ಗೋಡೆ ಉರುಳಿ ಬಿದ್ದ ಪರಿಣಾಮ 9 ಕುರಿಗಳು ಮತ್ತು 2 ಮೇಕೆಗಳು ಸಾವನ್ನಪ್ಪಿವೆ. ಘಟನಾ ಸ್ಥಳಕ್ಕೆ ಪಶುಪಾಲನಾ ಇಲಾಖೆ ಸಹಾಯಕ ನಿರ್ದೇಶಕ ಡಾ.ಮಂಜುನಾಥ್ ಮತ್ತು ಸಿಬ್ಬಂದಿ ಭೇಟಿ ನೀಡಿ ಮರಣೋತ್ತರ ಪರೀಕ್ಷೆ ನಡೆಸಿದರು. ರಾಜಸ್ವ ನಿರೀಕ್ಷಕ ರವಿಕುಮಾರ್, ಗ್ರಾಮಲೆಕ್ಕಿಗ ರವೀಶ್ ಸ್ಥಳ ಪರಿಶೀಲಿಸಿದರು. ಈ ಸಂಬಂಧ ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕೆರೆಗೆ ಬಿದ್ದು ಯುವತಿ ಸಾವು

ಪಾಂಡವಪುರ, ಮಾ.20– ಕಾಲುಜಾರಿ ಕೆರೆಗೆ ಬಿದ್ದು ಯುವತಿಯೊಬ್ಬಳು ಸಾವನ್ನಪ್ಪಿರುವ ಘಟನೆ ಭಾನುವಾರ ಸಂಜೆ ತಾಲೂಕಿನ ತೊಣ್ಣೂರುಕೆರೆಯಲ್ಲಿ ನಡೆದಿದೆ.

ಮೈಸೂರಿನ ವಿದ್ಯಾರಣ್ಯಪುರಂ ನಿವಾಸಿ ನಾಗರಾಜು ಅವರ ಪುತ್ರಿ ಹಾಗೂ ಹಿಂದೂಸ್ತಾನ್ ಕಾಲೇಜಿನ ಪ್ರಥಮ ಬಿ.ಕಾಂ ವಿದ್ಯಾರ್ಥಿನಿ ಕೆ.ಎನ್.ರಚನಾ (18) ಸಾವನ್ನಪ್ಪಿದ ಯುವತಿ.

ಈಕೆ ಭಾನುವಾರ ಸಂಜೆ ತನ್ನ ಸ್ನೇಹಿತೆಯರೊಂದಿಗೆ ತೊಣ್ಣೂರುಕೆರೆಗೆ ಆಗಮಿಸಿದ್ದಳು. ಈ ವೇಳೆ ಕಾಲು ಜಾರಿ ಬಿದ್ದ ರಚನಾ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾಳೆ. ಸೋಮವಾರ ಬೆಳಗ್ಗೆ ಶವ ಕೆರೆಯಲ್ಲಿ ತೇಲುತ್ತಿತ್ತು. ಈ ಸಂದರ್ಭ ಸ್ಥಳಕ್ಕಾಗಮಿಸಿದ ಪಾಂಡವಪುರ ಪೊಲೀಸರು ಪರಿಶೀಲನೆ ನಡೆಸಿ ಕೆರೆಯಿಂದ ಶವವನ್ನು ಪಾಂಡವಪುರ ಸರ್ಕಾರಿ ಆಸ್ಪತ್ರೆಗೆ ರವಾನಿಸಿ, ಮರಣೋತ್ತರ ಪರೀಕ್ಷೆ ಬಳಿಕ ಕುಟುಂಬದವರಿಗೆ ಹಸ್ತಾಂತರಿಸಿದರು. ಮೃತಳ ತಂದೆ ನಾಗರಾಜು ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

ನಾವು ಬೆಳೆಯುವ ಜೊತೆಗೆ ನಮ್ಮವರ ಬೆಳೆಸಬೇಕು

ಮಂಡ್ಯ ಉಪವಿಭಾಗಾಧಿಕಾರಿ ಎಚ್.ಎಸ್.ಕೀರ್ತನ ಸಲಹೆ



ಭಾರತೀನಗರ, ಮಾ.20– ನಾವು ಬೆಳೆಯುವ ಜೊತೆಗೆ ನಮ್ಮ ಸುತ್ತಮುತ್ತಲಿನವರನ್ನು ಬೆಳೆಸುವ ಮನೋಭಾವ ಹೊಂದಿದಾಗ ಮಾತ್ರ ದೇಶದ ಸಂಪನ್ಮೂಲ ಹೆಚ್ಚಿಸಲು ಸಾಧ್ಯ ಎಂದು ಮಂಡ್ಯ ಉಪವಿಭಾಗಾಧಿಕಾರಿ ಎಚ್.ಎಸ್. ಕೀರ್ತನ ತಿಳಿಸಿದರು.

ಇಲ್ಲಿನ ಭಾರತೀ ಕಾಲೇಜು ಕುವೆಂಪು ಸಭಾಂಗಣದಲ್ಲಿ ಪದ್ಮ ಜಿ.ಮಾದೇಗೌಡ ಪ್ರತಿಷ್ಠಾನದಿಂದ ಆಯೋಜಿಸಿದ್ದ 9ನೇ ವರ್ಷದ ಪದ್ಮಾ ಜಿ.ಮಾದೇಗೌಡ ಮಹಿಳಾ ಸೇವಾ ಪ್ರಶಸ್ತಿ ಪ್ರದಾನ ಹಾಗೂ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಮುಂದೆ ಗುರಿ ಹಿಂದೆ ಗುರು ಇದ್ದಾಗ ಮಾತ್ರ ಎಲ್ಲರೂ ಬೆಳೆಯಲು ಸಾಧ್ಯ ಎಂದ ಅವರು, ಭಾರತೀ ಕಾಲೇಜಿನಲ್ಲಿ ಶೇ.70 ರಷ್ಟು ವಿದ್ಯಾರ್ಥಿನಿಯರು ವ್ಯಾಸಂಗ ಮಾಡುತ್ತಿದ್ದು, ಇವರನ್ನು ಸಬಲರನ್ನಾಗಿ ಮಾಡಲು ವಿದ್ಯಾಸಂಸ್ಥೆ ಶ್ರಮಿಸುತ್ತಿದೆ ಎಂದರು. ಮಾಜಿ ಸಂಸದ ದಿ.ಜಿ.ಮಾದೇಗೌಡರಿಗೆ ಪದ್ಮ ಜಿ.ಮಾದೇಗೌಡರು ಬೆನ್ನೆಲುಬಾಗಿ ನಿಂತಿದ್ದರಿಂದ ಅವರು ಕ್ರಿಯಾಶೀಲರಾಗಿ ಕೆಲಸ ಮಾಡಿ ಹಲವು ಸಾಧನೆ ಮಾಡಲು ಸಾಧ್ಯವಾಯಿತು ಎಂದ ಅವರು, ಪದ್ಮ ಜಿ.ಮಾದೇಗೌಡರ ಹೆಸರಿನಲ್ಲಿ ಪ್ರಶಸ್ತಿ ಪಡೆಯುತ್ತಿರುವುದು ಸಂತಸ ತಂದಿದೆ ಎಂದರು.

> ಪ್ರತಿ ವರ್ಷ ನಮ್ಮ ತಾಯಿ ಹೆಸರಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. ನನ್ನ ತಂದೆ ದಿ.ಜಿ.ಮಾದೇಗೌಡರ ಹಾದಿಯಲ್ಲೇ ನಡೆಯುವ ಮೂಲಕ ಅವರು ಕಟ್ಟಿದ ವಿದ್ಯಾಸಂಸ್ಥೆಯನ್ನು ಮತ್ತಷ್ಟು ಅಭಿವೃದ್ಧಿಪಡಿಸಿ ಬಡ ವಿದ್ಯಾರ್ಥಿಗಳಿಗೆ ನೆರವಾಗಲು ಮುಂದಾಗುತ್ತೇನೆ.
> – ಮಧು ಜಿ.ಮಾದೇಗೌಡ, ಅಧ್ಯಕ್ಷ, ಭಾರತೀ ಎಜುಕೇಷನ್ ಟ್ರಸ್ಟ್

ಜೆಎಸ್‌ಎಸ್ ಸ್ನಾತಕೋತ್ತರ ಕೇಂದ್ರದ ಸಂಸ್ಥಾಪಕ ಅಧ್ಯಕ್ಷೆ ಡಾ.ಕುಮುದಿನಿ ಅಚ್ಚಿ ಮಾತನಾಡಿ, ಹೆಣ್ಣುಮಕ್ಕಳು ಆತ್ಮಗೌರವ ಬೆಳೆಸಿಕೊಳ್ಳಬೇಕು. ನಮ್ಮ ಮೇಲೆ ನಾವೇ ನಿಯಂತ್ರಣ ಹೊಂದುವ ಶಕ್ತಿ ಬೆಳೆಸಿಕೊಳ್ಳಬೇಕು ಎಂದರು. ಭಾರತೀ ವಿದ್ಯಾಸಂಸ್ಥೆ ಐಎಎಸ್, ಕೆಎಎಸ್ ತರಬೇತಿ ನೀಡುತ್ತಿದೆ. ಇದನ್ನು ಸದುಪಯೋಗಪಡಿಸಿಕೊಂಡು ಗ್ರಾಮೀಣ ಪ್ರದೇಶದಲ್ಲಿ ಹೆಚ್ಚು ಸಾಧನೆ ಮಾಡಿದಾಗ ಮಾತ್ರ ದಿ.ಜಿ.ಮಾದೇಗೌಡರಿಗೆ ಒಳ್ಳೆಯ ಹೆಸರು ಬರುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹಾರಾಜ ಕಾಲೇಜಿನ ವಿಶ್ರಾಂತ ಪ್ರಾಧ್ಯಾಪಕಿ ಪ್ರೊ.ಎಚ್.ಎಂ. ವಸಂತಮ್ಮ, ಪ್ರತಿಯೊಬ್ಬ ಮಹಿಳೆಯಲ್ಲೂ ಸಾಧಕಿ ಇರುತ್ತಾಳೆ. ಹೀಗಾಗಿ ಗಂಡು–ಹೆಣ್ಣು ಎಂಬ ತಾರತಮ್ಯ ನಿಲ್ಲಿಸಿದರೆ ಮಾತ್ರ ದೇಶ ಪ್ರಗತಿ ಕಾಣಲು ಸಾಧ್ಯ ಎಂದರು.

ಪದ್ಮ ಜಿ.ಮಾದೇಗೌಡ ಪ್ರತಿಷ್ಠಾನದ ಅಧ್ಯಕ್ಷ ಬಿ.ಎಂ.ನಂಜೇಗೌಡ ಮಾತನಾಡಿದರು. ಇದೇ ವೇಳೆ ಉಪವಿಭಾಗಾಧಿಕಾರಿ ಎಚ್.ಎಸ್.ಕೀರ್ತನ ಅವರಿಗೆ 25 ಸಾವಿರ ನಗದು, ಸ್ಮರಣಿಕೆಯುಳ್ಳ ಪದ್ಮಾ ಜಿ.ಮಾದೇಗೌಡ ಮಹಿಳಾ ಸೇವಾ ಪ್ರಶಸ್ತಿ ನೀಡಿ ಗೌರವಿಸಲಾಯಿತು. ನಂತರ ಡಾ.ಕುಮುದಿನಿ ಅಚ್ಚಿ ಹಾಗೂ ಡಾ.ಎಚ್.ಎಸ್. ವಸಂತಮ್ಮ ಅವರನ್ನು ಅಭಿನಂದಿಸಲಾಯಿತು.

ಬಹುಮಾನ ವಿತರಣೆ: ಅಂತರ ಕಾಲೇಜು ರಸಪ್ರಶ್ನೆ ಸ್ಪರ್ಧೆ ಹಾಗೂ ವಿವಿಧ ಆಟೋಟಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಅತಿ ಹೆಚ್ಚು ಅಂಕ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿಜಯಲಕ್ಷ್ಮಿ ಬಾಳೇಕುಂದ್ರಿ, ಕೆ.ಎಸ್.ಭಾರತಿ ಅವರ ಹೆಸರಿನಲ್ಲಿ ದತ್ತಿ ನಿಧಿ ಬಹುಮಾನ ನೀಡಲಾಯಿತು. ಹಿರಿಯ ವಿದ್ಯಾರ್ಥಿ ಆರ್.ಜೆ. ನಂಜುಂಡಸ್ವಾಮಿ ಅವರ ಹೆಸರಿನಲ್ಲಿ ಬಡ ವಿದ್ಯಾರ್ಥಿಗಳಿಗೆ 2 ಲಕ್ಷ ರೂ. ನೆರವು ನೀಡಲಾಯಿತು.

ವೇದಿಕೆಯಲ್ಲಿ ಪದ್ಮ ಜಿ.ಮಾದೇಗೌಡ, ಭಾರತೀ ಎಜುಕೇಷನ್ ಟ್ರಸ್ಟ್ ಅಧ್ಯಕ್ಷ ಮಧು ಜಿ.ಮಾದೇಗೌಡ, ಟ್ರಸ್ಟಿಗಳಾದ ಆಶಯ್, ಬಿ. ಬಸವರಾಜು, ಸಿದ್ದೇಗೌಡ, ಮುದ್ದೇಗೌಡ, ಬಸವೇಗೌಡ, ಜಯರಾಮ್ ಸೇರಿದಂತೆ ಇತರರಿದ್ದರು.

ಬೈಕ್‌ಗೆ ಕಾರು ಡಿಕ್ಕಿ: ಸವಾರ ಸಾವು

ಹಲಗೂರು, ಮಾ.20– ಬೈಕ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಸವಾರ ಸಾವನ್ನಪ್ಪಿರುವ ಘಟನೆ ಹಲಗೂರಿನ ಕನಕಪುರ–ದಿಂಡಗಲ್ ರಾಷ್ಟ್ರೀಯ ಹೆದ್ದಾರಿ ಬಳಿ ನಡೆದಿದೆ.

ಇಲ್ಲಿಗೆ ಸಮೀಪದ ಕುಂಟನದೊಡ್ಡಿ ಗ್ರಾಮದ ನಿವಾಸಿ ಚಂದ್ರಪ್ಪ ಅವರ ಪುತ್ರ ಶಿವರಾಜು (25) ಮೃತಪಟ್ಟವರು. ಈತ ಹಲಗೂರಿನಿಂದ ಸ್ವಗ್ರಾಮಕ್ಕೆ ಬೈಕ್‌ನಲ್ಲಿ ತೆರಳುತ್ತಿದ್ದ ವೇಳೆ ಕಾರು ಹಿಂಬದಿಯಿಂದ ಡಿಕ್ಕಿ ಹೊಡೆದು ಪರಾರಿಯಾಗಿದೆ. ಅಪಘಾತದಲ್ಲಿ ತೀವ್ರ ಗಾಯಗೊಂಡ ಶಿವರಾಜುನನ್ನು ಮಳವಳ್ಳಿ ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಮೃತಪಟ್ಟಿದ್ದಾನೆ. ಈ ಸಂಬಂಧ ಹಲಗೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕೆ.ಆರ್.ಪೇಟೆ ಕ್ಷೇತ್ರದ ಬಿಜೆಪಿ ಟಿಕೆಟ್‌ಗೆ ಮನವಿ



ಕೆ.ಆರ್.ಪೇಟೆ, ಮಾ.20– ಮುಂಬರುವ ಚುನಾವಣೆಯಲ್ಲಿ ಕೆ.ಆರ್.ಪೇಟೆ ವಿಧಾನಸಭಾ ಕ್ಷೇತ್ರದ ಟಿಕೆಟ್ ನೀಡುವಂತೆ ತಾಪಂ ಮಾಜಿ ಸದಸ್ಯೆ ಮೀನಾಕ್ಷಿ ಪುಟ್ಟರಾಜು ಬಿಜೆಪಿ ವರಿಷ್ಠರಿಗೆ ಮನವಿ ಮಾಡಿದ್ದಾರೆ.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2018ರಲ್ಲೇ ಕ್ಷೇತ್ರದ ಬಿಜೆಪಿ ಟಿಕೆಟ್‌ಗಾಗಿ ಅರ್ಜಿ ಸಲ್ಲಿಸಿದ್ದೆ. ಆದರೆ ಪಕ್ಷ ಬಿ.ಸಿ.ಮಂಜು ಅವರಿಗೆ ಟಿಕೆಟ್ ನೀಡಿದ್ದರಿಂದ ವರಿಷ್ಠರ ತೀರ್ಮಾನಕ್ಕೆ ಬದ್ಧಳಾಗಿ ಸ್ಪರ್ಧೆಯಿಂದ ಹಿಂದೆ ಸರಿದಿದ್ದೆ. ಇದೀಗ ಮುಂಬರುವ ಚುನಾವಣೆಗೆ ಕ್ಷೇತ್ರದ ಪ್ರಬಲ ಟಿಕೆಟ್ ಆಕಾಂಕ್ಷಿಯಾಗಿದ್ದು, ಕಾರ್ಯಕರ್ತರೊಂದಿಗೆ ಕ್ಷೇತ್ರದಲ್ಲಿ ಪ್ರವಾಸ ಮಾಡಿ ಪಕ್ಷ ಸಂಘಟನೆಯಲ್ಲಿ ತೊಡಗಿದ್ದೇನೆ ಎಂದರು.

ಈಗಾಗಲೇ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹಾಗೂ ಅವರ ಪುತ್ರ ಬಿಜೆಪಿ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರನ್ನು ಭೇಟಿ ಮಾಡಿ ಈ ಬಾರಿ ನನಗೆ ಕ್ಷೇತ್ರದ ಟಿಕೆಟ್ ನೀಡುವಂತೆ ಮನವಿ ಮಾಡಿದ್ದೇನೆ. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿರುವ ವರಿಷ್ಠರು ಟಿಕೆಟ್ ನೀಡುವ ಭರವಸೆ ನೀಡಿದ್ದಾರೆ. ಪಕ್ಷ ಟಿಕೆಟ್ ನೀಡಿದರೇ, ಕಾಂಗ್ರೆಸ್, ಜೆಡಿಎಸ್ ಪಕ್ಷಗಳಿಗೆ ಪ್ರಬಲ ಸ್ಪರ್ಧೆ ನೀಡಿ ಗೆಲ್ಲುವ ವಿಶ್ವಾಸವಿದೆ ಎಂದರು.

ಈ ವೇಳೆ ತಾಲೂಕು ಬಿಜೆಪಿ ಪ್ರಧಾನ ಕಾರ್ಯದರ್ಶಿ ಪ್ರಕಾಶ್, ಮುಖಂಡರಾದ ಮಧುಸೂಧನ್, ಹರೀಶ್, ಬಿ.ಎನ್. ಪುಟ್ಟರಾಜು ಸೇರಿದಂತೆ ಹಲವರಿದ್ದರು.



ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯದಡಿ ನಡೆದಂತಹ ಎಂಬಿಬಿಎಸ್ ಪರೀಕ್ಷೆಯಲ್ಲಿ ದಾವಣಗೆರೆ ಜೆಜೆಎಂಎಂಸಿಯಿಂದ ಎಂಬಿಬಿಎಸ್ ಪದವಿ ಪರೀಕ್ಷೆಯಲ್ಲಿ ಶೈಕ್ಷಣಿಕ ಸಾಧನೆಯೊಂದಿಗೆ ಉನ್ನತ ಶ್ರೇಣಿಯಲ್ಲಿ ಪದಕ ಪಡೆದಂತಹ ಡಾ. ವಿಶಾಲ್ ಘನತೆ ಹಾಗೂ ಶ್ರೀಮತಿ ಸುಮತಿ ಘನತೆ ಅವರ ಪುತ್ರ ಡಾ. ರಕ್ಷಕ್ ವಿ. ಘನತೆ ಅವರು ಬಿಇಎ ಗೌರ್ನಿಂಗ್ ಕೌನ್ಸಿಲ್ ಮೆಂಬರ್ ಎ.ಎಸ್. ವೀರಣ್ಣ ಅವರಿಂದ ಪ್ರಮಾಣಪತ್ರವನ್ನು ಸ್ವೀಕರಿಸಿದರು. ಈ ವೇಳೆ ಮುಖ್ಯ ಅತಿಥಿಗಳಾದ ಶ್ರೀ ಜಯದೇವ ಹೃದ್ರೋಗ ಸಂಸ್ಥೆಯ ಮಕ್ಕಳ ಹೃದ್ರೋಗ ತಜ್ಞೆ ಡಾ.ವಿಜಯಲಕ್ಷ್ಮಿ ಬಾಳೇಕುಂದ್ರಿ, ಜೆಜೆಎಂಎಂಸಿ ಅಧ್ಯಕ್ಷ ಡಾ.ಶಾಮನೂರು ಶಿವಶಂಕರಪ್ಪ, ಬಾಪೂಜಿ ಆಸ್ಪತ್ರೆ ಅಧ್ಯಕ್ಷ ಎಸ್.ಎಸ್.ಮಲ್ಲಿಕಾರ್ಜುನ ಹಾಗೂ ಪ್ರಾಚಾರ್ಯ ಡಾ.ಎಸ್.ಬಿ.ಮುರುಗೇಶ್ ಅಧ್ಯಕ್ಷತೆ ವಹಿಸಿದ್ದರು.

ನಾಲ್ಕು ಕೋಟಿ ರೂ. ವೆಚ್ಚದಲ್ಲಿ ವಸತಿ ಸಂಕೀರ್ಣಗಳ

ದುರಸ್ತಿ, ನವೀಕರಣಕ್ಕೆ ಶಾಸಕ ಎಲ್.ನಾಗೇಂದ್ರ ಚಾಲನೆ



ಮೈಸೂರು,ಮಾ.20(ಪಿಎಂ)– ಚಾಮರಾಜ ವಿಧಾನ ಸಭಾ ಕ್ಷೇತ್ರದಲ್ಲಿ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ನಿರ್ಮಿಸಿರುವ ವಿವಿಧೆಡೆಯ ವಸತಿ ಸಂಕೀರ್ಣಗಳ ದುರಸ್ತಿ ಮತ್ತು ಅಗತ್ಯ ಮೂಲ ಸೌಕರ್ಯ ಒದಗಿಸುವ ಕಾಮಗಾರಿಗೆ ಕ್ಷೇತ್ರದ ಶಾಸಕ ಎಲ್.ನಾಗೇಂದ್ರ ಸೋಮವಾರ ಚಾಲನೆ ನೀಡಿದರು.

ನರ್ಮ್ ಯೋಜನೆಯ ಅನುದಾನ 4 ಕೋಟಿ ರೂ. (405 ಲಕ್ಷ ರೂ.) ವೆಚ್ಚದಲ್ಲಿ ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಕಾಮಗಾರಿಗೆ ಕೈಗೆತ್ತಿಕೊಳ್ಳಲಾಗಿದೆ.

ಬಿ.ಎಂ.ಶ್ರೀ ನಗರದ ನರ್ಮ್ ಮನೆಗಳ ಸಂಕೀರ್ಣ, ಗೋಕುಲಂ 2ನೇ ಹಂತದ ನಂದಗೋಕುಲ ನರ್ಮ್ ಮನೆಗಳ ಸಂಕೀರ್ಣ, ವಿ.ವಿ.ಮೊಹಲ್ಲಾ 16ನೇ ಕ್ರಾಸ್‌ನಲ್ಲಿರುವ ಪಿಕೆ ಕಾಲೋನಿಯ ನರ್ಮ್ ಮನೆಗಳ ಸಂಕೀರ್ಣ, ಮೇದರ್ ಬ್ಲಾಕ್‌ನ ನರ್ಮ್ ಮನೆಗಳ ಸಂಕೀರ್ಣ ಮತ್ತು ಹಳೇ ಆರ್‌ಎಂಸಿ ಹಿಂಭಾಗದ ರಾಜರಾಜೇಶ್ವರಿನಗರದ ನರ್ಮ್ ಮನೆಗಳ ಸಂಕೀರ್ಣದ ದುರಸ್ತಿ ಮತ್ತು ನವೀಕರಣ ಕಾಮಗಾರಿಗೆ ಶಾಸಕರು ಗುದ್ದಲಿ ಪೂಜೆ ನೆರವೇರಿಸಿದರು.

ಬಿ.ಎಂ.ಶ್ರೀನಗರದ ಕಾರ್ಯಕ್ರಮದಲ್ಲಿ ಪಾಲಿಕೆ ಮಾಜಿ ಸದಸ್ಯ ದೇವರಾಜು, ಮುಖಂಡರಾದ ದಿನೇಶ್‌ಗೌಡ, ನರಸಿಂಹಮೂರ್ತಿ, ರವಿ ಕೆಂಪಣ್ಣ, ಮಧು, ರವೀಂದ್ರ, ಪುಟ್ಟ, ಕೆಂಪಣ್ಣ, ರವಿ, ಯೋಗೇಶ್, ರಮೇಶ್, ದಾಸು, ಶ್ರೀಕಾಂತ, ನವೀನ್, ಗುಂಡ, ನಾಗಮ್ಮ, ರುಕ್ಮಿಣಿ ಹಾಜರಿದ್ದರು. ಗೋಕುಲಂ ಕಾರ್ಯಕ್ರಮದಲ್ಲಿ ಮುಖಂಡರಾದ ಅಶೋಕ್, ಜಯಣ್ಣ, ಬಸವರಾಜು, ಪ್ರಕಾಶ್, ಹನುಮಂತು, ನಾಗ, ಸುಬ್ರಮಣಿ, ಚಂದ್ರಣ್ಣ, ಪ್ರಸನ್ನ, ಕೃಷ್ಣಪ್ಪ, ಕರೀಗೌಡ, ವಿಶ್ವನಾಥ್, ಪ್ರಭು, ಕಿರಣ್, ನಾಗಮ್ಮ, ರತ್ನಮ್ಮ, ಶ್ವೇತಾ, ಮಹದೇವಮ್ಮ ಮತ್ತಿತರರು ಹಾಜರಿದ್ದರು. ಮೇದರ್ ಬ್ಲಾಕ್ ಕಾರ್ಯಕ್ರಮದಲ್ಲಿ ಮುಖಂಡರಾದ ಷಣ್ಮುಗಂ, ರೂಪ, ವಿಶ್ವನಾಥ, ಶಿಂಧೆ ಜೂಡ್, ಶಿವಕೀರ್ತಿ, ಶ್ರೀನಿವಾಸ್ ಸೀನಿ, ಪ್ರಕಾಶ್, ಶ್ರೀನಿವಾಸ್ ಹಾಜರಿದ್ದರು. ರಾಜರಾಜೇಶ್ವರಿನಗರ ಕಾರ್ಯ ಕ್ರಮದಲ್ಲಿ ಮುಖಂಡ ವಿಜಿ, ದಿ ಮೈಸೂರು ಸಿಟಿ ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕಿ ಹೇಮಾ, ಮುಖಂಡ ರಾದ ತಬ್ರೇಜ್, ಗಣೇಶ್, ಶಶಿ, ವಿಠಲ್, ಮುಕ್ರಂ, ರಾಜೇಂದ್ರ, ಜಾರ್ಜ್ ಇದ್ದರು.

ಪ್ರಶಸ್ತಿಗೆ ಅರ್ಜಿ ಆಹ್ವಾನ

ಮೈಸೂರು, ಮಾ.20– 2023–24ನೇ ಸಾಲಿನ ಏ.5ರಂದು ಡಾ.ಬಾಬು ಜಗಜೀವನ್ ರಾಂರವರ 116ನೇ ಜನ್ಮ ದಿನಾಚರಣೆ ಹಾಗೂ ಏ.14ರಂದು ಸಂವಿಧಾನ ಶಿಲ್ಪಿ ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್‌ರವರ 132ನೇ ಜನ್ಮ ದಿನಾಚರಣೆಯನ್ನು ಸರ್ಕಾರದ ವತಿಯಿಂದ ಆಚರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಜನಾಂಗದವರ ಶ್ರೇಯಸ್ಸಿಗಾಗಿ ಪ್ರೋತ್ಸಾಹಿಸಿ, ಶ್ರಮಿಸಿ, ಗಣನೀಯ ಸೇವೆ ಸಲ್ಲಿಸಿದ ಅರ್ಹ ವ್ಯಕ್ತಿಗಳನ್ನು ಗುರುತಿಸಿ ಪ್ರಶಸ್ತಿ ನೀಡಬೇಕಾಗಿದ್ದು, ಆಸಕ್ತರು ಮಾ.23ರೊಳಗೆ ಸಂಬಂಧಿಸಿದ ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರಿಗೆ ಅವಶ್ಯ ದಾಖಲಾತಿಗಳೊಂದಿಗೆ ಮನವಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ–0821–2344661 ಅನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ವಿಪ್ರ ಸಮುದಾಯದವರಿಗೆ ಪಂಚಾಂಗ ವಿತರಣೆ




ಮೈಸೂರು, ಮಾ. 20– ಮೈಸೂರಿನ ದಿವಾನ್ಸ್ ರಸ್ತೆಯಲ್ಲಿರುವ ಗ್ರೀನ್ ಹೆರಿಟೇಜ್ ಹೋಟೆಲ್‌ನಲ್ಲಿ ಯುಗಾದಿ ಮಿಲನ್ ಹಾಗೂ ಪಂಚಾಂಗ ವಿತರಣೆ ಕಾರ್ಯಕ್ರಮವನ್ನು ಮೈಸೂರು ಯುವ ಬಳಗದ ವತಿಯಿಂದ ಆಯೋಜಿಸಲಾಗಿತ್ತು.

ಕಾಂಗ್ರೆಸ್ ಮುಖಂಡ ಕೆ.ಹರೀಶ್‌ಗೌಡ ಪಂಚಾಂಗ ವಿತರಣೆ ಮಾಡಿ ನಂತರ ಮಾತನಾಡಿ, ಸಮಾಜದಲ್ಲಿ ಯಾವುದೇ ಶುಭಕಾರ್ಯಗಳ ದಿನಾಂಕಗಳು ನಿಗದಿಯಾಗುವುದೇ ಪಂಚಾಂಗ ಆಧಾರದ ಮೇಲೆ, ಇಂದ್ರಾಗ್ನಿವರುಣನ ಕಾಲ ಅಂದರೆ ಮಳೆ ಬೇಸಿಗೆ–ಚಳಿಗಾಲದ ಸ್ಥಿತಿಗತಿಯ ಸೂಕ್ಷ್ಮ ಮೊದಲೇ ತಿಳಿಯುವ ಶಕ್ತಿ ಪಂಚಾಂಗಕ್ಕಿದೆ ಎಂದರೆ ಪೂರ್ವಿಕರ ಮಹಾಕೊಡುಗೆ ಎಷ್ಟೆಂದು ಮನವರಿಕೆ ಆಗುತ್ತದೆ. ಪ್ರತಿಯೊಬ್ಬ ಹಿಂದೂಗಳು ಮನೆಯಲ್ಲಿ ಪಂಚಾಂಗ ಓದಲು ಮುಂದಾದರೆ ನಮ್ಮ ಹಿಂದೂ ಸನಾತನ ಧರ್ಮ ಉನ್ನತ ಸ್ಥಾನಕ್ಕೇರುತ್ತದೆ. ಧಾರ್ಮಿಕ, ಆಧ್ಯಾತ್ಮ ಕ್ಷೇತ್ರವಲ್ಲದೇ ಶುಭ ಸಮಾರಂಭದ ಘಳಿಗೆ–ಮುಹೂರ್ತ ತಿಳಿಸುವ ಒಂಟಿಕೊಪ್ಪಲ್ ಪಂಚಾಂಗ ಪಾವಿತ್ರ್ಯತೆ ಕಾಪಾಡಲು ನೂರಾರು ವರ್ಷಗಳಿಂದ ಶ್ರಮಿಸುತ್ತಿರುವ ರಾಮಕೃಷ್ಣ ಶಾಸ್ತ್ರಿ ಹಾದಿಯಾಗಿ ಅವರ ಪುತ್ರ ಕುಮಾರ್ ಶಾಸ್ತ್ರಿ ಅವರ ಸೇವೆ ಅನನ್ಯ ಎಂದರು.

ಧಾರ್ಮಿಕ ಮುಖಂಡರಾದ ಕುಮಾರ್ ಮಾತನಾಡಿ ಯುಗಾದಿ ವರ್ಷಾಚರಣೆಯ ಬೇವು–ಬೆಲ್ಲದ ಕಹಿಸಿಹಿಯ ಸಂಕೇತದ ಸಾರವನ್ನು ಸಾರುತ್ತದೆ. ಕಷ್ಟ–ಸುಖಗಳ ಜೀವನ ಇಂತಹ ಪವಿತ್ರ ಹಬ್ಬಾಚರಣೆಗೆ ಪಂಚಾಂಗದ ನಿರ್ಧಾರ ಮುಖ್ಯವಾಗುತ್ತದೆ. ಸಂವತ್ಸರ ಮಾಸ, ತಿಥಿ ನಕ್ಷತ್ರ ರಾಶಿಯ ಕಾಲದ ಘಳಿಗೆಯ ಮಾಹಿತಿಯಂತೆ ಎಲ್ಲವೂ ನಿರ್ಧಾರಿತವಾಗುವುದು ಶುಭ ಫಲಕ್ಕೆ ನಾಂದಿ ಎಂದರು. ಭಾರತದ ಇತಿಹಾಸದ ಕೆಲವು ವಿಷಯಗಳು ಪಂಚಾಂಗದಲ್ಲಿ ಉಲ್ಲೇಖನೀಯ ಎಂದರು.

ಇದೇ ವೇಳೆ ಅರ್ಚಕರ ಸಂಘದ ಅಧ್ಯಕ್ಷ ವಿದ್ವಾನ್ ಕೃಷ್ಣಮೂರ್ತಿ, ಧಾರ್ಮಿಕ ಮುಖಂಡರಾದ ಮೈ ಕುಮಾರ್, ರವಿಚಂದ್ರ, ನವೀನ್, ಆನಂದ್, ಲೋಕೇಶ್, ಪ್ರಶಾಂತ್ ಭಾರದ್ವಾಜ್, ಚಕ್ರಪಾಣಿ, ಸುಮಂತ್ ಶಾಸ್ತ್ರಿ, ಮಿರ್ಲೆ ಪಣೀಶ್, ಶ್ರೀಕಾಂತ್ ಕಶ್ಯಪ್, ಜಗದೀಶ್, ಮಂಜುನಾಥ್, ಹೆಬ್ಬಾಳ್ ಬ್ರಾಹ್ಮಣ ಸಂಘದ ಉಪಾಧ್ಯಕ್ಷ ಗುರುಪ್ರಸಾದ್ ಇನ್ನಿತರರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

21.3.2023 ಮಂಗಳವಾರ, ಮಳೆ ನಕ್ಷತ್ರ: ಉತ್ತರಭಾದ್ರ, 18.03.2023ರಿಂದ 30.03.2023 ಶ್ರೀ ಶುಭಕೃತ ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಫಾಲ್ಗುಣ ಮಾಸ, ಕೃಷ್ಣ ಪಕ್ಷ, ತಿಥಿ: ಅಮಾವಾಸ್ಯೆ, ನಕ್ಷತ್ರ: ಪೂಭಾ, ರಾಹುಕಾಲ: ಮಧ್ಯಾಹ್ನ 3 ರಿಂದ 4.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಶ್ರದ್ಧೆಯ ಶಿಲ್ಪ–ಮೈಸೂರು ಸುತ್ತಲಿನ ದೇಗುಲಗಳ ಪರಿಚಯ, ಪ್ರಸ್ತುತಿ– ಡಾ. ಟಿ.ಎಸ್. ಗೋಪಾಲ್, 6.40 ಅರಿವಿನ ಶಿಖರ– ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಕಾರ್ಯಕ್ರಮ ಸರಣಿ, ಗಾಯನ– ನಿತಿನ್ ರಾಜಾರಾಂ ಶಾಸ್ತ್ರಿ, ವ್ಯಾಖ್ಯಾನ– ಡಾ.ಪ್ರದೀಪ್ ಕುಮಾರ್ ಹೆಬ್ರಿ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ–ದೂರ ಸರಿದರು ಕಾದಂಬರಿಯ ಪ್ರಸ್ತುತಿ–ಉಮೇಶ್.ಎಸ್.ಎಸ್., 8.45 ಕರೆಗೊಂದು ಗೀತೆ, 10.00 ಮೌನದಾಚೆಯ ಬೆಳಕು–ಸದಾಶಿವ ಬ್ರಹ್ಮೇಂದ್ರರ ಜೀವನ ಹಾಗೂ ರಚನೆಗಳನ್ನಾಧರಿಸಿದ ವಿಶೇಷ ಕಾರ್ಯಕ್ರಮ ಸರಣಿ, ನಿರ್ದೇಶನ ಹಾಗೂ ನಿರೂಪಣೆ ಸಾಹಿತ್ಯ– ಎಸ್. ಶಂಕರ್, ನಿರ್ಮಾಣ– ಗೀತಾ ರಮಾನಂದ್, 10.30 ನಮ್ಮ ಆರೋಗ್ಯ – ಕ್ಯಾನ್ಸರ್ ಜಾಗೃತಿ ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು– ಪ್ರಣವ ಹೆಲ್ತ್ ಕೇರ್, ಕುವೆಂಪುನಗರ, ಮೈಸೂರು, ಭಾಗವಹಿಸುವ ತಜ್ಞರು– ಎಂ.ಎಸ್. ಗಿರೀಶ್

ಮಧ್ಯಾಹ್ನ: 12.30ದೇವರನಾಮ–ಭೀಮ್ ಸೇನ್ ಜೋಶಿ, 12.45 ನಮ್ಮ ತೆರಿಗೆ ವ್ಯವಸ್ಥೆ–ಲೆಕ್ಕಪತ್ರ ಪರಿಶೋಧಕ ಮಲ್ಲಿಕಾರ್ಜುನಸ್ವಾಮಿ ಎಂ.ಆರ್. ಅವರೊಂದಿಗೆ ಸಂದರ್ಶನ, ಸಂದರ್ಶಕರು– ದಿವಾಕರ ಹೆಗಡೆ, 1.20 ಭಾವಗೀತೆಗಳು–ಶ್ಯಾಮಲಾ ಜಹಗೀರ್ ದಾರ್, 4.00 ಕಥಾ ಕಾಲಕ್ಷೇಪ "ಶ್ರೀ ರಾಮಾಂಜನೇಯ ಯುದ್ಧ", ಪ್ರಸ್ತುತಿ– ವಿದ್ವಾನ್ ಆರ್. ಗುರುರಾಜುಲು ನಾಯ್ಡು, 6.50 ಕೃಷಿರಂಗ –ಕಿಸಾನ್‌ವಾಣಿ, ಸಮಗ್ರ ಕೃಷಿಯ ಅನುಭವಗಳನ್ನು ಕುರಿತಿ ಜವರೇಗೌಡ ಅವರೊಂದಿಗೆ ಸಂದರ್ಶನ. ಸಂದರ್ಶಕರು– ಎಸ್.ಸಿ. ಹೇಮಕುಮಾರ್, 9.15 ಯಕ್ಷಗಾನದ ಹಾಡುಗಳು– ಗೋಪಾಲಕೃಷ್ಣ ಮಯ್ಯ ಭಾಗವತರವರಿಂದ ರುಕ್ಮಿಣಿ ಸ್ವಯಂವರ ಪ್ರಸಂಗದ ಹಾಡು, 9.30 ಹೆಚ್.ಟಿ. ಹರೀಶ್ ಪಾಂಡವ್–ಸ್ಯಾಕ್ಸೋಫೋನ್ ವಾದನ, ಪಿ.ನಟರಾಜ್–ಮೃದಂಗ, ಸಿ.ವಿ. ಶೃತಿ– ವಯೋಲಿನ್, 10.00 ಗಮಕ ವಾಚನ, ವಾಚನ– ಪದ್ಮಲತಾ, ವ್ಯಾಖ್ಯಾನ– ಸುಮಾ ಕಿರಣ್

■ **ವ್ಯವಸ್ಥಾಪಕರು:** ಯುಗಾದಿ ಹಬ್ಬದ ಪ್ರಯುಕ್ತ ಅಂತರರಾಷ್ಟ್ರೀಯ ಗುಣಮಟ್ಟದ ಬ್ರಾಂಡೆಡ್ ರೆಡಿಮೇಡ್ ಗಾರ್ಮೆಂಟ್ಸ್ ಪ್ರದರ್ಶನ ಮತ್ತು ಮಾರಾಟ, ಸ್ಥಳ: ಹೋಟೆಲ್ ಪೈವಿಸ್ತಾ ಸಭಾಂಗಣ, ಬೆಳಗ್ಗೆ 10 ರಿಂದ.

■ **ಮೈಸೂರು ಜಿಲ್ಲಾ ಸಹಕಾರ ಒಕ್ಕೂಟ :** ಜಿಲ್ಲೆಯ ಗೃಹ ನಿರ್ಮಾಣ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ವಿಶೇಷ ತರಬೇತಿ ಕಾರ್ಯಕ್ರಮ, ಉದ್ಘಾಟನೆ : ಶಾಸಕ ಜಿ.ಟಿ. ದೇವೇಗೌಡ, ಅಧ್ಯಕ್ಷತೆ : ಮೈಸೂರು ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಹೆಚ್.ವಿ. ರಾಜೀವ್, ವಿಶೇಷ ಆಹ್ವಾನಿತರು : ಸಹಕಾರ ಸಂಘಗಳ ನಿಬಂಧಕ ಡಾ. ಕೆ. ರಾಜೇಂದ್ರ, ಮುಖ್ಯ ಅತಿಥಿಗಳು: ರಾಜ್ಯ ಮಹಾಮಂಡಳ ನಿರ್ದೇಶಕರಾದ ಬಿ.ಸಿ. ಲೋಕಪ್ಪಗೌಡ, ಬಿ. ಜಯಕರ ಶೆಟ್ಟಿ ಇಂದ್ರಾಳಿ, ಸ್ಥಳ: ದಿ ವಿಂಡ್ ಫ್ಲವರ್ ರೆಸಾರ್ಟ್, ಗಾಲ್ಫ್ ಕ್ಲಬ್ ಪಕ್ಕ, ಬೆಳಗ್ಗೆ 10 ರಿಂದ.

■ **ಶ್ರೀ ಹೊಸಮಠ :** ಅಲ್ಲಮಪ್ರಭು ಜಯಂತಿ, ಶ್ರೀ ಬಸವಲಿಂಗಸ್ವಾಮಿಗಳವರ ಪುಣ್ಯಾರಾಧನಾ ಮಹೋತ್ಸವ, ಸಾನ್ನಿಧ್ಯ : ಶ್ರೀ ಹೊಸಮಠದ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮಿಗಳು, ಉದ್ಘಾಟನೆ: ಶ್ರೀ ಗುರುಮಲ್ಲೇಶ್ವರ ಮಹಾಸಂಸ್ಥಾನ ದಾಸೋಹ ಮಠದ ಶ್ರೀ ಮಹಾಂತ ಸ್ವಾಮಿಗಳು, ಅಧ್ಯಕ್ಷತೆ : ಶ್ರೀ ಮಲ್ಲಕಾರ್ಜುನ ಸ್ವಾಮಿಗಳು, ಕನಕಪುರ ಶ್ರೀ ದೇಗುಲಮಠದ ಕಿರಿಯ ಶ್ರೀಗಳಾದ ಶ್ರೀ ಚನ್ನಬಸವಸ್ವಾಮಿಗಳಂದ ಪ್ರವಚನ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 10.30ರಿಂದ.

■ **ಮೈಸೂರು ವಿಶ್ವವಿದ್ಯಾನಿಲಯ:** ವಿಶ್ವ ಸಮಾಜ ಕಾರ್ಯ ದಿನಾಚರಣೆ, ಬೆಳಗ್ಗೆ 10.30ಕ್ಕೆ ಉದ್ಘಾಟನೆ: ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷ ಪ್ರೊ. ವೈ.ಎಸ್.ಸಿದ್ದೇಗೌಡ, ಮುಖ್ಯ ಅತಿಥಿಗಳು: ಮೈಸೂರು ವಿವಿ ಕುಲಸಚಿವೆ ವಿ.ಆರ್.ಶೈಲಜಾ, ಕ್ರೆಡಿಟ್–ಐ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎಂ.ಪಿ.ವರ್ಷಾ, ಡಾ.ಬಿ.ಆರ್.ಅಂಬೇಡ್ಕರ್ ಸ್ನಾತಕೋತ್ತರ ಕೇಂದ್ರದ ನಿರ್ದೇಶಕ ಪ್ರೊ.ಪಿ.ಮಾದೇಶ್, ಹೆಚ್.ಡಿ. ದೇವೇಗೌಡ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಪ್ರೊ. ಜಿ.ಡಿ. ನಾರಾಯಣ, ವಿದ್ಯಾವಿಕಾಸ್ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಾ.ಮುಜೀದಾ, ಅಧ್ಯಕ್ಷತೆ: ಸಹ ಪ್ರಾಧ್ಯಾಪಕರಾದ ಡಾ.ಹೆಚ್.ಪಿ.ಜ್ಯೋತಿ; ಸಂಜೆ 4.30ಕ್ಕೆ ಸಮಾರೋಪ ಸಮಾರಂಭ, ಸಮಾರೋಪ ಭಾಷಣ: ಮೈಸೂರು ಕೇಂದ್ರ ಕಾರಾಗೃಹ ಮುಖ್ಯ ಅಧೀಕ್ಷಕರಾದ ಕೆ.ಸಿ.ದಿವ್ಯಶ್ರೀ, ಮುಖ್ಯ ಅತಿಥಿಗಳು: ಸರ್ ಎಂ.ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರದ ನಿರ್ದೇಶಕ ಪ್ರೊ. ಹೆಚ್.ಟಿ.ವೆಂಕಟೇಶಮೂರ್ತಿ, ಮೈಸೂರು ವಿವಿ ಆಡಳಿತಾಧಿಕಾರಿ ಪ್ರೊ. ಎಸ್.ಟಿ. ರಾಮಚಂದ್ರ, ಪ್ರಾಂಶುಪಾಲ ಪ್ರೊ. ಎ.ಆರ್. ಮದನ್‌ಕುಮಾರ್, ನೇಮಿನಾಥ್ ಇನ್ಫೋಟೆಕ್ ನಿರ್ದೇಶಕ ಶ್ರೇಣಿಕ್ ಜೈನ್, ಅಧ್ಯಕ್ಷತೆ: ಸಹ ಪ್ರಾಧ್ಯಾಪಕರಾದ ಡಾ.ಹೆಚ್.ಪಿ. ಜ್ಯೋತಿ; ಸ್ಥಳ: ಸೆನೆಟ್ ಭವನ, ಮಾನಸಗಂಗೋತ್ರಿ.

■ **ಶ್ರೀ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನ :** ಶ್ರೀ ಮಲೆ ಮಹದೇಶ್ವರಸ್ವಾಮಿ ಪೂಜಾ ಮಹೋತ್ಸವದ ಅಂಗವಾಗಿ ಅನ್ನಸಂತರ್ಪಣೆ, ಸಂಜೆ 7ಕ್ಕೆ ಹುಲಿವಾಹನ ಮೆರವಣಿಗೆ, ಸ್ಥಳ: ದೇವಸ್ಥಾನದ ಆವರಣ, ಕೆ.ಜಿ. ಕೊಪ್ಪಲು, ಮಧ್ಯಾಹ್ನ 12ಕ್ಕೆ.

ಚುನಾವಣಾ ಕರಪತ್ರಗಳು, ಬ್ಯಾನರ್ಸ್, ಹೋರ್ಡಿಂಗ್ಸ್, ಫ್ಲೆಕ್ಸ್ ನಿಯಮಾನುಸಾರ ಬಳಸಿ

ಪ್ರಿಂಟಿಂಗ್ ಪ್ರೆಸ್, ಕೇಬಲ್ ಚಾನಲ್ ಮಾಲೀಕರ ಸಭೆಯಲ್ಲಿ ಡಾ.ಕೆ.ವಿ.ರಾಜೇಂದ್ರ ಸೂಚನೆ

ಮೈಸೂರು,ಮಾ.20– ಚುನಾವಣೆಗೆ ಸಂಬಂಧಿಸಿದ ಕರಪತ್ರಗಳು, ಬ್ಯಾನರ್ಸ್, ಹೋರ್ಡಿಂಗ್ಸ್‌ಗಳು ಹಾಗೂ ಫ್ಲೆಕ್ಸ್‌ಗಳನ್ನು ಜಿಲ್ಲಾಡಳಿತದ ಅನುಮತಿ ಪಡೆದು ನಿಯಮಾನುಸಾರ ಬಳಸಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಡಾ. ಕೆ.ವಿ.ರಾಜೇಂದ್ರ ತಿಳಿಸಿದರು.



ಚುನಾವಣೆಗೆ ಸಂಬಂಧಿಸಿದಂತೆ ಪ್ರಿಂಟಿಂಗ್ ಪ್ರೆಸ್ ಮತ್ತು ಕೇಬಲ್ ಚಾನಲ್ ಮಾಲೀಕರುಗಳೊಂದಿಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಜಾಪ್ರತಿನಿಧಿ ಕಾಯ್ದೆ 127A ಪ್ರಕಾರ ಮುದ್ರಕ ಮತ್ತು ಪ್ರಕಾಶಕರ ಹೆಸರು ಹಾಗೂ ವಿಳಾಸಗಳನ್ನು ಚುನಾವಣಾ ಕರಪತ್ರದ ಮುಖಭಾಗದಲ್ಲಿ ಮುದ್ರಿಸಿರಬೇಕು ಹಾಗೂ ಎಷ್ಟು ಚುನಾವಣಾ ಕರಪತ್ರಗಳನ್ನು ಮುದ್ರಿಸಲಾಗಿದೆ ಎಂಬ ಮಾಹಿತಿಯನ್ನು ಹಂಚಿಕೊಂಡಿರಬೇಕು. ಚುನಾವಣಾ ಕರಪತ್ರವನ್ನು ಮುದ್ರಿಸಿದ ನಂತರ ಅದರ ಪ್ರತಿಯನ್ನು ಜಿಲ್ಲಾಧಿಕಾರಿಗಳ ಕಚೇರಿಗೆ ಕಳುಹಿಸಿಕೊಡಬೇಕು ಎಂದು ಸೂಚಿಸಿದರು.

ಚುನಾವಣೆಗೆ ಸಂಬಂಧಿಸಿದ ಕರಪತ್ರಗಳು, ಫ್ಲೆಕ್ಸ್ ಇತ್ಯಾದಿಗಳನ್ನು ಮುದ್ರಿಸುವ ಮುನ್ನ ಡೆಲಿವರಿ ಚಲನ್ ಅನ್ನು ಜಿಲ್ಲೆಯ ನೋಡಲ್ ಅಧಿಕಾರಿಗಳಿಗೆ ನೀಡಿ ಅವರಿಂದ ಅನುಮತಿ ಪಡೆದ ನಂತರ ಮುದ್ರಿಸಬೇಕು ಇಲ್ಲದಿದ್ದಲ್ಲಿ ಅಂತಹ ಮುದ್ರಣಾಲಯದ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದರು.


7ನೇ ಅಕ್ಟೋಬರ್ 2008ರಲ್ಲಿನ ನಿರ್ದೇಶನದಂತೆ ಹೋರ್ಡಿಂಗ್ಸ್‌ಗಳು, ಫ್ಲೆಕ್ಸ್ ಬೋರ್ಡ್ ಇತ್ಯಾದಿಗಳ ಸಂದರ್ಭದಲ್ಲಿ ಅವುಗಳನ್ನು ಪ್ರದರ್ಶಿಸುವ ಮೊದಲು ಆಸ್ತಿಯ ಮಾಲೀಕರಿಂದ ಪೂರ್ವಾನುಮತಿ ಪಡೆಯುವುದು ಅವಶ್ಯಕ. ಸಾರ್ವಜನಿಕ ಅಥವಾ ಖಾಸಗಿ ಸ್ಥಳದಲ್ಲಿ ಫ್ಲೆಕ್ಸ್ ಬೋರ್ಡ್ ಹಾಗೂ ಕರಪತ್ರಗಳನ್ನು ಪ್ರದರ್ಶಿಸುವಾಗ ಪಕ್ಷದ ಅಭ್ಯರ್ಥಿಯು 7ನೇ ಅಕ್ಟೋಬರ್ 2008ರ ಪತ್ರದೊಂದಿಗೆ ಲಗತ್ತಿಸಲಾದ ನಮೂನೆಯ ಪ್ರಕಾರ ಚುನಾವಣಾ ಅಧಿಕಾರಿಗೆ ಅಂತಹ ಸಂಗ್ರಹಣೆಯ ಎರಡು ಭಾವಚಿತ್ರದೊಂದಿಗೆ ಮಾಹಿತಿಯನ್ನು ನೀಡಬೇಕು ಇಲ್ಲದಿದ್ದಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸಭೆಯಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಪ್ರಿಂಟಿಂಗ್ ಪ್ರೆಸ್ ಮತ್ತು ಕೇಬಲ್ ಚಾನಲ್‌ಗಳ ಮಾಲೀಕರು ಉಪಸ್ಥಿತರಿದ್ದರು.

ವಿಜ್ಞಾನ–ತಂತ್ರಜ್ಞಾನ ಪ್ರಗತಿ ಫಲ ಸಮಾಜದ ಒಳಿತಿಗಾಗಿರಬೇಕು

● ಇಶಾ ಫೌಂಡೇಶನ್ ಸಂಸ್ಥಾಪಕ ಶ್ರೀ ಜಗ್ಗಿ ವಾಸುದೇವ್ ವಿದ್ಯಾರ್ಥಿಗಳಿಗೆ ಕಿವಿಮಾತು
● ಜೆಎಸ್‌ಎಸ್ ವಿಜ್ಞಾನ, ತಾಂತ್ರಿಕ ವಿದ್ಯಾವಿದ್ಯಾನಿಲಯದ 5ನೇ ಘಟಿಕೋತ್ಸವ ಭಾಷಣ





ಮೈಸೂರು, ಮಾ.20(ಎಂಕೆ)– ವಿಜ್ಞಾನ ಮತ್ತು ತಂತ್ರಜ್ಞಾನದ ಪ್ರಗತಿ ಫಲ ಸದಾ ಸಮಾಜದ ಒಳಿತಿಗಾಗಿರಬೇಕು ಎಂದು ಇಶಾ ಫೌಂಡೇಷನ್ ಸಂಸ್ಥಾಪಕ ಶ್ರೀ ಜಗ್ಗಿ ವಾಸುದೇವ್ ನುಡಿದರು.

ಜೆಎಸ್‌ಎಸ್ ವಿಜ್ಞಾನ ಮತ್ತು ತಾಂತ್ರಿಕ ವಿಶ್ವವಿದ್ಯಾಲಯದ 5ನೇ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ವಿಜ್ಞಾನ ಮತ್ತು ತಂತ್ರಜ್ಞಾನ ಉಪಯುಕ್ತವಾಗಿರಬೇಕಾದರೆ, ಅದರ ಉದ್ದೇಶದ ಕಡೆಗೆ ಇಂಜಿನಿಯರ್‌ಗಳು ಗಮನ ಹರಿಸಬೇಕು. ಮೂಲಸೌಕರ್ಯಗಳನ್ನು ಪಡೆಯುವುದಕ್ಕೆ ಸೀಮಿತವಾಗಿದ್ದ ಇಂಜಿನಿಯರಿಂಗ್, ಈಗ ಪ್ರಾಣಿ–ಪಕ್ಷಿಗಳು ಸೇರಿದಂತೆ ಸಕಲ ಜೀವರಾಶಿಗಳ ಉಳಿವಿಗೂ ಅನುಕೂಲಕರವಾಗಿರಬೇಕು ಎಂದು ಹೇಳಿದರು.

ಜ್ಞಾನ ಮತ್ತು ಸಾಮರ್ಥ್ಯ ವೃದ್ಧಿಸಿಕೊಳ್ಳುವುದು ಕೂಡ ಸಬಲೀಕರಣವಾಗಿದ್ದು, ಸಮಾಜ ಬಗ್ಗೆ ಕಾಳಜಿಯುಳ್ಳವರ ಕೈಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ದೊರೆತರೆ ಸಬಲೀಕರಣವಾಗುತ್ತಿದೆ. ಇಲ್ಲವಾದರೆ ಅತ್ಯಂತ ವಿನಾಶಕಾರಿಯಾಗಿ ಪರಿಣಮಿಸಲಿದೆ. ಮುಖ್ಯವಾಗಿ ವಿಜ್ಞಾನ ಮತ್ತು ತಂತ್ರಜ್ಞಾನ ಮಾನವೀಯತೆ ನೆಲೆಗಟ್ಟಿನಲ್ಲಿರಬೇಕು. ಅಲ್ಲದೆ ಇಂಜಿನಿಯರಿಂಗ್‌ನಿಂದ ಅದ್ಭುತಗಳನ್ನು ನಿರ್ಮಾಣ ಮಾಡಬಹುದು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಪ್ಲಾಸ್ಟಿಕ್ ನಂತರ ಪಾಲಿಸ್ಟರ್ ಬಟ್ಟೆ: ಪ್ಲಾಸ್ಟಿಕ್‌ನಂತೆಯೇ ಪಾಲಿಸ್ಟರ್ ಬಟ್ಟೆ ಪರಿಸರ ಮಾಲಿನ್ಯಕ್ಕೆ ಕಾರಣವಾಗಲಿದೆ. ಈಗ ಪ್ಲಾಸ್ಟಿಕ್ ಬಳಕೆ ನಿಲ್ಲಿಸಿ ಎಂಬಂತೆ ಮುಂದಿನ ದಿನಗಳಲ್ಲಿ ಪಾಲಿಸ್ಟರ್ ಬಟ್ಟೆಗಳ ಬಳಕೆ ನಿಲ್ಲಿಸಿ ಎನ್ನುವ ಸಂದರ್ಭ ಬರಲಿದೆ. ಆದ್ದರಿಂದ ಈಗಿನಿಂದಲೇ ಎಚ್ಚರವಹಿಸಬೇಕು. ಸಾಧ್ಯವಾದಷ್ಟು ಪಾಲಿಸ್ಟರ್ ಬಟ್ಟೆಗಳ ಬಳಕೆ ಕಡಿಮೆ ಮಾಡಬೇಕು ಎಂದು ಸಲಹೆ ನೀಡಿದರು.

ಪ್ರಶ್ನೆ ಕೇಳುವವರು ಭಾರತೀಯರೇ: ನಾನು ಸಾಕಷ್ಟು ದೇಶಗಳಲ್ಲಿ ಸುತ್ತಾಡಿದ್ದೇನೆ. ಸಂವಾದಗಳನ್ನು ನಡೆಸಿದ್ದೇನೆ. ಅಲ್ಲೆಲ್ಲವೂ ನನಗೆ ಹೆಚ್ಚು ಪ್ರಶ್ನೆಗಳನ್ನು ಕೇಳಿರುವವರು ಭಾರತೀಯರೇ. ಪ್ರಶ್ನಿಸುವುದು ಈ ನೆಲದ ಒಂದು ಗುಣವಾಗಿದೆ. ಪ್ರಶ್ನಿಸುವ ಪ್ರಜ್ಞೆ ಇರುವುದರಿಂದ ದೇಶ ಅಭಿವೃದ್ಧಿಯತ್ತ ಸಾಗುತ್ತಿದೆ. ಹಾಗೆಯೇ ಮುಂದಿನ 20 ವರ್ಷ ಬಹಳ ಮುಖ್ಯವಾಗಿದ್ದು, ವಿಜ್ಞಾನ ಮತ್ತು ತಂತ್ರಜ್ಞಾನ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ಸಕಾರಾತ್ಮಕ ಅಭಿವೃದ್ಧಿಯತ್ತ ಗಮನ ಹರಿಸುವುದರೊಂದಿಗೆ ಜೀವ ಸಂಕುಲಗಳ ರಕ್ಷಣೆ ಮಾಡಬೇಕಿದೆ ಎಂದರು.

ಮುಕ್ತಾಯ ಎಂದುಕೊಳ್ಳಬೇಡಿ: ಇಂಜಿನಿಯರಿಂಗ್ ಪದವಿ ಮುಗಿಸಿರುವ ವಿದ್ಯಾರ್ಥಿಗಳು ಇಂದಿಗೆ ನಮ್ಮ ಕಲಿಕೆ ಮುಕ್ತಾಯ ಎಂದುಕೊಳ್ಳಬೇಡಿ. ಇನ್ನೂ ಮುಂದೆಯೇ ನಿಮ್ಮ ಇಂಜಿನಿಯರಿಂಗ್ ಕಲಿಕೆ ಪ್ರಾರಂಭವಾಗುವುದು. ವಚನ ಸ್ವೀಕಾರವನ್ನು ನೀವು ನಿಮ್ಮ ಹೃದಯದಲ್ಲಿ ಇಟ್ಟುಕೊಳ್ಳಬೇಕು. ನಿಮಗೆ ತಿಳಿದಿರುವುದನ್ನು ನಿಮಗಾಗಿ ಮತ್ತು ನಿಮ್ಮ ಸುತ್ತಲು ಉತ್ತಮ ಸಮಾಜ ಸೃಷ್ಟಿಸಲು ಉಪಯೋಗಿಸಬೇಕು. ನಾನೇ ದೊಡ್ಡವನು, ನನ್ನದೆ ಎಲ್ಲಾ ಎಂದುಕೊಳ್ಳದಿರಿ ಎಂದು ಕಿವಿಮಾತು ಹೇಳಿದರು.

ಮಹಿಳಾ ಇಂಜಿನಿಯರ್‌ಗಳ ಹೆಚ್ಚಳ: ಕಳೆದ 30 ವರ್ಷ ಹಿಂದೆ ಮಹಿಳಾ ಇಂಜಿನಿಯರ್‌ಗಳ ಸಂಖ್ಯೆ ಸಾಕಷ್ಟು ಕಡಿಮೆ ಇತ್ತು. ಇಂದು ಇಂಜಿನಿಯರಿಂಗ್ ಪದವಿ ಪಡೆಯುವುದರಲ್ಲಿ ಮಹಿಳಾ ವಿದ್ಯಾರ್ಥಿಗಳೇ ಹೆಚ್ಚಾಗಿರುವುದು ಸಂತಸ ಪಡುವ ವಿಚಾರವಾಗಿದೆ ಎಂದರು. ಇದೇ ವೇಳೆ ಪದವಿ ಪಡೆದ ವಿದ್ಯಾರ್ಥಿಗಳಿಗೆ ಶುಭ ಕೋರಿದರು.

ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪದವಿ, ಪುರಸ್ಕಾರ ಪ್ರದಾನ

ಮೈಸೂರು, ಮಾ.20(ಎಂಕೆ)– ಮೈಸೂರಿನ ಮಾನಸಗಂಗೋತ್ರಿ ಕ್ಯಾಂಪಸ್‌ನಲ್ಲಿರುವ ಜೆಎಸ್‌ಎಸ್ ವಿಜ್ಞಾನ ಮತ್ತು ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಪದವಿ, ಸ್ನಾತಕೋತ್ತರ ಹಾಗೂ ಪಿಹೆಚ್.ಡಿ ಪದವಿ ಪಡೆದ 1,604 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.

ಎಸ್‌ಜೆಸಿಇ ಆವರಣದಲ್ಲಿ ಸೋಮವಾರ ನಡೆದ 5ನೇ ಘಟಿಕೋತ್ಸವ ಸಮಾರಂಭದಲ್ಲಿ 986 ಬಿಇ, 54 ಬಿಸಿಎ, 176 ಎಂಟೆಕ್, 103 ಎಂಸಿಎ, 47 ಎಂಎಸ್ಸಿ, 227 ಎಂಬಿಎ ಮತ್ತು 11 ಸಂಶೋಧನಾ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಅವರಲ್ಲಿ 34 ವಿದ್ಯಾರ್ಥಿಗಳು ಚಿನ್ನದ ಪದಕದೊಂದಿಗೆ 22 ದತ್ತಿ ಪದಕಗಳನ್ನು ಪಡೆದುಕೊಂಡರು. ಈ ವೇಳೆ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ. ಬೆಟ್‌ಸೂರ್‌ಮಠ್, ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅನಂತಪುರ ಕೇಂದ್ರೀಯ ವಿಶ್ವವಿದ್ಯಾನಿಲಯ ಕುಲಪತಿ ಪ್ರೊ.ಎಸ್.ಎ.ಕೋರಿ, ಬೋರ್ಡ್ ಆಫ್ ಗೌರ್ನರ್ ಡಾ.ಮಂಜುನಾಥ್ ಭಾರ್ಗವ್, ಜೆಎಸ್‌ಎಸ್ ವಿಜ್ಞಾನ ಮತ್ತು ತಾಂತ್ರಿಕ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎ.ಎನ್.ಸಂತೋಷ್ ಕುಮಾರ್, ಪರೀಕ್ಷಾ ನಿಯಂತ್ರಣಾಧಿಕಾರಿ ಪ್ರೊ.ಪಿ.ನಂಜುಂಡಸ್ವಾಮಿ, ಕುಲಸಚಿವ ಪ್ರೊ.ಎಸ್.ಎ.ಧನರಾಜ್ ಮತ್ತಿತರರಿದ್ದರು.

ನಂಬಿಕೆಯೇ ದೇವರು...

ವಿದ್ಯಾರ್ಥಿಯೊಬ್ಬರ ದೇವರು ಎಲ್ಲಿದ್ದಾನೆ? ಎಂಬ ಪ್ರಶ್ನೆಗೆ ಉತ್ತರಿಸಿದ ಇಶಾ ಫೌಂಡೇಷನ್‌ನ ಸಂಸ್ಥಾಪಕ ಶ್ರೀ ಜಗ್ಗಿ ವಾಸುದೇವ್, ನಂಬಿಕೆಯೇ ದೇವರು. ಒಬ್ಬೊಬ್ಬರು ಒಂದೊಂದು ವಿಚಾರಗಳು, ವೃತ್ತಿಗಳ ಮೇಲೆ ನಂಬಿಕೆ ಇಟ್ಟಿದ್ದಾರೆ. ನಂಬಿಕೆಯಲ್ಲಿಯೇ ದೇವರನ್ನು ಕಾಣಬೇಕು. ನಿಮ್ಮ ಅಂತರಾತ್ಮವೇ ದೇವರು ಎಂದು ತಿಳಿಸಿದರು. ಯೋಗ ಕುರಿತು ಮಾತನಾಡಿದ ಅವರು, ನಿಮ್ಮ ಉಸಿರಾಟದ ಮೇಲೆ ಗಮನವಿಟ್ಟು ಅಥವಾ ಏಕಾಗ್ರತೆ ಇರಿಸಿ, ಉಸಿರಾಡುವುದೇ ಯೋಗ. ನಿರಂತರ ಯೋಗ, ಧ್ಯಾನದಿಂದ ಮಾನಸಿಕ ಆರೋಗ್ಯ ವೃದ್ಧಿಯಾಗುತ್ತದೆ ಎಂದರು.

ಹುಲಿ ದಾಳಿಯಿಂದ ಹಸು ಸಾವು

ಮೈಸೂರು, ಮಾ.20(ಎಸ್‌ಪಿಎನ್)– ಹುಲಿ ದಾಳಿ ನಡೆಸಿ ಹಸುವನ್ನು ಕೊಂದು ಹಾಕಿದ ಘಟನೆ ನಂಜನಗೂಡು ತಾಲೂಕು ವಡೆಯನಪುರ ಗ್ರಾಮದಲ್ಲಿ ಸೋಮವಾರ ಮಧ್ಯಾಹ್ನ ನಡೆದಿದೆ.



ಇಲ್ಲಿನ ನಿವಾಸಿ ಶಿವಯ್ಯ ಎಂಬುವವರಿಗೆ ಸೇರಿದ ಜಮೀನಿನಲ್ಲಿ ರೈತ ನಾಗರಾಜೇಗೌಡ ಎಂಬುವರು ತಮ್ಮ ಹಸುಗಳನ್ನು ಸೋಮವಾರ ಬೆಳಗ್ಗೆಯಿಂದಲೂ ಮೇಯಿಸುತ್ತಿದ್ದರು. ಸ್ವಲ್ಪ ದೂರದಲ್ಲಿ ಹೊಂಚು ಹಾಕಿದ್ದ ಹುಲಿ ಏಕಾಏಕಿ ಹಸುವಿನ ಮೇಲೆ ಮಧ್ಯಾಹ್ನ ದಾಳಿ ನಡೆಸಿದೆ.

ಈ ವೇಳೆ ಅಕ್ಕ–ಪಕ್ಕದ ಜಮೀನಿನಲ್ಲಿದ್ದ ರೈತರು ಕಿರುಚಾಡಿದ ಹಿನ್ನೆಲೆಯಲ್ಲಿ ಶಬ್ದಕ್ಕೆ ಹೆದರಿ ಹುಲಿ ಓಡಿ ಹೋಗಿದೆ. ಅಲ್ಲದೆ ರೈತ ನಾಗರಾಜೇಗೌಡ ಹುಲಿ ದಾಳಿಯಿಂದ ಪಾರಾಗಿದ್ದಾರೆ ಎಂದು ಗ್ರಾಮಸ್ಥರು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ವಿಷಯ ಸ್ಥಳಕ್ಕೆ ಆಗಮಿಸಿದ್ದ ಅರಣ್ಯ ಇಲಾಖೆ ಸಿಬ್ಬಂದಿಗೆ ಮಹಜರು ನಡೆಸಿ, ಸರ್ಕಾರದಿಂದ ಬರಬೇಕಾದ ಪರಿಹಾರವನ್ನು ಅತೀ ಶೀಘ್ರದಲ್ಲೇ ತಲುಪಿಸಲಾಗುವುದು ಎಂದು ರೈತರಿಗೆ ಹೇಳಿದ್ದಾರೆ. ಅಲ್ಲದೆ, ಇದೇ ಸ್ಥಳದಲ್ಲಿ 15 ದಿನಗಳ ಹಿಂದೆ ಮಾದೇಗೌಡರಿಗೆ ಸೇರಿದ ಹಸುವಿನ ಮೇಲೆ ಹುಲಿ ದಾಳಿ ನಡೆಸಿ ಕೊಂದು ಹಾಕಿದೆ.

25ಕ್ಕೂ ಹೆಚ್ಚು ಹಸುಗಳು ಹುಲಿ ದಾಳಿಗೆ ಬಲಿ: ಅಂತೆಯೇ ಕಳೆದ 3–4 ತಿಂಗಳಿಂದ ಬಡಗಲಪುರ, ವಡೆಯನಪುರ, ಹಾದನೂರು, ವೆಂಕಟಾಚಲಪುರ ಸೇರಿದಂತೆ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಸುಮಾರು 25ಕ್ಕೂ ಹೆಚ್ಚು ಹಸುಗಳು ಹುಲಿ ದಾಳಿಗೆ ತುತ್ತಾಗಿವೆ. ಈ ಹುಲಿಯನ್ನು ಸೆರೆ ಹಿಡಿಯುವಂತೆ ಹಲವು ಬಾರಿ ಮನವಿ ಮಾಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ನೊಂದ ಗ್ರಾಮಸ್ಥರು 'ಮೈಸೂರು ಮಿತ್ರ'ನೊಂದಿಗೆ ತಮ್ಮ ಅಳಲು ತೋಡಿಕೊಂಡರು.

ಗ್ರಾಮಸ್ಥರಲ್ಲಿ ಆತಂಕ: ಕಳೆದ 3–4 ನಾಲ್ಕು ತಿಂಗಳಿಂದ ಹಸುಗಳ ಮೇಲೆ ಹುಲಿ ದಾಳಿಯಾಗುತ್ತಿರುವುದರಿಂದ ವಡೆಯನಪುರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಸ್ಥರು ಆತಂಕಗೊಂಡಿದ್ದು, ಆದಷ್ಟು ಬೇಗ ಸೆರೆಹಿಡಿಯುವಂತೆ ಜಿಲ್ಲಾಡಳಿತವನ್ನು ಒತ್ತಾಯಿಸಿದ್ದು, ಕೊಂದು ಹಾಕಿರುವ ಹಸುಗಳಿಗೆ ಆದಷ್ಟು ಬೇಗ ಪರಿಹಾರ ನೀಡುವಂತೆ ಒತ್ತಾಯಿಸಿದ್ದಾರೆ.

ರಾಜೀವ್ ನಿವಾಸಕ್ಕೆ ಉಡುಪಿ ಪೇಜಾವರ ಶ್ರೀಗಳ ಭೇಟಿ

ಮೈಸೂರು, ಮಾ.20– ಉಡುಪಿ ಪೇಜಾವರ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದಂಗಳು ಇಂದು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಅವರ ನಿವಾಸಕ್ಕೆ ಭೇಟಿ ನೀಡಿದ್ದರು.



ಶ್ರೀಪಾದಂಗಳ ಪಾದಪೂಜೆ ಮಾಡಿ ಆಶೀರ್ವಾದ ಪಡೆಯುತ್ತಿರುವ ರಾಜೀವ್ ದಂಪತಿ

ಈ ವೇಳೆ ರಾಜೀವ್ ದಂಪತಿ ಶ್ರೀಪಾದಂಗಳ ಪಾದಪೂಜೆ ಮಾಡಿ ಅವರ ಆಶೀರ್ವಾದ ಪಡೆದರು.

ಇದೇ ವೇಳೆ ಮಾತನಾಡಿದ ಶ್ರೀಗಳು, ರಾಜೀವ್ ಅವರು ಸಮಾಜಮುಖಿ ಚಿಂತನೆಗಳನ್ನು ಸಾಕಾರ ಮಾಡುವ ಮನಸ್ಸು ಹೊಂದಿದ್ದಾರೆ. ಈಗಾಗಲೇ ಸಾಕಷ್ಟು ಇಂತಹ ಸತ್ಕಾರ್ಯಗಳನ್ನು ಮಾಡಿ ತಮ್ಮ ಸಾಮರ್ಥ್ಯವನ್ನು ತೋರಿದ್ದಾರೆ. ಇಂತಹವರಿಗೆ ಪರಿಪೂರ್ಣ ಅವಕಾಶ ಸಿಗಬೇಕು. ಇದಕ್ಕೆ ಭಗವಂತನ ಕೃಪೆ ಕೂಡಿಬರಲಿ ಎಂದು ಆಶೀರ್ವದಿಸಿದರು.

ರಾಮನವಮಿಗೆ ಪೂರ್ವಭಾವಿಯಾಗಿ ಅಯೋಧ್ಯೆಯಲ್ಲಿ 9 ದಿನಗಳ ಉತ್ಸವ ನಡೆಯಲಿದೆ. ಇದರಲ್ಲಿ ತಾವೂ ಪಾಲ್ಗೊಳ್ಳುತ್ತಿದ್ದು ಇನ್ನು ಒಂದು ವರ್ಷದಲ್ಲಿ ರಾಮಮಂದಿರ ನಿರ್ಮಾಣ ಪೂರ್ಣವಾಗಬೇಕಿದೆ. ಅಲ್ಲಿಗೆ ನಮ್ಮ ಕಾರ್ಯ ಮುಗಿಯುವುದಿಲ್ಲ. ಇನ್ನಿತರೆಡೆಗೆ ನಮ್ಮ ಕನಸು ನನಸಾಗಬೇಕಿದೆ. ಅತ್ತ ಗಮನ ಹರಿಸುವುದಾಗಿ ತಿಳಿಸಿದರು.

ಬ್ರಾಹ್ಮಣ ಸಮುದಾಯ ಶಾಸಕ ರಾಮದಾಸ್ ವಿರುದ್ಧ ಅಪಸ್ವರ ಕೇಳಿಬರುತ್ತಿರುವ ವಿಚಾರವಾಗಿ ಮಾತನಾಡಿದ ಶ್ರೀಗಳು ಇದರ ಮೂಲದ ಬಗ್ಗೆ ನಮಗೆ ಅರಿವಿಲ್ಲ. ರಾಮದಾಸ್ ಅವರ ವಿಷಯದಲ್ಲಿ ತತ್‌ಕ್ಷಣಕ್ಕೆ ಯಾವುದೇ ನಿರ್ಧಾರಕ್ಕೆ ಬರಲಾಗದು. ಆದರೆ ಸಮುದಾಯ ನಮ್ಮ ಬಳಿ ಕೆಲವು ವಿಚಾರಗಳನ್ನು ಹೇಳಿಕೊಂಡಿದೆ. ಯಾರ ಪರ ಇಲ್ಲವೇ ವಿರುದ್ಧವಾಗಿ ನಾವು ಚಿಂತನೆ ನಡೆಸುವ ಕಾರ್ಯಕ್ಕೆ ಹೋಗುವುದಿಲ್ಲ. ಎಲ್ಲವೂ ಮುಂದೆ ನಿರ್ಧಾರವಾಗಲಿದೆ ಎಂದರು.

ಮೈಸೂರು ದಟ್ಟಗಳ್ಳಿ 3ನೇ ಹಂತದಲ್ಲಿ 2.60 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ

15 ಲಕ್ಷ ಲೀಟರ್ ಸಾಮರ್ಥ್ಯದ ಜಲಸಂಗ್ರಹಗಾರ ಉದ್ಘಾಟನೆ

2,600 ಮನೆಗಳಿಗೆ ನಿತ್ಯ 24 ಗಂಟೆಯೂ ಕಬಿನಿ ಕುಡಿಯುವ ನೀರು; ಶಾಸಕ ಜಿ.ಟಿ.ದೇವೇಗೌಡ



ಮೈಸೂರು,ಮಾ.20(ಪಿಎಂ)– ಮೈಸೂರು ಮಹಾನಗರ ಪಾಲಿಕೆಯ ವಾರ್ಡ್ ನಂ.46ರ ದಟ್ಟಗಳ್ಳಿ 3ನೇ ಹಂತದಲ್ಲಿ ನಿರ್ಮಿಸಿರುವ 15 ಲಕ್ಷ ಲೀಟರ್ ಸಾಮರ್ಥ್ಯದ ಮೇಲ್ಮಟ್ಟದ ಜಲಸಂಗ್ರಹಾಗಾರದ ಉದ್ಘಾಟನೆಯನ್ನು ಶಾಸಕ ಜಿ.ಟಿ.ದೇವೇಗೌಡ ಸೋಮವಾರ ನೆರವೇರಿಸಿದರು.

2.60 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ ಜಲಸಂಗ್ರಹಾಗಾರ ಉದ್ಘಾಟನೆಯನ್ನು ವಾಲ್ವ್ ತಿರುಗಿಸುವ ಮೂಲಕ ನೆರವೇರಿಸಿ ಮಾತನಾಡಿದ ಶಾಸಕರು, ಚಾಮುಂಡೇಶ್ವರಿ ಕ್ಷೇತ್ರದ ದಟ್ಟಗಳ್ಳಿಯ ಜಿ.ಹೆಚ್.ಜೆ ಬ್ಲಾಕ್‌ನ ಸುಮಾರು 2,600 ಮನೆಗಳಿಗೆ ನಿತ್ಯ 24 ಗಂಟೆಯೂ ಕಬಿನಿ ಕುಡಿಯುವ ನೀರು ಇಂದಿನಿಂದ ದೊರೆಯಲಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಕಬಿನಿ ಕುಡಿಯುವ ನೀರು ಬೇಕೆಂಬುದು ಇಲ್ಲಿನ ನಿವಾಸಿಗಳ ಬಹುದಿನಗಳ ಬೇಡಿಕೆಯಾಗಿತ್ತು. ಅದು ಇಂದು ಈಡೇರಿದೆ ಎಂದ ಶಾಸಕರು, ರಾಮಕೃಷ್ಣನಗರ ಐ ಬ್ಲಾಕ್‌ನಲ್ಲಿ ಕುಡಿಯುವ ನೀರಿನ ತೊಂದರೆ ಇದ್ದು, ಮೂರು ದಿನಗಳಲ್ಲಿ ಅಲ್ಲಿಗೆ ಕುಡಿಯುವ ನೀರನ್ನು ಒದಗಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಮೇಯರ್ ಶಿವಕುಮಾರ್, ಪಾಲಿಕೆ ಸದಸ್ಯೆ ಲಕ್ಷ್ಮೀ ಮಾದೇಗೌಡ, ಆಯುಕ್ತ ಲಕ್ಷ್ಮೀಕಾಂತ ರೆಡ್ಡಿ, ಅಧೀಕ್ಷಕ ಅಭಿಯಂತರ ಮಹೇಶ್, ಮುಖಂಡರಾದ ರಮೇಶ್, ಭೂಮಿ ನಾರಾಯಣ್, ಶಿವಪ್ರಕಾಶ್, ಶಶಿಕುಮಾರ್, ಜಗದೀಶ್ ಸೇರಿದಂತೆ ದಟ್ಟಗಳ್ಳಿ ನಿವಾಸಿಗಳು ಹಾಜರಿದ್ದರು.

ನಂಜನಗೂಡು ತಾಪಂನಲ್ಲಿ ಅವ್ಯವಹಾರ ; ಆರೋಪ



ಮೈಸೂರು,ಮಾ.20(ಪಿಎಂ)– ನಂಜನಗೂಡು ತಾಲೂಕು ಪಂಚಾಯಿತಿಯಲ್ಲಿ 200 ಕೋಟಿ ರೂ. ಅವ್ಯವಹಾರ ಆಗಿದೆ ಎಂದು ರಾಷ್ಟ್ರೀಯ ಕಿಸಾನ್ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಕೊಂಚೆ ಶಿವರುದ್ರಪ್ಪ ಆರೋಪಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಂಜನಗೂಡು ತಾಲೂಕು ಪಂಚಾಯಿತಿ ವ್ಯಾಪ್ತಿಯ 45 ಗ್ರಾಪಂಗಳಲ್ಲಿ ಒಟ್ಟು 174 ಕೋಟಿ ರೂ. ಸಂಬಂಧ ಯಾವುದೇ ದಾಖಲೆಗಳು ಇಲ್ಲ. ಅಲ್ಲದೆ, 28 ಕೋಟಿ ಹೆಚ್ಚುವರಿ ಬಳಸಿ, ಅದನ್ನು ಸಕಾಲದಲ್ಲಿ ಸರ್ಕಾರಕ್ಕೆ ಜಮಾ ಮಾಡದೇ ಬಾಕಿ ಉಳಿಸಿಕೊಳ್ಳಲಾಗಿದೆ. ಆದರೆ ಕಾಲಕಾಲಕ್ಕೆ ತಾಪಂ ಇಓ ಅವರು ಸದರಿ ಬಾಕಿ ವಸೂಲಿ ಮಾಡಿಲ್ಲ ಎಂದು ದೂರಿದರು.

ಈ ಅವ್ಯವಹಾರ ಸಂಬಂಧ ಲೋಕಾಯುಕ್ತದಲ್ಲಿ ದೂರು ದಾಖಲಿಸಲಾಗಿದೆ. ಗ್ರಾಪಂಗಳಲ್ಲಿ ನಡೆಯುವ ಅವ್ಯವಹಾರದ ವಿರುದ್ಧ ಸಂಘಟನೆಯು ಹಲವು ವರ್ಷಗಳಿಂದ ಹೋರಾಟ ಮಾಡುತ್ತಿದ್ದು, ನಮ್ಮ ಹೋರಾಟ ಮುಂದುವರೆಯಲಿದೆ ಎಂದರು. ಸಂಘಟನೆಯ ಪದಾಧಿಕಾರಿಗಳಾದ ಹುಳಿಮಾವು ಕುಮಾರ್, ಚಂದ್ರಕಲಾ, ಮಹದೇವಪ್ಪ, ರಾಜಶೇಖರ ಮೂರ್ತಿ, ಮಂಜುಳಾ ಗೋಷ್ಠಿಯಲ್ಲಿದ್ದರು.



ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ದಿ ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರಿಂಗ್ ಸಭಾಂಗಣದಲ್ಲಿ ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರಿಂಗ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 'ಸೈಬರ್ ಸೆಕ್ಯುರಿಟಿ' ಕುರಿತು ಮಹಾರಾಜ ಇನ್‌ಸ್ಟಿಟ್ಯೂಷನ್ ಆಫ್ ಟೆಕ್ನಾಲಜಿಯ ಪ್ರೊಫೆಸರ್ ಡಾ.ಸ್ಮಿತ ಜೋಂಸ್ ಪಿಂಟೋ ಉಪನ್ಯಾಸ ನೀಡಿದರು. ಈ ವೇಳೆ ಸಂಸ್ಥೆಯ ಅಧ್ಯಕ್ಷ ಬಿ.ಎಸ್.ಪ್ರಭಾಕರ್, ಜಂಟಿ ಕಾರ್ಯದರ್ಶಿ ಡಾ.ದೀಪು, ಕಾರ್ಯದರ್ಶಿ ಸುರೇಶ್‌ಬಾಬು ಮತ್ತು ಕಾರ್ಯಕ್ರಮ ಸಂಯೋಜಕ ಅನಿಲ್ ಕುಮಾರ್ ಉಪಸ್ಥಿತರಿದ್ದರು.

ಜಪಾನ್ ಪ್ರಧಾನಿಗೆ ಕರ್ನಾಟಕದ ಶ್ರೀಗಂಧದಿಂದ ತಯಾರಿಸಿದ ಉಡುಗೊರೆ ನೀಡಿದ ಮೋದಿ

ದೆಹಲಿ: ಜಪಾನ್ ಪ್ರಧಾನಿ ಫ್ಯೂಮಿಯೊ ಕಿಶಿದಾ ಎರಡು ದಿನಗಳ ಕಾಲ ಭಾರತ ಪ್ರವಾಸ ಕೈಗೊಂಡಿದ್ದು, ಇಂದು (ಮಾ. 20) ಬೆಳಗ್ಗೆ ಭಾರತಕ್ಕೆ ಆಗಮಿಸಿದ್ದಾರೆ. ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಭೇಟಿ ಬಳಿಕ ಇದೀಗ ಜಪಾನ್ ಪ್ರಧಾನಿ ಫ್ಯೂಮಿಯೊ ಕಿಶಿದಾ ಭಾರತಕ್ಕೆ ಭೇಟಿ ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರನ್ನು ಕಿಶಿದಾ ಭೇಟಿ ಮಾಡಿದ್ದು, ಜಪಾನ್–ಇಂಡಿಯಾ ಫೆಸಿಫಿಕ್ ಕಾರ್ಯತಂತ್ರ ಮತ್ತು ಅದರ ಹೊಸ ರಕ್ಷಣಾ ನಿಲುವು ಕುರಿತು ಚರ್ಚಿಸಿದ್ದಾರೆನ್ನಲಾಗುತ್ತಿದೆ. ಫ್ಯೂಮಿಯೊ ಕಿಶಿದಾ ಜಿ7 ಹಿರೋಷಿಮಾ ಶೃಂಗ ಸಭೆಗೆ ಪ್ರಧಾನಿ ಮೋದಿ ಅವರನ್ನು ಔಪಚಾರಿಕವಾಗಿ ಆಹ್ವಾನಿಸಿದ್ದಾರೆ. ಇದೇ ವೇಳೆ ಪ್ರಧಾನಿ ಮೋದಿ ಫ್ಯೂಮಿಯೊ ಕಿಶಿದಾ ಅವರಿಗೆ ಶುದ್ಧ ಶ್ರೀಗಂಧ ಮರದಿಂದ ತಯಾರಿಸಲ್ಪಟ್ಟ ವಿಶೇಷವಾದ ಬುದ್ಧನ ಪ್ರತಿಮೆಯನ್ನು ಉಡುಗೊರೆಯಾಗಿ ನೀಡಿದ್ದಾರೆ. ಆ ಮೂಲಕ ಕರ್ನಾಟಕದ ಕಲಾ ಪರಂಪರೆಯನ್ನು ವಿಶ್ವದೆಲ್ಲೆಡೆ ಪಸರಿಸಿದ್ದಾರೆ.



ಸಮಾಜದಲ್ಲಿ ಕೆಟ್ಟ ರೀತಿಯ ಪೈಪೋಟಿ ಹೆಚ್ಚುತ್ತಿದೆ

ಲೋಕಾಯುಕ್ತ ವಿಶ್ರಾಂತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಆತಂಕ

ಮೈಸೂರು, ಮಾ. 20(ಎಸ್‌ಪಿಎನ್)– ಅನ್ಯ ಮಾರ್ಗದಲ್ಲಿ ಅಧಿಕಾರಕ್ಕೆ ಹಾಗೂ ಶ್ರೀಮಂತರಾಗುವ ಪ್ರಯತ್ನ ನಡೆಯುತ್ತಿದೆ. ಇದು ಸಮಾಜದಲ್ಲಿ ಕೆಟ್ಟ ರೀತಿ ಪೈಪೋಟಿ ಹೆಚ್ಚುತ್ತಿದೆ ಎಂದು ಲೋಕಾಯುಕ್ತ ವಿಶ್ರಾಂತ ನ್ಯಾಯಮೂರ್ತಿ ಎನ್.ಸಂತೋಷ ಹೆಗ್ಡೆ ಆತಂಕ ವ್ಯಕ್ತಪಡಿಸಿದರು.



ಮೈಸೂರು ಹೂಟಗಳ್ಳಿಯಲ್ಲಿರುವ ದಕ್ಷ ಕಾಲೇಜು ಸಭಾಂಗಣದಲ್ಲಿ ಗ್ಲೋಬಲ್ ಎಜುಕೇಶ್ ಟ್ರಸ್ಟ್, ಆತ್ಮಶ್ರೀ ಕನ್ನಡ ಸಾಂಸ್ಕೃತಿಕ ಪ್ರತಿಷ್ಠಾನದ ಸಹಯೋಗದೊಂದಿಗೆ ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನ ಹಾಗೂ 'ಇಂಡಿಯಾ ಅಂಡ್ ದಿ ಯುನೈಟೆಡ್ ನೇಷನ್ಸ್' ಇಂಗ್ಲಿಷ್ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು.

ಕಾನೂನಿನ ಚೌಕಟ್ಟಿನಲ್ಲಿ ಶ್ರೀಮಂತರಾದರೆ, ಅಧಿಕಾರ ಪಡೆದರೆ ಅಪಾಯಕಾರಿ ಅಲ್ಲ. ಆದರೆ, ದುರಾಸೆಯ ಕಾರಣಕ್ಕೆ ತುಂಬಾ ಮಂದಿ ಅಡ್ಡ ಮಾರ್ಗ ಹಿಡಿದಿದ್ದಾರೆ. ಜೈಲಿಗೆ ಹೋಗಿ ಬಂದ ಭ್ರಷ್ಟಾಚಾರಿಗಳನ್ನು ಹಾರ ಹಾಕಿ ಭರ್ಜರಿಯಾಗಿ ಸ್ವಾಗತಿಸಿದರೆ ಕೆಟ್ಟ ಸಂದೇಶ ಕೊಡುತ್ತದೆ. ಇಂತಹವರನ್ನು ಸಮಾಜ ಮುಲಾಜಿಲ್ಲದೆ ಬಹಿಷ್ಕರಿಸಬೇಕು ಎಂದು ಹೇಳಿದರು.

ತೃಪ್ತಿ ಎಂಬುದನ್ನು ಕಂಡುಕೊಳ್ಳದಿದ್ದರೆ ನೈತಿಕ ಜೀವನವೆಂಬುದು ಅಸಾಧ್ಯವಾಗುತ್ತದೆ. ಇತರರ ಕುರಿತು ಮಾನವೀಯತೆಯೇ ನಮ್ಮ ಬದುಕಿನ ಚಾಲಕ ಶಕ್ತಿಯಾಗಬೇಕು. ಇವೆರಡನ್ನೂ ಸಾಧಿಸದೇ ಮಾಡುವ ಕೆಲಸಗಳು ಸಮಾಜಕ್ಕೆ ಅಹಿತವಾಗುವ ಸಾಧ್ಯತೆಯೇ ಹೆಚ್ಚು. ಹೀಗಾಗಿ ಯುವ ಜನರು, ವಿದ್ಯಾರ್ಥಿಗಳು ತೃಪ್ತಿ ಮತ್ತು ಮಾನವೀಯತೆಯ ಗುಣ ಬೆಳೆಸಿಕೊಳ್ಳಬೇಕು ಎಂದರು.

ಇಡೀ ಸಮಾಜವು ಸೇವೆಗಾಗಿ ಕಾಯುತ್ತಿದೆ. ವಿದ್ಯಾರ್ಥಿಗಳು ಈ ಸೇವಾ ಮನೋಭಾವ ಮೈಗೂಡಿಸಿಕೊಳ್ಳಬೇಕು. ಕುವೆಂಪು ಅವರು ಪ್ರತಿಪಾದಿಸಿದ ವಿಶ್ವಮಾನವ ಮೌಲ್ಯವನ್ನು ಪಾಲಿಸುವ ಮೂಲಕ ಶಾಂತಿ ಮತ್ತು ಸೌಹಾರ್ದ ವಾತಾವರಣ ನಿರ್ಮಿಸಲು ಶ್ರಮಿಸಬೇಕು ಎಂದು ಸಲಹೆ ನೀಡಿದರು.

ಸಮಾರಂಭ ಉದ್ಘಾಟಿಸಿ ಮಾತನಾಡಿದ ವಿಧಾನಪರಿಷತ್ತಿನ ಮಾಜಿ ಸದಸ್ಯ ಡಿ.ಎಸ್. ವೀರಯ್ಯ, ರಾಜಕೀಯ, ಮಾಧ್ಯಮ, ಸಾಹಿತ್ಯ ವ್ಯಾಪಾರೀಕರಣಗೊಂಡಿವೆ. ಅತಿಯಾದ ಆಸೆಯಿಂದ ಸಮಾಜ ರೋಗಗ್ರಸ್ತವಾಗಿದೆ. ಜಾತಿ ವ್ಯವಸ್ಥೆಯಿಂದ ಕೊಳೆತು ನಾರುತ್ತಿದೆ. ಆದರ್ಶಗಳು ಕಣ್ಮರೆಯಾಗುತ್ತಿವೆ. ಇಂತಹ ಸಂದರ್ಭದಲ್ಲಿ ಬುದ್ಧ, ಬಸವ, ಅಂಬೇಡ್ಕರ್, ಕುವೆಂಪು ಅವರ ಆದರ್ಶಗಳು ನಮಗೆ ಬೆಳಕಾಗಿವೆ ಎಂದರು.

ಈ ವೇಳೆ ದಕ್ಷ ಕಾಲೇಜಿನ ಸಂಸ್ಥಾಪಕ ಅಧ್ಯಕ್ಷರಾದ ಡಾ.ಪಿ. ಜಯಚಂದ್ರ ರಾಜು ಅವರ 'ಇಂಡಿಯಾ ಅಂಡ್ ದಿ ಯುನೈಟೆಡ್ ನೇಷನ್ಸ್' ಇಂಗ್ಲಿಷ್ ಪುಸ್ತಕ ಬಿಡುಗಡೆ ಮಾಡಲಾಯಿತು. ಈ ವೇಳೆ ಸ್ಪಂದನ ಸಾಂಸ್ಕೃತಿಕ ಪರಿಷತ್ತಿನ ಅಧ್ಯಕ್ಷ ಟಿ. ಸತೀಶ್ ಜವರೇಗೌಡ, ಡಾ. ಮೂಗೂರು ಮಧು ದೀಕ್ಷಿತ್ ಗುರೂಜಿ, ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ.ಎಸ್.ಎ. ಮೋಹನ್ ಕೃಷ್ಣ, ಕಿರುತೆರೆ ನಟಿ ಭಾರತಿ ಹೆಗಡೆ, ಸಮಾಜ ಸೇವಕ ಗೋವಿಂದಹಳ್ಳಿ ಕೃಷ್ಣೇಗೌಡ, ಆತ್ಮಶ್ರೀ ಕನ್ನಡ ಸಾಂಸ್ಕೃತಿಕ ಪ್ರತಿಷ್ಠಾನದ ಅಧ್ಯಕ್ಷ ಡಾ. ಗುಣವಂತ ಮಂಜು ಉಪಸ್ಥಿತರಿದ್ದರು. ಈ ವೇಳೆ ವಿವಿಧ ಕ್ಷೇತ್ರದ ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರು ಮಿತ್ರ ಮಂಗಳವಾರ 21 ಮಾರ್ಚ್ 2023

ಶಾಸಕ ಕೆ.ಜಿ. ಬೋಪಯ್ಯರಿಂದ ನಿರೀಕ್ಷಿತ ಅಭಿವೃದ್ಧಿ ಕಾರ್ಯ ನಡೆದಿಲ್ಲ

ಕೊಡಗು ಹಕ್ಕು ಸಂರಕ್ಷಣಾ ಸಮಿತಿ ಆರೋಪ

ಮಡಿಕೇರಿ, ಮಾ.20– ವಿರಾಜಪೇಟೆ ವಿಧಾನಸಭಾ ಕ್ಷೇತ್ರದಲ್ಲಿ ಶಾಸಕ ಕೆ.ಜಿ. ಬೋಪಯ್ಯ ಅವರ ಅಧಿಕಾರದ ಅವಧಿಯಲ್ಲಿ ನಿರೀಕ್ಷಿತ ಅಭಿವೃದ್ಧಿ ಕಾರ್ಯಗಳು ನಡೆದಿಲ್ಲವೆಂದು ನಾಪೋಕ್ಲುವಿನ ಕೊಡಗು ಹಕ್ಕು ಸಂರಕ್ಷಣಾ ಸಮಿತಿಯ ಪ್ರಮುಖರಾದ ಬಿದ್ದಾಟಂಡ ರೋಜಿ ಚಿಣ್ಣಪ್ಪ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನಪ್ರತಿನಿಧಿಗಳ ಕಾರ್ಯವೈಖರಿಯನ್ನು ಮುಕ್ತವಾಗಿ ಮೆಚ್ಚುವುದು ಮತ್ತು ಟೀಕಿಸುವುದು ಮತದಾರನ ಹಕ್ಕಾಗಿದೆ. ಇದನ್ನು ಜನಪ್ರತಿನಿಧಿಗಳು ಕ್ರೀಡಾ ಮನೋಭಾವದಿಂದ ಸ್ವೀಕರಿಸಬೇಕೆಂದು ಅಭಿಪ್ರಾಯಿಸಿದರು. ವಿರಾಜಪೇಟೆ ಕ್ಷೇತ್ರ ವ್ಯಾಪ್ತಿಯಲ್ಲಿ ನಡೆದಿರುವ ರಸ್ತೆಗಳ ದುರಸ್ತಿ ಕಾರ್ಯ, ಶಂಕುಸ್ಥಾಪನೆಗಳನ್ನೇ ಒಟ್ಟಾಗಿ ಕ್ಷೇತ್ರದ ಅಭಿವೃದ್ಧಿಯೆಂದು ಪರಿಗಣಿಸಲು ಬರುವುದಿಲ್ಲವೆಂದು ಹೇಳಿದರು. ಕ್ಷೇತ್ರಕ್ಕೆ ಒಳಪಟ್ಟ ನಾಪೋಕ್ಲು, ಅಮ್ಮತ್ತಿ, ಗೋಣಿಕೊಪ್ಪ, ಪೊನ್ನಂಪೇಟೆ, ಶ್ರೀಮಂಗಲ, ಕುಟ್ಟ ಮೊದಲಾದೆಡೆ ಇಂದಿಗೂ ವ್ಯವಸ್ಥಿತ ಬಸ್ ನಿಲ್ದಾಣಗಳಿಲ್ಲ. ಪೊನ್ನಂಪೇಟೆಯನ್ನು ನೂತನ ತಾಲೂಕಾಗಿ ಘೋಷಿಸಿದ್ದರು, ಇಂದಿಗೂ ಸೂಕ್ತ ವ್ಯವಸ್ಥೆ ಕಲ್ಪಿಸದೆ ಅವ್ಯವಸ್ಥೆಯ ಆಗರವಾಗಿ ಪರಿಣಮಿಸಿದೆ ಎಂದು ಬೇಸರ ವ್ಯಕ್ತಪಡಿಸಿದರು. ದಕ್ಷಿಣ ಕೊಡಗಿನ ಆದಿವಾಸಿ ಯರವ ಜನಾಂಗ ಅಳಿವಿನ ಅಂಚಿನಲ್ಲಿದ್ದರೂ ಆ ಸಮುದಾಯದ ಅಭ್ಯುದಯದ ಬಗ್ಗೆ ಯಾವುದೇ ಚಿಂತನೆಗಳು ನಡೆದಿಲ್ಲವೆಂದು ಆರೋಪಿಸಿದರು. ಕೊಡಗಿನ ಕೆಎಸ್‌ಆರ್‌ಟಿಸಿ ವಿಭಾಗವನ್ನು ಮಡಿಕೇರಿಯ ಬದಲು ಪುತ್ತೂರಿಗೆ ವರ್ಗಾಯಿಸಿರುವ ಕ್ರಮ, ಭಾಗಮಂಡಲ–ತಲಕಾವೇರಿ ದೇವಸ್ಥಾನ ವ್ಯವಸ್ಥಾಪನಾ ಸಮಿತಿಗೆ ನೂತನ ಆಡಳಿತ ಮಂಡಳಿ ನೇಮಕಕ್ಕೆ ನಿರುತ್ಸಾಹ ತೋರುತ್ತಿರುವುದಾಗಿ ಟೀಕಿಸಿದರು.

ಹೊಸ ಅಭ್ಯರ್ಥಿಯನ್ನು ನಿಲ್ಲಿಸಿ: ವಿರಾಜಪೇಟೆ ವಿಧಾನಸಭಾ ಕ್ಷೇತ್ರಕ್ಕೆ ಪಕ್ಷದ ವರಿಷ್ಠರು ನಿಷ್ಠಾವಂತ ಕಾರ್ಯಕರ್ತರನ್ನು ಗುರುತಿಸಿ ಟಿಕೆಟ್ ನೀಡಬೇಕೆಂದು ಆಗ್ರಹಿಸಿದರು. ಪಕ್ಷ ಈ ನಿಟ್ಟಿನಲ್ಲಿ ಚಿಂತಿಸದಿದ್ದಲ್ಲಿ ಮುಂಬರುವ ಚುನಾವಣೆಯಲ್ಲಿ ಪಕ್ಷಕ್ಕೆ ಹಿನ್ನಡೆಯಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಮುಕ್ಕಾಟಿರ ಬಾಬಿ ಚೀಯಣ್ಣ ಉಪಸ್ಥಿತರಿದ್ದರು.

ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ವಸ್ತ್ರದ್‌ರಿಂದ ಮತಗಟ್ಟೆಗಳ ಪರಿಶೀಲನೆ



ಮಡಿಕೇರಿ, ಮಾ.20– ಮತದಾರರ ಶಿಕ್ಷಣ ಮತ್ತು ಸಹಭಾಗಿತ್ವ ಸಮಿತಿ(ಸ್ವೀಪ್) ರಾಜ್ಯ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ್ ಅವರು ಸೋಮವಾರ ನಗರದ ಹಿಲ್ ರಸ್ತೆಯಲ್ಲಿ ಇರುವ ನಗರಸಭಾ ಹಿರಿಯ ಪ್ರಾಥಮಿಕ ಶಾಲೆ, ಮಹದೇವಪೇಟೆಯ ನಗರಸಭಾ ಹಿರಿಯ ಪ್ರಾಥಮಿಕ ಶಾಲೆ, ಸಂತ ಜೋಸೆಫರ ಕಾಲೇಜು ಹಾಗೂ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜಿನ ಮತಗಟ್ಟೆ ಕೇಂದ್ರಗಳಿಗೆ ಭೇಟಿ ನೀಡಿ, ವೀಕ್ಷಿಸಿದರು.

ರ‍್ಯಾಂಪ್ ವ್ಯವಸ್ಥೆ ಮಾಡಬೇಕು. ಜೊತೆಗೆ ರೈಲಿಂಗ್ಸ್ ಇರಬೇಕು. ಗಾಲಿ ಕುರ್ಚಿ ವ್ಯವಸ್ಥೆ ಮಾಡಬೇಕು. ಒಂದು ಮತಗಟ್ಟೆಯಲ್ಲಿ 80 ವರ್ಷ ಮೇಲ್ಪಟ್ಟವರು ಎಷ್ಟು ಮಂದಿ ಇದ್ದಾರೆ ಎಂಬುದನ್ನು ಖಾತರಿ ಪಡಿಸಿಕೊಳ್ಳಬೇಕು ಎಂದು ಪಿ.ಎಸ್.ವಸ್ತ್ರದ್ ಅವರು ಬಿಎಲ್‌ಒಗಳಿಗೆ ಸೂಚಿಸಿದರು.

ಮತಗಟ್ಟೆ ಕೇಂದ್ರಗಳಲ್ಲಿ ಕುಡಿಯುವ ನೀರು ವ್ಯವಸ್ಥೆ ಮಾಡಬೇಕು. ಯಾರೂ ಬಿಸಿಲಿನಲ್ಲಿ ನಿಲ್ಲದೆ, ನೆರಳಿನಲ್ಲಿ ಕುಳಿತುಕೊಳ್ಳಲು ವ್ಯವಸ್ಥೆ ಮಾಡಬೇಕು ಎಂದು ಪಿ.ಎಸ್. ವಸ್ತ್ರದ್ ಅವರು ಹೇಳಿದರು. ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಎಲ್ಲರೂ ಮತದಾನ ಮಾಡುವಂತಾಗಲು ಮನವರಿಕೆ ಮಾಡಬೇಕು. ಎಷ್ಟೇ ಕೆಲಸದ ಒತ್ತಡ ಇದ್ದರೂ ಸಹ ಪ್ರಜಾಪ್ರಭುತ್ವ ಬಲಪಡಿಸಲು ಅರ್ಹರೆಲ್ಲರೂ ಮತದಾನ ಮಾಡಬೇಕು. ಆ ನಿಟ್ಟಿನಲ್ಲಿ ಮತ್ತಷ್ಟು ಜಾಗೃತಿ ಮೂಡಿಸುವಂತೆ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಅವರು ಸಲಹೆ ಮಾಡಿದರು.

ನಗರದ ಹಿಲ್ ರಸ್ತೆಯಲ್ಲಿರುವ ನಗರಸಭೆಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮತದಾನದ ಜಾಗೃತಿ ಕುರಿತು ಚಿತ್ರಿಸಲಾಗಿರುವ ಕಲಾಚಿತ್ರವನ್ನು ಗಮನಿಸಿ ಪಿ.ಎಸ್.ವಸ್ತ್ರದ್ ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ಬಳಿಕ ಜಿಪಂ ಕೆಡಿಪಿ ಸಭಾಂಗಣದಲ್ಲಿ ಅಧಿಕಾರಿಗಳ ಜೊತೆ ನಡೆದ ಸಭೆಯಲ್ಲಿ ಮಾಹಿತಿ ಪಡೆದು ಮಾತನಾಡಿದ ಪಿ.ಎಸ್.ವಸ್ತ್ರದ್, ಮತದಾನ ಹೆಚ್ಚಳಕ್ಕೆ ಪ್ರತಿಯೊಬ್ಬರೂ ಜಾಗೃತಿ ಮೂಡಿಸುವಂತಾಗಬೇಕು. ಸ್ವೀಪ್ ಚಟುವಟಿಕೆಗಳನ್ನು ಉತ್ತಮವಾಗಿ ಇದುವರೆಗೆ ಕೈಗೊಳ್ಳಲಾಗಿದೆ. ಚುನಾವಣೆ ಹತ್ತಿರ ಬರುತ್ತಿದ್ದು, ಸ್ವೀಪ್ ಚಟುವಟಿಕೆಗಳನ್ನು ಮತ್ತಷ್ಟು ಹೆಚ್ಚಿಸುವಂತೆ ರಾಜ್ಯ ನೋಡಲ್ ಅಧಿಕಾರಿ ಅವರು ಸಲಹೆ ಮಾಡಿದರು.

ಮತದಾನದ ಮಹತ್ವ ಸಾರುವ ನಿಟ್ಟಿನಲ್ಲಿ ಹಾಲಿನ ಪ್ಯಾಕೆಟ್, ಎಲ್‌ಪಿಜಿ, ಬಸ್ ಟಿಕೆಟ್ ಹಾಗೂ ಇತರೆ ಕಡೆಗಳಲ್ಲಿ ಮತದಾನದ ಮಹತ್ವ ಕುರಿತು ಜಾಗೃತಿ ಮೂಡಿಸಬಹುದಾಗಿದೆ ಎಂದು ಅವರು ಸಲಹೆ ಮಾಡಿದರು.

ಸ್ವೀಪ್ ಸಮಿತಿ ಜಿಲ್ಲಾ ಅಧ್ಯಕ್ಷರು ಹಾಗೂ ಜಿಪಂ ಸಿಇಒ ಡಾ.ಎಸ್.ಆಕಾಶ್, ಉಪ ವಿಭಾಗಾಧಿಕಾರಿ ಯತೀಶ್ ಉಳ್ಳಾಲ್, ಸ್ವೀಪ್ ಸಮಿತಿಯ ರಾಜ್‌ಗೋಪಾಲ್, ನಗರಸಭೆ ಪೌರಾಯುಕ್ತ ವಿಜಯ್, ತಹಶೀಲ್ದಾರ್ ಕಿರಣ್, ಬಿಎಲ್‌ಒಗಳು, ಹಾಗೆಯೇ ಸಭಾ ಕಾರ್ಯಕ್ರಮ ಸಂದರ್ಭದಲ್ಲಿ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿ ಶಬಾನಾ ಎಂ.ಷೇಕ್, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಉಪ ನಿರ್ದೇಶಕ ರಂಗಧಾಮಯ್ಯ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಶೇಖರ್, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಮಂಜುನಾಥ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸತೀಶ್ ಕುಮಾರ್, ತಾಪಂ ಇಒಗಳ ಅಪ್ಪಣ್ಣ, ಜಯಣ್ಣ, ವಿಕಲಚೇತನರ ಅಧಿಕಾರಿ ವಿಮಲ, ಸದಾಶಿವ ಪಲ್ಲೇದ್, ನವೀನ್ ಇತರರು ಇದ್ದರು.

ಭರತನಾಟ್ಯ ಜೂನಿಯರ್ ಪರೀಕ್ಷೆಯಲ್ಲಿ ಕುಶಾಲನಗರದ ಐವರು ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ



ಕುಶಾಲನಗರ, ಮಾ.20– ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ 2023ನೇ ಸಾಲಿನಲ್ಲಿ ನಡೆಸಿದ ಕರ್ನಾಟಕ ಶಾಸ್ತ್ರೀಯ ನೃತ್ಯ ಮತ್ತು ತಾಳವಾದ್ಯ ಪರೀಕ್ಷಾ ವಿಭಾಗದ ಭರತನಾಟ್ಯ ಜೂನಿಯರ್ ಪರೀಕ್ಷೆಯಲ್ಲಿ ಇಲ್ಲಿನ ನಾದಂತ ನಾಟ್ಯ ಮಯೂರಿ ನೃತ್ಯಾಲಯದ ಸಂಸ್ಥೆಯ ಐವರು ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ.

ಪಟ್ಟಣದಲ್ಲಿ ಸಂಗೀತ ನೃತ್ಯ ತರಬೇತಿ ಸಂಸ್ಥೆಯನ್ನು ಆರಂಭಿಸಿ ನೂರಾರು ಆಸಕ್ತ ವಿದ್ಯಾರ್ಥಿಗಳಿಗೆ ವಿದ್ಯೆಯನ್ನು ನೀಡುತ್ತಿದೆ. ಸಂಸ್ಥೆಯ ಮುಖ್ಯಸ್ಥೆ ನಾದಂತ ನಾಟ್ಯ ಮಯೂರಿ ನೃತ್ಯಾಲಯದ ವಿದುಷಿ ಬಿ.ಕೆ.ಮಂಜು ಭಾರ್ಗವಿ ಮಾರ್ಗದರ್ಶನದಲ್ಲಿ ಶಿಕ್ಷಣ ಪಡೆದ ಶಿಷ್ಯರಾದ ಶ್ರೇಣಿಗೌಡ, ಜಲೀಲಿಯಾ, ಶ್ವೇತ, ಅಂಕಿತಾ, ಅಭಿತಾ ಜೂನಿಯರ್ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿ ಜಿಲ್ಲೆಗೆ ಹಾಗೂ ಕಲಾ ಸಂಸ್ಥೆಗೆ ಕೀರ್ತಿ ತಂದಿದ್ದಾರೆ. ಸಂಸ್ಥೆಯ ಆಡಳಿತ ಮಂಡಳಿ ಎಲ್ಲಾ ವಿದ್ಯಾರ್ಥಿಗಳಿಗೂ ಶುಭ ಹಾರೈಸಿ ಅಭಿನಂದಿಸಿದ್ದಾರೆ.

ಮಾ.23, ಅರೆ ಸೇನಾಪಡೆ ನಿವೃತ್ತ ಯೋಧರ ಸಮಾವೇಶ

ಮಡಿಕೇರಿ, ಮಾ.20– ಅರೆ ಸೇನಾಪಡೆ ನಿವೃತ್ತ (ಮಾಜಿ) ಯೋಧರ ಸಮಾವೇಶವು ಮಾರ್ಚ್, 23 ರಂದು ಬೆಳಗ್ಗೆ 10.30 ಗಂಟೆಗೆ ಪೊನ್ನಂಪೇಟೆ ತಾಲೂಕಿನ ಗೋಣಿಕೊಪ್ಪದ ಪರಿಮಳ ಮಂಗಳ ವಿಹಾರ ಸಭಾಂಗಣದಲ್ಲಿ ನಡೆಯಲಿದೆ ಮಾಜಿ ಯೋಧರು ಅನುಭವಿಸುತ್ತಿರುವ ಸಮಸ್ಯೆಗಳು, ಕುಂದು ಕೊರತೆಗಳ ಬಗ್ಗೆ ಸಭೆ ನಡೆಯಲಿದೆ.

ಮಾಜಿ ಅಡ್ವೋಕೇಟ್ ಜನರಲ್ ಎ.ಎಸ್.ಪೊನ್ನಣ್ಣ, ವಿಧಾನಪರಿಷತ್ ಮಾಜಿ ಸದಸ್ಯ ಅರುಣ್ ಮಾಚಯ್ಯ ಅವರು ಸಮಸ್ಯೆಗಳ ಬಗ್ಗೆ ಸಮಾಲೋಚಿಸಿ ವಿಚಾರ ವ್ಯಕ್ತಪಡಿಸಲಿದ್ದಾರೆ. ಫೀಲ್ಡ್ ಮಾರ್ಷಲ್ ಕೊಡವ ಕ್ಷೇಮಾಭಿವೃದ್ಧಿ ಸಂಘ ಹಾಗೂ ಗುರುಮನೆ–12 ಹಾಲಿ ಅಧ್ಯಕ್ಷ ದೇಯಂಡ ಜಯಾಚಂಗಪ್ಪ ಇತರರು ಪಾಲ್ಗೊಳ್ಳಲಿದ್ದಾರೆ.

ಅರೆ ಸೇನಾಪಡೆ ಮಾಜಿ ಯೋಧರು ಕರ್ತವ್ಯ ನಿರತ ಯೋಧರ ಕುಟುಂಬದವರು, ಅವಲಂಬಿತರು ಸಮಾವೇಶಕ್ಕೆ ಆಗಮಿಸುವಂತೆ ಅರೆ ಸೇನಾಪಡೆ ನಿವೃತ್ತ (ಮಾಜಿ) ಯೋಧರ ಒಕ್ಕೂಟದ ಕಾರ್ಯದರ್ಶಿ ನೂರೇರ ಎಂ.ಭೀಮಯ್ಯ ಅವರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಕಾರ್ಯದರ್ಶಿ ಮೊ. 9481057868 ಅನ್ನು ಸಂಪರ್ಕಿಸಬಹುದು.

ಎ.7ಕ್ಕೆ ಉಮ್ಮತ್ ಬೊಳಕ್ ಸ್ಪರ್ಧೆ



ಗೋಣಿಕೊಪ್ಪ, ಮಾ.20– ಕ್ಗಗಟ್ಟ್‌ನಾಡ್ ಹಿರಿಯ ನಾಗರಿಕ ವೇದಿಕೆ ಮತ್ತು ನಿನಾದ ವಿದ್ಯಾಸಂಸ್ಥೆ ಸಹಯೋಗದಲ್ಲಿ ಎ.7 ರಂದು ಪೊನ್ನಂಪೇಟೆ ನಿನಾದ ವಿದ್ಯಾಸಂಸ್ಥೆಯಲ್ಲಿ 'ಉಮ್ಮತ್ ಬೊಳಕ್' ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ವೇದಿಕೆ ಅಧ್ಯಕ್ಷ ಕೊಟ್ಟ್‌ಕತ್ತೀರ ಸೋಮಣ್ಣ ತಿಳಿಸಿದರು.


ಕೊಡವ ಭಾಷಿಕ ಜನಾಂಗಗಳ ಕಲೆಗೆ ಪ್ರೋತ್ಸಾಹ ನೀಡಲು ಉಮ್ಮತ್ತಾಟ್ ಹಾಗೂ ಬೊಳಕಾಟ್ ಸ್ಪರ್ಧೆ ನಡೆಯಲಿದೆ. ಕೊಡವ ಭಾಷಿಕ ಜನಾಂಗಗಳ ತಂಡಗಳು ಉಮ್ಮತ್ತಾಟ್ ಸ್ಪರ್ಧೆಯಲ್ಲಿ ಪಾಲ್ಗೊಳ್ಳಬಹುದಾಗಿದೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಬೊಳಕಾಟ್ ತಂಡವು ಗ್ರಾಮಗಳ ಹೆಸರಿನಲ್ಲಿ ಸ್ಪರ್ಧಿಸಲು ಅವಕಾಶ ನೀಡಲಾಗಿದೆ. ಆಯಾ ಗ್ರಾಮಕ್ಕೆ ಒಳಪಡುವ ತಂಡಗಳು ಬೊಳಕಾಟ್ ತಂಡ ರಚಿಸಿಕೊಂಡು ಸ್ಪರ್ಧಿಸಬಹುದಾಗಿದೆ. ಉಮ್ಮತ್ತಾಟ್ ತಂಡದಲ್ಲಿ 8 ಜನ ನರ್ತಕಿಯರು, ಇಬ್ಬರು ಹಾಡುಗಾರರು ಪಾಲ್ಗೊಳ್ಳಬಹುದು. ಬೊಳಕಾಟ್ ತಂಡದಲ್ಲಿ 10 ಜನರು ಪಾಲ್ಗೊಳ್ಳಬಹುದಾಗಿದೆ. ಏ.1 ರಂದು ನೋಂದಣಿಗೆ ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗೆ 9481931127 ಸಂಪರ್ಕಿಸಬಹುದು ಎಂದು ತಿಳಿಸಿದರು.

ಗೋಷ್ಠಿಯಲ್ಲಿ ವೇದಿಕೆ ಸ್ಥಾಪಕ ಅಧ್ಯಕ್ಷ ಕಾಟಿಮಾಡ ಜಿಮ್ಮಿ ಅಣ್ಣಯ್ಯ, ಕಾರ್ಯದರ್ಶಿ ಚೇಂದೀರ ಎಂ. ಬೋಪಣ್ಣ, ನಿರ್ದೇಶಕ ಕೊಳ್ಳಿಮಾಡ ಎನ್. ಕಾರ್ಯಪ್ಪ, ನಿನಾದ ವಿದ್ಯಾಸಂಸ್ಥೆ ಅಧ್ಯಕ್ಷೆ ಚೇಂದೀರ ನಿರ್ಮಲಾ ಬೋಪಣ್ಣ ಇದ್ದರು.

ವಿದ್ಯಾರ್ಥಿನಿ ನೇಣಿಗೆ ಶರಣು

ಮಡಿಕೇರಿ, ಮಾ.20– ಶಾಲಾ ಬಾಲಕಿಯೋರ್ವಳು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ಸೋಮವಾರಪೇಟೆ ತಾಲೂಕಿನ ಶಿವರಹಳ್ಳಿ ಗ್ರಾಮದಲ್ಲಿ ನಡೆದಿದೆ. ಅಲ್ಲಿನ ನಿವಾಸಿ ಜಿತೇಂದ್ರ ಮತ್ತು ಅಕ್ಷತಾ ದಂಪತಿ ಪುತ್ರಿ ವೈಷ್ಣವಿ (13) ಆತ್ಮಹತ್ಯೆಗೆ ಶರಣಾದ ಬಾಲಕಿಯಾಗಿದ್ದು, ಸೋ.ಪೇಟೆಯ ಖಾಸಗಿ ಶಾಲೆಯೊಂದರಲ್ಲಿ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದ ವೈಷ್ಣವಿ ಕಳೆದ 1 ವಾರದಿಂದ ಖಿನ್ನತೆಗೆ ಒಳಗಾಗಿದ್ದಳು ಎನ್ನಲಾಗಿದ್ದು, ಇದರಿಂದ ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಶಂಕಿಸಲಾಗಿದೆ. ಘಟನೆ ಕುರಿತು ಶನಿವಾರಸಂತೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.



ಕೆಪಿಸಿಸಿ ಅಲ್ಪಸಂಖ್ಯಾತ ವಿಭಾಗದ ಕಾರ್ಯದರ್ಶಿಯಾಗಿ ಎ.ಎ.ಮೊಹಮ್ಮದ್ ಹಾಜಿ ನೇಮಕಗೊಂಡಿದ್ದು, ರಾಜ್ಯಾಧ್ಯಕ್ಷ ಕೆ. ಜಬ್ಬಾರ್ ಹಾಗೂ ಕೆಪಿಸಿಸಿ ಸದಸ್ಯ ಕೆ.ಎ.ಯಾಕೂಬ್ ಆದೇಶ ಪತ್ರವನ್ನು ಮಹಮ್ಮದ್ ಅವರಿಗೆ ಹಸ್ತಾಂತರಿಸಿದರು.

ಕೊಡಗು ವಿವಿಗೆ ಕುಲಪತಿ ನೇಮಕ

ಬೆಂಗಳೂರು, ಮಾ.20– ನೂತನವಾಗಿ ಸ್ಥಾಪಿಸಲ್ಪಟ್ಟಿರುವ ಕೊಡಗು ವಿಶ್ವವಿದ್ಯಾನಿಲಯಕ್ಕೆ ಬಾಗಲಕೋಟೆ ತೋಟಗಾರಿಕೆ ವಿಶ್ವ ವಿದ್ಯಾನಿಲಯದ ಕೆ. ಅಶೋಕ ಸಂಗಪ್ಪ ಆಲೂರು ಅವರನ್ನು ಕುಲಪತಿಯಾಗಿ ನೇಮಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಕೊಳ್ಳೇಗಾಲದಲ್ಲಿ ನೂತನ ಬಸ್ ನಿಲ್ದಾಣ ಲೋಕಾರ್ಪಣೆ





ಚಾಮರಾಜನಗರ, ಮಾ.20– ಜಿಲ್ಲಾ ಉಸ್ತುವಾರಿ ಸಚಿವ ವಿ. ಸೋಮಣ್ಣ ಅವರು ಕೊಳ್ಳೇಗಾಲ ಪಟ್ಟಣದಲ್ಲಿ ನೂತನ ಬಸ್ ನಿಲ್ದಾಣ, ತಾಯಿ ಮಕ್ಕಳ ಆಸ್ಪತ್ರೆ ಹಾಗೂ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಕಚೇರಿಯನ್ನು ಇಂದು ಲೋಕಾರ್ಪಣೆಗೊಳಿಸಿದರು.

ಮೊದಲಿಗೆ ಕೊಳ್ಳೇಗಾಲ ಪಟ್ಟಣದ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಕಚೇರಿ, ಬಳಿಕ ತಾಲೂಕು ಆಸ್ಪತ್ರೆ ಆವರಣದಲ್ಲಿ ನಿರ್ಮಾಣ ಮಾಡಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯನ್ನು ಜಿಲ್ಲಾ ಉಸ್ತುವಾರಿ ಸಚಿವರು ಉದ್ಘಾಟಿಸಿದರು. ತದನಂತರ ಕೊಳ್ಳೇಗಾಲ ಬಸ್ ನಿಲ್ದಾಣದಲ್ಲಿ ನಗರಸಭೆ ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ ನಿರ್ಮಾಣ ಮಾಡಲಾಗಿರುವ ನೂತನ ಬಸ್ ನಿಲ್ದಾಣವನ್ನು ಜನರ ಸೇವೆಗೆ ಸಮರ್ಪಿಸಿದರು.

ಇದೇ ಸಂದರ್ಭದಲ್ಲಿ ಆಯೋಜಿಸಲಾಗಿದ್ದ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಪಟ್ಟಣದ ಈ ನೂತನ ಬಸ್ ನಿಲ್ದಾಣವನ್ನು 23 ಕೋಟಿಗೂ ಹೆಚ್ಚು ವೆಚ್ಚ ಮಾಡಿ ನಿರ್ಮಿಸಲಾಗಿದೆ. ಜನರಿಗೆ ಮೂಲಸೌಕರ್ಯ ಒದಗಿಸುವುದು ಸರ್ಕಾರ ಹಾಗೂ ಜನಪ್ರತಿನಿಧಿಗಳ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಅಗತ್ಯ ಕ್ರಮ ವಹಿಸಿದ್ದೇವೆ ಎಂದರು. ಚಾಮರಾಜನಗರ ಜಿಲ್ಲೆಯಾಗಿ 25 ವರ್ಷ ಪೂರ್ಣಗೊಂಡಿದೆ. ಶೇ. 48 ರಷ್ಟು ಅರಣ್ಯ ಭೂಮಿ ಹೊಂದಿರುವ ಜಿಲ್ಲೆಯು ಮಲೆ ಮಹದೇಶ್ವರಬೆಟ್ಟ, ಬಿಳಿಗಿರಿ ರಂಗನಬೆಟ್ಟದಂತಹ ಯಾತ್ರಾ ಕ್ಷೇತ್ರಗಳನ್ನು ಹೊಂದಿರುವ ಪುಣ್ಯಭೂಮಿಯಾಗಿದೆ. ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿ ಸರ್ಕಾರದ ಮೂಲ ಉದ್ದೇಶವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದರು.

ಸಾಮಾನ್ಯ ಜನರ ನೆರವಿಗೆ ನಿಲ್ಲುವುದು ನಮ್ಮ ಕರ್ತವ್ಯವಾಗಿದೆ. ಗಡಿ ಭಾಗದ ಕಾಡಂಚಿನ ಹಳ್ಳಿಗಾಡಿನ ಪ್ರದೇಶಗಳಿಗೆ ಮೂಲ ಸೌಲಭ್ಯ ಕೊಡಬೇಕಿದೆ. ನೀರು, ರಸ್ತೆಯಂತಹ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಗಮನ ನೀಡಿದ್ದೇವೆ. ಪ್ರಸ್ತುತ ಬಸ್ ನಿಲ್ದಾಣ ಉತ್ತಮವಾಗಿ ನಿರ್ಮಿಸಲಾಗಿದೆ. ಚಾಮರಾಜನಗರ ಜಿಲ್ಲಾ ಕೇಂದ್ರದಲ್ಲಿಯೂ ಬಸ್ ನಿಲ್ದಾಣವನ್ನು ಬೇರೆಡೆಗೆ ಸ್ಥಳಾಂತರ ಮಾಡಿ ನಿರ್ಮಾಣ ಮಾಡಬೇಕಿದೆ ಎಂದು ವಿ. ಸೋಮಣ್ಣ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಎನ್. ಮಹೇಶ್ ಮಾತನಾಡಿ, ಜನರು ಬಸ್ ನಿಲ್ದಾಣವಿಲ್ಲದೆ ಬಿಸಿಲಿನಲ್ಲಿ ನಿಲ್ಲಬೇಕಿತ್ತು. ವಾಹನ ದಟ್ಟಣೆ ಹೆಚ್ಚಾಗಿ ರಸ್ತೆ ಸಂಚಾರಕ್ಕೂ ಅಡಚಣೆಯಾಗಿತ್ತು. ಈ ಎಲ್ಲಾ ಕಾರಣಗಳಿಂದ ಜನರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ನೂತನ ಬಸ್ ನಿಲ್ದಾಣವನ್ನು ಲೋಕಾರ್ಪಣೆ ಮಾಡಲಾಗಿದೆ. ಬಸ್ ನಿಲ್ದಾಣದ ತಳಮಹಡಿಯಲ್ಲಿ ವಾಹನಗಳ ಪಾರ್ಕಿಂಗ್ ವ್ಯವಸ್ಥೆಯಿದೆ. ಲಿಫ್ಟ್ ಅಳವಡಿಕೆ ಸೇರಿದಂತೆ ಕೆಲ ಕೆಲಸಗಳು ಬಾಕಿಯಿದ್ದು ಎಲ್ಲವನ್ನೂ ಸರಿಪಡಿಸಲಿದ್ದೇವೆ ಎಂದರು.

ಶಾಸಕ ಸಿ.ಎಸ್. ನಿರಂಜನ್ ಕುಮಾರ್, ಕಾವೇರಿ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜಿ. ನಿಜಗುಣರಾಜು, ನಗರಸಭಾ ಸದಸ್ಯರು, ಜಿಲ್ಲಾಧಿಕಾರಿ ಡಿ.ಎಸ್. ರಮೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಎಸ್. ಪೂವಿತಾ, ತಹಶೀಲ್ದಾರರಾದ ಮಂಜುಳಾ, ನಗರಸಭೆ ಆಯುಕ್ತ ರಾಜಣ್ಣ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಬಿ. ಶ್ರೀನಿವಾಸ್ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕೊಳ್ಳೇಗಾಲ ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಪಾಟೀಲ್‌ಗೆ ರಾಷ್ಟ್ರೀಯ ಪ್ರಶಸ್ತಿ



ಕೊಳ್ಳೇಗಾಲ, ಮಾ.20– ಕೊಳ್ಳೇಗಾಲ ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಪಾಟೀಲ್ ಅವರು, ಶೈಕ್ಷಣಿಕ ಪ್ರಗತಿ ಅಭ್ಯುದಯಕ್ಕೆ ಸ್ಪಂದನೆ, ಉತ್ತಮ ಆಡಳಿತ ಹಾಗೂ ಹೊಸ ಹೊಸ ಪ್ರಯೋಗಗಳನ್ನು ನಡೆಸಿ ಮೆಚ್ಚುಗೆ ಗಳಿಸಿದ್ದ ಹಿನ್ನೆಲೆ ಕೇಂದ್ರದ ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆಯ ರಾಷ್ಟ್ರೀಯ ಪ್ರಶಸ್ತಿ ಸಂದಿದೆ.

ಚಂದ್ರಪಾಟೀಲ್ ಅವರು ಕೊಳ್ಳೇಗಾಲ ಶೈಕ್ಷಣಿಕ ವಲಯಕ್ಕೆ ಆಗಮಿಸಿ ನಾಲ್ಕು ವರ್ಷಗಳೇ ಸಂದಿದ್ದು, ಅವರ ಆಗಮನದ ಬಳಿಕ 10ನೇ ತರಗತಿ ಫಲಿತಾಂಶ ವೃದ್ಧಿಯಾಗಿದೆ. ಕೋವಿಡ್ ವೇಳೆ ಮಕ್ಕಳು ಕಲಿಕೆಯಲ್ಲಿ ಹಿಂದುಳಿಯಬಾರದೆಂಬ ಸದುದ್ದೇಶದಿಂದ 'ಮನೆಯಲ್ಲಿ ಕಲಿ, ಮನದಲ್ಲಿ ನಲಿ' ಎಂಬ ಕಿರುಹೊತ್ತಿಗೆಯನ್ನು ಮಕ್ಕಳಿಗೆ ವಿತರಿಸಲಾಗಿತ್ತು. ಇದು ಮಕ್ಕಳು ಪ್ರಗತಿ ಹಾಗೂ 10ನೇ ತರಗತಿ ಫಲಿತಾಂಶ ಹೆಚ್ಚಳಕ್ಕೂ ಕಾರಣವಾಗಿತ್ತು. ಅಲ್ಲದೆ, ಬಿಇಓ ಕಚೇರಿಯಲ್ಲಿ ಉತ್ತಮ ಆಡಳಿತ ನಿರ್ವಹಣೆ ಮತ್ತು ಕಚೇರಿಯ ಹೊರಾಂಗಣದ ಅಂದ ಹೆಚ್ಚಿಸಿದ್ದು ಅಲ್ಲದೇ, ಉತ್ತಮ ಪರಿಸರ ವಾತಾವರಣದ ಜೊತೆ ದಾನಿಗಳ ಸಹಕಾರ ಪಡೆದು ಸಾವಿತ್ರಿ ಬಾಯಿ ಫುಲೆ, ಬಾಬಾ ಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಸವೇಶ್ವರರ ಪುತ್ಥಳಿ ಸ್ಥಾಪಿಸಿ ಪ್ರಶಂಸೆಗೂ ಭಾಜನರಾಗಿದ್ದರು.

ಕಚೇರಿಗೆ ಆಗಮಿಸುವ ಶಿಕ್ಷಕರು ಹಾಗೂ ಸಾರ್ವಜನಿಕರು ಕೂರಲು ಕಲ್ಲು ಹಾಸಿನ ಕಂಬ, ಮೇಜು ಹಾಗೂ ಹತ್ತಾರು ಔಷಧಿ ಗಿಡಗಳನ್ನು ಬೆಳೆಸಿ ಪ್ರಶಂಸೆಗೆ ಭಾಜನರಾಗಿದ್ದರು. ಈ ಹಿನ್ನೆಲೆ ಕೇಂದ್ರದ ಮಾನವ ಸಂಪನ್ಮೂಲ ಇಲಾಖೆ ನೀಡುವ ರಾಷ್ಟ್ರೀಯ ಪ್ರಶಸ್ತಿಗೆ ಅವರು ಭಾಜನರಾಗಿದ್ದಾರೆ. ಉತ್ತಮ ಆಡಳಿತ ಹಾಗೂ ಇನ್ನಿತರೆ ಕಾರಣಗಳಿಗಾಗಿ ಕೇಂದ್ರ ಪ್ರತಿ 2 ವರ್ಷಗಳಿಗೊಮ್ಮೆ 4 ಮಂದಿಗೆ ನೀಡುವ ಈ ಪ್ರಶಸ್ತಿಯು ಚಾ.ನಗರ ಜಿಲ್ಲೆಯ ಕೊಳ್ಳೇಗಾಲ ಶೈಕ್ಷಣಿಕ ವಲಯಕ್ಕೆ ಸಂದಿರುವುದು ಹೆಮ್ಮೆಯ ಸಂಗತಿಯಾಗಿದೆ. ಪ್ರಶಸ್ತಿಗೆ ಆಯ್ಕೆಯಾದ ಬಿಇಓಗೆ ಡಿಡಿಪಿಐ ಮಂಜುನಾಥ್, ಸರ್ಕಾರಿ ನೌಕರರ ಸಂಘದ ಚಿಕ್ಕರಾಜು ಅಭಿನಂದಿಸಿದ್ದಾರೆ.

ಕೌಟುಂಬಿಕ ಕಲಹ: ಪತ್ನಿ ಕೊಚ್ಚಿ ಕೊಂದ ಪತಿ

ಚಾಮರಾಜನಗರ, ಮಾ.20– ಕ್ಷುಲ್ಲಕ ವಿಚಾರಕ್ಕೆ ಪತ್ನಿಯನ್ನು ಪತಿ ಮಚ್ಚಿನಿಂದ ಕೊಚ್ಚಿ ಕೊಲೆಗೈದಿರುವ ಘಟನೆ ತಾಲೂಕಿನ ಕೊತ್ತಲವಾಡಿ ಗ್ರಾಮದಲ್ಲಿ ಸೋಮವಾರ ಬೆಳಗಿನ ಜಾವ ನಡೆದಿದೆ.




ಆರೋಪಿ ಮಹೇಶ

ಗ್ರಾಮದ ಕೆ.ಎನ್.ರತ್ನಮ್ಮ (35) ಮೃತ ದುರ್ದೈವಿ. ಮಹೇಶ್ (40) ಕೊಲೆ ಆರೋಪಿ. ತಾನು ಪತ್ನಿಯನ್ನು ಕೊಂದ ವಿಚಾರವನ್ನು ಆತನೇ ಗ್ರಾಮಸ್ಥರ ಮುಂದೆ ಹೇಳಿಕೊಂಡಿದ್ದು, ವಿಷಯ ತಿಳಿದು ಸ್ಥಳಕ್ಕೆ ಗ್ರಾಮಾಂತರ ಪೊಲೀಸ್ ಠಾಣೆಯ ಪೊಲೀಸರು ಧಾವಿಸಿ, ಮೃತದೇಹವನ್ನು ನಗರದ ಸಿಮ್ಸ್ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗೆ ರವಾನಿಸಿ, ಕೊಲೆ ಆರೋಪಿಯನ್ನು ಬಂಧಿಸಿದ್ದಾರೆ.

ಕಾರಣ: ಪತ್ನಿ ಊಟ, ತಿಂಡಿ ಸರಿಯಾಗಿ ಮಾಡುತ್ತಿರಲಿಲ್ಲ. ನನ್ನ ಜೊತೆ ಸರಿಯಾಗಿ ಮಾತನಾಡುತ್ತಿರಲಿಲ್ಲ. ಇದಕ್ಕಾಗಿ ಪದೇ ಪದೆ ಜಗಳ ಆಗುತ್ತಿತ್ತು. ಭಾನುವಾರ ರಾತ್ರಿಯೂ ಊಟದ ವಿಚಾರಕ್ಕೆ ಜಗಳ ನಡೆದು ಕೊಲೆ ಮಾಡಿರುವುದಾಗಿ ಆರೋಪಿ ಪೊಲೀಸರ ಮುಂದೆ ಹೇಳಿಕೊಂಡಿದ್ದಾನೆ.

ಘಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹೂ, ಡಿವೈಎಸ್ಪಿ ಪ್ರಿಯ ದರ್ಶಿನಿ ಸಾಣೆಕೊಪ್ಪ, ಗ್ರಾಮಾಂತರ ಠಾಣೆಯ ಇನ್ಸ್‌ಪೆಕ್ಟರ್ ಎ.ಮಲ್ಲೇಶ, ಸಬ್‌ಇನ್ಸ್‌ಪೆಕ್ಟರ್ ಮಾದೇಶ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. 15 ವರ್ಷದ ಹಿಂದೆ ವಿವಾಹ ವಾಗಿದ್ದ ಈ ದಂಪತಿಗೆ 13 ವರ್ಷದ ಪುತ್ರಿ ಮತ್ತು 10 ವರ್ಷದ ಪುತ್ರನಿದ್ದು, ತಾಯಿ ಹತ್ಯೆಗೀಡಾಗಿ ತಂದೆ ಜೈಲು ಪಾಲಾದ ಕಾರಣ ಮಕ್ಕಳು ಅನಾಥರಾಗಿದ್ದಾರೆ.

ಕೇತಹಳ್ಳಿಯಲ್ಲಿ ವ್ಯಕ್ತಿ ನಾಪತ್ತೆ



ಚಾಮರಾಜನಗರ, ಮಾ.20– ತಾಲೂಕಿನ ಕೇತಹಳ್ಳಿ ಗ್ರಾಮದ ನಿವಾಸಿ ಸಿ. ಮಹೇಶ (42) ಎಂಬಾತ ನಾಪತ್ತೆಯಾಗಿರುವುದಾಗಿ ಚಾಮ ರಾಜನಗರ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


ಈತನ ಎಡ ಕೈ ತೋಳಿನಲ್ಲಿ ದ್ರಾಕ್ಷಾಯಿಣಿ ಎಂದು ಹಚ್ಚೆ ಇದೆ ಎಂದು ಪೊಲೀಸರಿಗೆ ನೀಡಿರುವ ದೂರಿನಲ್ಲಿ ತಿಳಿಸಲಾಗಿದೆ. ಈತನ ಬಗ್ಗೆ ಮಾಹಿತಿ ಇರುವವರು ಚಾಮರಾಜನಗರ ಎಸ್‌ಪಿ ಕಚೇರಿ ದೂ.ಸಂ. 08226–222383, ಚಾಮರಾಜನಗರ ಉಪವಿಭಾಗದ ಡಿವೈಎಸ್‌ಪಿ ಕಚೇರಿ ದೂ.ಸಂ 08226–222090, ಚಾಮರಾಜನಗರ ಗ್ರಾಮಾಂತರ ಪೊಲೀಸ್ ಠಾಣೆ ದೂ.ಸಂ. 08226–222092, ಚಾಮರಾಜನಗರ ಗ್ರಾಮಾಂತರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಮೊ.ಸಂ 9480804646 ಸಂಪರ್ಕಿಸುವಂತೆ ಗ್ರಾಮಾಂತರ ಪೊಲೀಸ್ ಠಾಣೆಯ ಸಬ್‌ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ಕೋರಿದ್ದಾರೆ.

ಚಾ.ನಗರ ವಿವಿಗೆ ಕುಲಪತಿ ನೇಮಕ



ಬೆಂಗಳೂರು, ಮಾ.20– ನೂತನವಾಗಿ ಸ್ಥಾಪಿಸಲ್ಪಟ್ಟಿರುವ ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಮೈಸೂರು ವಿಶ್ವವಿದ್ಯಾನಿಲಯದ ಮನಃಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಎಂ.ಆರ್. ಗಂಗಾಧರ ಅವರನ್ನು ಕುಲಪತಿಯಾಗಿ ನೇಮಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಮಾಂಬಳ್ಳಿಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಭವನ ಉದ್ಘಾಟನೆ



ಚಾಮರಾಜನಗರ, ಮಾ.20– ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಪ್ರಶ್ನಾತೀತ ನಾಯಕರು. ಪ್ರಾತಸ್ಮರಣೀಯರಾದ ಅಂಬೇಡ್ಕರ್ ಅವರು ಸದಾ ನೆನಪಿಸಿಕೊಳ್ಳುವ ಮತ್ತು ಕಗ್ಗತ್ತಲಿನಿಂದ ತುಂಬಿದ್ದ ನಮ್ಮೆಲ್ಲರಿಗೆ ದಾರಿ ತೋರಿಸಿದ ನಾಯಕರು ಎಂದು ಸಂಸದ ವಿ. ಶ್ರೀನಿವಾಸ ಪ್ರಸಾದ್ ಅವರು ತಿಳಿಸಿದರು.

ಯಳಂದೂರು ತಾಲೂಕಿನ ಮಾಂಬಳ್ಳಿ ಗ್ರಾಮದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಿರ್ಮಾಣ ಮಾಡಿರುವ ನೂತನ ಡಾ. ಬಿ.ಆರ್. ಅಂಬೇಡ್ಕರ್ ಭವನವನ್ನು ಉದ್ಘಾಟಿಸಿ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಯನ್ನು ಅನಾವರಣಗೊಳಿಸಿ ಅವರು ಮಾತನಾಡಿದರು.

ನೂರಾರು ವರ್ಷಗಳಿಂದ ಅಸ್ಪೃಶ್ಯತೆಯಿಂದ ಬಳಲುತ್ತಿದ್ದ ಜನಾಂಗದಲ್ಲಿ ಜನಿಸಿ, ಶಿಕ್ಷಣ ಪಡೆದು ಸಂವಿಧಾನ ಬರೆದ ಮಹಾನ್ ನಾಯಕ ಡಾ. ಬಿ.ಆರ್. ಅಂಬೇಡ್ಕರ್ ಅವರು. ನಮಗೂ ಅಂಬೇಡ್ಕರ್ ಅವರಿಗೂ ತಾಯಿ ಮಗುವಿನ ಸಂಬಂಧ ಇದ್ದ ಹಾಗೆ. ಅಂಬೇಡ್ಕರ್ ಅವರು ಮಾತೃ ಹೇಗೆ ಮಗುವಿನ ರಕ್ಷಣೆ ಮಾಡಿ ಪ್ರೀತಿ ವಿಶ್ವಾಸದಿಂದ ಬೆಳವಣಿಗೆಗೆ ಮುಂದಾಗುತ್ತಾರೆಯೋ ಅದೇ ರೀತಿ ಅಂಬೇಡ್ಕರ್ ಅವರು ಸಹ ಎಲ್ಲರ ಬೆಳವಣಿಗೆಗೂ ಕಾರಣರಾಗಿದ್ದಾರೆ ಎಂದರು.

ಅಂಬೇಡ್ಕರ್ ಅವರ ಹೋರಾಟದ ಶ್ರಮದಿಂದ ನಾವೆಲ್ಲರೂ ವಿದ್ಯಾವಂತರು, ಬುದ್ಧಿವಂತರು, ತಿಳಿವಳಿಕೆ ಹೊಂದಿದವರು, ಅಧಿಕಾರಿಗಳು ಆಗಿದ್ದೇವೆ. ಇದಕ್ಕೆ ಮೂಲ ಪ್ರೇರಣೆ ಅಂಬೇಡ್ಕರ್ ಅವರೇ ಆಗಿದ್ದಾರೆ. ಅಸ್ಪೃಶ್ಯರ ಬಗ್ಗೆ ಕಾಳಜಿ ಚಿಂತನೆ ಹೊಂದಿದ್ದ ಅಂಬೇಡ್ಕರ್ ಅವರಿಂದ ಶಿಕ್ಷಣ ಸ್ಥಾನಮಾನ ಲಭಿಸಿದೆ. ನಮ್ಮೆಲ್ಲರಿಗೂ ಅವರೇ ಸ್ಫೂರ್ತಿ ಎಂದು ವಿ. ಶ್ರೀನಿವಾಸ ಪ್ರಸಾದ್ ಅವರು ತಿಳಿಸಿದರು.

ಇಲ್ಲಿ ಅಚ್ಚುಕಟ್ಟಾಗಿ ನಿರ್ಮಾಣವಾಗಿರುವ ಡಾ. ಬಿ.ಆರ್. ಅಂಬೇಡ್ಕರ್ ಭವನಕ್ಕೆ ಇನ್ನೂ ಹಣಕಾಸು ನೆರವನ್ನು ನೀಡಲಾಗುವುದು. ಕಾಂಪೌಂಡ್ ನಿರ್ಮಾಣ ಸೇರಿದಂತೆ ಭವನಕ್ಕೆ ಇನ್ನೂ ಅಗತ್ಯವಿರುವ ಎಲ್ಲಾ ವ್ಯವಸ್ಥೆಗಳನ್ನು ಮಾಡಲಾಗುವುದು. ಅಂಬೇಡ್ಕರ್ ಭವನವನ್ನು ಸದುಪಯೋಗ ಮಾಡಿಕೊಳ್ಳಬೇಕು. ಶೋಷಣೆಗೊಳಗಾದವರು ಸಮಾಜದಲ್ಲಿ ತಲೆ ಎತ್ತಿ ಗೌರವಯುತವಾಗಿ ಬಾಳಬೇಕು. ಅಂಬೇಡ್ಕರ್ ಆಶಯದಂತೆ ಆ ದಿಕ್ಕಿನಲ್ಲಿ ಸಾಗಬೇಕೆಂದು ವಿ. ಶ್ರೀನಿವಾಸ ಪ್ರಸಾದ್ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಎನ್. ಮಹೇಶ್ ಮಾತನಾಡಿ, ಇಲ್ಲಿ ನಿರ್ಮಾಣ ಮಾಡಲಾಗಿರುವ ಡಾ. ಬಿ.ಆರ್. ಅಂಬೇಡ್ಕರ್ ಭವನಕ್ಕೆ 1.55 ಕೋಟಿ ರೂ. ವೆಚ್ಚವಾಗಿದೆ. ಈ ಭವನ ನಿರ್ಮಾಣಕ್ಕೆ ಅನೇಕ ಜನಪ್ರತಿನಿಧಿಗಳ ನೆರವು ಸಿಕ್ಕಿದೆ. ಭವನದಲ್ಲಿ ಅಂಬೇಡ್ಕರ್ ಅವರ ಪ್ರತಿಮೆಯನ್ನು ಸಹ ನಿರ್ಮಾಣ ಮಾಡಲಾಗಿದೆ. ಮುಂದಿನ ತಲೆಮಾರಿನವರೆಗೂ ಪ್ರೇರಣೆಯಾಗಲಿ ಎಂಬ ಉದ್ದೇಶದಿಂದ ಪ್ರತಿಮೆ ಸ್ಥಾಪಿಸಲಾಗಿದೆ. ಅಂಬೇಡ್ಕರ್ ಅವರು ಎಲ್ಲರಿಗೂ ಸ್ಫೂರ್ತಿಯಾಗಲಿ ಎಂದರು.

ಜಿಲ್ಲಾಧಿಕಾರಿ ಡಿ.ಎಸ್. ರಮೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಎಸ್. ಪೂವಿತಾ, ಮಾಂಬಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸಿ. ಇಂದ್ರಮ್ಮ, ಉಪಾಧ್ಯಕ್ಷ ಆರ್. ವರದರಾಜು, ಗ್ರಾಮ ಪಂಚಾಯಿತಿಯ ಸದಸ್ಯರು, ಚಾಮುಲ್ ಅಧ್ಯಕ್ಷ ವೈ.ಸಿ ನಾಗೇಂದ್ರ, ಮುಖಂಡರಾದ ಮಾಂಬಳ್ಳಿ ನಂಜುಂಡಸ್ವಾಮಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಬಿ. ಮಲ್ಲಿಕಾರ್ಜುನ, ತಾಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಎ.ಎಂ. ಕೇಶವಮೂರ್ತಿ ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಮೂರನೇ ಪುಟದಿಂದ

1500 ರೂ. ಭತ್ಯೆ

ಸರ್ಕಾರ ದೇಶದ ಅತ್ಯಂತ ಭ್ರಷ್ಟ ಸರ್ಕಾರ, 40% ಕಮಿಷನ್ ಸರ್ಕಾರ ಎಂದು ಎಲ್ಲ ವರ್ಗದವರು ಹೇಳಿದ್ದಾರೆ. ಗುತ್ತಿಗೆದಾರರ ಸಂಘ, ಶಾಲೆಗಳ ಸಂಸ್ಥೆ ಪ್ರಧಾನಿಗೆ ಪತ್ರ ಬರೆದು ಕರ್ನಾಟಕದಲ್ಲಿ 40% ಕಮಿಷನ್ ಪಡೆಯಲಾಗುತ್ತಿದೆ ಎಂದು ದೂರು ನೀಡಿದ್ದರೂ ಪ್ರಧಾನಮಂತ್ರಿಗಳು ಇದಕ್ಕೆ ಉತ್ತರ ನೀಡಿಲ್ಲ ಎಂದು ಬೊಮ್ಮಾಯಿ ಸರ್ಕಾರದ ವಿರುದ್ಧ ಗದಾಪ್ರಹಾರ ಮಾಡಿದರು. ಮೈಸೂರು ಸ್ಯಾಂಡಲ್ ಸೋಪ್ ಕಾರ್ಪೊರೇಷನ್‌ನಲ್ಲಿ ಹಗರಣ ನಡೆದು ಶಾಸಕನ ಪುತ್ರ ಸಿಕ್ಕಿಬಿದ್ದಾಗ 8 ಕೋಟಿ ಸಿಗುತ್ತದೆ. ಸರ್ಕಾರ ಅವರ ರಕ್ಷಣೆ ಮಾಡುತ್ತದೆ. ಪಿಎಸ್‌ಐ ನೇಮಕಾತಿ, ಸಹಾಯಕ ಪ್ರಾಧ್ಯಾಪಕ, ಸಹಾಯಕ ಇಂಜಿನಿಯರ್ ನೇಮಕಾತಿಯಲ್ಲಿ ಅಕ್ರಮ ನಡೆದಿದೆ. ಈ ಎಲ್ಲಾ ಆರೋಪ ಲಕ್ಷಾಂತರ ಯುವಕರ ದೂರಾಗಿದೆ. ದೆಹಲಿಯ ಸಂಸತ್ತಿನಲ್ಲಿ ನಾನು ಅದಾನಿ ಅವರ ಬಗ್ಗೆ ಮಾತನಾಡುತ್ತಾ ದೇಶದ ಬಂದರು, ವಿಮಾನ ನಿಲ್ದಾಣ, ರಸ್ತೆ ಎಲ್ಲವನ್ನೂ ಅವರಿಗೆ ನೀಡಲಾಗುತ್ತಿದೆ. ರಾಜ್ಯದಲ್ಲಿ ಬಿಜೆಪಿ ಸರ್ಕಾರ ಕೂಡ ಭ್ರಷ್ಟಾಚಾರ ಮಾಡುತ್ತಿದೆ. ಇನ್ನು ಪರಿಶಿಷ್ಟ ಜಾತಿ ಮೀಸಲಾತಿಯನ್ನು ಶೇ.15ರಿಂದ ಶೇ.17ಕ್ಕೆ, ಪರಿಶಿಷ್ಟ ಪಂಗಡಗಳ ಮೀಸಲಾತಿಯನ್ನು ಶೇ.3ರಿಂದ ಶೇ.7ಕ್ಕೆ ಏರಿಸುವ ವಿಚಾರವಾಗಿ ಸರ್ಕಾರ ಪೂರ್ಣಗೊಳಿಸಬೇಕು. ನಾವೆಲ್ಲರೂ ಒಟ್ಟಾಗಿ ಚುನಾವಣೆ ಎದುರಿಸಿ ಪ್ರಚಂಡ ಜಯಗಳಿಸಿ ಬಿಜೆಪಿ ಭ್ರಷ್ಟ ಸರ್ಕಾರವನ್ನು ಕಿತ್ತೊಗೆಯುವಂತೆ ಮಾಡಬೇಕು. ರಾಜ್ಯ ಚುನಾವಣೆ ಸಮಯದಲ್ಲಿ ನೀವು ಯಾವ ಜಿಲ್ಲೆಗೆ ಹೇಳುತ್ತೀರೋ ಅಲ್ಲಿಗೆ ನಾನು ಬರಲು ಸಿದ್ಧ. ನಾವೆಲ್ಲರೂ ಸೇರಿ ಬಿಜೆಪಿಯನ್ನು ಮಣಿಸೋಣ ಎಂದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಈ ಚುನಾವಣೆ ಕರ್ನಾಟಕ ರಾಜ್ಯಕ್ಕೆ ಬಹಳ ಮಹತ್ವವಾದ ಚುನಾವಣೆ. ಇಡೀ ದೇಶಕ್ಕೆ ಈ ಚುನಾವಣೆ ಸಂದೇಶ ನೀಡಲಿದೆ ಎಂದರು. ರಾಜ್ಯದ ಇತಿಹಾಸದಲ್ಲಿ ಇಷ್ಟು ಭ್ರಷ್ಟಾಚಾರ ಇರಲಿಲ್ಲ. ಬಿಜೆಪಿ ಸರ್ಕಾರದಲ್ಲಿ 40% ಕಮಿಷನ್ ತೆಗೆದುಕೊಳ್ಳಲಾಗುತ್ತಿದೆ. ಇದನ್ನು ಗುತ್ತಿಗೆದಾರರ ಸಂಘದ ಅಧ್ಯಕ್ಷರೇ ಹೇಳಿದ್ದಾರೆ. ಅವರು ಮೋದಿ ಅವರಿಗೆ ದೂರು ನೀಡಿದ್ದಾರೆ. ಗುತ್ತಿಗೆದಾರರು ದೂರು ನೀಡಿದಾಗ ಇದರ ತನಿಖೆಗೆ ಅಮಿತ್ ಶಾ, ಅವರು ಯಾಕೆ ಆದೇಶ ಮಾಡಲಿಲ್ಲ. ರಾಹುಲ್ ಗಾಂಧಿ ಅವರು ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಎಲ್ಲಾ ವರ್ಗ, ಸಮುದಾಯದವರನ್ನು ಮಾತನಾಡಿಸುತ್ತಾ ಅವರ ಸಂಕಷ್ಟ ಆಲಿಸಿ 4 ಸಾವಿರ ಕಿ.ಮೀ ಪಾದಯಾತ್ರೆ ಮಾಡಿದ್ದಾರೆ.

ಮೋದಿ ಅವರು ಬೆಳಗಾವಿಗೆ ಬಂದು ನನ್ನ ಬಗ್ಗೆ ಮಾತನಾಡಿದ್ದಾರೆ. ನನ್ನ ರಿಮೋಟ್ ಕಟ್ರೋಲ್ ಬೇರೆಯವರ ಬಳಿ ಇದೆ ಎಂದಿದ್ದಾರೆ. ನಿಮ್ಮ ನಡ್ಡಾ ಅವರ ರಿಮೋಟ್ ಕಂಟ್ರೋಲ್ ಯಾರ ಬಳಿ ಇದೆ. ಅದಾನಿ ಅವರ ಬಗ್ಗೆ ರಾಹುಲ್ ಗಾಂಧಿ ಅವರು ಪ್ರಶ್ನೆ ಕೇಳಿದರೆ ಅದನ್ನು ತೆಗೆದು ಹಾಕುತ್ತಾರೆ. ದೇಶದಲ್ಲಿ ಪ್ರಜಾಪ್ರಭುತ್ವವಿಲ್ಲ, ಜಾತಿವಾದ ಇದೆ, ಜಾತಿ ತಾರತಮ್ಯವಿದೆ ಎಂದು ಹೇಳಿದರೆ ಅದು ತಪ್ಪಾ? ಬಿಜೆಪಿಯವರು ಬರೀ ಸುಳ್ಳು ಹೇಳುತ್ತಿದ್ದಾರೆ.

ಕಾಂಗ್ರೆಸ್ ಪಕ್ಷ ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ ಹಾಗೂ ಯುವನಿಧಿ ಯೋಜನೆ ಘೋಷಣೆ ನೀಡಲಾಗಿದೆ. ದೇಶದಲ್ಲಿ 50 ಲಕ್ಷ ಸರ್ಕಾರಿ ಹುದ್ದೆ ಖಾಲಿ ಇದ್ದರೂ ಅದನ್ನು ತುಂಬುತ್ತಿಲ್ಲ. ಇವರು ಹೇಳಿದ 2 ಕೋಟಿ ಉದ್ಯೋಗ ಎಲ್ಲಿ ಹೋದವು ಗೊತ್ತಿಲ್ಲ. ರಾಜ್ಯದಲ್ಲಿ 2.50 ಲಕ್ಷ ಉದ್ಯೋಗ ಖಾಲಿ ಇದ್ದು, ನಮ್ಮ ಪಕ್ಷ ಅಧಿಕಾರಕ್ಕೆ ಬಂದ ಒಂದೂವರೆ ವರ್ಷಗಳಲ್ಲಿ ಎಲ್ಲಾ ಹುದ್ದೆ ತುಂಬುತ್ತೇವೆ ಎಂದರು. ಇದೇ ಸಂದರ್ಭದಲ್ಲಿ ಮಾತನಾಡಿದ ವಿಧಾನಸಭೆಯ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ, ಬಿಜೆಪಿ ಈ ಚುನಾವಣೆಯನ್ನು ಹಣಬಲದಿಂದ ಗೆಲ್ಲಲು ಪ್ರಯತ್ನಿಸುತ್ತಿದೆ. ಇವರು 40% ಕಮಿಷನ್ ಮೂಲಕ ಹಣ ಲೂಟಿ ಮಾಡಿ ಈಗ ಚುನಾವಣೆಗೆ ಆ ಹಣ ಖರ್ಚು ಮಾಡುತ್ತಿದ್ದಾರೆ ಎಂದರು. ಈ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಉದ್ಯೋಗಾವಕಾಶ ಕಡಿಮೆಯಾಗಿದೆ. ನಾವು ಅಧಿಕಾರದಲ್ಲಿದ್ದಾಗ 1.62 ಲಕ್ಷ ಸರ್ಕಾರಿ ಉದ್ಯೋಗ, 11 ಲಕ್ಷ ಖಾಸಗಿ ಉದ್ಯೋಗ ನೀಡಿದ್ದೆವು. ಇಂತಹ ಸರ್ಕಾರವನ್ನು ಮತ್ತೆ ಅಧಿಕಾರಕ್ಕೆ ತರಬೇಕೇ, ಬೇಡವೇ ಎಂಬ ಚರ್ಚೆ ಆಗಬೇಕು. ರಾಜ್ಯದಲ್ಲಿ ಮತ್ತೆ ಉದ್ಯೋಗ ಸೃಷ್ಟಿಯಾಗಬೇಕಾದರೆ ಅದು ಕಾಂಗ್ರೆಸ್ ಸರ್ಕಾರದಿಂದ ಮಾತ್ರ ಸಾಧ್ಯ. ಇನ್ನು ಶಿಕ್ಷಣ ಕ್ಷೇತ್ರ ಹಾಳು ಮಾಡುತ್ತಿದ್ದಾರೆ. 8ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲು ಆಗಿಲ್ಲ. ನೂತನ ಶಿಕ್ಷಣ ನೀತಿ ಹೆಸರಲ್ಲಿ ಅವೈಜ್ಞಾನಿಕ, ಅವೈಚಾರಿಕ ಶಿಕ್ಷಣ ನೀಡುತ್ತಿದ್ದಾರೆ. ಯುವಕರೇ ನೀವೇ ದೇಶ ಹಾಗೂ ರಾಜ್ಯದ ಭವಿಷ್ಯ. ನೀವು ರಾಜ್ಯ ಹಾಗೂ ರಾಜ್ಯದ ಆರ್ಥಿಕತೆ ಉಳಿಸಬೇಕಾದರೆ ಬಿಜೆಪಿ ಸರ್ಕಾರ ಕಿತ್ತೊಗೆಯಬೇಕು. ಮತ್ತೆ ಕಾಂಗ್ರೆಸ್ ಸರ್ಕಾರವನ್ನು ತರಬೇಕು ಎಂದರು.

ಉರಿಗೌಡ, ನಂಜೇಗೌಡ ವಿಚಾರದ ಚರ್ಚೆ ಬೇಡ

ಇತಿಹಾಸ ಅರಿತವನು ಮತ್ತೊಂದು ಇತಿಹಾಸ ಸೃಷ್ಟಿ ಮಾಡಲು ಸಾಧ್ಯ. ಆಯಾ ಕಾಲದ ಶಿಲಾ ಶಾಸನಗಳು, ತಾಳೆಗರಿಗಳು, ಆ ಕಾಲದ ವ್ಯಕ್ತಿಗಳು ಬರೆದ ಚರಿತ್ರೆಗಳಿಂದ ಇತಿಹಾಸ ಅರಿಯಬೇಕು. ಇಂತಹ ಯಾವುದೇ ಕುರುಹುಗಳು ಇಲ್ಲದಿರುವಾಗ ಏನೇ ಬರೆದರೂ ಅದು ಗೊಂದಲ, ಅನುಮಾನ ಸೃಷ್ಟಿಸುತ್ತದೆ ಎಂದರು.

ಕಲ್ಪನೆ ಮಾಡಿಕೊಂಡು ಬರೆಯುವುದು ಕಾದಂಬರಿ. ಶಾಸನಗಳು, ಹಿಂದಿನ ಇತಿಹಾಸದಲ್ಲಿ ಬಂದಿರುವುದನ್ನು ಮುಂದಿನ ಪೀಳಿಗೆಗೆ ದಾಖಲಿಸುತ್ತದೆ. ಯುವಪೀಳಿಗೆ ಹಾಳು ಮಾಡುವುದನ್ನು, ಸಮುದಾಯಕ್ಕೆ ಧಕ್ಕೆ ತರುವಂತಹ ಕೆಲಸ ಆಗಬಾರದು. ಉರಿಗೌಡ, ನಂಜೇಗೌಡರ ಬಗ್ಗೆ ಶಾಸನಗಳಿದ್ದರೆ, ಇತಿಹಾಸದಲ್ಲಿ ಸಮರ್ಪಕ ಉಲ್ಲೇಖ ಸಿಕ್ಕಿದರೆ ಅವುಗಳನ್ನು ಅಧಿಕೃತವಾಗಿ ಮಠಕ್ಕೆ ತಂದು ಒಪ್ಪಿಸಲಿ. ಎಲ್ಲವನ್ನೂ ಕ್ರೋಢೀಕರಿಸಿ, ಶಾಸನವನ್ನು ಪರಿಶೀಲಿಸುವ ತಾಂತ್ರಿಕ (ಕಾರ್ಬನ್ ಡೇಟಿಂಗ್) ವಿಧಾನವಿದೆ. ಇತಿಹಾಸ ವಿಮರ್ಶೆ ಮಾಡುವ ತಜ್ಞರು ನಮ್ಮಲ್ಲಿದ್ದಾರೆ. ತಂದು ಕೊಟ್ಟ ಮಾಹಿತಿಯನ್ನು ಓರೆಗೆ ಹಚ್ಚಿ ಪರಿಶೀಲನೆ ಮಾಡಲಾಗುವುದು. ಬಳಿಕ ನಿರ್ಧಾರಕ್ಕೆ ಬರಲಾಗುವುದು ಎಂದರು. ಸಮುದಾಯಕ್ಕೆ, ರಾಜ್ಯಕ್ಕೆ ಮಾಡುವ ಕೆಲಸಗಳು ಸಾಕಷ್ಟಿವೆ. ಈ ವಿಚಾರ ಚರ್ಚೆ ಮಾಡುತ್ತಿರುವ ಸಿ.ಟಿ.ರವಿ, ಡಾ.ಅಶ್ವತ್ಥ ನಾರಾಯಣ, ಕೆ.ಗೋಪಾಲಯ್ಯ ಮುಂತಾದವರಿಗೆ ಇತಿಹಾಸ ಹಿನ್ನೆಲೆಯನ್ನು ಮನದಟ್ಟು ಮಾಡಿಕೊಡಲಾಗಿದ್ದು ಅವರೆಲ್ಲರೂ ಸುಮ್ಮನಾಗಬೇಕು. ಈಗಾಗಲೇ ಸುಮ್ಮನಾಗಿದ್ದಾರೆ ಎಂದು ನಾನು ಭಾವಿಸುತ್ತೇನೆ ಎಂದರು. ಸಚಿವ, ನಿರ್ಮಾಪಕ ಮುನಿರತ್ನ ಅವರು ಈ ಕುರಿತು ಸಿನಿಮಾ ಮಾಡುತ್ತಾರೆ ಎಂಬುದು ಗೊತ್ತಾಯಿತು. ಅವರನ್ನು ಕರೆದು ಮಾತನಾಡಿದ್ದೇನೆ. ಐತಿಹಾಸಿಕ ಹಿನ್ನೆಲೆ ಸ್ಪಷ್ಟತೆ ಇಲ್ಲದೆ ಒಂದು ಸಮುದಾಯದ ಅಸ್ಮಿತೆ, ಪ್ರತಿನಿಧಿಸುತ್ತಿರುವ ವ್ಯಕ್ತಿಗಳನ್ನು ಇಟ್ಟುಕೊಂಡು ಸಿನಿಮಾ ಮಾಡುವುದು ಸರಿ ಇಲ್ಲ ಎಂದು ತಿಳಿಸಿದ್ದೇನೆ ಎಂದರು.

ಉರಿಗೌಡ, ನಂಜೇಗೌಡ ಸಿನಿಮಾ ಮಾಡಲ್ಲ: ಮುನಿರತ್ನ

ಅಂದುಕೊಂಡಿದ್ದೆ. ಮೈಸೂರು ಸಂಸ್ಥಾನಕ್ಕೆ ಸಂಬಂಧಿಸಿದಂತೆ ಟಿಪ್ಪು ವಿಚಾರವಾಗಿ ದೊಡ್ಡ ಚರ್ಚೆಯಾಗಿತ್ತು. ಕುಮಾರಸ್ವಾಮಿ ಅವರು ಮುನಿರತ್ನ, ಅಶ್ವತ್ಥ ನಾರಾಯಣ್ ಸಿನಿಮಾ ಮಾಡೋಕೆ ಹೊರಟಿದ್ದರೇಕೆ ಅಂದಿದ್ದರು. ಅಲ್ಲಿಯವರೆಗೆ ನನಗೆ ಆಲೋಚನೆ ಇರಲಿಲ್ಲ. ಥಟ್ಟನೆ ವಿಚಾರ ಹೊಳೆದು ಸಿನಿಮಾ ಮಾಡಲು ಮುಂದಾಗಿದ್ದೆ ಎಂದರು. ಮೈಸೂರು ಸಂಸ್ಥಾನ, ಟಿಪ್ಪು, ಉರಿಗೌಡ, ನಂಜೇಗೌಡರ ಬಗ್ಗೆ ಒಂದಷ್ಟು ದಾಖಲೆಗಳು ಸಿಕ್ಕಿದ್ದವು. ಹೀಗಾಗಿ ಚಿತ್ರ ನಿರ್ಮಾಣ ಮಾಡಬೇಕು ಎಂದುಕೊಂಡಿದ್ದೆ. ಆದರೆ ಸ್ವಾಮೀಜಿಗಳ ಬಳಿ ಚರ್ಚೆ ಮಾಡಿದ ನಂತರ ಸಿನಿಮಾ ಮಾಡುವ ವಿಚಾರ ಕೈ ಬಿಟ್ಟಿದ್ದೇನೆ. ಸಿನಿಮಾ ಮಾಡಲು ಕಥೆಗಳು ತುಂಬಾ ಸಿಗುತ್ತವೆ. ಯಾರ ಮನಸ್ಸನ್ನೂ ನೋಯಿಸಿ ಸಿನಿಮಾ ಮಾಡುವ ಅವಶ್ಯಕತೆ ಇಲ್ಲ ಎನಿಸಿತು ಎಂದರು. ಬಿಜೆಪಿಯವನು ಅಂತಾ ನಾನು ಈ ಸಿನಿಮಾ ಮಾಡಲು ಹೋಗಲ್ಲ. ಶ್ರೀಗಳು ನೈಜತೆ ಇದ್ದರೆ ಅದರ ಬಗ್ಗೆ ಯೋಚನೆ ಮಾಡಿ ಎಂದರು. ಗೊಂದಲ ಇರುವಾಗ ಯಾವುದು ಸೂಕ್ತ ಎಂದು ಕೇಳಿದರು. ಶ್ರೀಗಳ ಮಾತಿನಂತೆ ನಾನು ಸಿನಿಮಾ ಮಾಡಲ್ಲ ಎಂದು ಹೇಳಿದರು.

ಕಡ್ಡಾಯ ಮತದಾನ ಸಂದೇಶ

ಎಂದು ಸಾರಲಾಯಿತು. ಚುನಾವಣಾ ಜಾಗೃತಿ ಜಾಥಾಗೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ, ಮಾತನಾಡಿದ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಮತದಾನ ಮಾಡುವುದು ಪ್ರತಿಯೊಬ್ಬರ ಕರ್ತವ್ಯ. ಪ್ರತಿಯೊಂದು ಮತವೂ ಒಂದು ದೇಶದ ಬೆಳವಣಿಗೆಗೆ ಉಪಯುಕ್ತವಾಗಿರುತ್ತದೆ. ಪ್ರತಿಯೊಬ್ಬರಲ್ಲಿಯೂ ಮತದಾನದ ಅರಿವು ಮೂಡಿಸುವುದು ಮುಖ್ಯ ಎಂದು ತಿಳಿಸಿದರು. ಚುನಾವಣಾ ಸಂದರ್ಭದಲ್ಲಿ ಯಾರು ಕೂಡ ಹಣದ ಆಮಿಷಕ್ಕೆ ಒಳಗಾಗಿ ನಿಮ್ಮ ಮತಗಳನ್ನು ನೀಡಬಾರದು. ಸಾರ್ವಜನಿಕರಲ್ಲಿ ಮತದಾನದ ಅರಿವನ್ನು ಮೂಡಿಸಿ ಉತ್ತಮ ಮತದಾನ ಪ್ರಕ್ರಿಯೆ ನಡೆಸಲು ಜಿಲ್ಲಾಡಳಿತದೊಂದಿಗೆ ಸಹಕರಿಸಿ ಎಂದು ಮನವಿ ಮಾಡಿದರು. ಕಾರ್ಯಕ್ರಮ ದಲ್ಲಿ ಭಾಗವಹಿಸಿದ್ದ ವಿವಿಧ ಇಲಾಖೆಯ ಸಿಬ್ಬಂದಿ ವರ್ಗದವರು ಕ್ಯಾಂಡಲ್ ಹಚ್ಚುವುದರ ಮೂಲಕ ಮತದಾನ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಪ್ರತಿಯೊಬ್ಬರು ಮತದಾನದಲ್ಲಿ ಸಕ್ರಿಯವಾಗಿ ಪಾಲ್ಗೊಳುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ನಗರ ಪೊಲೀಸ್ ಆಯುಕ್ತ ರಮೇಶ್ ಬಿ.ಬಾನೋತ್, ಜಿಪಂ ಸಿಇಓ ಕೆ.ಎಂ.ಗಾಯತ್ರಿ, ನಗರ ಪಾಲಿಕೆ ಆಯುಕ್ತ ಲಕ್ಷ್ಮಿಕಾಂತ್ ರೆಡ್ಡಿ, ಡಿಹೆಚ್‌ಓ ಪ್ರಸಾದ್, ನೋಡಲ್ ಅಧಿಕಾರಿ ರಂಜಿತ್‌ಕುಮಾರ್ ಮತ್ತಿತರರಿದ್ದರು.

ಮಾರ್ಚ್ 27ಕ್ಕೆ ವಿಚಾರಣೆ

ಏಕಸದಸ್ಯ ಪೀಠ ರದ್ದುಪಡಿಸಿತ್ತು. ಬಳಿಕ ಇದರ ವಿರುದ್ಧ ಶಿಕ್ಷಣ ಇಲಾಖೆ ಮೇಲ್ಮನವಿ ಸಲ್ಲಿಸಿತ್ತು. ನಂತರ ಏಕಸದಸ್ಯ ಪೀಠ ನೀಡಿದ್ದ ಆದೇಶಕ್ಕೆ ತಡೆ ನೀಡಿ ಬೋರ್ಡ್ ಪರೀಕ್ಷೆ ನಡೆಸಲು ಅನುಮತಿ ನೀಡಿ ಹೈಕೋರ್ಟ್ ತೀರ್ಪು ನೀಡಿತ್ತು. ಹೈಕೋರ್ಟ್ ಅನುಮತಿ ನೀಡಿದ ಕಾರಣ ಮಾರ್ಚ್ 27ರಿಂದ ಏಪ್ರಿಲ್ 1ರವರೆಗೆ ಬೋರ್ಡ್ ಪರೀಕ್ಷೆ ನಡೆಸಲು ಕರ್ನಾಟಕ ಶಾಲಾ ಪರೀಕ್ಷೆ ಮೌಲ್ಯನಿರ್ಣಯ ಮಂಡಳಿ ವೇಳಾಪಟ್ಟಿ ಪ್ರಕಟಿಸಿತ್ತು. ಸದ್ಯ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಅನುದಾನರಹಿತ ಖಾಸಗಿ ಶಾಲೆಗಳ ಸಂಘಗಳು ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿವೆ.

ಸೌಕರ್ಯ ಬಳಸಿಕೊಂಡು ಮಹಿಳೆಯರು ಸ್ವಾವಲಂಬಿಗಳಾಗಿ

● ಶಾಸಕ ನಾಗೇಂದ್ರ ಸಲಹೆ ● ವಿವಿಧ ಯೋಜನೆ ಫಲಾನುಭವಿಗಳಿಗೆ ಚೆಕ್ ವಿತರಣೆ

ಮೈಸೂರು,ಮಾ.20(ಎಂಟಿವೈ)– ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜಾರಿಗೊಳಿಸಿರುವ ವಿವಿಧ ಯೋಜನೆಗಳ ಸದುಪಯೋಗಪಡಿಸಿಕೊಂಡು ಮಹಿಳೆಯರು ಸ್ವಾವಲಂಬಿ ಜೀವನ ನಡೆಸುವತ್ತ ಗಮನಹರಿಸಬೇಕು ಎಂದು ಶಾಸಕ ಎಲ್.ನಾಗೇಂದ್ರ ಸಲಹೆ ನೀಡಿದ್ದಾರೆ.

ಮೈಸೂರಿನ ಕಲಾಮಂದಿರದಲ್ಲಿ ಸೋಮವಾರ ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರಿಗೆ 'ದಶಸೂತ್ರ' ಕುರಿತ ಸಾಮರ್ಥ್ಯ ಅಭಿವೃದ್ಧಿ ಕಾರ್ಯಾಗಾರ ಹಾಗೂ ಮಹಿಳಾ ಪೌರಕಾರ್ಮಿಕರ 50 ಸ್ವ–ಸಹಾಯ ಸಂಘಗಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಮಹಿಳೆಯರ ಏಳಿಗೆಗಾಗಿ ಹಲವು ಯೋಜನೆ ಪ್ರಕಟಿಸಿವೆ. ಆ ಯೋಜನೆಗಳ ಮೂಲಕ ಕೈಗಾರಿಕೆ, ಗುಡಿಕೈಗಾರಿಕೆ ಹಾಗೂ ವಿವಿಧ ಸ್ವ–ಉದ್ಯೋಗ ಆರಂಭಿಸುವುದಕ್ಕೆ ಸಾಲಸೌಲಭ್ಯ ನೀಡಲಾಗುತ್ತಿದೆ ಅದರ ಸದುಪಯೋಗಪಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಮಹಿಳೆಯರು ಪ್ರಾಮಾಣಿಕರಾಗಿದ್ದು, ಒಮ್ಮೆ ಪಡೆದ ಸಾಲವನ್ನು ಹಿಂದಿರುಗಿಸಿದರೆ, ಮತ್ತೆ ಮತ್ತೆ ಹೆಚ್ಚಿನ ಮೊತ್ತದ ಸಾಲ ಪಡೆದುಕೊಳ್ಳಲು ಸಾಧ್ಯವಿದೆ. ಈಗಾಗಲೇ ಸಾಕಷ್ಟು ಮಂದಿ ಸರ್ಕಾರದ ಸೌಲಭ್ಯ ಪಡೆದು ನೆಮ್ಮದಿ ಜೀವನ ನಡೆಸುತ್ತಿದ್ದಾರೆ. ಮೈಸೂರು ಪಾಲಿಕೆ ವತಿಯಿಂದಲೂ ವಿವಿಧ ಸೌಲಭ್ಯ ದೊರೆಯಲಿದೆ ಎಂದು ತಿಳಿಸಿದರು.


ಭಾರತದಲ್ಲಿ ಮಹಿಳೆಯರಿಗೆ ಹೆಚ್ಚಿನ ಗೌರವ ನೀಡಲಾಗುತ್ತಿದೆ. ವಿಶ್ವದ ಯಾವುದೇ ರಾಷ್ಟ್ರಗಳಲ್ಲೂ ಸಿಗದ ಗೌರವ, ಸ್ಥಾನಮಾನ ಭಾರತದಲ್ಲಿ ಸಿಗುತ್ತಿದೆ. ನದಿ ಸೇರಿದಂತೆ ಪ್ರಕೃತಿಯನ್ನು ಹೆಣ್ಣಿಗೆ ಹೋಲಿಸಲಾಗಿದೆ. ರಾಜಕೀಯ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರು ಸಾಧನೆ ಮಾಡುತ್ತಿದ್ದಾರೆ. ದೇಶಕ್ಕೆ ಸ್ವಾತಂತ್ರ್ಯ ಬಂದ ಕೆಲವೇ ವರ್ಷಗಳಲ್ಲಿ ಇಂದಿರಾಗಾಂಧಿ ದೇಶದ ಪ್ರಧಾನಿಯಾಗಿ ಸಮರ್ಥ ಆಡಳಿತ ನಡೆಸಿದ್ದಾರೆ. ನಂತರ ಮುಖ್ಯಮಂತ್ರಿಗಳಾಗಿ ಜಯಲಲಿತಾ, ಮಮತಾ ಬ್ಯಾನರ್ಜಿ, ಶೀಲಾ ದೀಕ್ಷಿತ್ ಸೇರಿದಂತೆ ಹಲವು ಮಹಿಳಾ ನಾಯಕರು ಆಳಿದ್ದಾರೆ. ರಾಷ್ಟ್ರಪತಿಯಾಗಿ ಆದಿವಾಸಿ ಪಂಗಡದ ದ್ರೌಪದಿ ಮುರ್ಮು ಅವರನ್ನು ಆಯ್ಕೆ ಮಾಡಲಾಗಿದೆ. ಇದು ಇಡೀ ದೇಶದ ಮಹಿಳೆಯರು ಹೆಮ್ಮೆ ಪಡುವ ಸಂಗತಿ ಎಂದರು.

ಪ್ರತಿಯೊಬ್ಬ ಮಹಿಳೆಯೂ ತಮ್ಮ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುವ ಮೂಲಕ ಪ್ರಶಂಸೆಗೆ ಪಾತ್ರರಾಗುತ್ತಿದ್ದಾರೆ. ತಾಯಂದಿರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಲು ಮುಂದಾಗಬೇಕು. ಅದರಲ್ಲೂ ಹೆಣ್ಣು ಮಕ್ಕಳಿಗೆ ಶಿಕ್ಷಣ ಕೊಡಿಸಲು ಬದ್ಧತೆ ಪ್ರದರ್ಶಿಸಬೇಕು ಎಂದು ಸಲಹೆ ನೀಡಿದರು.

ಮೇಯರ್ ಶಿವಕುಮಾರ್ ಮಾತನಾಡಿ, ಮಹಿಳಾ ದಿನಾಚರಣೆ ಒಂದು ದಿನಕ್ಕೆ ಮಾತ್ರ ಸೀಮಿತವಾಗದೇ ಪ್ರತಿದಿನವೂ ಆಚರಣೆ ಆಗಬೇಕು. ಭಾರತ ಮಾತೆ ಎನ್ನುವ ಮೂಲಕ ದೇಶಕ್ಕೂ ಮಾತೆಯ ಸ್ವರೂಪವಾಗಿ ಮಹಿಳೆಯರನ್ನು ಕಾಣುತ್ತೇವೆ. ಪ್ರತಿನಿತ್ಯವೂ ಪೂಜ್ಯನೀಯವಾಗಿ ಗೌರವಿಸುವ ಸಂಸ್ಕಾರ ನಮ್ಮ ದೇಶದಲ್ಲಿದೆ. ಈ ಹಿನ್ನೆಲೆಯಲ್ಲಿ ಬಡ ಹೆಣ್ಣುಮಕ್ಕಳು ಸಮಾಜದ ಮುಖ್ಯವಾಹಿನಿಗೆ ಬರಲು ಹಲವು ಯೋಜನೆ ಜಾರಿಗೊಳಿಸಲಾಗಿದೆ. ಸ್ವಸಹಾಯ ಗುಂಪುಗಳ ಮೂಲಕ ಸಬಲೀಕರಣಕ್ಕೆ ಕಾರ್ಯಕ್ರಮ ರೂಪಿಸಲಾಗಿದೆ. ಅವರು ಆರ್ಥಿಕವಾಗಿ ಸದೃಢವಾದಾಗ ಮಾತ್ರ ಏಳಿಗೆ ಸಾಧ್ಯ. ಮಹಿಳೆಯರಿಗೆ ಕೌಶಲ್ಯ ಅಭಿವೃದ್ಧಿ ತರಬೇತಿ ನೀಡಿ, ಪ್ರತಿ ದಿನ ಸಾವಿರಾರು ರೂ. ಸಂಪಾದಿಸುವಂತಾಗಬೇಕು. ವುಮೆನ್ಸ್ ಪಾರ್ಕ್ ನಿರ್ಮಿಸಿ, ಮಹಿಳಾ ಉದ್ಯಮಿ, ಮಹಿಳೆಯರಿಂದಲೇ ಕೈಗಾರಿಕೆ ಸ್ಥಾಪನೆಗೆ ಉತ್ತೇಜನ ನೀಡುವ ವ್ಯವಸ್ಥೆ ಮೈಸೂರಲ್ಲಿದೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಪಾಲಿಕೆಯ ಹೆಚ್ಚುವರಿ ಆಯುಕ್ತೆ ಎಂ.ಜೆ.ರೂಪಾ ಮಾತನಾಡಿ, ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಇಂದಿನಿಂದ ಹೊಸದಾಗಿ 297 ಮಹಿಳಾ ಸ್ವ–ಸಹಾಯ ಸಂಘಗಳು ಕಾರ್ಯಾರಂಭ ಮಾಡಲಿವೆ. 50 ಮಹಿಳಾ ಪೌರಕಾರ್ಮಿಕ ಸ್ವಸಹಾಯ ಸಂಘವೂ ಅಸ್ತಿತ್ವಕ್ಕೆ ಬರುತ್ತಿವೆ. ಈಗಾಗಲೇ ಪಾಲಿಕೆ ವತಿಯಿಂದ 88 ಲಕ್ಷಕ್ಕೂ ಹೆಚ್ಚು ಆರ್ಥಿಕ ನೆರವನ್ನು 855 ಸ್ವಸಹಾಯ ಸಂಘಕ್ಕೆ ನೀಡಲಾಗಿದೆ. ಮಹಿಳಾ ಸಬಲೀಕರಣಕ್ಕೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಪ್ರದೇಶ ಮಟ್ಟದ ಒಕ್ಕೂಟ ರಚನೆ ಮಾಡಿ, ಆರ್ಥಿಕ ನೆರವು ನೀಡುವ ಗುರಿ ತಲುಪಿದ್ದೇವೆ. ಅಲ್ಲದೇ ಮಹಿಳಾ ವ್ಯಾಪಾರಿಗಳಿಗೆ ಇದುವರೆಗೂ 49 ಲಕ್ಷ ರೂ. ಸಾಲ ಸೌಲಭ್ಯ ನೀಡಲಾಗಿದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಮಹಿಳಾ ಸ್ವಸಹಾಯ ಸಂಘಗಳಿಗೆ ಆರ್ಥಿಕ ನೆರವಿನ ಚೆಕ್ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಉಪಮೇಯರ್ ಡಾ.ರೂಪ, ಪಾಲಿಕೆ ಆಯುಕ್ತ ಜಿ.ಲಕ್ಷ್ಮಿಕಾಂತರೆಡ್ಡಿ ಇನ್ನಿತರರು ಪಾಲ್ಗೊಂಡಿದ್ದರು. ಸಂಪನ್ಮೂಲ ವ್ಯಕ್ತಿಗಳು ಸ್ವಸಹಾಯ ಸಂಘಗಳ ಕಾರ್ಯವೈಖರಿ, ಸಾಧನೆ ಮಾಡುವ ಬಗೆ ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ವಿಶೇಷ ಉಪನ್ಯಾಸ ನೀಡಿ, ಅಗತ್ಯ ಮಾಹಿತಿ ನೀಡಿದರು.



ಮೈಸೂರಿನ ಕಲಾಮಂದಿರದಲ್ಲಿ ನಡೆದ ಸ್ವಸಹಾಯ ಸಂಘಗಳ ಸದಸ್ಯರ ತರಬೇತಿ ಕಾರ್ಯಕ್ರಮದಲ್ಲಿ ಮಹಿಳಾ ಸ್ವಸಹಾಯ ಸಂಘದ ಪದಾಧಿಕಾರಿಗಳಿಗೆ ಪಾಲಿಕೆ ವತಿಯಿಂದ ಆರ್ಥಿಕ ನೆರವಿನ ಚೆಕ್ ಅನ್ನು ಶಾಸಕ ಎಲ್.ನಾಗೇಂದ್ರ ಹಾಗೂ ಮೇಯರ್ ಶಿವಕುಮಾರ್ ವಿತರಿಸಿದರು.

ರ‍್ಯಾಪಿಡ್ ಬೈಕ್, ಸ್ಕೂಟರ್ ಟ್ಯಾಕ್ಸಿ ನಿರ್ಬಂಧಕ್ಕೆ ಆಗ್ರಹಿಸಿ ಆಟೋರಿಕ್ಷಾ ಚಾಲಕರ ಪ್ರತಿಭಟನೆ



ಮೈಸೂರು,ಮಾ.20(ಎಂಟಿವೈ)– ರ‍್ಯಾಪಿಡೊ ವೈಟ್‌ಬೋರ್ಡ್ ಬೈಕ್, ಸ್ಕೂಟರ್ ಟ್ಯಾಕ್ಸಿಗಳ ಸಂಚಾರಕ್ಕೆ ಕಡಿವಾಣ ಹಾಕುವಂತೆ ಮೈಸೂರಲ್ಲಿ ಮೈಸೂರು ಆಟೋ ಸರ್ವೀಸ್ ಟ್ರಸ್ಟ್ ನೇತೃತ್ವದಲ್ಲಿ ಆಟೋರಿಕ್ಷಾ ಚಾಲಕರು ಹಾಗೂ ಮಾಲೀಕರು ಪ್ರತಿಭಟನೆ ನಡೆಸಿದರು.

ಆಟೋರಿಕ್ಷಾಗಳಿಗೆ ಕಪ್ಪು ಬಾವುಟ ಕಟ್ಟಿಕೊಂಡು ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಬಳಿ ಆಗಮಿಸಿದ ಆಟೋ ಚಾಲಕರು ಕೆಲಕಾಲ ಧರಣಿ ನಡೆಸಿ, ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಮೈಸೂರು ನಗರದಲ್ಲಿ ಆಟೋರಿಕ್ಷಾ ಪರ್ಮಿಟ್ ವ್ಯಾಪ್ತಿಯೊಳಗೆ ರ‍್ಯಾಪಿಡೋ ಬೈಕ್, ಸ್ಕೂಟರ್ ಟ್ಯಾಕ್ಸಿಗಳ ಸಂಚಾರದಿಂದಾಗಿ ಆಟೋರಿಕ್ಷಾ ಚಾಲಕರಿಗೆ ತೊಂದರೆಯಾಗುತ್ತಿದೆ. 3 ವರ್ಷದಿಂದ ಈ ಬೈಕ್ ಟ್ಯಾಕ್ಸಿಗಳು ಆರ್‌ಟಿಓ ನಿಯಮಾವಳಿ ಉಲ್ಲಂಘಿಸಿ ಸಂಚರಿಸುತ್ತಿವೆ. ಇದರಿಂದ ಆಟೋರಿಕ್ಷಾ ಚಾಲಕರ ದಿನನಿತ್ಯದ ದುಡಿಮೆಗೆ ತೊಂದರೆಯಾಗುತ್ತಿದೆ. ಬ್ಯಾಂಕ್, ಫೈನಾನ್ಸ್‌ಗಳಿಂದ ಸಾಲಪಡೆದು ಆಟೋರಿಕ್ಷಾ ಖರೀದಿಸಿ, ಸರಿಯಾದ ಸಮಯಕ್ಕೆ ಸಾಲ ಮರುಪಾವತಿ ಮಾಡಲಾಗದೆ ಬ್ಯಾಂಕು, ಫೈನಾನ್ಸ್ ಕಂಪನಿಗಳ ಕಾನೂನು ಕ್ರಮ ಎದುರಿಸುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಆಟೋರಿಕ್ಷಾ ಚಾಲಕರ ಕುಟುಂಬಗಳು ಬೀದಿಗೆ ಬೀಳುವಂತಾಗಿದೆ. ಚಾಲಕರು ತಮ್ಮ ಮಕ್ಕಳ ವಿದ್ಯಾಭ್ಯಾಸ, ಕುಟುಂಬದ ಆರೋಗ್ಯ ನಿರ್ವಹಣೆ ಸಾಧ್ಯವಾಗದೇ ದುಸ್ಥಿತಿಗೆ ಬಂದು ನಿಂತಿದ್ದಾರೆ. ಎರಡು ವರ್ಷದಿಂದ ಸಂಬಂಧಪಟ್ಟ ಅಧಿಕಾರಿಗಳಿಗೆ, ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರೂ ಪ್ರಯೋಜನವಾಗಲಿಲ್ಲ. ನ್ಯಾಯಾಲಯದಲ್ಲಿ ರ‍್ಯಾಪಿಡೋ ವೈಟ್‌ಬೋರ್ಡ್ ಸ್ಕೂಟರ್, ಬೈಕ್ ಟ್ಯಾಕ್ಸಿಗಳ ಮೇಲೆ ಸಂಬಂಧಪಟ್ಟ ಅಧಿಕಾರಿಗಳು ಯಾವುದೇ ರೀತಿ ಕಾನೂನು ಕ್ರಮ ಜರುಗಿಸಬಾರದೆಂಬ ತಡೆಯಾಜ್ಞೆ ಪಡೆದುಕೊಂಡಿದ್ದಾರೆ. ಸರ್ಕಾರದ ಅಡ್ವೋಕೇಟ್ ಜನರಲ್‌ಗೆ ನ್ಯಾಯಕೊಡಿಸುವಂತೆ ಮನವಿ ಮಾಡಿದರೂ ಸೂಕ್ತ ಸ್ಪಂದನೆ ದೊರೆತಿಲ್ಲ. ನಮಗೆ ನ್ಯಾಯ ಸಿಗುವವರೆಗೂ ಆಟೋರಿಕ್ಷಾದಲ್ಲಿ ಸರ್ಕಾರದ ವಿರುದ್ಧ ಕಪ್ಪು ಬಾವುಟ, ಕಪ್ಪು ಪಟ್ಟಿ ಧರಿಸಿ ಆಟೋ ಚಲಾಯಿಸುತ್ತೇವೆ ಎಂದು ಪ್ರತಿಭಟನಾಕಾರರು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಟ್ರಸ್ಟ್ ಅಧ್ಯಕ್ಷ ಬಿ.ನಾಗರಾಜು, ರಿಕ್ಷಾ ಚಾಲಕರಾದ ಎಂ.ಬಿ.ದೊಡ್ಡದೇವಪ್ಪ, ಮಂಜುನಾಥ್, ರವಿ, ಗುರು, ಮಹದೇವು, ಚಂದ್ರು ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಕಾದಾಟದಲ್ಲಿ ಹುಲಿ ಮರಿ ಸಾವು



ಮೈಸೂರು,ಮಾ.20(ಎಂಟಿವೈ)– ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಡಿ.ಬಿ.ಕುಪ್ಪೆ ವಲಯದ ಮಾಸ್ತಿಗುಡಿ, ಸಮೀಪದ ಕುಂಬಳಗೊಲ್ಲಿ ಎಂಬಲ್ಲಿ ಒಂದು ವರ್ಷದ ಗಂಡು ಹುಲಿ ಮರಿಯ ಕಳೇಬರ ಪತ್ತೆಯಾಗಿದ್ದು, ಕಾದಾಟದಲ್ಲಿ ಗಾಯಗೊಂಡು ಮೃತಪಟ್ಟಿರುವ ಶಂಕೆ ವ್ಯಕ್ತವಾಗಿದೆ.

ನಾಗರಹೊಳೆ ಅಭಯಾರಣ್ಯದ ಹೆಚ್.ಡಿ.ಕೋಟೆ ತಾಲೂಕು ವ್ಯಾಪ್ತಿಯ ಮಾಸ್ತಿಗುಡಿ ಗಸ್ತಿನ ಕುಂಬಳಗೊಲ್ಲಿ ಬಳಿ ಗಸ್ತು ನಡೆಸುತ್ತಿದ್ದ ಅರಣ್ಯ ಸಿಬ್ಬಂದಿ ಹುಲಿಯ ಮೃತದೇಹ ಗಮನಿಸಿದ್ದಾರೆ. ಬಳಿಕ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಪಶುವೈದ್ಯ ಡಾ.ಹೆಚ್. ರಮೇಶ ಅವರಿಂದ ಮರಣೋತ್ತರ ಪರೀಕ್ಷೆ ನಡೆಸಿದಾಗ, ಹುಲಿ ಮರಿಯು ಯಾವುದೋ ಪ್ರಾಣಿಯೊಂದಿಗೆ ಕಾದಾಟ ನಡೆಸಿ ಗಾಯಗೊಂಡಿರುವ ಗುರುತು ದೇಹದ ಮೇಲೆ ಪತ್ತೆಯಾಗಿದೆ. ಎದೆಗೂಡಿನ 12 ಮತ್ತು 13ರ ನಡುವಿನ ಮೂಳೆ ಮುರಿದಿದ್ದರಿಂದ ಬೆನ್ನು ಹುರಿಗೆ ಹಾನಿ ಉಂಟಾಗಿರುವುದು ಪತ್ತೆಯಾಗಿದೆ. ಕಾದಾಟದಲ್ಲಿ ಗಾಯಗೊಂಡಿದ್ದ ಪರಿಣಾಮ ಎದೆಗೂಡಿನಲ್ಲಿ ರಕ್ತ ಹೆಪ್ಪುಗಟ್ಟಿದ್ದು, ರಕ್ತಸ್ರಾವದಿಂದಲೇ ಮೃತಪಟ್ಟಿರುವುದಾಗಿ ಪಶುವೈದ್ಯಾಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ.

ಮರಣೋತ್ತರ ಪರೀಕ್ಷೆ ಬಳಿಕ ಎನ್‌ಟಿಸಿಎ ಮಾರ್ಗಸೂಚಿಯಂತೆ ಹುಲಿ ಮರಿಯ ಕಳೇಬರವನ್ನು ಸುಡಲಾಗಿದೆ. ಈ ಸಂದರ್ಭದಲ್ಲಿ ನಾಗರಹೊಳೆ ಹುಲಿ ಸಂರಕ್ಷಿತಪ್ರದೇಶದ ನಿರ್ದೇಶಕ ಹರ್ಷಕುಮಾರ ಚಿಕ್ಕನರಗುಂದ, ಮೇಟಿಕುಪ್ಪೆ ವನ್ಯಜೀವಿ ಉಪ ವಿಭಾಗದ ಎಸಿಎಫ್ ಕೆ.ಎನ್.ರಂಗಸ್ವಾಮಿ, ಡಿ.ಬಿ.ಕುಪ್ಪೆ ಆರ್‌ಎಫ್‌ಓ ಕೆ.ಎಲ್. ಮಧು, ಎನ್‌ಟಿಸಿಎ ಪ್ರತಿನಿಧಿ ದಿವ್ಯಾಚೌಧರಿ, ನಾಮ ನಿರ್ದೇಶಿತ ಸದಸ್ಯ ಶ್ರೇಯಸ್ ದೇವನೂರು, ಮಾಸ್ತಿಗುಡಿ ಡಿಆರ್‌ಎಫ್‌ಓ ಮತ್ತು ಮೋಜಣಿದಾರ ಆರ್.ಪ್ರಮೋದ್, ಸಿಬ್ಬಂದಿ ಉಮೇಶ ನಾಯಕ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಬ್ಯಾಕ್ ವಾಟರ್ ಫೀಮೇಲ್ ಮರಿಯೇ?

ಮಾಸ್ತಿಗುಡಿ ಗಸ್ತಿನಲ್ಲಿ ದೊರೆತ ಹುಲಿ ಮರಿಯ ಕಳೇಬರ ಕಬಿನಿ ಬ್ಯಾಕ್ ವಾಟರ್ ಫೀಮೇಲ್ ಮರಿ ಎಂಬ ಅನುಮಾನ ಮೂಡಿದೆ. ನಾಲ್ಕು ಮರಿ ಹೊಂದಿದ್ದ ತಾಯಿ ಗಂಭೀರವಾಗಿ ಗಾಯಗೊಂಡು, ಕೊನೆಗೆ ಹಾಡಿಯ ಯುವಕನ ಕೊಂದಿತ್ತು. ನಂತರವೂ ಮಾಸ್ತಿಗುಡಿ ಸಮೀಪವೇ ಕುಂಟುತ್ತಾ ಓಡಾಡುತ್ತಿದ್ದ ಬ್ಯಾಕ್ ವಾಟರ್ ಫೀಮೇಲ್ ಆರೋಗ್ಯ ಹದಗೆಟ್ಟಿದ್ದನ್ನು ಖಚಿತಪಡಿಸಿಕೊಂಡ ಅರಣ್ಯ ಸಿಬ್ಬಂದಿ, ಅದನ್ನು ಸೆರೆ ಹಿಡಿದು ಮೈಸೂರಿನ ಕೂರ್ಗಳ್ಳಿಯ ಪುನರ್ವಸತಿ ಕೇಂದ್ರಕ್ಕೆ ತಂದು ಆರೈಕೆ ಮಾಡಲಾಗುತ್ತಿದೆ. ತಾಯಿಯಿಂದ ಅಗಲಿದ ಮರಿಗಳಿಗೆ ಬೇಟೆಯಾಡುವ ಕಲೆ ಇನ್ನು ಕರಗತವಾಗದ ಗಂಡು ಮರಿ ಬೇರಾವುದೋ ಪ್ರಾಣಿಯನ್ನು ಬೇಟೆಯಾಡುವ ಪ್ರಯತ್ನದಲ್ಲಿ ಗಂಭೀರವಾಗಿ ಗಾಯಗೊಂಡು ಮೃತಪಟ್ಟಿರುವ ಶಂಕೆಯೂ ವ್ಯಕ್ತವಾಗಿದೆ. ಅಲ್ಲದೆ, ಉಳಿದ ಮೂರು ಮರಿಗಳ ಸುರಕ್ಷತೆ ಬಗ್ಗೆ ಕೂಂಬಿಂಗ್ ಕಾರ್ಯಾಚರಣೆ ನಡೆಸಿ ಪರಿಶೀಲಿಸುವಂತೆ ಮನವಿ ಮಾಡಿದ್ದಾರೆ.

ಆದಿವಾಸಿಗಳ ಅರಣ್ಯ ಹಕ್ಕು ಕಾಯ್ದೆ ಯಥಾವತ್ ಜಾರಿಗೆ ಆಗ್ರಹಿಸಿ

ಮೈಸೂರು ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ

ಮೈಸೂರು,ಮಾ.20(ಎಂಟಿವೈ)– ಅರಣ್ಯ ಪ್ರದೇಶದ ವಾರಸುದಾರರಾದ ಆದಿವಾಸಿಗಳ ಅರಣ್ಯ ಹಕ್ಕು ಕಾಯ್ದೆ 2006 ಅನ್ನು ಯಥಾವತ್ತಾಗಿ ಜಾರಿಗೆ ತರಬೇಕು, ಸಾಗುವಳಿ ಪತ್ರ ನೀಡುವುದೂ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಮೈಸೂರಲ್ಲಿ ಆದಿವಾಸಿಗಳು ಪ್ರತಿಭಟನೆ ನಡೆಸಿದರು.



ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಬಳಿ ಕರ್ನಾಟಕ ದಲಿತ ಚಳುವಳಿ ನವ ನಿರ್ಮಾಣ ವೇದಿಕೆ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಹುಣಸೂರು ಸೇರಿದಂತೆ ಇನ್ನಿತರೆಡೆಯಿಂದ ಬಂದ ಆದಿವಾಸಿಗಳು, ಹಕ್ಕೊತ್ತಾಯ ಮಾಡಿದರು.

ಕಳೆದ 60–70 ವರ್ಷಗಳಿಂದ ಕಾಡಂಚಿನ ಆದಿವಾಸಿಗಳಿಗೆ ಮತ್ತು ಸಾಗುವಳಿ ಮಾಡುತ್ತಿರುವ ರೈತರ ಭೂಮಿಗೆ ಕಂದಾಯ ಇಲಾಖೆ ಸೂಕ್ತದಾಖಲೆ ನೀಡಬೇಕು. ಪ್ರೊ.ಮುಜಫರ್ ಅಸ್ಸಾದಿ ವರದಿ ಯಥಾವತ್ತಾಗಿ ಜಾರಿಗೆ ತರಬೇಕು. ಪಿಟಿಸಿಎಲ್ ಕಾಯ್ದೆಗೆ ಸೂಕ್ತ ತಿದ್ದುಪಡಿ ತಂದು ಮೂಲ ಪರಿಶಿಷ್ಟ ಜಾತಿ ಕುಟುಂಬಗಳಿಗೆ ಭೂಮಿ ಹಕ್ಕು ನೀಡಬೇಕು. ನಗರ ಮತ್ತು ಪಟ್ಟಣ ಪ್ರದೇಶದ ಪರಿಶಿಷ್ಟ ಜಾತಿಯ ಭೂಮಿಯನ್ನು ಮಾರಾಟ ಮಾಡಲು ಸೂಕ್ತ ಕಾನೂನು ತರಬೇಕು. ಲಕ್ಷ್ಮಣ ತೀರ್ಥ ನದಿಯನ್ನು ಪರಿಸರ ಮಾಲಿನ್ಯದಿಂದ ಸಂರಕ್ಷಿಸಬೇಕು. ಹುಣಸೂರು ತಾಲೂಕಿನ ಗೋವಿಂದನಹಳ್ಳಿ ಸರ್ವೆ ನಂ.21ರ 108 ಎಕರೆ ಪ್ರದೇಶ ಶೈಕ್ಷಣಿಕ ಉದ್ದೇಶಕ್ಕೆ ಮೀಸಲಾಗಿರುವುದನ್ನು ನೀಡಬೇಕು. ಆದಿವಾಸಿಗಳಿಗೆ ಪಂಚಾಯಿತಿ ಕಾಯ್ದೆ 2006ರ ಅನುಸೂಚಿತ–5ರಲ್ಲಿ ಅವರಿಗೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. 219 ಹಾಡಿಗಳಿಗೆ ಮತ್ತು 164 ಜೇನುಕುರುಬ ಹಾಡಿಗಳಿಗೆ ಅರಣ್ಯ ನೆಲೆಸುಗಳ ಮೇಲೆ ಹಕ್ಕುಪತ್ರ ನೀಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ದಲಿತ ಚಳುವಳಿ ನವನಿರ್ಮಾಣ ವೇದಿಕೆ ಅಧ್ಯಕ್ಷ ಹರಿಹರ ಆನಂದಸ್ವಾಮಿ, ಮುಖಂಡರಾದ ಹೊರಳವಾಡಿ ನಂಜುಂಡಸ್ವಾಮಿ, ಬಂಗವಾದಿ ನಾರಾಯಣಪ್ಪ, ಚಂದ್ರಶೇಖರ್, ಶ್ರೀಕಾಂತ್, ರಾಮು, ಈರಯ್ಯ, ಪ್ರಸನ್ನಕುಮಾರ್, ಮಂಜು ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಇಂದು ಪುರೋಹಿತರ ಪರಿಷತ್ ಸಭೆ

ಮೈಸೂರು, ಮಾ.20– ಮೈಸೂರು ಪುರೋಹಿತರ ಪರಿಷತ್ ಮಾ.27ರಂದು ಶಂಕರ ಮಠದ ಕಲ್ಯಾಣ ಮಂಟಪದಲ್ಲಿ ವಾರ್ಷಿಕ ಮಹಾಸಭೆ ಏರ್ಪಡಿಸಿರುವುದರಿಂದ ಮಾ.21ರಂದು ಸಂಜೆ ಮೈಸೂರು ಜಿಲ್ಲೆಯ ಪದಾಧಿಕಾರಿಗಳ ಸಭೆಯನ್ನು ಪರಿಷತ್‌ನ ಮೈಸೂರು ಅಧ್ಯಕ್ಷ ಮೈ ಕುಮಾರ್ ಹಾಗೂ ಮುಖ್ಯ ಕಾರ್ಯದರ್ಶಿ ವೇದ ಬ್ರಹ್ಮಶ್ರೀ ಭಾನುಪ್ರಕಾಶ ಅವರ ಅಧ್ಯಕ್ಷತೆಯಲ್ಲಿ ಮೈಸೂರಿನ ಅಮೃತೇಶ್ವರ ದೇವಸ್ಥಾನದಲ್ಲಿ ಕರೆಯಲಾಗಿದೆ. ಈ ಸಭೆಯಲ್ಲಿ ಪರಿಷತ್‌ನ ಮೈಸೂರು ಜಿಲ್ಲಾ ತಾಲೂಕು ಪದಾಧಿಕಾರಿಗಳು ಭಾಗವಹಿಸಬೇಕಾಗಿ ಪ್ರಕಟಣೆ ಕೋರಿದೆ.

ಮುದ್ದಾದ ಗುಬ್ಬಚ್ಚಿ ಸಂರಕ್ಷಣೆ ಸಂಬಂಧ ಶಾಲಾ ಮಕ್ಕಳಲ್ಲಿ ಅರಿವು

ಮೈಸೂರು,ಮಾ.20(ಎಂಟಿವೈ)– ವಿಶ್ವ ಗುಬ್ಬಚ್ಚಿ ದಿನದ ಅಂಗವಾಗಿ ನಂಜನಗೂಡು ತಾಲೂಕಿನ ಮೊತ್ತ ಗ್ರಾಮದಲ್ಲಿ ಗ್ರಾಮಸ್ಥರಿಗೆ ಗುಬ್ಬಿಗೂಡು ವಿತರಿಸಿ, ಸಿಂಧುವಳ್ಳಿ ಹಾಗೂ ದೊಡ್ಡಕಾನ್ಯ ಶಾಲಾ ವಿದ್ಯಾರ್ಥಿಗಳಿಗೆ ಗುಬ್ಬಚ್ಚಿ ಸಂರಕ್ಷಣೆಯ ಅರಿವು ಮೂಡಿಸಲಾಯಿತು.

ಟಿವಿಎಸ್ ಮೋಟಾರ್ ಕಂಪನಿಯ ಅಂಗ ಸಂಸ್ಥೆಯಾದ ಶ್ರೀನಿವಾಸನ್ ಸರ್ವೀಸಸ್ ಟ್ರಸ್ಟ್ ಹಾಗೂ ಮೈಸೂರಿನ ವೈಲ್ಡ್‌ಲೈಫ್ ಕನ್ಸರ್ವೇಷನ್ ಫೌಂಡೇಶನ್ ವತಿಯಿಂದ ಗುಬ್ಬಚ್ಚಿ ದಿನ ಆಚರಿಸಿ, ಮೊತ್ತ ಗ್ರಾಮದ ಗ್ರಾಮಸ್ಥರಲ್ಲಿ ಗುಬ್ಬಿಗಳ ಮಹತ್ವ, ಅವುಗಳ ಸಂತತಿ ಸಂರಕ್ಷಣೆಯ ಅನಿವಾರ್ಯತೆ ಕುರಿತಂತೆ ಜಾಗೃತಿ ಮೂಡಿಸಲಾಯಿತು.

ಇದೇ ವೇಳೆ ಶ್ರೀನಿವಾಸನ್ ಸರ್ವೀಸಸ್ ಟ್ರಸ್ಟ್ ಸಂಸ್ಥೆಯ ಕ್ಷೇತ್ರ ನಿರ್ದೇಶಕ ಎಸ್. ಸುಬ್ರಹ್ಮಣ್ಯಂ ಮಾತನಾಡಿ, ಈ ಹಿಂದೆ ಹೆಂಚಿನ ಮನೆಗಳಲ್ಲಿ, ಹಳೆ ಕಟ್ಟಡ ಹಾಗೂ ಬಾವಿಗಳ ಬಿರುಕು ಬಿಟ್ಟ ಗೋಡೆಗಳಲ್ಲಿ ಗುಬ್ಬಿ ಗೂಡನ್ನು ಕಟ್ಟುತ್ತಿತ್ತು. ಇದೀಗ ನಗರೀಕರಣದ ಪ್ರಭಾವದಿಂದ ಹೆಂಚಿನ ಮನೆಗಳು ಆರ್‌ಸಿಸಿ ಮನೆಯಾಗಿ ಮಾರ್ಪಟ್ಟಿವೆ. ಇದರಿಂದ ಸ್ನೇಹಜೀವಿಯಾಗಿರುವ ಗುಬ್ಬಿಗಳ ಸಂತತಿ ಅಳಿವಿನಂಚಿಗೆ ದೂಡಲ್ಪಟ್ಟಿವೆ. ಅದನ್ನು ಸಂರಕ್ಷಿಸುವ ಪ್ರಯತ್ನವನ್ನು ಎಲ್ಲರೂ ಸೇರಿ ಮಾಡಬೇಕು. ಜನವಸತಿ ಪ್ರದೇಶಗಳಲ್ಲಿ ಮಾತ್ರ ವಾಸಿಸುವ ಗುಬ್ಬಚ್ಚಿಗಳು, ಇಂದು ನಮ್ಮ ಆಧುನಿಕತೆಯ ಹೊಡೆತಕ್ಕೆ ಸಿಕ್ಕಿ ನಲುಗಿವೆ. ಅವುಗಳ ಸಂತತಿಯ ಉಳಿವಿಗೆ ಕಾರ್ಯಪ್ರವೃತ್ತರಾಗಬೇಕು ಎಂದರು.

ವೈಲ್ಡ್‌ಲೈಫ್ ಕನ್ಸರ್ವೇಷನ್ ಫೌಂಡೇಶನ್ ಮುಖ್ಯಸ್ಥ ರಾಜ್‌ಕುಮಾರ್ ಡಿ.ಅರಸ್ ಮಾತನಾಡಿ, ಈ ಹಿಂದೆ ರೈತರೊಂದಿಗೆ ಒಡನಾಡಿಯಾಗಿ ಗುಬ್ಬಚ್ಚಿಗಳು ಸಹಬಾಳ್ವೆಯಿಂದ ಜೀವನ ನಡೆಸುತ್ತಿದ್ದವು. ಗ್ರಾಮೀಣ ಪ್ರದೇಶದಲ್ಲಿ ಹೆಂಚಿನ ಮನೆಗಳ ಸೂರಿನಲ್ಲೇ ಗೂಡು ಕಟ್ಟಿ ಜೀವಿಸುತ್ತಿದ್ದವು. ಕಳೆದ ಕೆಲ ವರ್ಷಗಳಿಂದ ಗ್ರಾಮೀಣ ಪ್ರದೇಶದಲ್ಲಿ ಹಳೆ ಹೆಂಚಿನ ಮನೆಗಳು ಕಣ್ಮರೆಯಾಗುತ್ತಿವೆ. ಇದರಿಂದ ಗುಬ್ಬಚ್ಚಿಗಳು ಗೂಡು ಕಟ್ಟಲು ಸಾಧ್ಯವಾಗುತ್ತಿಲ್ಲ. ಇದರಿಂದ ಅವುಗಳ ಸಂತತಿ ಅವನತಿಯತ್ತ ಸಾಗುತ್ತಿದೆ. ಪರಿಸ್ಥಿತಿ ಹೀಗೆ ಮುಂದುವರೆದರೆ ಮುಂಬರುವ ಪೀಳಿಗೆಗೆ ಗುಬ್ಬಚ್ಚಿಗಳನ್ನು ಚಿತ್ರದ ಮೂಲಕ ತೋರಿಸಬೇಕಾದ ದುಸ್ಥಿತಿ ಒದಗಿ ಬರುವ ಸಾಧ್ಯತೆ ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಈಗಿನಿಂದಲೇ ಗುಬ್ಬಚ್ಚಿಗಳ ಸಂರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳುವ ಅನಿವಾರ್ಯತೆ ಎದುರಾಗಿದೆ. ಗುಬ್ಬಚ್ಚಿಗಳು ಗೂಡು ಕಟ್ಟಲು ಪೂರಕವಾದ ವಾತಾವರಣ ಕಲ್ಪಿಸಬೇಕು. ಗುಬ್ಬಚ್ಚಿಗಳ ಗೂಡನ್ನು ಸಾಕು ಪ್ರಾಣಿಗಳಾದ ಬೆಕ್ಕು, ನಾಯಿಗಳಿಂದ ರಕ್ಷಣೆ ಮಾಡಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಶಾಲೆ ಶಿಕ್ಷಕರು, ಗ್ರಾಮದ ಹಿರಿಯ ಮುಖಂಡರು, ಶ್ರೀನಿವಾಸನ್ ಸರ್ವೀಸಸ್ ಟ್ರಸ್ಟ್ ಸದಸ್ಯರು, ವೈಲ್ಡ್‌ಲೈಫ್ ಕನ್ಸರ್ವೇಷನ್ ಫೌಂಡೇಶನ್ ಸದಸ್ಯರಾದ ಪಿ.ಕೆ.ಅನಿಲ್‌ಕುಮಾರ್, ಮಾರ್ಕ್ ಸ್ಟೀವ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.



ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಟ್ರಾಮಾ ಕೇರ್ ಸೆಂಟರ್ ಕಾರ್ಯಾರಂಭ

ಹೊರಗುತ್ತಿಗೆ ಆಧಾರದಲ್ಲಿ 100 ಸ್ಟಾಫ್ ನರ್ಸ್, 81 ಮಂದಿ ಟೆಕ್ನೀಷಿಯನ್ಸ್, 'ಡಿ' ಗ್ರೂಪ್ ನೌಕರರ ನೇಮಕ



ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ


ಟ್ರಾಮಾಕೇರ್ ಸೆಂಟರ್

ಮೈಸೂರು, ಮಾ.20(ಆರ್‌ಕೆ)– ಮೈಸೂರಿನ ಕೆಆರ್‌ಎಸ್ ರಸ್ತೆಯ ಪಿಕೆಟಿಬಿ ಆಸ್ಪತ್ರೆ ಆವರಣದಲ್ಲಿರುವ ರಾಜಕುಮಾರಿ ಕೃಷ್ಣಾಜಮ್ಮಣ್ಣಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ ಟ್ರಾಮಾ ಕೇರ್ ಸೆಂಟರ್‌ಗಳು ಕಾರ್ಯಾರಂಭಗೊಂಡಿವೆ.

ದುರಸ್ತಿ ಕಾಮಗಾರಿ ಆರಂಭಿಸಬೇಕಾಗಿರುವುದರಿಂದ ಕೆ.ಆರ್.ಆಸ್ಪತ್ರೆ ಪಾರಂಪರಿಕ ಕಟ್ಟಡದಿಂದ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ನ್ಯೂರೋಲಜಿ, ಸರ್ಜಿಕಲ್ ಗ್ಯಾಸ್ಟ್ರೋ ಎಂಟರಾಲಜಿ, ರೇಡಿಯೇಷನ್ ಆಂಕಾಲಜಿ, ಸರ್ಜಿಕಲ್ ಹಾಗೂ ಎಂಡೋಕ್ರೈನಾಲಜಿ ವಿಭಾಗಗಳನ್ನು, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮತ್ತು ಟ್ರಾಮಾಕೇರ್ ಸೆಂಟರ್ ಕಟ್ಟಡಗಳಿಗೆ ಸ್ಥಳಾಂತರಿಸಲಾಗಿದೆ.

ಕೆ.ಆರ್. ಆಸ್ಪತ್ರೆಯ ಆ ವಿಭಾಗದ ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಪ್ಯಾರಾಮೆಡಿಕಲ್ ಟೀಂ, ಕಿರಿಯ ವೈದ್ಯರನ್ನು ನೂತನ ಆಸ್ಪತ್ರೆ ಕಟ್ಟಡಗಳಿಗೆ ನಿಯೋಜಿಸಲಾಗಿದ್ದು, ಅಲ್ಲಿ ವೈದ್ಯಕೀಯ ಸೇವೆಗಳು ಆರಂಭವಾಗಿವೆ ಎಂದು ಎಂಎಂಸಿಆರ್‌ಐ ನಿರ್ದೇಶಕಿ ಡಾ. ಕೆಆರ್. ದಾಕ್ಷಾಯಿಣಿ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ. ಈ ಹೊಸ ಆಸ್ಪತ್ರೆಗಳಿಗೆ ನಿಯಮಾನುಸಾರ ಹೊರಗುತ್ತಿಗೆ (Out source) ಆಧಾರದಲ್ಲಿ 100 ಮಂದಿ ಸ್ಟಾಫ್ ನರ್ಸ್‌ಗಳು, 81 ಟೆಕ್ನಿಷಿಯನ್ ನೇಮಕ ಮಾಡಿಕೊಳ್ಳಲಾಗಿದ್ದು, ಅವರು ನಾಳೆ (ಮಾ.21)ಯಿಂದಲೇ ಕರ್ತವ್ಯಕ್ಕೆ ವರದಿ ಮಾಡಿಕೊಂಡು ಸೇವೆ ಆರಂಭಿಸುವರು. ಹೊರ, ಒಳರೋಗಿ ವಿಭಾಗ, ಆಪರೇಷನ್ ಥಿಯೇಟರ್‌ಗಳು, ಎಸ್‌ಎಸ್‌ಯು, ಐಸಿಯುಗಳೂ ಕಾರ್ಯಾರಂಭಗೊಂಡಿವೆ ಎಂದು ತಿಳಿಸಿದರು. ಟ್ರಾಮಾಕೇರ್ ಸೆಂಟರ್‌ನಲ್ಲಿ ಈಗಾಗಲೇ 60 ಮಂದಿ ಒಳರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದಾರೆ.

ಸೂಪರ್ ಸ್ಪೆಷಾ ಲಿಟಿ ವಿಭಾಗಗಳಲ್ಲಿಯೂ ರೋಗಿಗಳಿಗೆ ವೈದ್ಯಕೀಯ ಸೇವೆಗಳು ಆರಂಭವಾಗಿವೆ. ಐದು ಓಟಿಗಳಲ್ಲಿ ಸರ್ಜರಿ ನಡೆಯುತ್ತಿದ್ದು, 16 ಐಸಿಯುಗಳಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಆಸ್ಪತ್ರೆಗಳ ಎಲ್ಲಾ ಹಾಸಿಗೆಗಳಿಗೂ ಸೆಂಟ್ರಲೈಸ್ಡ್ ಆಕ್ಸಿಜನ್ ಸಂಪರ್ಕ ಕಲ್ಪಿಸಲಾಗಿದೆ ಎಂದು ಡಾ. ದಾಕ್ಷಾಯಿಣಿ ತಿಳಿಸಿದರು. ಚೆಲುವಾಂಬ ಆಸ್ಪತ್ರೆಯ ಮಕ್ಕಳ ವಿಭಾಗ ಮತ್ತು ಸೀತಾರಂಗ ಬ್ಲಾಕ್ ಕಟ್ಟಡಗಳಲ್ಲಿ ಶುಕ್ರವಾರದಿಂದ ರಿಪೇರಿ ಕಾಮಗಾರಿ ಆರಂಭಿಸಲಾಗಿದೆ. ನಂತರದ ದಿನಗಳಲ್ಲಿ ಪಾರಂಪರಿಕ ಕಟ್ಟಡ, ಕೆ.ಆರ್. ಆಸ್ಪತ್ರೆ ಕಟ್ಟಡಗಳಲ್ಲಿರುವ ವಿಭಾಗಗಳನ್ನು ಹಂತ–ಹಂತವಾಗಿ ಸ್ಥಳಾಂತರಿಸಿಕೊಂಡು ರಿಪೇರಿ ಕೆಲಸ ಆರಂಭಿಸಲಾಗುವುದು ಎಂದು ಮಾಹಿತಿ ನೀಡಿದರು.

ಇನ್ನು 15 ದಿನಗಳೊಳಗಾಗಿ ಸೂಪರ್ ಸ್ಪೆಷಾಲಿಟಿ ಮತ್ತು ಟ್ರಾಮಾಕೇರ್ ಸೆಂಟರ್ ಕಟ್ಟಡಗಳಲ್ಲಿ ಪೂರ್ಣ ಪ್ರಮಾಣದ ಸೇವೆ ಆರಂಭವಾಗಲಿದ್ದು, ವೈದ್ಯರು ಮತ್ತು ಸಿಬ್ಬಂದಿಗಳನ್ನು ಅಗತ್ಯವಿರುವ ಸಂಖ್ಯೆಯಲ್ಲಿ ನಿಯೋ ಜಿಸಲು ತಾವು ಸರ್ವರೀತಿಯಲ್ಲಿ ತಯಾರಿ ನಡೆಸುತ್ತಿರುವುದಾಗಿಯೂ ನಿರ್ದೇಶಕರು ತಿಳಿಸಿದ್ದಾರೆ. ಈಗಾಗಲೇ ದಿನಕ್ಕೆ 100ಕ್ಕೂ ಹೆಚ್ಚು ಹೊರರೋಗಿಗಳು ಆಸ್ಪತ್ರೆಯಲ್ಲಿ ನೋಂದಣಿಯಾಗುತ್ತಿದ್ದು, 10ಕ್ಕೂ ಹೆಚ್ಚು ಮಂದಿ ಒಳರೋಗಿಗಳಾಗಿ ದಾಖಲಾಗುತ್ತಿ ದ್ದಾರೆ. ಒಟ್ಟು 60 ಮಂದಿ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇ ಕಾಮಗಾರಿ ಅವೈಜ್ಞಾನಿಕ: ಕರವೇ ಆರೋಪ



ಮೈಸೂರು,ಮಾ.20(ಪಿಎಂ)–ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇ ಕಾಮಗಾರಿ ಅವೈಜ್ಞಾನಿಕವಾಗಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಆರೋಪಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಕರವೇ ಜಿಲ್ಲಾಧ್ಯಕ್ಷ ಪ್ರವೀಣ್‌ಕುಮಾರ್, ಸದರಿ ಎಕ್ಸ್‌ಪ್ರೆಸ್ ವೇನಲ್ಲಿ ಬಹಳಷ್ಟು ಕಡೆಗಳಲ್ಲಿ ಹಳ್ಳಗಳಿದ್ದು, ಅವೈಜ್ಞಾನಿಕ ತಿರುವುಗಳನ್ನು ಹೊಂದಿದೆ. ಹಾಗಾಗಿ ಅಪಘಾತಗಳು ಹೆಚ್ಚಾಗುತ್ತಿವೆ. ಹಳ್ಳಿಗಳ ಸಂಪರ್ಕಕ್ಕೆ ಸುಲಲಿತವಾದ ರಸ್ತೆಗಳನ್ನು ನಿರ್ಮಿಸಿಲ್ಲ. ಯಾವುದಾದರೂ ಗ್ರಾಮಕ್ಕೆ ತಲುಪಬೇಕಾದರೆ 10ರಿಂದ 15 ಕಿ.ಮೀ. ಸುತ್ತುವ ಪರಿಸ್ಥಿತಿ ಇದೆ. ಹಾಗಾಗಿ ಕಾಮಗಾರಿಯನ್ನು ಸಂಪೂರ್ಣವಾಗಿ ಪರಿಶೀಲಿಸಿ, ಗುತ್ತಿಗೆದಾರರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಈ ಹಿಂದೆ ಸದರಿ ಮಾರ್ಗದಲ್ಲಿ ಇದ್ದ ಸಣ್ಣಮಟ್ಟ ವ್ಯಾಪಾರಿಗಳು ಬೀದಿಗೆ ಬಿದ್ದಿದ್ದಾರೆ. ಹೋಟೆಲ್, ಬಂಕ್‌ಗಳನ್ನು ತೆರವುಗೊಳಿಸಿದ್ದು, ಪ್ರಯಾಣಿಕರಿಗೆ ಸಮರ್ಪಕ ಮೂಲ ಸೌಕರ್ಯ ಕಲ್ಪಿಸಿಲ್ಲ. ರೈತರು ತಮ್ಮ ಹೊಲ–ಗದ್ದೆಗಳಿಗೆ ಹೋಗಲು ಸರಿಯಾದ ಮಾರ್ಗವಿಲ್ಲದೆ ಪರದಾಡುವ ಪರಿಸ್ಥಿತಿ ಇದೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಶ್ರೀಧರ್, 'ಎಲ್ಲರೂ ಸರ್ವೀಸ್ ರಸ್ತೆಯಲ್ಲಿ ಹೋದರೆ ಟೋಲ್ ಕಟ್ಟುವವರ್ಯಾರು? ಹಾಗಾಗಿ ಸರ್ವೀಸ್ ರಸ್ತೆ ಪೂರ್ಣ ಮಾಡಿಲ್ಲ' ಎಂದು ಬೇಜವಾಬ್ದಾರಿ ಹೇಳಿಕೆ ನೀಡಿದ್ದಾರೆ ಎಂದು ಕಿಡಿಕಾರಿದರು. ಕಾಮಗಾರಿ ನಡೆಸಿರುವ ಗುತ್ತಿಗೆದಾರರ ಪರವಾಗಿ ಮೈಸೂರು ಸಂಸದರು ಹೇಳಿಕೆ ನೀಡುತ್ತಿದ್ದಾರೆ. ಈ ಹೆದ್ದಾರಿಗೆ ದುಬಾರಿ ಟೋಲ್ ವಿಧಿಸಿರುವುದನ್ನು ಪ್ರಶ್ನಿಸಿದರೆ, ಮೈಸೂರು–ಗುಂಡ್ಲುಪೇಟೆ ಹೆದ್ದಾರಿಯಲ್ಲಿ ಸರ್ವೀಸ್ ರಸ್ತೆ ಇದೆಯೇ? ಅಲ್ಲಿ ಟೋಲ್ ಪಾವತಿ ಮಾಡುತ್ತಿಲ್ಲವೇ? ಎಂದು ಪ್ರಶ್ನಿಸುತ್ತಿದ್ದಾರೆ. ಅವರು ಪ್ರತಿನಿಧಿಸುವ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲೇ ಸರ್ವೀಸ್ ರಸ್ತೆ ಇಲ್ಲವೆಂದು ಟೋಲ್‌ಗೆ ತಡೆಯೊಡ್ಡಲು ಇವರು ಏಕೆ ಮುಂದಾಗಲಿಲ್ಲ ಎಂದು ಪ್ರಶ್ನಿಸಿದರು. ಕರವೇ ಜಿಲ್ಲಾ ವಕ್ತಾರ ಗಣೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಫ್ರೋಜ್, ಎನ್‌ಆರ್ ಕ್ಷೇತ್ರದ ಅಧ್ಯಕ್ಷ ರಫೀಕ್, ಪದಾಧಿಕಾರಿಗಳಾದ ರಘು, ಆನಂದ್, ಹೇಮಂತ್‌ಗೌಡ ಗೋಷ್ಠಿಯಲ್ಲಿದ್ದರು.

ಈಜು ತರಬೇತಿ ಶಿಬಿರ

ಮೈಸೂರು, ಮಾ. 20– ಮೈಸೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗವು ಈಜು ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಲು ಮಾ. 30ರಿಂದ ಮೇ 28 ರವರೆಗೆ ಎಂಟು ವರ್ಷಕ್ಕೂ ಮೇಲ್ಪಟ್ಟ ಬಾಲಕರು, ಬಾಲಕಿಯರು, ಪುರುಷರು ಹಾಗೂ ಮಹಿಳೆಯರಿಗೆ ವಿಶೇಷ ಈಜು ತರಬೇತಿ ಶಿಬಿರಗಳನ್ನು ಎರಡು ವಿಭಾಗಗಳಾಗಿ ಆಯೋಜಿಸಲಾಗಿದೆ. ಒಂದು ಗುಂಪಿನಲ್ಲಿ 70 ಜನ ಶಿಬಿರಾರ್ಥಿಗಳಿಗೆ ಮಾತ್ರ ಪ್ರವೇಶವಿರುತ್ತದೆ. ಮೊದಲು ಬಂದವರಿಗೆ ಆದ್ಯತೆ ನೀಡಲಾಗುವುದು. ಅರ್ಜಿಗಳನ್ನು ಮಾ. 20ರ ಬೆಳಗ್ಗೆ 8.30 ರಿಂದ ಈಜುಕೊಳದಲ್ಲಿ ವಿತರಿಸಲಾಗುತ್ತಿದೆ.

ಮಾ. 30 ರಿಂದ 28 ಮತ್ತು ಮೇ 2 ರಿಂದ 26 ರವರೆಗೆ ಬೆಳಗ್ಗೆ 8.30 ರಿಂದ 9.30, ಬೆಳಗ್ಗೆ 9.30 ರಿಂದ 10.30 ಹಾಗೂ ಸಂಜೆ 5 ರಿಂದ 6 ರವರೆಗೆ ನಡೆಯುತ್ತದೆ. ಹೆಚ್ಚಿನ ಮಾಹಿತಿಗೆ ಮೊ. 9980304035 ಸಂಪರ್ಕಿಸಬಹುದು.

ಬಸವಣ್ಣ, ಕುವೆಂಪು, ನಾರಾಯಣ ಗುರು, ಡಾ. ಅಂಬೇಡ್ಕರ್ ಆಯಿತು, ಈಗ ಒಕ್ಕಲಿಗ ಇತಿಹಾಸ ತಿರುಚಲೆತ್ನಿಸಿದ ಬಿಜೆಪಿ

- ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ವಾಗ್ದಾಳಿ
- ಅಧಿಕಾರಕ್ಕಾಗಿ ಬಿಜೆಪಿಯವರು ಯಾವ ಕೆಲಸಕ್ಕೆ ಬೇಕಾದರೂ ಕೈ ಹಾಕುತ್ತಾರೆ ಎಂಬುದಕ್ಕೆ ಇದೇ ಸಾಕ್ಷಿ



ಬೆಂಗಳೂರು, ಮಾ. 20 (ಕೆಎಂಶಿ)– ಬಸವಣ್ಣ, ಕುವೆಂಪು, ನಾರಾಯಣ ಗುರು, ಡಾ. ಅಂಬೇಡ್ಕರ್ ಸೇರಿದಂತೆ ಹಲವು ಮಹನೀಯರ ಇತಿಹಾಸ ತಿರುಚಿದ್ದ ಬಿಜೆಪಿ, ಈಗ ಉರಿಗೌಡ–ನಂಜೇಗೌಡ ಹೆಸರಲ್ಲಿ ಒಕ್ಕಲಿಗರ ಇತಿಹಾಸ ತಿರುಚುತ್ತಿದ್ದಾರೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಆರೋ ಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತ ನಾಡಿದ ಅವರು, ಜಾತಿ, ಕೋಮುಗಳ ನಡುವೆ ದ್ವೇಷ ತಂದು ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳುವ ಪ್ರಯತ್ನವನ್ನು ಬಿಜೆಪಿ ಮಾಡುತ್ತಿದೆ ಎಂದರು. ಟಿಪ್ಪು ಸುಲ್ತಾನ್ ಸತ್ತು ಎರಡು ಶತಮಾನಗಳೇ ಕಳೆದಿವೆ. ಈಗ ಉರಿಗೌಡ, ನಂಜೇಗೌಡ ರನ್ನು ಬಿಜೆಪಿ ಸೃಷ್ಟಿಸಿದೆ.

ಅನೇಕ ಇತಿಹಾಸ ತಜ್ಞರು, ಸಂಶೋಧಕರು ಉರಿಗೌಡ–ನಂಜೇಗೌಡ ಕೇವಲ ಕಾಲ್ಪನಿಕ ಪಾತ್ರ ಎಂದು ಹೇಳುತ್ತಿದ್ದರೂ ಬಿಜೆಪಿಯವರು ಮಾತ್ರ ಇದನ್ನು ಬಿಡಲು ರೆಡಿ ಇಲ್ಲ. ಇತಿಹಾಸದ ಯಾವ ದಾಖಲೆಯಲ್ಲಿ ಉರಿಗೌಡ–ನಂಜೇಗೌಡ ಟಿಪ್ಪು ಸುಲ್ತಾನ್ ಕೊಂದರು ಎಂಬುದು ಇದೆ ನೀವೇ ಹೇಳಿ ನೋಡೋಣ. ಬ್ರಿಟಿಷರ ವಿರುದ್ಧ ಹೋರಾಡಿದ ಟಿಪ್ಪು ಸುಲ್ತಾನನನ್ನು ಒಕ್ಕಲಿಗರು ಕೊಂದರು, ಆ ಮೂಲಕ ಒಕ್ಕಲಿಗರು ದೇಶವಿರೋಧಿಗಳು, ಕೊಲೆಗಡುಕರು ಎಂದು ಅವರ ಗೌರವ, ಸ್ವಾಭಿಮಾನಕ್ಕೆ ಮಸಿ ಬಳಿಯಲಾಗುತ್ತಿದೆ.

ಬಿಜೆಪಿಯವರು ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಯಾರನ್ನು ಬೇಕಾದರೂ ಸೃಷ್ಟಿಸುತ್ತಾರೆ, ಯಾರ ಮನೆಯನ್ನು ಬೇಕಾದರೂ ಹಾಳು ಮಾಡುತ್ತಾರೆ.

ಸಿ.ಟಿ.ರವಿ ಹಾಗೂ ಡಾ.ಅಶ್ವತ್ ನಾರಾಯಣ್ ಅವರು ಉರಿಗೌಡ, ನಂಜೇಗೌಡ ಎಂಬ ಕಾಲ್ಪನಿಕ ಪಾತ್ರಗಳ ಮೂಲಕ ಒಕ್ಕಲಿಗ ಸಮುದಾಯದ ವಿರುದ್ಧ ಬೇರೆಯವರನ್ನು ಎತ್ತಿ ಕಟ್ಟುತ್ತಿದ್ದಾರೆ.

ಒಕ್ಕಲಿಗ ಸಮುದಾಯದ ಹೆಸರನ್ನು ಬಳಸಿಕೊಂಡು ರಾಜಕೀಯವಾಗಿ ಬೆಳೆಯುತ್ತಿರುವ ಇವರು ಈಗ ಅದೇ ಸಮಾಜದ ಸ್ವಾಭಿಮಾನ ಹಾಗೂ ಘನತೆಗೆ ಮಸಿ ಬಳಿಯುತ್ತಿದ್ದಾರೆ ಎಂದರು.

ಬಿಜೆಪಿಯ ವಾಟ್ಸಾಪ್ ಯೂನಿವರ್ಸಿಟಿಯು ಇತಿಹಾಸ ತಿರುಚಿ, ಜಾತಿ ಸಮುದಾಯಗಳ ಮಧ್ಯೆ ವಿಷಬೀಜ ಬಿತ್ತುವ ಪ್ರಯತ್ನದ ವಿರುದ್ಧ ಹೋರಾಟ ಮಾಡಬೇಕು. ಇದು ನಿರ್ಮಲಾನಂದ ಶ್ರೀಗಳು, ನಂಜಾವಧೂತ ಸ್ವಾಮೀಜಿಗಳು ಸೇರಿದಂತೆ ಎಲ್ಲ ಧರ್ಮದ ಶ್ರೀಗಳ ಜವಾಬ್ದಾರಿ ಎಂದರು.

ನಾನು ಭವಿಷ್ಯದ ಮುಖ್ಯಮಂತ್ರಿ ಅಭ್ಯರ್ಥಿ...!

ಕೆಆರ್ ಕ್ಷೇತ್ರದಲ್ಲಿ ಸ್ಪರ್ಧೆ; ಪಿ.ಹರೀಶ್ ದೀಕ್ಷಿತ್



ಮೈಸೂರು,ಮಾ.20(ಪಿಎಂ)– ಈ ಬಾರಿ ವಿಧಾನಸಭಾ ಚುನಾವಣೆಯಲ್ಲಿ ಕೆಆರ್ ಕ್ಷೇತ್ರದಿಂದ ಸ್ಪರ್ಧಿಸಲಿಚ್ಛಿಸಿರುವುದಾಗಿ ಕುವೆಂಪುನಗರ ನಿವಾಸಿ, ಪುರೋಹಿತ ಪಿ.ಹರೀಶ್ ದೀಕ್ಷಿತ್ ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಪ್ರಾಥಮಿಕ ಸದಸ್ಯತ್ವ ಹೊಂದಿರುವ ನಾನು, ಬಿಜೆಪಿಯಿಂದ ಟಿಕೆಟ್ ಪಡೆದು ಕೆಆರ್ ಕ್ಷೇತ್ರದಲ್ಲಿ ಸ್ಪರ್ಧಿಸಲು ಇಚ್ಛಿಸಿದ್ದೇನೆ. ಟಿಕೆಟ್ ಸಿಗದಿದ್ದರೆ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿಯುವ ಉದ್ದೇಶ ಹೊಂದಿದ್ದೇನೆ. ಭವಿಷ್ಯದಲ್ಲಿ ಮುಖ್ಯಮಂತ್ರಿ ಆಗಬೇಕು ಎಂಬ ಹಂಬಲ ಹೊಂದಿದ್ದೇನೆ. ಅಲ್ಲದೆ, ಪ್ರಜಾಪ್ರಭು ಎಂದು ನನ್ನ ಹೆಸರು ಬದಲಿಸಿಕೊಳ್ಳಲಿದ್ದೇನೆ ಎಂದರು.

ನಂಜನಗೂಡಲ್ಲಿ ಡಾ.ಹೆಚ್.ಸಿ.ಮಹದೇವಪ್ಪರನ್ನೇ ಕಾಂಗ್ರೆಸ್‌ನಿಂದ ಕಣಕ್ಕಿಳಿಸಲು ಒತ್ತಾಯ



ಮೈಸೂರು,ಮಾ.20(ಪಿಎಂ)– ನಂಜನಗೂಡು ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಡಾ.ಹೆಚ್.ಸಿ.ಮಹದೇವಪ್ಪ ಕಣಕ್ಕಿಳಿಸಬೇಕೆಂದು ಪಕ್ಷದ ವರಿಷ್ಠರಲ್ಲಿ ನಂಜನಗೂಡು ಕಾಂಗ್ರೆಸ್ ಮುಖಂಡ ದೇವನೂರು ಮಹದೇವಪ್ಪ ಒತ್ತಾಯಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಂಜನಗೂಡು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಲು ಕೆಪಿಸಿಸಿಗೆ ಅರ್ಜಿ ಸಲ್ಲಿಸಿದ್ದ ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿದ್ದ ಆರ್.ಧ್ರುವನಾರಾಯಣ್ ನಿಧನರಾದರು. ಈ ಕ್ಷೇತ್ರದಿಂದ ಹೆಚ್.ಸಿ.ಮಹದೇವಪ್ಪ ಪ್ರಬಲ ಟಿಕೆಟ್ ಆಕಾಂಕ್ಷಿಯಾಗಿದ್ದರೂ ಧ್ರುವನಾರಾಯಣ್ ಪುತ್ರ ದರ್ಶನ್ ಸ್ಪರ್ಧಿಸಲು ಬೆಂಬಲ ಸೂಚಿಸಿದ್ದಾರೆ. ಆದರೆ ದರ್ಶನ್ ರಾಜಕೀಯಕ್ಕೆ ಹೊಸಬರಾಗಿರುವ ಹಿನ್ನೆಲೆಯಲ್ಲಿ ಡಾ.ಹೆಚ್.ಸಿ.ಮಹದೇವಪ್ಪ ಅವರೇ ಸ್ಪರ್ಧಿಸಬೇಕು ಎಂದು ಆಗ್ರಹಿಸಿದರು.

ದರ್ಶನ್‌ಗೆ ಭವಿಷ್ಯದಲ್ಲಿ ಅವಕಾಶ ಕಲ್ಪಿಸಬಹುದು. ನಂಜನಗೂಡಿನಲ್ಲಿ ಮಹದೇವಪ್ಪ ಅವರೇ ಸ್ಪರ್ಧೆ ಮಾಡಬೇಕೆಂಬುದು ಕ್ಷೇತ್ರದ ಸರ್ವ ಜನಾಂಗದ ಮುಖಂಡರ ಅಭಿಪ್ರಾಯವಾಗಿದೆ. ಹಾಗಾಗಿ ಪಕ್ಷದ ವರಿಷ್ಠರು ಡಾ.ಹೆಚ್.ಸಿ.ಮಹದೇವಪ್ಪ ಅವರನ್ನೇ ಅಭ್ಯರ್ಥಿಯಾಗಿ ಆಯ್ಕೆ ಮಾಡಬೇಕು ಎಂದು ಕೋರಿದರು. ನಂಜನಗೂಡು ಕಾಂಗ್ರೆಸ್ ಮುಖಂಡರಾದ ಕೆ.ಬಿ.ಸ್ವಾಮಿ, ದಿನೇಶ್, ಚೋಳರಾಜು ಗೋಷ್ಠಿಯಲ್ಲಿದ್ದರು.

ಗುಬ್ಬಚ್ಚಿ ಸಂರಕ್ಷಣೆ ಸಂಬಂಧ ಜಾಗೃತಿ



ಅಂತಾರಾಷ್ಟ್ರೀಯ ಗುಬ್ಬಚ್ಚಿ ದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಗುಬ್ಬಚ್ಚಿ ಸಂರಕ್ಷಣೆಯ ಜಾಗೃತಿ ಕಾರ್ಯಕ್ರಮದಲ್ಲಿ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷರಾದ ಹೇಮ ನಂದೀಶ್, ಕೆಎಂಪಿಕೆ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ಅಜಯ್ ಶಾಸ್ತ್ರಿ, ರವಿಚಂದ್ರ, ರಾಕೇಶ್, ಸುಚೇಂದ್ರ, ಶಾಲೆಯ ಮುಖ್ಯ ಶಿಕ್ಷಕರಾದ ಮೋಹನ್ ಕುಮಾರ್, ಸಹ ಶಿಕ್ಷಕರಾದ ಚಂಪ ಶ್ರೀ, ದಿವ್ಯ, ರೇಖಾ ಹಾಗೂ ಇನ್ನಿತರರು ಭಾಗಿಯಾಗಿದ್ದರು.

ಆರೋಗ್ಯ ಯೋಜನೆಗೆ ಹಣ ಕಟ್ಟಲು ಮಾ.31 ಕೊನೆ ದಿನಾಂಕ

ಮೈಸೂರು, ಮಾ. 20– ಮೈಸೂರಿನ ನಿವೃತ್ತ ಪೊಲೀಸ್ ಅಧಿಕಾರಿಗಳ ಸಂಘದಲ್ಲಿ ಆರೋಗ್ಯ ಯೋಜನೆಯ ಫಲಾನುಭವಿಗಳಾಗಿದ್ದು ಇಲ್ಲಿಯವರೆಗೆ ನಿವೃತ್ತ ಪೊಲೀಸ್ ಅಧಿಕಾರಿಗಳ ಆರೋಗ್ಯ ಯೋಜನೆಗೆ ಹಣ ಜಮಾ ಮಾಡದೆ ಉಳಿಸಿಕೊಂಡಿದ್ದಲ್ಲಿ ಮಾ. 31ರವರೆಗೆ ಕಟ್ಟಲು ಕೊನೆಯ ಅವಕಾಶ ನೀಡಲಾಗಿದೆ. ಕಟ್ಟದಿದ್ದಲ್ಲಿ ಡಿಜಿಪಿ ಅವರ ಆದೇಶದಂತೆ ಆರೋಗ್ಯ ಯೋಜನೆಯಿಂದ ನಿಮ್ಮನ್ನು ಕೈಬಿಡಲಾಗುವುದು. ಹಾಗೂ ಸಂಘದ ವಾರ್ಷಿಕ ಚಂದಾವನ್ನು ಕಟ್ಟದೆ ಉಳಿಸಿಕೊಂಡಿರುವವರಿಗೂ ಹಣವನ್ನು ಕಟ್ಟಲು ತಿಳಿಸಲಾಗಿದೆ. ಕಟ್ಟದಿದ್ದಲ್ಲಿ ಸಂಘದ ಸದಸ್ಯತ್ವದಿಂದ ಕೈಬಿಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಮೈಸೂರಲ್ಲಿ ಕ್ಷುಲ್ಲಕ ಕಾರಣಕ್ಕೆ ಇರಿದು ಯುವಕನ ಹತ್ಯೆ

- ಮತ್ತೋರ್ವನಿಗೆ ತೀವ್ರ ಗಾಯ
- ಭಾನುವಾರ ತಡರಾತ್ರಿ ಘಟನೆ
- ಈ ಸಂಬಂಧ ಮೂವರ ಬಂಧನ

ಮೈಸೂರು, ಮಾ.20(ಆರ್‌ಕೆ)– ಕ್ಷುಲ್ಲಕ ಕಾರಣಕ್ಕೆ ಇಬ್ಬರು ರೌಡಿಶೀಟರ್ಸ್ ಗುಂಪುಗಳ ನಡುವೆ ಭಾನುವಾರ ತಡರಾತ್ರಿ ಮೈಸೂರಿನ ಚಾಮರಾಜ ಜೋಡಿ ರಸ್ತೆಯಲ್ಲಿ ನಡೆದ ಘರ್ಷಣೆಯಲ್ಲಿ ಒಬ್ಬನನ್ನು ಇರಿದು ಕೊಲೆ ಮಾಡಲಾಗಿದ್ದು, ಮತ್ತೋರ್ವ ಗಂಭೀರವಾಗಿ ಗಾಯಗೊಂಡಿದ್ದಾನೆ.

ಮೈಸೂರಿನ ಕೆ.ಆರ್.ಮೊಹಲ್ಲಾದ ಕಾಕರವಾಡಿ ನಿವಾಸಿ ಶ್ರೀಗಂಧ(26) ಹತ್ಯೆಯಾದ ಯುವಕ. ಘಟನೆಯಲ್ಲಿ ಗಾಯಗೊಂಡಿರುವ ನಾಲಾ ಬೀದಿ ನಿವಾಸಿ ರವಿ (28)ಯನ್ನು ದೇವರಾಜ ಮೊಹಲ್ಲಾದ ಖಾಸಗಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಭಾನುವಾರ ರಾತ್ರಿ 10 ಗಂಟೆ ವೇಳೆಯಲ್ಲಿ ರವಿ, ತಂದೆ ರಮೇಶ್ ಅವರು ಶ್ರೀಗಂಧನ ಜೊತೆ ಜಗಳ ತೆಗೆದು ಥಳಿಸಿದ್ದರು ಎನ್ನಲಾಗಿದೆ.

ನಂತರ ರಾತ್ರಿ 11 ಗಂಟೆ ವೇಳೆಗೆ ಚಾಮರಾಜ ಜೋಡಿ ರಸ್ತೆಯ ಬಾರ್‌ವೊಂದರಲ್ಲಿದ್ದ ರವಿ ಬಳಿ ಬಂದ ಶ್ರೀಗಂಧ, ಅವನಿಗೆ ಅವಾಜ್ ಹಾಕಿ ಹೋಗಿದ್ದ. ಇದರಿಂದ ಕೆರಳಿದ ರವಿ ತನ್ನ ಸ್ನೇಹಿತರಾದ ಮುಜೀಬ್ ಮತ್ತು ಹರೀಶ್ ಅಲಿಯಾಸ್ ದೂದ್‌ನನ್ನು ಕರೆಸಿಕೊಂಡು ಚಾಮರಾಜ ಜೋಡಿ ರಸ್ತೆಯಲ್ಲಿದ್ದ ಶ್ರೀಗಂಧನ ಮೇಲೆರಗಿದ್ದಾರೆ. ಆ ವೇಳೆ ಚಾಕುವಿನಿಂದ ರವಿಗೆ ಶ್ರೀಗಂಧ ಇರಿದಿದ್ದಾನೆ. ಪ್ರತಿಯಾಗಿ ಅವನ ಮೇಲೆರಗಿದ ರವಿ ಮತ್ತು ಸ್ನೇಹಿತರು ಅವನಿಗೆ ಮೂರ್‍ನಾಲ್ಕು ಕಡೆ ಇರಿದು ಮುಜೀಬ್ ಮತ್ತು ಹರೀಶ್ ಪರಾರಿಯಾದರೆ, ಗಾಯಗೊಂಡು ನರಳುತ್ತಿದ್ದ ರವಿಯನ್ನು ಸಾರ್ವಜನಿಕರು ಆಸ್ಪತ್ರೆಗೆ ಸೇರಿಸಿದ್ದಾರೆ.

ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಕೆ.ಆರ್. ಠಾಣೆ ಪೊಲೀಸರು ಮಹಜರು ನಡೆಸಿ ಆಸ್ಪತ್ರೆಯಲ್ಲಿರುವ ರವಿಯಿಂದ ಹೇಳಿಕೆ ಪಡೆದು, ಆರೋಪಿಗಳಾದ ರಮೇಶ, ಮುಜೀಬ್ ಮತ್ತು ಹರೀಶ್ ಅಲಿಯಾಸ್ ದೂದ್‌ನನ್ನು ಮುಂಜಾನೆ ಬಂಧಿಸಿದ್ದಾರೆ. ಗಾಯಗೊಂಡಿರುವ ರವಿ ಕೆ.ಆರ್. ಠಾಣೆ ರೌಡಿ ಶೀಟರ್ ಆಗಿದ್ದರೆ, ಹತ್ಯೆಯಾದ ಶ್ರೀಗಂಧ ಲಕ್ಷ್ಮೀಪುರಂ ಠಾಣೆ ರೌಡಿ ಶೀಟರ್ ಎಂದು ಪೊಲೀಸರು ತಿಳಿಸಿದ್ದಾರೆ. ಈ ಹಿಂದಿನಿಂದಲೂ ಇವರಿಬ್ಬರ ನಡುವೆ ಒಂದಲ್ಲ ಒಂದು ವಿಷಯಕ್ಕೆ ಆಗಿಂದಾಗ್ಗೆ ಘರ್ಷಣೆಗಳು ನಡೆಯುತ್ತಿದ್ದು, ಪೊಲೀಸರು ಎಚ್ಚರಿಕೆ ನೀಡಿದ್ದರು. ಭಾನುವಾರ ರಾತ್ರಿಯೂ ಸಣ್ಣಪುಟ್ಟ ವಿಚಾರಕ್ಕಾಗಿ ಕುಡಿದ ಮತ್ತಿನಲ್ಲಿ ಆರಂಭವಾದ ಗಲಾಟೆ ಕೊಲೆಯಲ್ಲಿ ಅಂತ್ಯವಾಗಿದೆ.

ಪ್ರಕರಣ ದಾಖಲಿಸಿಕೊಂಡಿರುವ ಕೆ.ಆರ್. ಠಾಣೆ ಇನ್ಸ್‌ಪೆಕ್ಟರ್ ಮಹೇಶ್, ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಶವಾಗಾರದಲ್ಲಿ ಇಂದು ಮರಣೋತ್ತರ ಪರೀಕ್ಷೆ ನಂತರ ಶ್ರೀಗಂಧನ ದೇಹವನ್ನು ವಾರಸುದಾರರಿಗೆ ಒಪ್ಪಿಸಿದರು.

ಬಂಧಿತ ಮೂವರು ಆರೋಪಿಗಳನ್ನು ಇಂದು ಮಧ್ಯಾಹ್ನ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿ, ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಇರಿತಕ್ಕೊಳ ಗಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರವಿಯೂ ಈ ಪ್ರಕರಣದಲ್ಲಿ ಆರೋಪಿಯಾಗಿರುವುದರಿಂದ ಆತನನ್ನು ಬಂಧಿಸುವುದಾಗಿ ಇನ್ಸ್‌ಪೆಕ್ಟರ್ ಮಹೇಶ್ ತಿಳಿಸಿದ್ದಾರೆ. ಡಿಸಿಪಿ ಎಂ. ಮುತ್ತುರಾಜ್ ಮಾರ್ಗದರ್ಶನದಂತೆ ಕೆ.ಆರ್. ಉಪ ವಿಭಾಗದ ಎಸಿಪಿ ಎಸ್.ಇ. ಗಂಗಾಧರ ಸ್ವಾಮಿ ನೇತೃತ್ವದಲ್ಲಿ ನಡೆದ ಆರೋಪಿಗಳ ಪತ್ತೆ ಕಾರ್ಯಾಚರಣೆಯಲ್ಲಿ ಇನ್ಸ್‌ಪೆಕ್ಟರ್ ಮಹೇಶ್, ಸಿಬ್ಬಂದಿ ಪಾಲ್ಗೊಂಡಿದ್ದರು.

ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಆಹ್ವಾನ

ಮೈಸೂರು, ಮಾ.20– ನಂಜನಗೂಡು ತಾಲೂಕಿನ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಗೌರವಧನ ಸೇವೆಯ ಹುದ್ದೆಗಳ ಭರ್ತಿಗಾಗಿ ಆಫ್‌ಲೈನ್ ಮೂಲಕ ಮಾ.18 ರಂದು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಏ.17(ಸಂಜೆ 5.30) ರೊಳಗೆ ಅರ್ಜಿಯನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಂಜನಗೂಡಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ದೂ.ಸಂ.08221–226168 ನ್ನು ಸಂಪರ್ಕಿಸಬಹುದು ಎಂದು ನಂಜನಗೂಡು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಜೈಲ್ ಮೇಲೆ ಮತ್ತೆ ಪೊಲೀಸರು ದಾಳಿ

60,000 ರೂ. ನಗದು, ಗಾಂಜಾ, ಚಾಕು, ಮತ್ತಿತರ ವಸ್ತು ಪತ್ತೆ





ಮೈಸೂರು, ಮಾ.20(ಆರ್‌ಕೆ)–ವಿಧಾನಸಭಾ ಚುನಾವಣೆ ಘೋಷಣೆಗೆ ದಿನಗಣನೆ ಆರಂಭವಾಗುತ್ತಿದ್ದಂತೆಯೇ, ಮೈಸೂರು ಪೊಲೀಸರು ಎಚ್ಚೆತ್ತಿದ್ದಾರೆ. ಸಮಾಜ ಘಾತುಕ ಚಟುವಟಿಕೆಗಳನ್ನು ಹತ್ತಿಕ್ಕಲು ಮುಂದಾಗಿದ್ದಾರೆ.

ಮೈಸೂರಿನ ಕೇಂದ್ರ ಕಾರಾಗೃಹದ ಮೇಲೆ ಇಂದು ಸಂಜೆ ದಿಢೀರ್ ದಾಳಿ ನಡೆಸಿದ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಡಿಸಿಪಿ ಎಂ. ಮುತ್ತುರಾಜ್ ನೇತೃತ್ವದ 150ಕ್ಕೂ ಹೆಚ್ಚು ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ, 4 ಮಂದಿ ಕೈದಿಗಳ ಬಳಿ ಇದ್ದ 60,000 ರೂ ನಗದು, ಸುಮಾರು 100 ಗ್ರಾಂ ಗಾಂಜಾ ಹಾಗೂ ಒಂದು ಚಾಕು ಮತ್ತಿತರ ವಸ್ತುಗಳನ್ನು ವಶಪಡಿಸಿಕೊಂಡರು.

ಸಂಜೆ 4 ರಿಂದ 6–30 ಗಂಟೆವರೆಗೆ ನಡೆಸಿದ ದಾಳಿಯಲ್ಲಿ ಪ್ರತ್ಯೇಕ ಮಹಿಳಾ ತಂಡ ಸೇರಿ 6 ತಂಡಗಳು ಏಕ ಕಾಲದಲ್ಲಿ ಶೋಧಕಾರ್ಯ ನಡೆಸಿದವು. ಕೈದಿಗಳು ತಮ್ಮ ಬ್ಯಾಗ್‌ಗಳಲ್ಲಿ ನಗದು, ಗಾಂಜಾ, ಬೀಡಿ, ಸಿಗರೇಟ್, ಕಡ್ಡಿಪೆಟ್ಟಿಗೆ ಇರಿಸಿಕೊಂಡಿದ್ದುದು ಈ ವೇಳೆ ಪತ್ತೆಯಾಯಿತು. ಆರು ಮಂದಿ ಎಸಿಪಿ, ಆರು ಪೊಲೀಸ್ ಇನ್‌ಸ್ಪೆಕ್ಟರ್, 15 ಮಂದಿ ಸಬ್‌ಇನ್‌ಸ್ಪೆಕ್ಟರ್, 130 ಮಂದಿ ಸಿಬ್ಬಂದಿ, ಮಹಿಳಾ ಪೊಲೀಸ್, ಕಮಾಂಡೋ ಟೀಂ ದಾಳಿಯಲ್ಲಿ ಪಾಲ್ಗೊಂಡಿದ್ದವು. ಮಾದಕ ವಸ್ತು, ಮಾರಕಾಸ್ತ್ರ, ನಗದು ಪತ್ತೆಯಾದವರ ವಿರುದ್ಧ ಮಂಡಿ ಠಾಣೆಯಲ್ಲಿ ಪ್ರಕರಣ ದಾಖಲಿಸಿ ತನಿಖೆ ನಡೆಸಲಾಗುವುದು ಎಂದು ಡಿಸಿಪಿ ಮುತ್ತುರಾಜ್ ತಿಳಿಸಿದ್ದಾರೆ. ಫೆಬ್ರವರಿ 8 ರಂದು ನಗರ ಪೊಲೀಸ್ ಆಯುಕ್ತ ಬಿ. ರಮೇಶ್ ನೇತೃತ್ವದಲ್ಲಿ ಜೈಲಿನ ಮೇಲೆ ಹಠಾತ್ ದಾಳಿ ನಡೆಸಲಾಗಿತ್ತು. ಒಂದೂವರೆ ತಿಂಗಳಲ್ಲಿ ಎರಡು ಬಾರಿ ದಾಳಿ ನಡೆಸಿ ಜೈಲಿನಲ್ಲಿ ಶೋಧ ಕಾರ್ಯ ನಡೆಸಲಾಗಿದೆ. ಇಂದಿನ ದಾಳಿಯಲ್ಲಿ ಶ್ವಾನದಳ, ಲೋಹ ಪತ್ತೆದಳ, ಫಿಂಗರ್ ಪ್ರಿಂಟ್ಸ್ ಘಟಕಗಳ ಸಿಬ್ಬಂದಿ ಭಾಗವಹಿಸಿದ್ದರು.

ಮೈಸೂರು ನಗರದಾದ್ಯಂತ ರೌಡಿ ಶೀಟರ್‌ಗಳ ಮನೆಗಳ ಮೇಲೂ ಈಗಾಗಲೇ 2 ಬಾರಿ ದಾಳಿ ನಡೆಸಿ ಶೋಧ ಕಾರ್ಯ ನಡೆಸಿರುವ ಪೊಲೀಸರು, ಅವರನ್ನು ಕರೆತಂದು ಪರೇಡ್ ಮಾಡಿ ಸಮಾಜಘಾತುಕ ಚಟುವಟಿಕೆಗಳಲ್ಲಿ ಭಾಗಿಗಳಾಗದಂತೆ ಎಚ್ಚರಿಕೆ ನೀಡಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಏ.1ರಿಂದ ಎಳೆಯರ ಮೇಳ–2023

ಮೈಸೂರು, ಮಾ. 20– ಬೇಸಿಗೆ ರಜಾ ದಿನಗಳಲ್ಲಿ ಮಕ್ಕಳಿಗೆ ಕಲೆ ಮತ್ತು ಸಂಸ್ಕೃತಿಯನ್ನು ಪರಿಚಯಿಸಲು ಜೆಎಸ್‌ಎಸ್ ಮಹಾವಿದ್ಯಾಪೀಠದಿಂದ "ಎಳೆಯರ ಮೇಳ–2023" ಬೇಸಿಗೆ ಶಿಬಿರವನ್ನು ಏಪ್ರಿಲ್ 1ರಿಂದ 21 ರವರೆಗೆ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಶಾಲಾ ಆವರಣದಲ್ಲಿ ಏರ್ಪಡಿಸಲಾಗಿದೆ. 8 ವರ್ಷದಿಂದ 14 ವರ್ಷ ವಯೋಮಾನದ ಮಕ್ಕಳಿಗೆ ಅವಕಾಶವಿರುತ್ತದೆ. ಮಾ. 20 ರಿಂದ ಅರ್ಜಿಗಳನ್ನು ಪಡೆಯಬಹುದಾಗಿದೆ.

ಮಕ್ಕಳ ಸುಪ್ತ ಪ್ರತಿಭೆಯ ಬೆಳವಣಿಗೆ ಮತ್ತು ಪ್ರದರ್ಶನಕ್ಕೆ ಇದೊಂದು ಉತ್ತಮ ಅವಕಾಶ. ಶಿಬಿರದಲ್ಲಿ ರಂಗದಾಟಗಳು, ಬಣ್ಣದ ಕಲೆ, ಜೇಡಿಮಣ್ಣಿನ ಕಲೆ (ಟೆರ್‍ರಾಕೋಟ), ಕಾಳುಗಳಿಂದ ಚಿತ್ರ ರಚನೆ, ಪೇಪರ್ ಕ್ರಾಫ್ಟ್, ಹಾಡು, ನೃತ್ಯ, ನಾಟಕಗಳು, ಗಣ್ಯವ್ಯಕ್ತಿಗಳೊಡನೆ ಮುಖಾಮುಖಿ ಹೀಗೆ ಹತ್ತು ಹಲವು ಕಾರ್ಯಕ್ರಮಗಳಿರುತ್ತವೆ. ಶಿಬಿರದ ಕಡೆಯ ದಿನ ಹಾಡು, ನೃತ್ಯ, ನಾಟಕಗಳ ಪ್ರದರ್ಶನಗಳಿರುತ್ತವೆ.

ಹೆಚ್ಚಿನ ವಿವರಗಳಿಗೆ ಚಂದ್ರಶೇಖರಾಚಾರ್ (9448739365), ಶ್ರೀಮತಿ ಕೆ.ಎಸ್. ಪ್ರೇಮಲತಾ (7760223296), ಮಂಜುನಾಥ ಕಾಚಕ್ಕಿ (9164991992), ಶ್ರೀಮತಿ ಶಕುಂತಲಾ ಹೆಗಡೆ (8660750218) ಹಾಗೂ ಬಿ. ಜೀವನ್ ಕುಮಾರ್ (9880101305) ಅವರನ್ನು ಸಂಪರ್ಕಿಸಲು ಕೋರಲಾಗಿದೆ.

ಕರ್ನಾಟಕ ವಿಧಾನಸಭೆ ಚುನಾವಣೆ

ರಾಜ್ಯಾದ್ಯಂತ ಮತದಾರರ ಪಟ್ಟಿಯಲ್ಲಿದ್ದಾರೆ 17,000 ಶತಾಯುಷಿಗಳು

ಬೆಂಗಳೂರು: ಮೈಸೂರು ರಾಜ್ಯದ ಕಾಲದಲ್ಲೂ ಕರ್ನಾಟಕದ ಎಲ್ಲಾ ಚುನಾವಣೆಗಳನ್ನು ನೋಡಿದ ಕೆಲವೇ ಕೆಲವು ಮತದಾರಿದ್ದಾರೆ. ಈ ವರ್ಷದ ರಾಜ್ಯ ವಿಧಾನಸಭಾ ಚುನಾವಣೆಯ ಮತದಾರರ ಪಟ್ಟಿಯಲ್ಲಿ 17,000ಕ್ಕೂ ಹೆಚ್ಚು ನೋಂದಾಯಿತ ಮತದಾರರು 100 ವರ್ಷಕ್ಕಿಂತ ಮೇಲ್ಪಟ್ಟವರು.

ಕರ್ನಾಟಕದಲ್ಲಿ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಪ್ರಕಾರ, ಇದು ಇಲ್ಲಿಯವರೆಗೆ ರಾಜ್ಯದಲ್ಲಿ ಅತೀ ಹೆಚ್ಚು ಶತಾಯುಷಿ ಮತದಾರರ ಸಂಖ್ಯೆಯಾಗಿದೆ.

ರಾಜ್ಯದಲ್ಲಿ ಒಟ್ಟು 5.21 ಕೋಟಿ ನೋಂದಾಯಿತ ಮತದಾರರಿದ್ದು, ಅವರಲ್ಲಿ 2.59 ಕೋಟಿ ಮಹಿಳೆಯರು ಇದ್ದಾರೆ. ಮೊದಲ ಬಾರಿಗೆ ಮತದಾನ ಮಾಡುತ್ತಿರುವವರು 9.17 ಲಕ್ಷ ಮತ್ತು ತೃತೀಯ ಲಿಂಗ ಮತದಾರರು 4,699, ಇವರಲ್ಲದೆ 16,973 ಶತಾಯುಷಿಗಳಿದ್ದು, ಅವರಲ್ಲಿ 9,985 ಮಹಿಳೆಯರು ಇದ್ದಾರೆ. ಈ ಶತಾಯುಷಿಗಳಲ್ಲಿ ಹಲವರು ಮತದಾನ ಮಾಡಲು ಹೋಗಬಹುದು., ಆದರೆ ಅವರಲ್ಲಿ ಅನೇಕರು ವಯಸ್ಸಿಗೆ ಸಂಬಂಧಿಸಿದ ಸಮಸ್ಯೆಗಳಿಂದ ತಮ್ಮ ಮನೆಯಿಂದ ಹೊರಬರಲು ಸಾಧ್ಯವಾಗದಿರಬಹುದು. 80 ವರ್ಷಕ್ಕಿಂತ ಮೇಲ್ಪಟ್ಟ 12.15 ಲಕ್ಷ ನೋಂದಾಯಿತ ಮತದಾರರ ಭಾಗವಾಗಿದ್ದಾರೆ. ಅಂತಹ ಹಿರಿಯ ನಾಗರಿಕರಿಗೆ ಸಹಾಯ ಮಾಡಲು, ಚುನಾವಣಾ ಆಯೋಗವು ಈ ಬಾರಿ ಪೋಸ್ಟಲ್ ಬ್ಯಾಲೆಟ್ ಪರಿಚಯಿಸಿದೆ, ಅಲ್ಲಿ ಅವರು ಮನೆಯಿಂದಲೇ ಮತ ಚಲಾಯಿಸಬಹುದು.

'ಶತಾಯುಷಿಗಳಿಗೆ ಪ್ರಜಾಪ್ರಭುತ್ವದ ಮೌಲ್ಯ ಗೊತ್ತಿದೆ': ರಾಜ್ಯದಲ್ಲಿ ಮೊದಲ ವಿಧಾನಸಭಾ ಚುನಾವಣೆ ಮೈಸೂರು ರಾಜ್ಯವಾಗಿದ್ದಾಗ ಅಂದರೆ ಮಾರ್ಚ್ 1951 ರಲ್ಲಿ ನಡೆಯಿತು. ಅಂದಿನಿಂದ, ರಾಜ್ಯವು 15 ವಿಧಾನಸಭೆ ಮತ್ತು 17 ಲೋಕಸಭೆ ಚುನಾವಣೆಗಳನ್ನು ಕಂಡಿದೆ. 90 ವರ್ಷ ವಯಸ್ಸಾದವರು ಈ ಎಲ್ಲಾ ಚುನಾವಣೆಗಳನ್ನು ನೋಡಿದ್ದಾರೆ. ಅವರು ಮತ ಹಾಕಿದ್ದಾರೋ ಇಲ್ಲವೋ ಗೊತ್ತಿಲ್ಲ ಆದರೆ ಖಂಡಿತ ಚುನಾವಣೆ ನೋಡಿದ್ದಾರೆ. 100 ವರ್ಷ ಮೇಲ್ಪಟ್ಟವರು ಈ ಚುನಾವಣೆಯಲ್ಲಿ ಮತ ಚಲಾಯಿಸಬೇಕೆಂದು ನಾವು ಬಯಸುತ್ತೇವೆ, ಎಂದು ಅಧಿಕಾರಿಯೊಬ್ಬರು ತಿಳಿಸಿದರು. ಈ ಹಿರಿಯ ಮತದಾರರು ಭಾರತದ ಸ್ವಾತಂತ್ರ್ಯ ಹೋರಾಟಕ್ಕೆ ಸಾಕ್ಷಿಯಾಗಿದ್ದಾರೆ. ಅವರು ಪ್ರಜಾಪ್ರಭುತ್ವದ ಮೌಲ್ಯವನ್ನು ತಿಳಿದಿದ್ದಾರೆ. ಅವರಿಗೆ ಆರೋಗ್ಯ ಸಮಸ್ಯೆಗಳಿಲ್ಲದಿದ್ದರೆ ಅವರು ಮತ ಚಲಾಯಿಸುತ್ತಾರೆ ಎಂದು ಅವರು ಹೇಳಿದ್ದಾರೆ.

ಮೈಸೂರು ಮಿತ್ರ ಮಂಗಳವಾರ 21 ಮಾರ್ಚ್ 2023

ಕಾಂಗ್ರೆಸ್‌ನದು ಗ್ಯಾರಂಟಿ ಕಾರ್ಡ್ ಅಲ್ಲ, ಡೂಪ್ಲಿಕೇಟ್ ಕಾರ್ಡ್

ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ವ್ಯಂಗ್ಯ



ತಿ.ನರಸೀಪುರ, ಮಾ.20– ಕಾಂಗ್ರೆಸ್ ಪಕ್ಷ ನೀಡುತ್ತಿರುವುದು ಗ್ಯಾರಂಟಿ ಕಾರ್ಡ್ ಅಲ್ಲ. ಅದು ಡೂಪ್ಲಿಕೇಟ್ ಕಾರ್ಡ್ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ವ್ಯಂಗ್ಯವಾಡಿದರು.

ತಾಲೂಕಿನ ಬನ್ನೂರು ಪಟ್ಟಣದ ಫುಟ್ಬಾಲ್ ಮೈದಾನದಲ್ಲಿ ಆಯೋಜಿಸಿದ್ದ ಪಂಚರತ್ನ ರಥಯಾತ್ರೆ ಸಮಾವೇಶದಲ್ಲಿ ನೆರೆದಿದ್ದ ಬೃಹತ್ ಜನಸ್ತೋಮವನ್ನುದ್ದೇಶಿಸಿ ಅವರು ಮಾತನಾಡಿದರು.

ಕಾಂಗ್ರೆಸ್‌ನವರು ಮತದಾರರ ಆಧಾರ್ ಕಾರ್ಡ್ ಪಡೆದು ಅದ್ಯಾವುದೋ ಕೆಲಸಕ್ಕೆ ಬಾರದ ಗ್ಯಾರಂಟಿ ಕಾರ್ಡ್ ನೀಡುತ್ತಿದ್ದಾರೆ. ಅದು ಗ್ಯಾರಂಟಿ ಕಾರ್ಡ್ ಅಲ್ಲ ಅದು ಡೂಪ್ಲಿಕೇಟ್ ಕಾರ್ಡ್ ಚುನಾವಣೆಯಲ್ಲಿ ಮತಗಳಿಸಲು ಅವರು ಮಾಡುತ್ತಿರುವ ಗಿಮಿಕ್. ಈ ಬಗ್ಗೆ ಮತದಾರರು ಎಚ್ಚರಿಕೆ ವಹಿಸಬೇಕಿದೆ ಎಂದರು.

ಕಾಂಗ್ರೆಸ್ ಅಧಿಕಾರದಲ್ಲಿರುವ ರಾಜಸ್ಥಾನ್, ಛತ್ತೀಸ್‌ಗಡ ಸೇರಿದಂತೆ ಮತ್ತೊಂದಿಷ್ಟು ರಾಜ್ಯಗಳಲ್ಲಿ ಗ್ಯಾರಂಟಿ ಕಾರ್ಡ್ ನೀಡಿ 2 ಸಾವಿರ ರೂ.ಗಳನ್ನು ಅಲ್ಲಿನ ಜನರಿಗೆ ಕೊಟ್ಟಿದ್ದರೆ, ಕೊಟ್ಟರೂ ಕೊಡಬಹುದು ಅವರಿಗೆ ಮತ ಹಾಕುವಂತೆ ನಾನೇ ಹೇಳುತ್ತಿದ್ದೆ. ಆದರೆ ಅವರು ನೀಡುತ್ತಿರುವ ಕಾರ್ಡ್‌ನಿಂದ ಯಾವುದೇ ಪ್ರಯೋಜನವಿಲ್ಲ. ಅವರನ್ನು ನಂಬಬೇಡಿ ಎಂದು ಎಚ್ಚರಿಸಿದರು.

200 ಯೂನಿಟ್ ಉಚಿತವಾಗಿ ವಿದ್ಯುತ್ ಕೊಡುತ್ತೇವೆ ಎನ್ನುತ್ತಾರೆ. ಅದಕ್ಕೆ ಪ್ರತಿ ತಿಂಗಳಿಗೆ 9 ಸಾವಿರ ಕೋಟಿ ರೂ. ಬೇಕು. ಹಾಗೆಯೇ ಪ್ರತಿ ಪ್ರಜೆಗೆ 2 ಸಾವಿರ ರೂ. ನೀಡಲು ಒಟ್ಟಾರೆ 25 ಸಾವಿರ ಕೋಟಿ ಬೇಕು. ಇದನ್ನು ಎಲ್ಲಿಂದ ಹೊಂದಿಸುತ್ತೀರಾ ಎಂದರೆ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಹೇಳಿಕೆ ನೀಡಿ ಬಿಜೆಪಿಯವರು 40% ಕಮೀಷನ್ ಪಡೆಯುತ್ತಿದ್ದರು. ಅದನ್ನು ಕಡಿಮೆ ಮಾಡಿ 25 ಸಾವಿರ ಕೋಟಿ ಹೊಂದಿಸುತ್ತೇವೆ ಎನ್ನುತ್ತಾರೆ. ಇವರನ್ನು ರಾಜ್ಯದ ಜನತೆ ನಂಬಬೇಕಾ ಎಂದು ಪ್ರಶ್ನಿಸಿದರು.

ರೈತರ ಮಕ್ಕಳನ್ನು ಮದುವೆಯಾದರೆ 2 ಲಕ್ಷ ರೂ.: ಇತ್ತೀಚಿಗೆ ರೈತರ ಮಕ್ಕಳಿಗೆ ಹೆಣ್ಣು ಕೊಡುತ್ತಿಲ್ಲ. ಇದಕ್ಕೆ ತಾರ್ಕಿಕ ಅಂತ್ಯ ಕಾಣಿಸಲು ರೈತರ ಮನೆಯ ಮಕ್ಕಳನ್ನು ಮದುವೆಯಾಗುವ ಕುಟುಂಬಕ್ಕೆ 2 ಲಕ್ಷ ರೂ. ನೀಡಲು ಉದ್ದೇಶಿಸಲಾಗಿದೆ ಎಂದರು.

ಹಳ್ಳಿ ಹುಡುಕಿಕೊಂಡು ಬರುವ ಕಾಲ ಬರಲಿದೆ: ಪಂಚರತ್ನ ಯೋಜನೆ ಜಾರಿಗೊಂಡರೆ ಜನ ಹಳ್ಳಿ ಹುಡುಕಿಕೊಂಡು ಬರುವ ಕಾಲ ಬರುಲಿದೆ. ಇಂದು ಹಳ್ಳಿ ಮಕ್ಕಳನ್ನು, ಅನ್ನದಾತರನ್ನು ಅಸಡ್ಡೆಯಾಗಿ ನೋಡಲಾಗುತ್ತಿದೆ. ಹಾಗಾಗಿ ಪಂಚರತ್ನ ಯೋಜನೆ ಮೂಲಕ ಮುಂದಿನ 5 ವರ್ಷಗಳಲ್ಲಿ ರೈತರ ಆರ್ಥಿಕ ಶಕ್ತಿ ವೃದ್ದಿಸುವ ಮಹತ್ತರ ಯೋಜನೆ ಜಾರಿಗೆ ತರಲಾಗುತ್ತದೆ. ನಾನು ಮೋದಿ ತರಹ ಬರೀ ಆಶ್ವಾಸನೆ ನೀಡಿ ಹೋಗುವುದಿಲ್ಲ ಜಾರಿ ಮಾಡಿ ತೋರಿಸುತ್ತೇನೆ. ನನ್ನ ಸರ್ಕಾರವನ್ನು ವಿಧಾನ ಸೌಧದಿಂದ ನಡೆಸುವುದಿಲ್ಲ ಬದಲಿಗೆ ರಾಜ್ಯದ ಪ್ರತಿ ರೈತ ವರ್ಗ, ಮಹಿಳಾ ವರ್ಗ, ಕಾರ್ಮಿಕ ವರ್ಗದವರಿಗೆ ತಿಂಗಳಲ್ಲಿ ಕನಿಷ್ಠ 4 ದಿನ ಅವಕಾಶ ನೀಡಿ ಅವರಿಂದ ರಾಜ್ಯದ ಆಡಳಿತ ನಡೆಸುತ್ತೇನೆ ಎಂದರು.

ಜಾತಿ ವ್ಯಾಮೋಹ ಬಿಟ್ಟು ಅಧಿಕಾರ ನೀಡಿ: ರಾಜ್ಯದ ಜನತೆ ಜೆಡಿಎಸ್‌ಗೆ 5 ವರ್ಷ ಸಂಪೂರ್ಣ ಅವಕಾಶ ಕೊಟ್ಟರೆ ಪಂಚರತ್ನ ಕಾರ್ಯಕ್ರಮಗಳ ಮೂಲಕ ನಾಡಿನ ಪ್ರತಿ ಕುಟುಂಬಗಳ ಸಮಸ್ಯೆ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಇದೊಂದು ಬಾರಿ ಜಾತಿ ವ್ಯಾಮೋಹ ಬಿಟ್ಟು ಪಕ್ಷ ಬೆಂಬಲಿಸಿ. ನಿಮ್ಮ ಬದುಕನ್ನು ಕಟ್ಟಿ ಕೊಡುವ ಜವಾಬ್ದಾರಿಯನ್ನು ನಾನು ಹೊರುತ್ತೇನೆ. ಪಂಚರತ್ನ ಯಾತ್ರೆ ಮೂಲಕ 3ನೇ ಬಾರಿ ಮುಖ್ಯಮಂತ್ರಿಯಾಗಬೇಕೆಂಬ ಉದ್ದೇಶ ಹೊಂದಿಲ್ಲ. ಎರಡು ಬಾರಿ ಹೃದಯ ಚಿಕಿತ್ಸೆಗೊಳಗಾಗಿ ದೇವರ ಆಶೀರ್ವಾದದಿಂದ ಬದುಕುಳಿದಿದ್ದೇನೆ. ದಿನಕ್ಕೆ 18 ಗಂಟೆಗಳ ಕಾಲ ಕೆಲಸ ಮಾಡುತ್ತಿದ್ದೇನೆ. ನಮಗೆ ನನ್ನ ಆರೋಗ್ಯಕ್ಕಿಂತ ಜನರ ಬದುಕನ್ನು ಸರಿಪಡಿಸುವುದು ಮುಖ್ಯ. ಹಾಗಾಗಿ ಜನರಿಗಾಗಿ ದೇಹ ದಂಡಿಸುತ್ತಿದ್ದೇನೆ ಎಂದು ನುಡಿದರು.

ಶಾಸಕ ಎಂ.ಅಶ್ವಿನ್ ಕುಮಾರ್ ಮಾತನಾಡಿ, ಸಾಮಾನ್ಯ ಜಿಪಂ ಸದಸ್ಯನಾಗಿದ್ದ ನಾನು ಇಂದು ಶಾಸಕನಾಗಲು ಕುಮಾರಣ್ಣ ಕಾರಣ. ನನ್ನ ಮೇಲೆ ಭರವಸೆ ಇಟ್ಟು ಎಂಎಲ್‌ಎ ಟಿಕೆಟ್ ನೀಡಿ ಗೆದ್ದು ಬರುವಂತೆ ಹಾರೈಸಿದ್ದರು. ಕ್ಷೇತ್ರದ ಮತದಾರರ ಆಶೀರ್ವಾದಿಂದ ಶಾಸಕನಾಗಿದ್ದೇನೆ. ಕುಮಾರಣ್ಣ ಹೇಳಿದ್ದಂತೆ ಜನರಿಗೆ ಯಾವುದೇ ತೊಂದರೆಯಾಗದಂತೆ ಕರ್ತವ್ಯ ನಿರ್ವಹಿಸಿದ್ದೇನೆ. ಅಲ್ಲದೇ ನನ್ನ ವ್ಯಾಪ್ತಿಯಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯ ಮಾಡಿದ್ದೇನೆ. ಮುಂದಿನ ಚುನಾವಣೆಯಲ್ಲಿ ಮತ್ತೆ ಕುಮಾರಣ್ಣರಿಗೆ ಒತ್ತಾಸೆಯಾಗಿರುವ ದೃಷ್ಟಿಯಿಂದ ಮತ್ತೆ ಚುನಾವಣೆಗೆ ಸ್ಪರ್ಧಿಸುತ್ತಿದ್ದು, ಕಳೆದ ಬಾರಿ ತೋರಿದ ಪ್ರೀತಿ, ವಿಶ್ವಾಸವನ್ನು ಈ ಬಾರಿಯೂ ನೀಡುವಂತೆ ಮನವಿ ಮಾಡಿದರು.

ಇದೇ ವೇಳೆ ಗ್ರಾಪಂ ಸದಸ್ಯ ಉಕ್ಕಲಗೆರೆ ಅಡುಗೆ ಕುಮಾರ್, ತಲಕಾಡು ನಾಯಕ ಜನಾಂಗದ ಮುಖಂಡ ಸತೀಶ್ ನಾಯಕ್ ಸೇರಿದಂತೆ ಹಲವು ಮುಖಂಡರು ಕಾಂಗ್ರೆಸ್ ತೊರೆದು ಜೆಡಿಎಸ್‌ಗೆ ಸೇರ್ಪಡೆಯಾದರು.

ಇದಕ್ಕೂ ಮೊದಲು ಬನ್ನೂರಿಗೆ ಆಗಮಿಸಿದ ಕುಮಾರಸ್ವಾಮಿ ಅವರಿಗೆ ಅದ್ಧೂರಿ ಸ್ವಾಗತ ನೀಡಲಾಯಿತು. ಸಂತೇಮಾಳ ವೃತ್ತದಿಂದ ರಾಮಸ್ವಾಮಿ ಹೋಟೆಲ್‌ವರೆಗೂ ನಿಲ್ಲಿಸಿದ್ದ 30 ಹೆಚ್ಚು ಕ್ರೇನ್‌ಗಳಲ್ಲಿ ಕುಮಾರಸ್ವಾಮಿ ಅವರಿಗೆ ಪುಷ್ಪವೃಷ್ಟಿ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಸಾ.ರಾ. ಮಹೇಶ್, ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ, ಮಾಜಿ ಶಾಸಕ ಚಿಕ್ಕಣ್ಣ, ಜೆಡಿಎಸ್ ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ, ಜಿಪಂ ಮಾಜಿ ಅಧ್ಯಕ್ಷ ಎಸ್.ಎನ್.ಸಿದ್ದಾರ್ಥ, ಮಾಜಿ ಸದಸ್ಯ ಜಯಪಾಲ್ ಭರಣಿ, ಕ್ಷೇತ್ರಾಧ್ಯಕ್ಷ ಸಿ.ಬಿ.ಹುಂಡಿ ಚಿನ್ನಸ್ವಾಮಿ, ಜಿಲ್ಲಾ ಉಪಾಧ್ಯಕ್ಷ ಕುರುಬೂರು ವೀರೇಶ್, ಹೋಬಳಿ ಅಧ್ಯಕ್ಷ ಕುಮಾರಸ್ವಾಮಿ, ಕೊಡಗಹಳ್ಳಿ ಗ್ರಾಪಂ ಅಧ್ಯಕ್ಷ ಧನಂಜಯ, ಯುವ ಘಟಕದ ಅಧ್ಯಕ್ಷ ಗಂಗಾಧರಗೌಡ ಸೇರಿದಂತೆ ಇತರರಿದ್ದರು.

> 6 ಪಂಚರತ್ನ ಯೋಜನೆ ಜಾರಿಗೆ 2.5 ಲಕ್ಷ ಕೋಟಿ ರೂ. ಬೇಕು. ಇದನ್ನು ಸರ್ಕಾರ ಸಂಗ್ರಹಿಸಿದರೆ ಮಾತ್ರ ಯೋಜನೆ ಜಾರಿ ಸಾಧ್ಯ. ಹಾಗಾಗಿ ಜೆಡಿಎಸ್‌ಗೆ ಸ್ಪಷ್ಟ ಬಹುಮತ ನೀಡಬೇಕು. ನೀವು 50 ರಿಂದ 60 ಸೀಟು ಕೊಟ್ಟರೆ ಸಾಲದು. ಬಿಜೆಪಿ, ಕಾಂಗ್ರೆಸ್ ಜೊತೆ ಸೇರಿ ಯೋಜನೆ ಜಾರಿ ಮಾಡಲು ಸಾಧ್ಯವಿಲ್ಲ. ಹಾಗಾದರೆ ಮನೆಯಲ್ಲಿರುತ್ತೇನೆ ಎಂದ ಅವರು, ಈ ಬಾರಿ ರಾಜ್ಯದ ಜನತೆ 123 ಸಂಖ್ಯೆ ಗುರಿ ಮುಟ್ಟಿಸುತ್ತಾರೆಂಬ ನಂಬಿಕೆ ನನಗಿದೆ.
> – ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಮುಖ್ಯಮಂತ್ರಿ.

ರಾಜೀವ್ ಗಾಂಧಿ ಸೇವಾ ಕೇಂದ್ರ ಕಟ್ಟಡ ಉದ್ಘಾಟನೆ



ಮಲ್ಲುಂಡಿ, ಮಾ.20– ಶಾಸಕನಾಗಿ ಕ್ಷೇತ್ರದಲ್ಲಿ ಅನೇಕ ಅಭಿವೃದ್ಧಿ ಕಾರ್ಯ ಮಾಡಿರುವ ತೃಪ್ತಿ ಇದೆ ಎಂದು ಶಾಸಕ ಬಿ.ಹರ್ಷವರ್ಧನ್ ತಿಳಿಸಿದರು.

ಇಲ್ಲಿಗೆ ಸಮೀಪದ ಹಲ್ಲರೆ ಗ್ರಾಪಂ ವತಿಯಿಂದ ನೂತನವಾಗಿ ನಿರ್ಮಿಸಿರುವ ರಾಜೀವ್ ಗಾಂಧಿ ಸೇವಾ ಕೇಂದ್ರ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಕ್ಷೇತ್ರದಲ್ಲಿ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದು, ಎಲ್ಲಾ ಗ್ರಾಮಗಳಿಗೂ ಮೂಲ ಸೌಕರ್ಯ ಕಲ್ಪಿಸಿ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಿದ್ದೇನೆ ಎಂದ ಅವರು ಗ್ರಾಪಂ ವ್ಯಾಪ್ತಿಯ ಗ್ರಾಮಗಳಲ್ಲಿ ರಸ್ತೆ, ಕಟ್ಟಡ ಇನ್ನೂ ಮುಂತಾದ ಕಾಮಗಾರಿಗಳಿಗೆ ನರೇಗಾ ಯೋಜನೆ ಬಳಕೆ ಮಾಡಿಕೊಳ್ಳಬಹುದು ಎಂದರು.

ಕಾಂಪೋಸ್ಟ್ ನಿಗಮದ ಅಧ್ಯಕ್ಷ ಎಸ್.ಮಹದೇವಯ್ಯ ಮಾತನಾಡಿ, ಗ್ರಾಮೀಣ ಜನರು ಬೇರೆಡೆಗೆ ವಲಸೆ ಹೋಗುವುದನ್ನು ತಡೆಗಟ್ಟುವ ಸಲುವಾಗಿ ಸರ್ಕಾರ ನರೇಗಾ ಯೋಜನೆ ಜಾರಿಗೆ ತಂದು ಗಂಡು–ಹೆಣ್ಣು ಇಬ್ಬರಿಗೂ ಸಮಾನ ಕೂಲಿ ನೀಡಿ ಪ್ರತಿದಿನ ಉದ್ಯೋಗ ದೊರಕಿಸಿ ಕೊಟ್ಟಿದೆ. ಇಂತಹ ಯೋಜನೆಯನ್ನು ಪ್ರತಿಯೊಬ್ಬರೂ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಗ್ರಾಪಂ ಅಧ್ಯಕ್ಷ ಹೆಚ್.ಎಂ.ಮಹದೇವಸ್ವಾಮಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ವೇಳೆ ಗುರುಮಲ್ಲೇಶ್ವರ ಮಠದ ಸ್ವಾಮೀಜಿ, ತಾಲೂಕು ಬಿಜೆಪಿ ಅಧ್ಯಕ್ಷ ಪಿ.ಮಹೇಶ್, ತಾಪಂ ಮಾಜಿ ಅಧ್ಯಕ್ಷ ಬಿ.ಎಸ್.ಮಹದೇವಪ್ಪ, ಜಿಪಂ ಮಾಜಿ ಸದಸ್ಯ ಚಿಕ್ಕರಂಗನಾಯಕ, ಎಸ್.ಎಂ.ಕೆಂಪಣ್ಣ, ಕಸುವಿನಹಳ್ಳಿ ಗ್ರಾಪಂ ಅಧ್ಯಕ್ಷ ಸ್ವಾಮಿ, ಹುರ ಗ್ರಾಪಂ ಅಧ್ಯಕ್ಷ ಚಂದ್ರು, ಶಿರಮಳ್ಳಿ ಗ್ರಾಪಂ ಅಧ್ಯಕ್ಷ ಮಹದೇವಶೆಟ್ಟಿ, ತಾಪಂ ಮಾಜಿ ಸದಸ್ಯ ಎಸ್.ಬಸವರಾಜ್, ತಾಪಂ ಇಓ ಶ್ರೀನಿವಾಸ್, ಇಂಜಿನಿಯರ್ ಚಂದ್ರಕಾಂತ್, ಮುಖಂಡರಾದ ಎಂ.ವಿ.ಬಸವರಾಜಪ್ಪ, ಶಿವಕುಮಾರ್, ಅಬ್ದುಲ್ ರಜಾಕ್, ಶಿವರುದ್ರ, ಪುಟ್ಟಸ್ವಾಮಿ, ಗುತ್ತಿಗೆದಾರ ಪ್ರದೀಪ್, ಪಿಡಿಓ ಮಹದೇಸ್ವಾಮಿ, ಗ್ರಾಪಂ ಉಪಾಧ್ಯಕ್ಷೆ ರತ್ನಮ್ಮ, ಸದಸ್ಯರಾದ ಮಲ್ಲಪ್ಪ, ಕೃಷ್ಣ, ಲಕ್ಷ್ಮೀ ಸೇರಿದಂತೆ ಇತರರಿದ್ದರು.

ಅಭಿವೃದ್ಧಿ ಮಾಡಿದ ಜನಪ್ರತಿನಿಧಿಗಳನ್ನು ಮರೆಯಬಾರದು

ಶಾಶ್ವತ ಕುಡಿಯುವ ನೀರಿನ ಯೋಜನೆಗೆ ಸಂಸದ ಪ್ರತಾಪ ಸಿಂಹ ಶಂಕುಸ್ಥಾಪನೆ



ಬೆಟ್ಟದಪುರ, ಮಾ.20– ಅಭಿವೃದ್ಧಿ ಯೋಜನೆಗಳನ್ನು ಜಾರಿಗೊಳಿಸಿ, ತಾಲೂಕಿನ ಅಭಿವೃದ್ಧಿ ಮಾಡಿದ ಪ್ರತಿಯೊಬ್ಬ ಪ್ರತಿನಿಧಿಗಳನ್ನು ಜನತೆ ಮರೆಯಬಾರದು ಎಂದು ಸಂಸದ ಪ್ರತಾಪ ಸಿಂಹ ತಿಳಿಸಿದರು.

ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರದ ಮಠದ ಮುಂಭಾಗದ ಮೈದಾನದಲ್ಲಿ ಜಿಪಂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ನಡೆದ ಜಲ ಜೀವನ್ ಮಿಷನ್ ಯೋಜನೆಯಡಿ ಕಾವೇರಿ ನದಿ ಮೂಲದಿಂದ ತಾಲೂಕಿನ ಬೆಟ್ಟದಪುರ ಹಾಗೂ ಇತರೆ 303 ಗ್ರಾಮಗಳಿಗೆ ನೀರು ಸರಬರಾಜು ಮಾಡುವ ಶಾಶ್ವತ ಕುಡಿಯುವ ನೀರಿನ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಈ ಹಿಂದೆ ರಾಜ್ಯದ ಅಭಿವೃದ್ಧಿ ಶೂನ್ಯವಾಗಿತ್ತು. ಅನೇಕ ಸಮಸ್ಯೆಗಳಿಂದ ಜನ ತತ್ತರಿಸಿದ್ದರು. ಕುಡಿಯುವ ನೀರಿಗೂ ತೊಂದರೆ ಅನುಭವಿಸಬೇಕಾಗಿತ್ತು. ಆದರೆ ಇಂದು ಕೇಂದ್ರ ಸರ್ಕಾರ ಜಲಜೀವನ್ ಮಿಷನ್ ಎಂಬ ನೀರಾವರಿ ಯೋಜನೆ ಜಾರಿಗೊಳಿಸಿ ಗ್ರಾಮೀಣ ಜನತೆಗೆ ಶುದ್ಧ ಕುಡಿಯುವ ನೀರನ್ನು ಸರಬರಾಜು ಮಾಡುತ್ತಿದೆ. ನರೇಗಾ ಯೋಜನೆಯಡಿ ಉದ್ಯೋಗ ಸೃಷ್ಟಿ ಸೇರಿದಂತೆ ಗ್ರಾಮೀಣ ಅಭಿವೃದ್ಧಿಗೆ ಅನುದಾನ ನೀಡಲಾಗಿದೆ ಎಂದರು.

ಶಾಸಕ ಜಿ.ಟಿ.ದೇವೇಗೌಡ ಮಾತನಾಡಿ, ಈ ಹಿಂದೆ ಶಾಸಕರಾಗಿದ್ದವರು ಅಭಿವೃದ್ಧಿ ಮಾಡದೆ ತಾಲೂಕು ಇಂದಿಗೂ ಹಿಂದುಳಿದಿದೆ. ಶಾಸಕ ಕೆ.ಮಹದೇವ್ ವಿರೋಧ ಪಕ್ಷದಲ್ಲಿದ್ದರೂ ಕೂಡ ಸರ್ಕಾರದ ಗಮನ ಸೆಳೆದು ಸಾವಿರಾರು ಕೋಟಿ ತಂದು ತಾಲೂಕಿನ ಅಭಿವೃದ್ಧಿಗೆ ಶ್ರಮಿಸಿದ್ದಾರೆ ಎಂದರು.

ಶಾಸಕ ಕೆ.ಮಹದೇವ್ ಮಾತನಾಡಿ, ಚುನಾವಣೆ ಸಂದರ್ಭ ತಾಲೂಕಿನ ಜನತೆಗೆ ನೀಡಿದ್ದ ಭರವಸೆಗಳನ್ನು ಹಂತ ಹಂತವಾಗಿ ಈಡೇರಿಸಿದ ತೃಪ್ತಿ ನನಗಿದೆ. 239 ಕೋಟಿ ವೆಚ್ಚದ ಕುಡಿಯುವ ನೀರು ಸರಬರಾಜು ಯೋಜನೆ, ಡಾ.ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣ, ರಾವಂದೂರಿನ ಆಸ್ಪತ್ರೆ ಮತ್ತು ಕರ್ನಾಟಕ ಪಬ್ಲಿಕ್ ಸ್ಕೂಲ್ ಸ್ಥಾಪನೆ, ಪಟ್ಟಣದ ಒಳಚರಂಡಿ ವ್ಯವಸ್ಥೆ, 11 ತ್ಯಾಜ್ಯ ವಿಲೇವಾರಿ ಘಟಕ ಸ್ಥಾಪನೆ, ಅಂಗನವಾಡಿ ಹಾಗೂ ಶಾಲಾ ಕೊಠಡಿ ನಿರ್ಮಾಣ, ವಿದ್ಯುತ್ ಸಮಸ್ಯೆ ನೀಗಿಸಲು 6 ಉಪ ಶಾಖೆಗಳನ್ನು ತಾಲೂಕಿನ ಪ್ರಾರಂಭಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಾಯಿತು. ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸಲಾಯಿತು. ಈ ಸಂದರ್ಭ ಮೈಮುಲ್ ಅಧ್ಯಕ್ಷ ಪಿ.ಎಂ.ಪ್ರಸನ್ನ, ಪುರಸಭಾಧ್ಯಕ್ಷ ಕೆ. ಮಹೇಶ್, ಉಪಾಧ್ಯಕ್ಷೆ ಆಶಾ, ಬೆಟ್ಟದಪುರ ಗ್ರಾ ಪಂ ಅಧ್ಯಕ್ಷೆ ಮಂಜುಳಾ, ಉಪಾಧ್ಯಕ್ಷೆ ಸೌಮ್ಯ, ಜಿಲ್ಲೆಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತದ ಅಧೀಕ್ಷಕ ಎಂ.ಎನ್.ಕೃಷ್ಣಮೂರ್ತಿ, ಸುರೇಶ್ ಬಾಬು, ಜಿಪಂ ಸಿಇಓ ಗಾಯತ್ರಿ, ತಹಸೀಲ್ದಾರ್ ಕುಂಜಿ ಅಹಮ್ಮದ್, ತಾಪಂ ಇಓ ಕೃಷ್ಣ ಕುಮಾರ್, ಅಭಿಯಂತರ ಪ್ರಭು, ಮುಖಂಡರಾದ ಆರ್.ಟಿ.ಸತೀಶ್, ಅಣ್ಣಯ್ಯಶೆಟ್ಟಿ, ರಾಜೇಗೌಡ ಸೇರಿದಂತೆ ಇತರರಿದ್ದರು.



ಡಾ.ಪುನೀತ್ ರಾಜ್ ಕುಮಾರ್ ಹುಟ್ಟುಹಬ್ಬದ ಪ್ರಯುಕ್ತ ಮೈಸೂರು ದಸರಾ ವಸ್ತು ಪ್ರದರ್ಶನದ ಆವರಣದಲ್ಲಿ ನಡೆದ ಸಾಮೂಹಿಕ ವಿವಾಹದಲ್ಲಿ ಉದ್ಯಮಿ ಹಾಗೂ ಸಮಾಜ ಸೇವಕ ಎಸ್.ಶ್ರೀಕಾಂತ್ 2 ನವ ಜೋಡಿಗಳಿಗೆ 3 ಗ್ರಾಂ ತೂಕದ ಮಾಂಗಲ್ಯ ನೀಡಿದರು.

ಹನಗೋಡಲ್ಲಿ ಮಹಿಳೆ ಆತ್ಮಹತ್ಯೆ



ಹುಣಸೂರು, ಮಾ.20– ಮಗನ ಸಾವಿನ ಚಿಂತೆಯಿಂದ ಹೊರ ಬರಲಾರದೆ ಮಹಿಳೆಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಸೋಮವಾರ ರಾತ್ರಿ ತಾಲೂಕಿನ ಹನಗೋಡಲ್ಲಿ ನಡೆದಿದೆ. ಕರ್ನಾಟಕ ರಾಜ್ಯ ಕಾವೇರಿ ನೀರಾವರಿ ನಿಗಮದ ಮಾಜಿ ಅಧ್ಯಕ್ಷೆ, ಹನಗೋಡು ಗ್ರಾಪಂ ಮಾಜಿ ಅಧ್ಯಕ್ಷೆ ಹಾಗೂ ಹನಗೋಡಿನ ಎಚ್‌ಎನ್‌ಪಿ ಬಾರ್ ಅಂಡ್ ರೆಸ್ಟೋರೆಂಟ್ ಮಾಲೀಕರಾದ ಎ.ಆರ್.ಸುಧಾಮಣಿ(56) ಆತ್ಮಹತ್ಯೆ ಮಾಡಿಕೊಂಡವರು. ಕಳೆದ ಒಂದೂವರೆ ವರ್ಷಗಳ ಹಿಂದೆ ಇವರ ಪುತ್ರ ಮಧು ಮೃತಪಟ್ಟಿದ್ದರು. ಅಂದಿನಿಂದ ಚಿಂತೆಗೊಳಗಾಗಿದ್ದ ಸುಧಾಮಣಿ ಅವರು ಸೋಮವಾರ ರಾತ್ರಿ ತಮ್ಮ ಮನೆ ಹಿಂಭಾಗದ ಬ್ಯಾರನ್ ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ ಎನ್ನಲಾಗಿದೆ. ಈ ಸಂಬಂಧ ಯಾವುದೇ ಪ್ರಕರಣ ದಾಖಲಾಗಿಲ್ಲ.

ಮುಂಬರುವ ಚುನಾವಣೆಯಲ್ಲಿ ಜೆಡಿಎಸ್ ಅಧಿಕಾರಕ್ಕೆ



ಚುಂಚನಕಟ್ಟೆ, ಮಾ.20– ಮುಂಬರುವ ಚುನಾವಣೆಯಲ್ಲಿ ಜೆಡಿಎಸ್ ಅಧಿಕಾರಕ್ಕೆ ಬರಲಿದ್ದು, ಹೆಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾಗಲಿದ್ದಾರೆ. ತಾವು ಬೆಂಬಲ ನೀಡಿದರೆ ನಾನು ಸಚಿವನಾಗಿ ಕ್ಷೇತ್ರವನ್ನು ಮತ್ತಷ್ಟು ಅಭಿವೃದ್ಧಿಪಡಿಸುತ್ತೇನೆ ಎಂದು ಶಾಸಕ ಸಾ.ರಾ.ಮಹೇಶ್ ತಿಳಿಸಿದರು.

ತಾಲೂಕಿನ ಕಂಚುಗಾರಕೊಪ್ಪಲು ಗ್ರಾಮದ ಮುಖ್ಯರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಸಮ್ಮಿಶ್ರ ಸರ್ಕಾರದಲ್ಲಿ ಸಾವಿರಾರು ಕೋಟಿ ಅನುದಾನ ತಂದು ಸಾಲಿಗ್ರಾಮ ಮತ್ತು ಕೆ.ಆರ್.ನಗರ ತಾಲೂಕುಗಳ ಅಭಿವೃದ್ಧಿಗೆ ಶ್ರಮಿಸಿದ್ದೇನೆ ಎಂದರು. ಪಕ್ಷ ಅಧಿಕಾರಕ್ಕೆ ಬಂದು ನಾನು ಸಚಿವನಾದರೆ ಕೆ.ಆರ್.ನಗರದಲ್ಲಿ ಮೆಡಿಕಲ್ ಕಾಲೇಜು, ಮಿರ್ಲೆಯಲ್ಲಿ ಇಂಜಿನಿಯರಿಂಗ್ ಕಾಲೇಜು ಆರಂಭ ಮಾಡಬೇಕು ಎಂಬ ಉದ್ದೇಶ ಹೊಂದಲಾಗಿದ್ದು, ಇದಕ್ಕೆ ಕ್ಷೇತ್ರದ ಜನತೆ ಸಹಕಾರ ನೀಡಬೇಕು. ಅಧಿಕಾರಕ್ಕಾಗಿ ಕಾಲು ಹಿಡಿಯುವವರಿಗೆ ಆದ್ಯತೆ ನೀಡಬೇಡಿ ಎಂದು ಕಾಂಗ್ರೆಸ್ ಮುಖಂಡರನ್ನು ಟೀಕಿಸಿದರು.

ಚುಂಚನಕಟ್ಟೆ ಶ್ರೀರಾಮ ಸಹಕಾರ ಸಕ್ಕರೆ ಕಾರ್ಖಾನೆ ಪುನರ್ ಆರಂಭ ಮಾಡಲಾಗಿದ್ದು, ಈ ಭಾಗದ ರೈತರು ಹೆಚ್ಚಾಗಿ ಕಬ್ಬು ಬೆಳೆದು ಆರ್ಥಿಕವಾಗಿ ಸಬಲರಾಗಬೇಕು. ಗ್ರಾಮದ ಮುಖ್ಯರಸ್ತೆಯನ್ನು 1 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿದ್ದು ಗ್ರಾಮಸ್ಥರು ಗೇಜ್‌ವಿಲ್ ಹೊಡೆದು ರಸ್ತೆ ಹಾಳು ಮಾಡಬಾರದು ಎಂದು ಮನವಿ ಮಾಡಿದರು.

ಸಿದ್ದಾಪುರ ಗ್ರಾಪಂ ಅಧ್ಯಕ್ಷ ತ್ಯಾಗರಾಜು, ಉಪಾಧ್ಯಕ್ಷೆ ರಾಜಮ್ಮ, ಪಿಎಸಿಎಸ್ ಅಧ್ಯಕ್ಷ ಎಂ.ಎಸ್.ಹರಿಚಿದಂಬರ, ನಿರ್ದೇಶಕ ಅನಿಲ್‌ರಾಜ್, ಮುಖಂಡರಾದ ಕೆ.ಬಿ.ಪ್ರಕಾಶ್, ಕೆ.ಆರ್.ಗಿರೀಶ್, ಮಂಜುನಾಥ್, ನಾಗರಾಜು, ಶ್ರೀನಿವಾಸ್, ಆನಂದ್, ರಾಚಯ್ಯ, ಮುರಳಿ, ಪಿಡಿಓ ಶಿವಕುಮಾರ್, ಲೋಕೋಪಯೋಗಿ ಇಲಾಖೆ ಎಇಇ ವಿಜಯಕುಮಾರ್ ಮತ್ತಿತರರಿದ್ದರು.

ಗೌತಮ ಪಂಚ ಮಹಾರಥೋತ್ಸವದ ಯಶಸ್ಸಿಗೆ ಶ್ರಮಿಸಿ

ಪೂರ್ವಭಾವಿ ಸಭೆಯಲ್ಲಿ ಅಧಿಕಾರಿಗಳಿಗೆ ಶಾಸಕ ಬಿ.ಹರ್ಷವರ್ಧನ್ ತಾಕೀತು



ನಂಜನಗೂಡು, ಮಾ.20– ಮುಂಬರುವ ಏ.2ರಂದು ನಡೆಯುವ ಶ್ರೀಕಂಠೇಶ್ವರಸ್ವಾಮಿಯವರ ಗೌತಮ ಪಂಚ ಮಹಾರಥೋತ್ಸವದಲ್ಲಿ ಲಕ್ಷಾಂತರ ಭಕ್ತರು ಪಾಲ್ಗೊಳ್ಳುವ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಜಾತ್ರಾ ಮಹೋತ್ಸವದ ಯಶಸ್ಸಿಗೆ ಅಧಿಕಾರಿಗಳು ಶ್ರಮಿಸಬೇಕು ಎಂದು ಶಾಸಕ ಬಿ.ಹರ್ಷವರ್ಧನ್ ತಾಕೀತು ಮಾಡಿದರು.

ನಗರದ ಶ್ರೀಕಂಠೇಶ್ವರಸ್ವಾಮಿ ದೇವಾಲಯದ ದಾಸೋಹ ಭವನದ ಸಭಾಂಗಣದಲ್ಲಿ ಸೋಮವಾರ ನಡೆದ ಶ್ರೀಕಂಠೇಶ್ವರ ಸ್ವಾಮಿ ಗೌತಮ ಪಂಚ ಮಹಾರಥೋತ್ಸವದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಜಾತ್ರಾ ಮಹೋತ್ಸವಕ್ಕೆ ಅಗತ್ಯ ಪೂರ್ವ ಸಿದ್ಧತೆಯನ್ನು ಇಲಾಖಾವಾರು ಹಂಚಲಾಗಿದೆ. ಪಂಚ ರಥಗಳು ರಥ ಬೀದಿಯಲ್ಲಿ ಸಾಗಲು ಎಲ್ಲಾ ರೀತಿ ಸಜ್ಜಾಗಿವೆಯೇ ಎಂಬುದನ್ನು ಲೋಕೋಪಯೋಗಿ ಇಲಾಖೆ ಪರಿಶೀಲಿಸಿ ವರದಿ ನೀಡಬೇಕು. ಲಕ್ಷಾಂತರ ಭಕ್ತರು ಸಮಾವೇಶಗೊಳ್ಳುವುದರಿಂದ ಬೇಸಿಗೆಯಲ್ಲಿ ಯಾವುದೇ ಸಾಂಕ್ರಾಮಿಕ ರೋಗ ಹರಡದಂತೆ ಶುದ್ಧ ಕುಡಿಯುವ ನೀರು, ತಾತ್ಕಾಲಿಕ ಶೌಚಗೃಹ, ಪುಣ್ಯ ಸ್ನಾನಕ್ಕೆ ಅನುಕೂಲವಾಗಲು ಕಪಿಲಾ ನದಿ ನೀರಿನ ಹೊರ ಹರಿವು ಹೆಚ್ಚಳ ಮಾಡಬೇಕು. ಇಡೀ ಜಾತ್ರಾ ಮಹೋತ್ಸವ ಸಿಸಿ ಕ್ಯಾಮರಾ ಕಣ್ಗಾವಲಿನಲ್ಲಿ ನಡೆಯಬೇಕು. ಯಾವುದೇ ಕಳ್ಳತನ ಪ್ರಕರಣ ಜರುಗದಂತೆ ನಿಗಾವಹಿಸಬೇಕು. ಭಕ್ತರು ಹಾಗೂ ಸಂಘ ಸಂಸ್ಥೆಗಳ ಪ್ರಸಾದ ವಿತರಣೆಗೆ ಮುಕ್ತ ಅವಕಾಶ ನೀಡುವ ಜತೆಗೆ ಆಹಾರ ಗುಣಮಟ್ಟ ಹಾಗೂ ಪೂರ್ವಾನುಮತಿ ಕಡ್ಡಾಯಗೊಳಿಸಿ ನಗರಸಭೆ ಹಾಗೂ ಆರೋಗ್ಯ ಇಲಾಖೆ ಅಧಿಕಾರಿಗಳು ಜಾಗೃತಿ ಮೂಡಿಸಬೇಕು ಎಂದು ತಾಕೀತು ಮಾಡಿದರು.

ಗೌರವಧನ ಹೆಚ್ಚಿಸಿ: ದೊಡ್ಡಜಾತ್ರಾ ಮಹೋತ್ಸವದಲ್ಲಿ ಸಕ್ರಿಯವಾಗಿ ಕೆಲಸ ಮಾಡುವ ಸುತ್ತಲಿನ 7 ಗ್ರಾಮಗಳಿಗೆ ನೀಡುತ್ತಿರುವ 20 ಸಾವಿರ ರೂ. ಗೌರವ ಧನವನ್ನು 25 ಸಾವಿರ ರೂ.ಗೆ ಹೆಚ್ಚಿಸುವಂತೆ ಶಾಸಕ ಬಿ.ಹರ್ಷವರ್ಧನ್ ಇದೇ ವೇಳೆ ಅಧಿಕಾರಿಗಳಿಗೆ ಸೂಚಿಸಿದರು.

ಗ್ರೂಪ್ ವಿಮೆಗೆ ಕ್ರಮ: 90 ಅಡಿ ಎತ್ತರದ ಗೌತಮ ರಥ ಹಾಗೂ ಪಾರ್ವತಿ ದೇವಿ ರಥ ಸೇರಿದಂತೆ ಪಂಚರಥಗಳನ್ನು ಮುನ್ನಡೆಸುವ ಪ್ರಮುಖರು ಹಾಗೂ ಕಮಾಟಿಗಳಿಗೆ ಗ್ರೂಪ್ ವಿಮೆ ಮಾಡಿಸಲು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಆದೇಶಿಸಿದರು.

ಕಮಾಟಿಗಳ ಪಟ್ಟಿ ಮಾಡಿ ಕೂಡಲೇ ಕ್ರಮ ವಹಿಸಬೇಕು. ರಥ ಮುನ್ನಡೆಸುವವರನ್ನು ಹೊರತುಪಡಿಸಿ ಇತರರು ರಥದ ಬಳಿ ಸುಳಿಯದಂತೆ ಟೀ ಶರ್ಟ್ ಹಾಗೂ ಬ್ಯಾಡ್ಜ್ ವಿತರಿಸಬೇಕು. ರಥ ಸಾಗುವ ಮಾರ್ಗದಲ್ಲಿ ಮುಂಜಾಗ್ರತಾ ಕ್ರಮವಾಗಿ ವಿದ್ಯುತ್ ನಿಲುಗಡೆಗೊಳಿಸಬೇಕು. ರಥಗಳು ಸಾಗಲು ಹರಡುವ ಮರಳು ಕಲ್ಲು ಮಿಶ್ರಣದಿಂದ ಕೂಡಿದ್ದರೆ ಟೆಂಡರ್ ಪಡೆಯುವ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸುವುದಾಗಿ ಷರತ್ತು ವಿಧಿಸಿ ಟೆಂಡರ್ ಕರೆಯಬೇಕು. ಜಾತ್ರೆ ಸಂದರ್ಭ ಹೆಚ್ಚಿನ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕು ಎಂದರು.

> ### ಗೌರಿ ಆನೆ ಗುಣಮುಖವಾಗಿಲ್ಲ
> ಮಾಲೂರಿನ ಆನೆ ಶಿಬಿರದಲ್ಲಿರುವ ದೇವಾಲಯಕ್ಕೆ ಸೇರಿದ ಗೌರಿ ಆನೆಯನ್ನು ದೊಡ್ಡಜಾತ್ರಾ ಮಹೋತ್ಸವಕ್ಕೆ ಕರೆ ತರುವಂತೆ ಸ್ಥಳೀಯರು ಕೋರಿಕೆಗೆ ಪ್ರತಿಕ್ರಿಯಿಸಿ, ನಾನೇ ಖುದ್ದು ಗೌರಿ ಆನೆಯ ಆರೋಗ್ಯದ ಬಗ್ಗೆ ವಿಚಾರಿಸಿದ್ದೇನೆ. ಚರ್ಮದ ಸಮಸ್ಯೆಯಿಂದ ಗೌರಿ ಆನೆಯು ಬಳಲುತ್ತಿರುವುದರಿಂದ ಕನಿಷ್ಠ ಆರು ತಿಂಗಳ ಚಿಕಿತ್ಸೆ ಅಗತ್ಯವಿದೆ. ಹಾಗಾಗಿ ಜಾತ್ರೆಯ ಒಳಗಾಗಿ ಆನೆ ಕರೆತರಲು ಸಾಧ್ಯವಾಗುತ್ತಿಲ್ಲ.
> – ಡಾ.ಕೆ.ವಿ.ರಾಜೇಂದ್ರ, ಜಿಲ್ಲಾಧಿಕಾರಿ.

200 ತಾತ್ಕಾಲಿಕ ಶೌಚಗೃಹ ನಿರ್ಮಾಣ ಮಾಡಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಮೊಬೈಲ್ ಶೌಚಗೃಹಗಳನ್ನು ಮೈಸೂರು ಮಹಾನಗರ ಪಾಲಿಕೆಯಿಂದ ನಂಜನಗೂಡಿಗೆ ಕಳುಹಿಸಿಕೊಡುವ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದರು.

ಅನುದಾನ ಬಿಡುಗಡೆಗೆ ಕೋರಿಕೆ: 7 ಗ್ರಾಮಗಳ ಗ್ರಾಮದೇವತೆ ದೇವಾಲಯಗಳ ಅಭಿವೃದ್ಧಿಗೆ ಶ್ರೀಕಂಠೇಶ್ವರಸ್ವಾಮಿ ದೇವಾಲಯದಿಂದ ಅನುದಾನ ಬಿಡುಗಡೆ ಹಾಗೂ ನೌಕರಿ ನೀಡುವಂತೆ ಗ್ರಾಮಸ್ಥರ ಕೋರಿಕೆಗೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ, ದೇವಾಲಯದ ವ್ಯವಸ್ಥಾಪನಾ ಸಮಿತಿಯಲ್ಲಿ ಈ ಬಗ್ಗೆ ನಿರ್ಣಯ ಕೈಗೊಂಡು ಅದನ್ನು ಜಿಲ್ಲಾಧಿಕಾರಿಗಳ ಕಚೇರಿಗೆ ಕಳುಹಿಸಬೇಕು. ಸದ್ಯ ದೇವಾಲಯದಲ್ಲಿ ವ್ಯವಸ್ಥಾಪನಾ ಸಮಿತಿ ಇಲ್ಲದಿರುವುದರಿಂದ ಮುಂದಿನ ದಿನಗಳಲ್ಲಿ ಈ ಬಗ್ಗೆ ಕ್ರಮ ವಹಿಸುವುದಾಗಿ ಭರವಸೆ ನೀಡಿದರು.

ಅಂಬುಲೆನ್ಸ್ ಸೇವೆ ಹೆಚ್ಚಿಸಿ: ಕಳೆದ ವರ್ಷ ರಥ ಎಳೆಯುವ ವೇಳೆ ನೂಕಾಟಕ್ಕೆ ಸಿಲುಕಿ ಭಕ್ತರೊಬ್ಬರು ಕಾಲು ಮುರಿತಕ್ಕೊಳಗಾಗಿದ್ದರು. ಆ ಸಂದರ್ಭ ತುರ್ತಾಗಿ ಅಂಬುಲೆನ್ಸ್ ಸೇವೆ ಸಿಗದೇ ಪರದಾಡುವಂತಾಯಿತು. ಈ ಬಾರಿ ಕನಿಷ್ಠ 5 ಅಂಬುಲೆನ್ಸ್‌ಗಳು ಸೇವೆ ಲಭ್ಯ ಇರುವಂತೆ ಎಚ್ಚರ ವಹಿಸಬೇಕಿದೆ ಎಂದು ಯುವ ಬ್ರಿಗೇಡ್ ಜಿಲ್ಲಾ ಸಹ ಸಂಚಾಲಕ ಎನ್.ಜೆ.ಸುನೀಲ್ ಜಿಲ್ಲಾಧಿಕಾರಿಗಳ ಗಮನ ಸೆಳೆದರು. ಸ್ಥಳದಲ್ಲೇ ಹಾಜರಿದ್ದ ತಾಲೂಕು ಆರೋಗ್ಯಾಧಿಕಾರಿಗಳಿಗೆ ಈ ಬಗ್ಗೆ ಕ್ರಮ ವಹಿಸುವಂತೆ ಡಿಸಿ ರಾಜೇಂದ್ರ ಸೂಚಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಕಮಲಾ ಬಾಯಿ, ತಹಸೀಲ್ದಾರ್ ಶಿವಕುಮಾರ್, ತಾಪಂ ಇಓ ಶ್ರೀನಿವಾಸ್, ಡಿವೈಎಸ್ಪಿ ಗೋವಿಂದರಾಜು, ದೇವಾಲಯದ ಇಓ ಜಗದೀಶ್ ಕುಮಾರ್ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ವಿದ್ಯಾರ್ಥಿಯಿಂದ ನಾಯಿ ಮೂತ್ರ ಸ್ವಚ್ಛಗೊಳಿಸಿದ ಶಿಕ್ಷಕ ಅಮಾನತು



ಹುಣಸೂರು, ಮಾ.20– ನಾಯಿ ಮೂತ್ರ ಮಾಡಿದ ಜಾಗವನ್ನು ಪರಿಶಿಷ್ಟ ಜಾತಿ ವಿದ್ಯಾರ್ಥಿಯಿಂದ ಸ್ವಚ್ಛಗೊಳಿಸಿ ಅಸ್ಪೃಶ್ಯತೆ ಆಚರಿಸಿದ ಶಾಲಾ ಸಹ ಶಿಕ್ಷಕನನ್ನು ಸಾರ್ವಜನಿಕ ಶಿಕ್ಷಣ ಇಲಾಖೆ ಅಮಾನತುಗೊಳಿಸಿ ಆದೇಶ ಹೊರಡಿಸಿದೆ.

ತಾಲೂಕಿನ ಬೀಜಗನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸಹಶಿಕ್ಷಕ ರಾಮಕೃಷ್ಣೇಗೌಡ ಅಮಾನತುಗೊಂಡ ಶಿಕ್ಷಕ. ಮಾ.7ರಂದು ಶಾಲೆಯಲ್ಲಿ ನಾಯಿ ಮೂತ್ರ ವಿಸರ್ಜನೆ ಮಾಡಿತ್ತು. ಹೀಗಾಗಿ ಶಾಲೆಯಲ್ಲಿ 7ನೇ ತರಗತಿಯಲ್ಲಿ ವ್ಯಾಸಾಂಗ ಮಾಡುತ್ತಿದ್ದ ಪರಿಶಿಷ್ಟ ಜಾತಿ ವಿದ್ಯಾರ್ಥಿಯಿಂದ ಶಾಲೆಗೆ ಪುಸ್ತಕಗಳನ್ನು ತರುವ ಬ್ಯಾಗ್‌ನಿಂದ ಬಲವಂತವಾಗಿ ಸ್ವಚ್ಛಗೊಳಿಸಿ ಅಸ್ಪೃಶ್ಯತೆ ಆಚರಿಸಿದ್ದರು. ಈ ಬಗ್ಗೆ ಪರಿಶಿಷ್ಟ ಜಾತಿ ಮುಖಂಡರು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿ ಪರಿಶೀಲಿಸಿದ್ದು ಮೇಲ್ನೋಟಕ್ಕೆ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ರಾಮಕೃಷ್ಣೇಗೌಡರನ್ನು ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ.


ಶ್ರೀ ಕೆ.ಚಂದ್ರಶೇಖರ್
ರವರಿಗೆ
ಜನ್ಮದಿನದ ಶುಭಾಶಯಗಳು
ಟಿ.ಎ.ಪಿ.ಸಿ.ಎಂ.ಎಸ್. ನಿರ್ದೇಶಕರು,
ಮಾಜಿ ಗ್ರಾ.ಪಂ. ಸದಸ್ಯರು, ಜೆ.ಡಿ.ಎಸ್. ಮುಖಂಡರು
ಶುಭಕೋರುವವರು
ದುರ್ಗಾ ಗ್ರೂಪ್ಸ್
VISMAYA
ADVERTISERS
8050302424